

ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 22, ಸಂಚಿಕೆ: 136, ಪುಟಗಳು: 8, ಸೋಮವಾರ, 24 ಫೆಬ್ರವರಿ 2025 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3


**ಸುಭಾಷಿತ**

ಒಳ್ಳೆ ಸಂಸ್ಕಾರ ಇದ್ರೆ, ಜಗತ್ತನ್ನೇ ಗೆಲ್ಲಬಹುದು. ಅದೇ ಅಹಂಕಾರ ತುಂಬಿ ತುಳುಕುತ್ತಿದ್ದರೆ ಗೆದ್ದ ಸಾಮ್ರಾಜ್ಯವನ್ನು ಕಳೆದುಕೊಳ್ಳಬಹುದು.

**ಪಂಚಾಂಗ**

(ಸೋಮವಾರ, 24, ಫೆಬ್ರವರಿ-2025)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು
- ಮಾಘ ಮಾಸ, ಕೃಷ್ಣ ಪಕ್ಷ
- ತಿಥಿ : ಏಕಾದಶಿ • ನಕ್ಷತ್ರ : ಪೂರ್ವಾಷಾಢ
- ರಾಹುಕಾಲ: 8.12 ರಿಂದ 9.40
- ಗುಳಿಕಕಾಲ: 2.06 ರಿಂದ 3.34
- ಯಮಗಂಡಕಾಲ: 11.09 ರಿಂದ 12.37




# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




## ಸಂಕ್ಷಿಪ್ತ ಸುದ್ದಿ

### ಮಂಗಳೂರಿಗರಿಗೆ ತ್ಯಾಜ್ಯ, ಮೆಡಿಕಲ್ ವೇಸ್ಟ್ ಡಂಪಿಂಗ್



**ಮಂಗಳೂರು:** ಕೇರಳದ ಕೊಳಚೆ ತ್ಯಾಜ್ಯ ಮಂಗಳೂರಿಗೆ ತಂದು ಸುರಿಯಲಾಗುತ್ತಿದ್ದ ವಿಚಾರ ಭಾರೀ ಸುದ್ದಿ ಮಾಡಿತ್ತು. ಆದ್ರೆ ಕೊಳಚೆ ತ್ಯಾಜ್ಯ ಮಾತ್ರ ಸುರಿಯುತ್ತಿರಲಿಲ್ಲ. ಬದಲಾಗಿ, ಬಯೋ ಮೆಡಿಕಲ್ ವೇಸ್ಟ್ ಸುರಿಯುತ್ತಿದ್ದರು ಎನ್ನುವ ಆತಂಕಕಾರಿ ಮಾಹಿತಿ ಬಯಲಾಗಿದೆ.

» **ಕಂಟಕವಾಯ್ತಾ ನೆರೆಯ ಕೇರಳ..?**

ಹೀಗಾಗಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರು ಪಾಲಿಕೆಯ ಸಭೆ ನಡೆಸಿ, ತಡೆಗಟ್ಟಲು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಇತ್ತೀಚೆಗೆ ಕೇರಳದಿಂದ ಕೊಳಚೆ ತ್ಯಾಜ್ಯ ತಂದು ಮಂಗಳೂರಿನ ನದಿ, ಚರಂಡಿಗಳಿಗೆ ಸುರಿಯುತ್ತಿದ್ದ ವಿಚಾರ ಭಾರೀ ಸದ್ದು ಮಾಡಿತ್ತು. ಆದ್ರೀಗ ಕೊಳೆಚೆ ತ್ಯಾಜ್ಯ ಮಾತ್ರವಲ್ಲ, ಬಯೋ ಮೆಡಿಕಲ್ ವೇಸ್ಟ್ ಕೂಡ ಸುರಿಯುತ್ತಿದ್ದರು ಎನ್ನುವ ಆತಂಕಕಾರಿ ಮಾಹಿತಿ ಬಯಲಾಗಿದೆ. ಪುಟ 2

### ರಾಜ್ಯದಲ್ಲಿ ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ವೇ ಸಂಚಾರ ಮುಕ್ತ



**ಬೆಂಗಳೂರು:** ದಕ್ಷಿಣ ಭಾರತದ ಅತಿ ದೊಡ್ಡ ಎಕ್ಸ್‌ಪ್ರೆಸ್ ವೇನಲ್ಲಿ ಒಂದಾಗಿರುವ ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ವೇ ಕರ್ನಾಟಕ ಭಾಗದಲ್ಲಿ ಸಂಚಾರಕ್ಕೆ ಮುಕ್ತವಾಗಿದೆ. ಕರ್ನಾಟಕ ಭಾಗದ ಮಾರ್ಗದ ಕೆಲಸಗಳು ಸಂಪೂರ್ಣ ಹಿನ್ನೆಲೆ, ಸಂಚಾರ ಮುಕ್ತಗೊಳಿಸಲಾಗಿದೆ. ತಾತ್ಕಾಲಿಕವಾಗಿ ಟೋಲ್ ಇಲ್ಲದೆ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ಮಾರ್ಗಸೂಚಿ ಫಲಕಗಳು, ನಾಮಫಲಕಗಳು, ಡಿಜಿಟಲ್ ಫಲಕಗಳು ಸೇರಿದಂತೆ ರಾಜ್ಯ ಭಾಗದ 71 ಕಿ.ಮೀನ ಸಂಪೂರ್ಣ ಕಾರ್ಯ ಮುಕ್ತಾಯಗೊಂಡ ಹಿನ್ನೆಲೆ ಪುಟ 2

### ಮರಾಠಿ ಪುಂಡರಿಂದ ಕಂಡಕ್ಟರ್ ಮೇಲೆ ಹಲ್ಲೆ

# ಇಂದು ಬೆಳಗಾವಿಗೆ ರಾಮಲಿಂಗಾ ರೆಡ್ಡಿ ಭೇಟಿ

**ಬೆಳಗಾವಿ:** ಕನ್ನಡ ಮಾತಾಡು ಎಂದಿದ್ದಕ್ಕೆ ಬಸ್ ಕಂಡಕ್ಟರ್ ಮೇಲೆ ಹಲ್ಲೆ ಮಾಡಿದ್ದಲ್ಲದೇ, ಪೋಕ್ಸೋ ಕೇಸ್ ದಾಖಲಿಸಿರುವ ಘಟನೆ ಈಗ ಎರಡು ರಾಜ್ಯಗಳ ಶಾಂತಿ ಸುವ್ಯವಸ್ಥೆಗೆ ಧಕ್ಕೆ ತರುವ ಎಲ್ಲಾ ಲಕ್ಷಣಗಳು ಕಾಣಿಸುತ್ತಿವೆ. ಈ ಹಿನ್ನೆಲೆ ಇಂದು ಬೆಳಗಾವಿಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಭೇಟಿ ನೀಡಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಘಟನೆಯ ಮಾಹಿತಿ ಪಡೆಯಲಿದ್ದಾರೆ.



ಸದಾ ಗಡಿ ಹಾಗೂ ಭಾಷೆ ವಿಚಾರದಲ್ಲಿ ಒಂದಿಲ್ಲೊಂದು ಕಿರಿಕ್ ಮಾಡುತ್ತಿದ್ದ ಎಂಇಎಸ್ ಹಾಗೂ ಮರಾಠಿ ಪುಂಡರು ಕನ್ನಡ ಮಾತಾಡು ಎಂದಿದ್ದಕ್ಕೆ ಬಸ್ ಕಂಡಕ್ಟರ್ ಮೇಲೆ ಹಲ್ಲೆ ಮಾಡಿದ್ದಾರೆ. ಟಿಕೆಟ್ ಕೊಡುವ ವಿಚಾರಕ್ಕೆ ಶುರುವಾದ ಜಗಳ ಈಗ ಕರ್ನಾಟಕ, ಮಹಾರಾಷ್ಟ್ರ ಎರಡೂ ರಾಜ್ಯದ ನಡುವಿನ ಶಾಂತಿಗೆ ಭಂಗ ತರುತ್ತಿದೆ. ಕರ್ನಾಟಕದಲ್ಲಿ ಮಹಾರಾಷ್ಟ್ರ ಬಸ್ಸುಗಳಿಗೆ ಮಹಾರಾಷ್ಟ್ರದಲ್ಲಿ ಕರ್ನಾಟಕ ಬಸ್ಸುಗಳಿಗೆ ಮಸಿ ಬಳಿಯುವ ಕೆಲಸ ಆಗುತ್ತಿದೆ. ಹೀಗಾಗಿ ಕರ್ನಾಟಕದಿಂದ ಹೊರಡುವ ಬಸ್ಸುಗಳನ್ನು ಈಗಾಗಲೇ ಬಂದ್ ಮಾಡಲಾಗಿದೆ.

ಇಂದು ಬೆಳಗಾವಿಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಭೇಟಿ ನೀಡುತ್ತಿದ್ದಾರೆ. ಪ್ರಾದೇಶಿಕ ಸಾರಿಗೆ ಆಯುಕ್ತರ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ಮಾಡಿ ಘಟನೆಯ ಕುರಿತು ಮಾಹಿತಿ ಪಡೆಯಲಿದ್ದಾರೆ. ಕಂಡಕ್ಟರ್ ಮೇಲೆ ಹಾಕಲಾದ ಪ್ರಕರಣ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆಯಲಿದ್ದಾರೆ.

ಇನ್ನು ಮಂಗಳವಾರ ಬೆಳಗಾವಿಗೆ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ನಾರಾಯಣಗೌಡ ಸಹ ಆಗಮಿಸುತ್ತಿದ್ದಾರೆ. ಕನ್ನಡ ಮಾತಾಡು ಎಂದು ಹೇಳಿದ್ದಕ್ಕೆ ಬಸ್ ಕಂಡಕ್ಟರ್ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿರುವ ನಾರಾಯಣಗೌಡ ಚಲೋ ಪಂಥಬಾಳೆಕುಂದ್ರಿ, ಕರೆ ನೀಡಿದ್ದಾರೆ. ಬೆಳಗಾವಿಯಿಂದ ಪಂಥಬಾಳೆಕುಂದ್ರಿಗೆ ಪ್ರತಿಭಟನಾ ರ‍್ಯಾಲಿ ಆಯೋಜನೆ ಮಾಡಿದ್ದು, ಕಂಡೆಕ್ಟರ್ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿದ್ದಾರೆ. ಅಲ್ಲದೆ ನಾರಾಯಣಗೌಡ ಬರುತ್ತಿರುವ ಹಿನ್ನೆಲೆ ನೂರಾರು ಕಾರ್ಯಕರ್ತರು ಮಂಗಳವಾರದ ಪ್ರತಿಭಟನಾ ರ‍್ಯಾಲಿಯಲ್ಲಿ ಪಾಲ್ಗೊಳ್ಳಲಿದ್ದಾರೆ.

### ಉದಯಗಿರಿ ಗಲಭೆ ಕಿಚ್ಚು

# ಇಂದು ಮಧ್ಯರಾತ್ರಿವರೆಗೆ ಮೈಸೂರಿನಲ್ಲಿ ನಿಷೇಧಾಜ್ಞೆ

**ಮೈಸೂರು:** ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಿದ ಪ್ರಕರಣದ ಕಿಚ್ಚು ಇನ್ನೂ ಆರಿಲ್ಲ. ಪೊಲೀಸರ ತನಿಖೆ ಇನ್ನೂ ಸಾಗುತ್ತಿದೆ. ಈ ನಡುವೆಯೇ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸೇರಿದಂತೆ ಹಲವು ಹಿಂದೂ ಸಂಘಟನೆಗಳು ಜನ ಜಾಗೃತಿ ಸಮಾವೇಶ ನಡೆಸಲು ನಿರ್ಧರಿಸಿವೆ. ಕೌಂಟರ್ ಆಗಿ ದಲಿತ ಸಂಘಟನೆಗಳು ಮಾನವೀಯ ಚಳವಳಿ ಆಯೋಜನೆ ಮಾಡಿವೆ. ಆದರೆ ಪೊಲೀಸರು ಯಾವುದೇ ಅನುಮತಿ ನೀಡಲು ನಿರಾಕರಿಸಿದ್ದಾರೆ. ಪುಟ 2



### ಪ್ರಧಾನಿ ಮೋದಿ ಭೇಟಿ ಬಳಿಕ ಪ್ರವಾಸಿಗರ ಸಂಖ್ಯೆ, ಆದಾಯ ಹೆಚ್ಚಳ

# ಗಳಿಕೆಯಲ್ಲಿ ರಾಜ್ಯವೇ ಫಸ್ಟ್



**ನವದೆಹಲಿ:** ಕರ್ನಾಟಕದ ಚಾಮರಾಜನಗರ ಜಿಲ್ಲೆಯ ಬಿಆರ್‌ಟಿ ಹುಲಿ ಅಭಯಾರಣ್ಯದಲ್ಲಿ ಹುಲಿಗಳ ಸಂತತಿ ಹೆಚ್ಚಳವಾಗಲು ಸೋಲಿಗ ಬುಡಕಟ್ಟು ಜನಾಂಗದವರ ಕೊಡುಗೆ ಗಣನೀಯವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಹೇಳಿದ್ದಾರೆ. ತಿಂಗಳ ಮನ್ ಕಿ ಬಾತ್ ರೇಡಿಯೋ ಕಾರ್ಯಕ್ರಮದಲ್ಲಿ ಮಾತನಾಡಿದ ಮೋದಿ, ಮುಂದಿನ ತಿಂಗಳ ಆರಂಭದಲ್ಲಿ ವಿಶ್ವ ವನ್ಯಜೀವಿ ದಿನವನ್ನು ಆಚರಿಸಲು ಕರೆ ನೀಡಿದ್ದಾರೆ.

''ವನ್ಯಜೀವಿ ರಕ್ಷಣೆಗೆ ಸಂಬಂಧಿಸಿದ ಕೆಲಸಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿರುವ ನನ್ನ ಬುಡಕಟ್ಟು ಸಹೋದರ ಸಹೋದರಿಯರಿಗೆ ಧನ್ಯವಾದ ಹೇಳಲು ಬಯಸುತ್ತೇನೆ. ಕರ್ನಾಟಕದ ಬಿಆರ್‌ಟಿ ಹುಲಿ ಅಭಯಾರಣ್ಯದಲ್ಲಿ ಹುಲಿಗಳ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿದೆ. ಇದರ ಹಿಂದೆ ಸೋಲಿಗ ಜನಾಂಗದ ಸಹೋದರರ ಕೊಡುಗೆ ಇದೆ'' ಎಂದು ಪ್ರಧಾನಿ ಹೇಳಿದ್ದಾರೆ.

ಹುಲಿಯ ಸಂತತಿ ಹೆಚ್ಚಳಕ್ಕೆ ಸೋಲಿಗ ಜನಾಂಗದವರ ಕೊಡುಗೆಗೆ ಮನ್ನಣೆ ಸಲ್ಲಬೇಕು. ಅವರು ಹುಲಿಯನ್ನು ಪೂಜಿಸುವ ಜನಾಂಗದವರಾಗಿದ್ದಾರೆ. ಅವರ ಕಾರಣದಿಂದಾಗಿ, ಆ ಪ್ರದೇಶದಲ್ಲಿ ಬಹುತೇಕ ಮನುಷ್ಯ-ಪ್ರಾಣಿ ಸಂಘರ್ಷವಿಲ್ಲ ಎಂದು ಪ್ರಧಾನಿ ಹೇಳಿದ್ದಾರೆ. ಪುಟ 2



### ಬಿಆರ್‌ಟಿ ಸಂರಕ್ಷಿತಾರಣ್ಯದಲ್ಲಿ ಹುಲಿ ಸಂತತಿ ಹೆಚ್ಚಳಕ್ಕೆ ಸೋಲಿಗರ ಶ್ಲಾಘಿಸಿದ

# ಪ್ರಧಾನಿ ಮೋದಿ

**ಚಾಮರಾಜನಗರ:** ಸುಮಾರು 1024 ಸಾವಿರ ಚದರ ಕಿಲೋಮೀಟರ್ ವ್ಯಾಪ್ತಿಯಲ್ಲಿ ವಿಸ್ತರಿಸಿರುವ ಬಂಡೀಪುರ ಹುಲಿ ಸಂರಕ್ಷಿತ ಅರಣ್ಯ ದಕ್ಷಿಣ ಭಾರತದ ಅತಿ ದೊಡ್ಡ ಸಂರಕ್ಷಿರತ ಪ್ರದೇಶವೂ ಆಗಿದೆ. 191 ಕ್ಕೂ ಹೆಚ್ಚು ಹುಲಿಗಳು, 1116 ಕ್ಕೂ ಹೆಚ್ಚು ಆನೆಗಳು ಸೇರಿದಂತೆ ಚಿರತೆ, ಕರಡಿ, ಜಿಂಕೆ, ಕಾಡೆಮ್ಮೆ, ಮೊದಲಾದ ವನ್ಯಜೀವಿಗಳ ಆವಾಸ ಸ್ಥಾನವಾಗಿದೆ. ಇತ್ತೀಚಿನ ವರ್ಷಗಳಲ್ಲಿ, ಅದರಲ್ಲೂ ಪ್ರಧಾನಿ ನರೇಂದ್ರ ಮೋದಿ ಭೇಟಿ ನಂತರ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿದ್ದು ಪರಿಸರ ಪ್ರವಾಸೋದ್ಯಮವು ಸಾಕಷ್ಟು ಅಭಿವೃದ್ಧಿಯಾಗಿದೆ. ಸಫಾರಿ ಹಾಗೂ ಹಸಿರು ಪ್ರವೇಶ ಶುಲ್ಕದಿಂದ 2023-24 ನೇ ಸಾಲಿನಲ್ಲಿ 19 ಕೋಟಿ ರೂಪಾಯಿ ಆದಾಯ ಹರಿದು ಬಂದಿತ್ತು. ಈ ಬಾರಿ ಅಂದರೆ 2024-25 ನೇ ಸಾಲಿನಲ್ಲಿ 22 ಕೋಟಿ ರೂಪಾಯಿಗೂ ಹೆಚ್ಚು ಆದಾಯ ಬರುವ ನಿರೀಕ್ಷೆ ಇದೆ ಎಂದು ಡಿಸಿಎಫ್ ಪ್ರಭಾಕರನ್ ತಿಳಿಸಿದ್ದಾರೆ. ಪುಟ 2



# ಕಚೇರಿಯಲ್ಲಿ ಕೆಲಸ ಮಾಡ್ತಿದ್ದ ಮಹಿಳೆ ಆತ್ಮಹತ್ಯೆ

» **ವ್ಯಕ್ತಿಯೊಬ್ಬನಿಂದ ಕಿರುಕುಳ ಆರೋಪ**

**ಬೆಂಗಳೂರು:** ಬಿಬಿಎಂಪಿ ಕಚೇರಿಯಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆಯೊಬ್ಬರು ಮನೆಯಲ್ಲಿ ಯಾರೂ ಇಲ್ಲದಿದ್ದಾಗ ನೇಣು ಬಿಗಿದುಕೊಂಡು ಅತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಾಮರಾಜಪೇಟೆಯಲ್ಲಿ ನಡೆದಿದೆ.

ನಂದಿನಿ (32) ಆತ್ಮಹತ್ಯೆ ಮಾಡಿಕೊಂಡ ಮಹಿಳೆ. ಫೆ.23ರ ರಾತ್ರಿ 9:30ರ ವೇಳೆಗೆ ಘಟನೆ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ. ಮನೆಯಲ್ಲಿ ಯಾರೂ ಇಲ್ಲದಾಗ ನೇಣು ಬಿಗಿದುಕೊಂಡು ನಂದಿನಿ ಅತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದನ್ನು ನೋಡಿ ಪೊಲೀಸರು ಬರುವ ಮುನ್ನವೇ ಕುಟುಂಬಸ್ಥರು ಮೃತದೇಹ ಕೆಳಗೆ ಇಳಿಸಿದ್ದಾರೆ. ಪುಟ 2



### ಮಹಾ ಕುಂಭಮೇಳಕ್ಕೆ ತೆರಳಿದ್ದ 6 ಮಂದಿ ಸಾವು

# ಇಂದು ಬೀದರ್‌ಗೆ ಮೃತದೇಹ ರವಾನೆ

**ಬೀದರ್:** ಉತ್ತರ ಪ್ರದೇಶದಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದ ಬೀದರ್‌ನ 6 ಮಂದಿಯ ಪಾರ್ಥೀವ ಶರೀರ ಇಂದು ತವರಿಗೆ ಮರಳಲಿದೆ. 6 ಮಂದಿಯ ಮೃತದೇಹಗಳು 3 ಅಂಬುಲೆನ್ಸ್‌ಗಳ ಮೂಲಕ ಕೆಲವೇ ಗಂಟೆಗಳಲ್ಲಿ ಬೀದರ್ ತಲುಪಲಿದೆ.

ಮಹಾರಾಷ್ಟ್ರದ ನಾಂದೇಡ್‌ಗೆ ತಲುಪಿದ್ದು, ನಂತರ ಮಧ್ಯಾಹ್ನದ ವೇಳೆಗೆ ಮೃತದೇಹಗಳು ಬೀದರ್‌ಗೆ ತಲುಪಲಿದೆ. ಕುಟುಂಬಸ್ಥರು ಇಂದೇ ಬೀದರ್‌ನ ಗುಂಪಾ ರಸ್ತೆಯಲ್ಲಿರುವ ಚಿತಾಗಾರದಲ್ಲಿ ಅಂತ್ಯಕ್ರಿಯೆ ನೆರವೇರಿಸಲ್ಲಿದ್ದಾರೆ.

ಬೀದರ್‌ನ ಲಾಡಗೇರಿ ನಗರದ ನಿವಾಸಿಗಳು ಮಹಾ ಕುಂಭಮೇಳದಲ್ಲಿ ಪುಣ್ಯಸ್ನಾನಕ್ಕೆಂದು ತೆರಳಿದ್ದರು. ಈ ವೇಳೆ ಮಿರಾಜಾಪೂರ್ ಜಿಲ್ಲೆಯ ರೂಪಾಪೂರ ಬಳಿ ಅಪಘಾತ ಸಂಭವಿಸಿ 6 ಮಂದಿ ಸಾವನ್ನಪ್ಪಿದ್ದರು.

ಪ್ರಯಾಗ್‌ರಾಜ್‌ನಲ್ಲಿ 144 ವರ್ಷಗಳ ಬಳಿಕ ನಡೆಯುತ್ತಿರುವ ಮಹಾ ಕುಂಭಮೇಳಕ್ಕೆ ಮುಕ್ತಾಯವಾಗಲು ಇನ್ನೆರಡು ದಿನ ಬಾಕಿಯಿದೆ. ಮಹಾ ಶಿವರಾತ್ರಿಯ ದಿನದಂದೇ ಕುಂಭಮೇಳ ಅಂತ್ಯವಾಗಲಿದೆ.



### ಮಾಜಿ ಗರ್ಲ್ ಫ್ರೆಂಡ್‌ಗೆ ಬೇರೊಬ್ಬನ ಜತೆ ಸಂಬಂಧ

# ಸ್ನೇಹಿತರ ಜತೆ ಸೇರಿ ಆಕೆಯ ಮೇಲೆ ಅತ್ಯಾಚಾರ

**ಮಹಾರಾಷ್ಟ್ರ:** ನಿನ್ನೆಯವರೆಗೂ ಈಕೆ ತನ್ನ ಗೆಳತಿ ಎಂದು ಖುಷಿ ಪಡುತ್ತಿದ್ದ ವ್ಯಕ್ತಿ ಈಗ ಆಕೆ ಬೇರೊಬ್ಬನ ಜತೆ ಸಂಬಂಧದಲ್ಲಿದ್ದಾಳೆಂದು ತಿಳಿದು ತನ್ನ ಪ್ರೀತಿಯನ್ನೇ ಮರೆತು ಮೃಗನಂತೆ ವರ್ತಿಸಿರುವ ಘಟನೆ ಮಹಾರಾಷ್ಟ್ರದಲ್ಲಿ ನಡೆದಿದೆ. ಆತ ಮಾಜಿ ಗೆಳತಿ ಮೇಲೆ ಸ್ನೇಹಿತರೊಂದಿಗೆ ಸೇರಿ ಸಾಮೂಹಿಕ ಅತ್ಯಾಚಾರವೆಸಗಿರುವ ಘಟನೆ ಮಹಾರಾಷ್ಟ್ರ ಭಿವಂಡಿಯಲ್ಲಿ ನಡೆದಿದೆ. 22 ವರ್ಷದ ಯುವತಿ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ ಆರೋಪದ ಮೇಲೆ ಆರು ಜನರ ವಿರುದ್ಧ ಪ್ರಕರಣ ದಾಖಲಾಗಿದೆ .



ಫೆಬ್ರವರಿ 20ರಂದು ಬೆಳಗ್ಗೆ ಶಾಲೆಯ ಬಳಿ ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಲಾಯಿತು. ಟೈಮ್ಸ್ ಆಫ್ ಇಂಡಿಯಾ ವರದಿ ಪ್ರಕಾರ, ಆ ಯುವತಿಯನ್ನು ಆಕೆಯ ಮಾಜಿ ಗೆಳೆಯ ಅಪಹರಿಸಿದ ತನ್ನ ನಾಲ್ವರು ಸ್ನೇಹಿತರೊಂದಿಗೆ ಸೇರಿ ಸಾಮೂಹಿಕ ಅತ್ಯಾಚಾರ ನಡೆಸಿದ್ದಾನೆ.

ಮಹಿಳೆ ಮತ್ತು ಅತ್ಯಾಚಾರವೆಸಗಿದ ವ್ಯಕ್ತಿ ಕೆಲವು ವರ್ಷಗಳಿಂದ ರಿಲೇಷನ್ ಶಿಪ್ ನಲ್ಲಿದ್ದರು ಆಕೆ ಆತನನ್ನು ಬಿಟ್ಟು ಬೇರೊಬ್ಬನನ್ನು ಪ್ರೀತಿಸಿದ್ದನ್ನು ಅರಗಿಸಿಕೊಳ್ಳಲಾಗದೆ ಫೆಬ್ರವರಿ 19ರಂದು ರಾತ್ರಿ ಯುವತಿಯ ಸಹೋದರನನ್ನು ಅಪಹರಿಸಿದ್ದರು. ನಂತರ ಆತನಿಗೆ ತನ್ನ ತಂಗಿಗೆ ಕರೆ ಮಾಡಿ ಇಲ್ಲಿಗೆ ಬರುವಂತೆ ಹೇಳು ಎಂದು ಹೇಳಿದ್ದಾನೆ. ಪುಟ 2

### ಮೀನಲ್ಲಾ ಅಣ್ಣಾ ಅದು ಮೊಸಳೆ

# ಬದುಕ್ತು ಜೀವ!



ನೀರು ಕಂಡಾಕ್ಷಣ ಈಜಬೇಕೆನ್ನುವ ಹಂಬಲ ಮೂಡುವುದು ಸಹಜ, ವ್ಯಕ್ತಿಯೊಬ್ಬರು ದೋಣಿಯಲ್ಲಿ ನದಿಗೆ ಇಳಿದು ನೀರಿನಲ್ಲಿ ಮಜಾ ಮಾಡುತ್ತಿದ್ದರು. ಆದರೆ ಪ್ರಕೃತಿಯಲ್ಲಿ ಕೆಲವೊಮ್ಮೆ ಅನಿರೀಕ್ಷಿತ ಅಚ್ಚರಿಗಳು ನಮಗಾಗಿ ಕಾದಿರುತ್ತವೆ ಎಂಬುದನ್ನು ಅಲ್ಲಗಳೆಯುವಂತಿಲ್ಲ. ಕೆಲವೊಂದು ಖುಷಿ ತರಿಸಬಹುದು ಕೆಲವೊಂದು ಭಯಾನಕವಾಗಿರಬಹುದು.

ನದಿಯಲ್ಲಿ ನೀರಿನಲ್ಲಿದ್ದ ವ್ಯಕ್ತಿಗೆ ಅಪಾಯವನ್ನು ತಂದೊಡ್ಡುವ ಕ್ಷಣವೊಂದು ಒಮ್ಮೆಲೆ ಬಂದು ಕಣ್ಮರೆಯಾಗುತ್ತದೆ. ಈ ವೈರಲ್ ವಿಡಿಯೋವನ್ನು bajaellentell ಎಂಬ ಖಾತೆಯಿಂದ ಇನ್ ಸ್ಟಾಗ್ರಾಂನಲ್ಲಿ ಹಂಚಿಕೊಳ್ಳಲಾಗಿದೆ. ನೀರಿನ ಕೆಳಗಿರುವ ಅಪಾಯದ ಅರಿವಿಲ್ಲದೆ ಶರ್ಟ್ ಬಿಚ್ಚಿಕೊಂಡಿದ್ದ ವ್ಯಕ್ತಿ ಒಮ್ಮೆಲೆ ಬೆಚ್ಚಿಬಿದ್ದಿದ್ದರು. ಪುಟ 2

### 'ಕನ್ನಡ ದ್ರೋಹಿ ಹೆಬ್ಬಾಳ್ಕರ್' ಎಂದು ಜನಾಕ್ರೋಶ!

# ಮರಾಠಿ ಪ್ರೇಮ ಮೆರೆದ ಸಚಿವೆ ವಿರುದ್ಧ ಕಿಡಿ!

**ಬೆಳಗಾವಿ:** ಕನ್ನಡ ಮಾತನಾಡಿದ್ದ ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್ ಮೇಲೆ ಮರಾಠಿ ಪುಂಡರು ಹಲ್ಲೆ ನಡೆಸಿದ ಪ್ರಕರಣ ತೀವ್ರ ಸ್ವರೂಪ ಪಡೆದುಕೊಂಡಿದೆ. ಇದೇ ಸಮಯದಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮರಾಠಿ ಪ್ರೇಮ ಮೆರೆದಿದ್ದಾರೆ. ಇದು ರಾಜ್ಯದ ಜನರ ಆಕ್ರೋಶಕ್ಕೆ ಕಾರಣವಾಗಿದೆ.

ಹೌದು, ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್ ಒಬ್ಬರ ಮೇಲೆ ಹಲ್ಲೆ ನಡೆಸಿದ ಪುಂಡರ ಊರಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಮರಾಠಿ ಭಾಷೆಯಲ್ಲಿ ಭಾಷಣ ಮಾಡಿದ್ದಾರೆ ಎಂಬ ಸುದ್ದಿ ವರದಿಯಾಗಿದೆ.



ಬಾಳೇಕುಂದ್ರಿ, ಗ್ರಾಮದಲ್ಲಿ ಧರ್ಮವೀರ ಸಂಭಾಜಿ ಮಹಾರಾಜರ ಪುತ್ಥಳಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಲಕ್ಷ್ಮಿ ಹೆಬ್ಬಾಳ್ಕರ್ ಅವರು, ಮರಾಠಿಯಲ್ಲಿ ಮಾತನಾಡಿದ್ದಾರೆ. ಈ ಘಟನೆ ನಡೆದು ಮೂರು ದಿನ ಕಳೆದರೂ ಸಚಿವೆ ಹೆಬ್ಬಾಳ್ಕರ್ ಮಾತ್ರ ಯಾವುದೇ ಖಂಡನೆ ವ್ಯಕ್ತಪಡಿಸಿಲ್ಲ ಆದ್ರೆ, ಆ ಪುಂಡರ ಊರಲ್ಲಿ ಹೋಗಿ ಮರಾಠಿ ಪ್ರೇಮ ಮೆರೆದಿದ್ದಾರೆ. ಪುಟ 2

## ಪ್ರೀತಿ ನಿರಾಕರಿಸಿದ್ದಕ್ಕಾಗಿ ಯುವತಿಯ ಕಾರು ಬೈಕ್‌ಗಳಿಗೆ ಬೆಂಕಿ ಹಚ್ಚಿದ ಪಾಗಲ್ ಪ್ರೇಮಿ

**ಬೆಂಗಳೂರು:** ಯುವತಿ ಪ್ರೀತಿ ನಿರಾಕರಿಸಿದ್ದಕ್ಕಾಗಿ ಆಕೆಯ ಕಾರು ಹಾಗೂ ಬೈಕ್‌ಗಳಿಗೆ ಬೆಂಕಿ ಹಚ್ಚಿರುವ ಘಟನೆ ಬೆಂಗಳೂರಿನ ಸುಬ್ರಮಣ್ಯಪುರದಲ್ಲಿ ನಡೆದಿದೆ.

ಆರೋಪಿಯನ್ನು ರಾಹುಲ್ ಎಂದು ಗುರುತಿಸಲಾಗಿದೆ. ಸ್ನೇಹಿತರ ಜೊತೆ ಬಂದು ಬೆಂಕಿ ಹಚ್ಚಿ, ಹಲ್ಲೆ ಮಾಡಿದ್ದಾರೆ.

ಯುವತಿ ತನ್ನ ಪ್ರೀತಿಯನ್ನು ಪದೇ ಪದೇ ನಿರಾಕರಿಸುತ್ತಿದ್ದರಿಂದ ರೊಚ್ಚಿಗೆದ್ದ ರಾಹುಲ್ ಹಾಗೂ ಗ್ಯಾಂಗ್ ಕೃತ್ಯ ಎಸಗಿದ್ದಾರೆ. ಮೂರು ನಾಲ್ಕು ಬೈಕ್‌ಗಳಲ್ಲಿ ಗ್ಯಾಂಗ್ ಸಮೇತ ಬಂದು, ಚೆನ್ನಮ್ಮನಕೆರೆ ಅಚ್ಚುಕಟ್ಟು ಪೊಲೀಸ್ ಠಾಣೆಯ ಮುಂದಿದ್ದ ಮನೆಯ ಮುಂದಿನ ಬೈಕ್ ಹಾಗೂ ಎರಡು ಕಾರುಗಳಿಗೆ ಬೆಂಕಿ ಇಟ್ಟಿದ್ದಾರೆ. ಬಳಿಕ ಅಲ್ಲಿಂದ ಸುಬ್ರಮಣ್ಯಪುರ ಶ್ರೀನಿಧಿ ಅಪಾರ್ಟ್‌ಮೆಂಟ್ ಬಳಿ ತೆರಳಿದ್ದಾರೆ. ಈ ವೇಳೆ ಅಪಾರ್ಟ್‌ಮೆಂಟ್ ಬಳಿಯಿದ್ದ ಸೆಕ್ಯುರಿಟಿ ಗಾರ್ಡ್ ತಡೆಯಲು ಬಂದಾಗ ಆತನ ಮೇಲೆಯೂ ಹಲ್ಲೆ ನಡೆಸಿದ್ದಾರೆ. ಬಳಿಕ ಅಲ್ಲಿದ್ದ ಕಾರುಗಳಿಗೆ ಕೂಡ ಬೆಂಕಿ ಇಟ್ಟಿದ್ದಾರೆ. ಸದ್ಯ ಘಟನೆ ಸಂಬಂಧ ಸುಬ್ರಮಣ್ಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



## ಮಂಡ್ಯದಲ್ಲಿ ನಾಡ ಬಾಂಬ್ ಸ್ಫೋಟ ವಿದ್ಯಾರ್ಥಿಯ ಅಂಗೈ ಛಿದ್ರ

**ಮಂಡ್ಯ:** ನಾಡ ಬಾಂಬ್ ಸ್ಫೋಟದಿಂದಾಗಿ ಇಬ್ಬರು ವಿದ್ಯಾರ್ಥಿಗಳು ಗಾಯಗೊಂಡಿದ್ದು, ಓರ್ವನ ಅಂಗೈ ಛಿದ್ರವಾಗಿರುವ ಘಟನೆ ಜಿಲ್ಲೆಯ ನಾಗಮಂಗಲ ತಾಲೂಕಿನ ಕಂಬದಹಳ್ಳಿಯ ಆಂಜನೇಯಬೆಟ್ಟದಲ್ಲಿ ಘಟನೆ ನಡೆದಿದೆ.

ವಿದ್ಯಾರ್ಥಿಗಳನ್ನು ಹರಿಯಂತ್ ಪಾಟೀಲ್ ಹಾಗೂ ಪಾರ್ಥ ಎಂದು ತಿಳಿಯಲಾಗಿದ್ದು, ಜೈನ ಬಸದಿ ಶಾಲೆಯಲ್ಲಿ ವ್ಯಾಸಾಂಗ ಮಾಡುತ್ತಿದ್ದರು. ಆಂಜನೇಯ ಬೆಟ್ಟದ ದೇವಸ್ಥಾನದ ಸುತ್ತ ಸ್ವಚ್ಛಕಾರ್ಯಕ್ಕಾಗಿ ವಿದ್ಯಾರ್ಥಿಗಳು ತೆರಳಿದ್ದರು. ಈ ವೇಳೆ ವಿದ್ಯಾರ್ಥಿಗಳು ಕಸದ ರಾಶಿಗೆ ಕೈ ಹಾಕಿದ್ದು, ಬಾಂಬ್ ಸ್ಫೋಟಗೊಂಡಿದೆ. ಸ್ಫೋಟದ ತೀವ್ರತೆಗೆ ಓರ್ವನ ಅಂಗೈ ಛಿದ್ರವಾಗಿದ್ದು, ಇನ್ನೋರ್ವನ ಮುಖದ ಭಾಗಕ್ಕೆ ಗಾಯವಾಗಿದೆ. ಕಾಡು ಹಂದಿ ಬೇಟೆಗಾಗಿ ನಾಡ ಬಾಂಬ್ ಇಟ್ಟಿರುವ ಶಂಕೆ ವ್ಯಕ್ತವಾಗಿದ್ದು, ಕಿಡಿಗೇಡಿಗಳ ಕೆಲಸದಿಂದ ಅಮಾಯಕ ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ. ಸದ್ಯ ಗಾಯಗೊಂಡ ವಿದ್ಯಾರ್ಥಿಗಳಿನ್ನು ಬೆಳ್ಳೂರಿನ ಆದಿಚುಂಚನಗಿರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಿಂಡಿಗನವಿಲೆ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.



# ಅಧಿಕಾರದಲ್ಲಿ ತೃಪ್ತಿ ಅನ್ನೋದು ಇರಲ್ಲ: ಟಿ.ಬಿ ಜಯಚಂದ್ರ

**ಬೆಂಗಳೂರು:** ಅಧಿಕಾರದಲ್ಲಿ ತೃಪ್ತಿ ಅನ್ನೋದು ಇರಲ್ಲ ಎಂದು ಕಾಂಗ್ರೆಸ್‌ನ ಹಿರಿಯ ನಾಯಕ ಟಿ.ಬಿ ಜಯಚಂದ್ರ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ ಸಚಿವ ಸಂಪುಟ ಪುನರ್‌ರಚನೆ ಆಗಬೇಕಾ? ಬೇಡ್ವಾ? ಎಂಬುದನ್ನು ವರಿಷ್ಠರು ತೀರ್ಮಾನ ಮಾಡ್ತಾರೆ. ಮಲ್ಲಿಕಾರ್ಜುನ ಖರ್ಗೆಯವರು ಸುದೀರ್ಘ ರಾಜಕಾರಣ ಮಾಡಿಕೊಂಡು ಬರ್ತಿದ್ದಾರೆ. ಅವರು ಇಡುತ್ತಿರೋ ಹೆಜ್ಜೆ ಏನು ಅನ್ನೋದು ಗೊತ್ತಿಲ್ಲ. ನಾನು ಅವರನ್ನು ಭೇಟಿ ಮಾಡುತ್ತಲೇ ಇರುತ್ತೇನೆ ಎಂದಿದ್ದಾರೆ.

ನೀರಾವರಿ ಸಚಿವರೊಂದಿಗೆ ಭೇಟಿ ಮಾಡುತ್ತೇವೆ, ಡಿ.ಕೆ ಶಿವಕುಮಾರ್ ಸಹ ಬರ್ತಾರೆ. ಅಧಿಕಾರದಲ್ಲಿ ತೃಪ್ತಿ ಎಲ್ಲಿಯೂ ಇಲ್ಲ. ಪಕ್ಷದ ಚೌಕಟ್ಟಿನಲ್ಲಿ ಕೊಟ್ಟಿರೋ ಹುದ್ದೆಯಲ್ಲಿ ಸಾಗುತ್ತಿದ್ದೇವೆ. ಏನಾದರೂ ಖರ್ಗೆಯವರು ಸಂಪುಟ ವಿಸ್ತರಣೆ ಆಗುತ್ತೆ ಅಂದ್ರೆ ಪ್ರತಿಕ್ರಿಯೆ ನೀಡುತ್ತೇವೆ ಎಂದಿದ್ದಾರೆ.

ಕಾರ್ಯಕರ್ತರಿಗೆ ಆತ್ಮವಿಶ್ವಾಸ ಮೂಡಿಸಬೇಕು. ಅದರ ಜವಾಬ್ದಾರಿ ಅಧ್ಯಕ್ಷರ ಮೇಲೆ ಇರುತ್ತದೆ. ಕಾರ್ಯಾಚರಣೆ ಹೇಗೆ ಮಾಡಬೇಕು ಅನ್ನೋದು ಅವರಿಗೆ ಗೊತ್ತಿದೆ, ಅದನ್ನು ಮಾಡುತ್ತಿದ್ದೇವೆ. 2028ರಲ್ಲಿ ಸಾಕಷ್ಟು ನಾಯಕರು ಸಿಎಂ ರೇಸ್‌ನಲ್ಲಿ ಇದ್ದಾರೆ. ನಾನು ಇದ್ದೇನೆ ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ. 2028ರ ಭವಿಷ್ಯ ಈಗ ಮಾತಾಡೋದು ಬೇಡ. ಇನ್ನೂ ಮೂರು ವರ್ಷ ಇದೆ, ಹೀಗಾಗಿ ಅಭಿವೃದ್ಧಿ ಕಡೆಗೆ ಗಮನ ಹರಿಸೋಣ. ನೀರಾವರಿ ಯೋಜನೆ ಕುರಿತು ಕೆಲಸ ಮಾಡೋಣ ಎಂದಿದ್ದಾರೆ.

ಬಿಜೆಪಿ ಜೆಡಿಎಸ್ ಮೈತ್ರಿಯಿಂದ ನೀರಾವರಿ ವಿವಾದಕ್ಕೆ ತೆರೆ



ಬೀಳುತ್ತದೆ ಎನ್ನುವುದಾದರೆ ರಾಜ್ಯದಲ್ಲಿ ಇರೋ ನೀರಾವರಿ ಯೋಜನೆ ಕುರಿತು ಚರ್ಚೆ ಮಾಡಲಿ. ಗೋದಾವರಿ ಅಂತರಾಜ್ಯ ವಿವಾದವಾಗಿದೆ. ಈ ರಾಜ್ಯದಲ್ಲಿ ಮೇಕೆ ದಾಟು, ಮಹಾದಾಯಿ ಯೋಜನೆ ಮಾಡಿ ಎಂದು ಹೇಳಬೇಕು ಆ ಕೆಲಸವನ್ನು ಎಂಪಿಗಳು ಮಾಡಬೇಕು ಎಂದಿದ್ದಾರೆ. ಉಸ್ತುವಾರಿ ಸಚಿವರ ಮೇಲೆ ಕೆಲವು ಕಡೆ ಅಸಮಧಾನ ವಿಚಾರವಾಗಿ, ಉಸ್ತುವಾರಿ ಸಚಿವರು ಸಚಿವರ ಬಗ್ಗೆ ಯಾರಾದರೂ ಆಕ್ಷೇಪ ಎತ್ತಿದ್ದಾರಾ? ಸಣ್ಣ ಸಣ್ಣ ವಿಚಾರ ಇರಬಹುದು ಅಷ್ಟೇ, ಅದನ್ನ ಚರ್ಚೆ ಮಾಡುವ ಅಗತ್ಯವಿಲ್ಲ ಎಂದಿದ್ದಾರೆ.

# ಉದಯಗಿರಿ ಗಲಭೆ: ಮೈಸೂರು ಚಲೋಗೆ ಅನುಮತಿ ನಿರಾಕರಣೆ




**ಮೈಸೂರು:** ಮೈಸೂರಿನ ಉದಯಗಿರಿಯಲ್ಲಿ ನಡೆದ ಗಲಭೆಯನ್ನು ಖಂಡಿಸಿ ಬಿಜೆಪಿ ಮೈಸೂರು ಚಲೋ ಬೃಹತ್ ಜನಜಾಗೃತಿ ಸಭೆಗೆ ಅನುಮತಿ ನಿರಾಕರಿಸಲಾಗಿದೆ. ಹೀಗಾಗಿ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿದೆ. ಇನ್ನು ಸಭೆಗೆ ಅನುಮತಿ ನಿರಾಕರಿಸಿ ನಿಷೇಧಾಜ್ಞೆ ಜಾರಿ ಮಾಡಿರುವುದನ್ನು ವಿರೋಧಿಸಿ ಬಿಜೆಪಿ ಹೈಕೋರ್ಟ್ ಮೊರೆ ಹೋಗಿದೆ. ಒಂದು ವೇಳೆ ಅನುಮತಿ ಸಿಕ್ಕರೆ ಬಿಜೆಪಿ ಮತ್ತೊಮ್ಮೆ ಮೈಸೂರು ಚಲೋ ನಡೆಸಲಿದೆ.

**ಸಮಿತಿಯ ಸಂಚಾಲಕ ಮಹೇಶ್ ಕಡಗದಾಳು ಹೇಳಿದ್ದಿಷ್ಟು**

ಈ ವಿಚಾರವಾಗಿ ಮಾಧ್ಯಮಕ್ಕೆ ಸಮಿತಿಯ ಸಂಚಾಲಕ ಮಹೇಶ್ ಕಡಗದಾಳು ಮಾಹಿತಿ ನೀಡಿದ್ದು, ಬಂಧಿತ ಆರೋಪಿಗಳ ಮೇಲೆ ಯುಎಪಿಎ ಕಾಯ್ದೆಯಡಿ ಪ್ರಕಣ ದಾಖಲಿಸಬೇಕು. ಸಮಗ್ರ ತನಿಖೆಯನ್ನು ಎನ್‌ಐಎ ಮೂಲಕ ನಡೆಸಬೇಕು. ಈ ಹಿನ್ನೆಲೆ ರಾಷ್ಟ್ರ ಸುರಕ್ಷಾ ಜನಾಂದೋಲನ ಸಮಿತಿಯಿಂದ ಮೈಸೂರು ಚಲೋ ಬೃಹತ್ ಜನಜಾಗೃತಿ ಸಭೆ ಮಾಡಲಾಗುತ್ತಿತ್ತು. ಆದರೆ ಸಭೆಗೆ ಅನುಮತಿ ನಿರಾಕರಿಸಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಆದರೂ ನಿಶ್ಚಿತ ಸ್ಥಳದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದ್ದಾರೆ.

ಕಾರ್ಯಕ್ರಮಕ್ಕೆ ಮೈಸೂರು ಪೊಲೀಸರು ಅನುಮತಿ ನೀಡಿಲ್ಲ. ಹಾಗಾಗಿ ಈ ಸಂಬಂಧ ರಾಜ್ಯ ಹೈಕೋರ್ಟ್ ಮೊರೆ ಹೋಗಿದ್ದೇವೆ. ನ್ಯಾಯಾಲಯದ ಮೂಲಕ ಅನುಮತಿ ಸಿಗುವ ಭರವಸೆ ಇದೆ ಎಂದಿದ್ದಾರೆ. ಇನ್ನು ನಾಳೆಯ ಮೈಸೂರಿನಲ್ಲಿ ಜನಾಂದೋಲನ ರ್‍ಯಾಲಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಭಾಗಿಯಾಗಲಿದ್ದಾರೆ.

ಗಲಾಟೆಗೆ ಬಿಜೆಪಿ, ಖಖಖ ಕಾರಣವೆಂದು ಆರೋಪಿಸಿ ಕೆಲ ಸಂಘಟನೆಗಳಿಂದ ಜನಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಆದರೆ ಕಾನೂನು ಸುವ್ಯವಸ್ಥೆಗೆ ಧಕ್ಕೆ ಆರೋಪದಡಿ ಎರಡೂ ಕಾರ್ಯಕ್ರಮಗಳಿಗೆ ಪೊಲೀಸರು ಅನುಮತಿ ನಿರಾಕರಿಸಿದ್ದಾರೆ.

ಇನ್ನು ಕೇಸ್‌ಗೆ ಸಂಬಂಧಿಸಿದಂತೆ ಮೌಲ್ವಿ ಮುಫ್ತಿ ಮುಸ್ತಾಕ್ ಮಕ್ಬೋಲಿಯನ್ನ ಗಲಭೆ ನಡೆದ 11 ದಿನಗಳ ಬಳಿಕ ಸಿಸಿಬಿ ಪೊಲೀಸರು ಬಂಧಿಸಿದ್ದರು. ಬಳಿಕ ಮೈಸೂರಿನ 2ನೇ ಹೆಚ್ಚುವರಿ ಸೆಷನ್ಸ್ ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದರು. ವಿಚಾರಣೆ ನಡೆಸಿದ ಕೋರ್ಟ್ 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತ್ತು.

# ಬಾಣಂತಿ ಹೊಟ್ಟೆಯಲ್ಲೇ ಬಟ್ಟೆ ಉಂಡೆ, ಹತ್ತಿ ಬಿಟ್ಟು ಹೊಲಿಗೆ

**ಕಲಬುರಗಿ:** ಇಲ್ಲಿನ ಜಿಮ್ಸ್ ಆಸ್ಪತ್ರೆಯಲ್ಲಿ ವೈದ್ಯರ ಯಡವಟ್ಟು ಬಟಾಬಯಲಾಗಿದೆ. ಮಹಿಳೆಯೊಬ್ಬರಿಗೆ ಸಿಸೇರಿಯನ್ ಮಾಡುವ ವೇಳೆ ಹೊಟ್ಟೆಯಲ್ಲಿ ಬಟ್ಟೆ ಉಂಡೆ ಹಾಗೂ ಹತ್ತಿ ಬಿಟ್ಟು ಹೊಲಿಗೆ ಹಾಕಿರುವ ಘಟನೆ ಬೆಳಕಿಗೆ ಬಂದಿದೆ.



ಹೌದು. ಇದೇ ಫೆ.05ರಂದು ಭಾಗ್ಯಶ್ರೀ ಎಂಬ ಮಹಿಳೆಗೆ ಸಿಸೇರಿಯನ್ ಆಗಿತ್ತು. ಈ ವೇಳೆ ಶಸ್ತ್ರಚಿಕಿತ್ಸೆ ಮಾಡಿದ ವೈದ್ಯರು ಹೊಟೆಯಲ್ಲೇ ಬಟ್ಟೆ ಹುಂಡೆ ಹಾಗೂ ಹತ್ತಿ ಬಿಟ್ಟು ಹೊಲಿಗೆ ಹಾಕಿದ್ದಾರೆ. ತಕ್ಷಣಕ್ಕೆ ಇದು ಮಹಿಳೆಯ ಅರಿವಿಗೆ ಬಂದಿಲ್ಲ. ಒಂದು ವಾರದ ಬಳಿಕ ಹೊಟ್ಟೆ ನೋವು ಕಾಣಿಸಿಕೊಂಡಿದೆ. ಈ ವೇಳೆ ಸ್ಕ್ಯಾನಿಂಗ್‌ಗೆ ಬಂದಾಗ ವೈದ್ಯರ ಯಡವಟ್ಟು ಬಯಲಾಗಿದೆ.

ಬಳಿಕ ಅಫಜಲಪುರ ಕರಜಗಿ ಗ್ರಾಮದ ಪ್ರಾಥಮಿಕ ಕೇಂದ್ರಕ್ಕೆ ತೆರಳಿ ವೈದ್ಯರಿಂದ ಮರು ಶಸ್ತ್ರಚಿಕಿತ್ಸೆ ಮಾಡಿಸಿದ್ದು, ಹೊಟ್ಟೆಯಲ್ಲಿದ್ದ ಬಟ್ಟೆ ಉಂಡೆ ಹಾಗು ಹತ್ತಿ ತೆಗೆದಿದ್ದಾರೆ. ಆದ್ರೆ ಆದರೆ ಕುಟುಂಬಸ್ಥರ ಆರೋಪವನ್ನು ಜಿಮ್ಸ್ ವೈದ್ಯರು ತಳ್ಳಿಹಾಕಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಜಿಲ್ಲಾ ಸರ್ಜನ್ ಡಾ. ಅಸ್ನಾ ಬೇಗ್, ಹೆರಿಗೆಯ ನಂತರ ಬ್ಲೀಡಿಂಗ್ ಸಲುವಾಗಿ ಪ್ಯಾಡ್ ಇಡಲಾಗಿದೆ. 2 ದಿನದ ನಂತರ ಮಹಿಳೆ ಬಂದು ಅದನ್ನ ತೆಗೆಸಿಕೊಳ್ಳಬೇಕಾಗಿತ್ತು. ಆದ್ರೆ ಅವರು ಬಂದಿರಲಿಲ್ಲ. ಸದ್ಯ ಈಗ ಮಹಿಳೆಗೆ ಯಾವುದೇ ರೀತಿಯ ತೊಂದರೆ ಇಲ್ಲ ಅಂತ ಹೇಳಿದ್ದಾರೆ.

# ತೆಂಗಿನ ಮರ ಮುರಿದು ಬಿದ್ದು 3 ವರ್ಷದ ಮಗು ಸಾವು

**ಚಿಕ್ಕಬಳ್ಳಾಪುರ:** ತೆಂಗಿನ ಮರ ಮುರಿದು ಬಿದ್ದು 3 ವರ್ಷದ ಮಗು ಸಾವನ್ನಪ್ಪಿದ್ದು, ತಾಯಿ ಗಂಭೀರ ಗಾಯಗೊಂಡಿರುವ ಘಟನೆ ಗೌರಿಬಿದನೂರು ತಾಲೂಕಿನ ಹಾಲಗಾನಹಳ್ಳಿಯಲ್ಲಿ ನಡೆದಿದೆ.

ಪೃಥ್ವಿರಾಜ್(3) ಮೃತ ಮಗು, ಗರ್ಭಿಣಿ ತಾಯಿ ಮೋನಿಕಾ ಕಾಲಿಗೆ ಗಂಭೀರ ಗಾಯಗಳಾಗಿವೆ. ಗರ್ಭಿಣಿ ಮೋನಿಕಾ 15 ದಿನಗಳ ಹಿಂದೆ ಹೆರಿಗೆಗಾಗಿ ತವರು ಮನೆ ಹಾಲಗಾನಹಳ್ಳಿಗೆ ಬಂದಿದ್ದರು. ಈ ವೇಳೆ ಈ ಅವಘಡ ಸಂಭವಿಸಿದೆ.

ಭಾನುವಾರ (ಫೆ.23) ಮನೆಯ ಮುಂದೆ ಇದ್ದ ತೆಂಗಿನ ಮರ ಮುರಿದು ಬಿದ್ದಿದೆ. ಪರಿಣಾಮ ಮಗು ಸಾವನ್ನಪ್ಪಿದೆ. ತಾಯಿ ಮೋನಿಕಾ ಕಾಲಿಗೆ ಗಂಭೀರ ಗಾಯಗಳಾಗಿದ್ದು, ಅವರಿಗೆ ಬೆಂಗಳೂರಿನ ಆಸ್ಪತ್ರೆಯೊಂದರಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಗೌರಿಬಿದನೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



# ರಾಜಣ್ಣ ಮಾತಾಡಿದ್ದು ತಪ್ಪು: ಹಿರಿಯರು ತಪ್ಪು ಹಾದಿಯಲ್ಲಿ ಹೋದ್ರೆ, ನಾವು ದಾರಿ ತಪ್ತೀವಿ

**ದಾವಣಗೆರೆ:** ರಾಜಣ್ಣನವರು ಮಾತನಾಡಿದ್ದು ತಪ್ಪು, ನಾವೆಲ್ಲ ಮೊದಲ ಸಲ ಗೆದ್ದಿದ್ದೇವೆ. ಹಿರಿಯರ ಹಾದಿಯಲ್ಲಿ ನಡೆಯುತ್ತೇವೆ. ಅವರು ತಪ್ಪು ಹಾದಿಯಲ್ಲಿ ಹೋದರೆ ನಾವು ಕೂಡ ತಪ್ಪು ದಾರಿಯಲ್ಲಿ ಹೋದಂತಾಗುತ್ತದೆ ಎಂದು ಶಾಸಕ ಶಿವಗಂಗಾ ಬಸವರಾಜ್ ಹೇಳಿದ್ದಾರೆ. ಚನ್ನಗಿರಿಯಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.



ಈ ವೇಳೆ, ಹೈಕಮಾಂಡ್ ಎಚ್ಚರಿಕೆ ನೀಡಿದರೂ ಪವರ್ ಶೇರಿಂಗ್ ಬಗ್ಗೆ ಮಾತನಾಡುವುದು ತಪ್ಪು. ಒಬ್ಬರ ಕೈಯಿಂದ ಬದಲಾವಣೆ ಆಗೋದಾದ್ರೆ ಮಾಡಬಹುದಿತ್ತು. ಆದರೆ ಇದು ಹೈಕಮಾಂಡ್ ನಿರ್ಧಾರ, ಆದ್ದರಿಂದ ಯಾರೂ ಮಾತ ನಾಡಬಾರದು. ಹೀಗೆ ಮಾತನಾಡುತ್ತಾ ಹೋದರೆ ಕಾರ್ಯಕರ್ತರಲ್ಲಿ ಗೊಂದಲವಾಗುತ್ತದೆ. ಪವರ್ ಶೇರಿಂಗ್ ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದಿದ್ದಾರೆ.

ಜಾತಿ ಜನಗಣತಿ ವಿಚಾರವಾಗಿ, ಯಾವುದೇ ಕಾರಣಕ್ಕೂ ಜಾತಿಗಣತಿ ವರದಿ ಬಿಡುಗಡೆ ಆಗಲು ಬಿಡೋದಿಲ್ಲ. ನಾನು ಹಿಂದಿನಿಂದಲೂ ಹೇಳುತ್ತಾ ಬಂದಿದ್ದೇನೆ. ನಮ್ಮ ಮನೆಗೆ ಬಂದು ಜಾತಿ ಗಣತಿ ಮಾಡಿಲ್ಲ. ಎಲ್ಲೋ ಕೂತು ಜಾತಿಗಣತಿ ಮಾಡಿದರೆ ಹೇಗೆ ಒಪ್ಪೋದು ಎಂದು ಅಸಮಾಧಾನ ಹೊರಹಾಕಿದ್ದಾರೆ.

ಜಾತಿ ಜನಗಣತಿ ವರದಿ ಬಿಡುಗಡೆ ಮಾಡುತ್ತೇವೆ ಎಂದು ಸಿಎಂ ಹೇಳಿದ್ದಾರೆ. ನಮ್ಮ ಗಮನಕ್ಕೆ ತಂದೇ ಬಿಡುಗಡೆ ಮಾಡ್ಬೇಕಲ್ವಾ? ಆಗ ನೋಡೋಣ ಎಂದಿದ್ದಾರೆ.

# ಕಸಕ್ಕೆ ಹಚ್ಚಿದ ಬೆಂಕಿ ಕೆನ್ನಾಲಿಗೆಗೆ ಕಾರು ಸುಟ್ಟು ಭಸ್ಮ

**ಆನೇಕಲ್:** ಕಸಕ್ಕೆ ಹಚ್ಚಿದ ಬೆಂಕಿಯಿಂದಾಗಿ ಪಕ್ಕದಲ್ಲಿದ್ದ ಕಾರಿಗೆ ಕಿಡಿ ತಗುಲಿ, ಸಂಪೂರ್ಣ ಕರಕಲಾಗಿರುವ ಘಟನೆ ಬೆಂಗಳೂರು ಹೊರವಲಯದ ಆನೇಕಲ್ ತಾಲೂಕಿನ ಚಂದಾಪುರದಲ್ಲಿ ನಡೆದಿದೆ. ವಿಘ್ನೇಶ್ ಎಂಬವರಿಗೆ ಸೇರಿದ್ದ ಕಾರಿಗೆ ಬೆಂಕಿ ಹೊತ್ತಿಕೊಂಡಿದ್ದು, ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ.

ವಿಘ್ನೇಶ್ ಹಾಗೂ ಗೌರಿಶಂಕರ್ ಇಬ್ಬರು ಗೆಳೆಯರು. ಶನಿವಾರ ಬೆಳಗ್ಗೆ ಗೌರಿಶಂಕರ್ ಇದೇ ಕಾರಿನಲ್ಲಿ ಚೆನ್ನೈನಿಂದ ಬೆಂಗಳೂರಿಗೆ ಬಂದಿದ್ದರು. ಬಳಿಕ ಗೌರಿಶಂಕರ್ ತಮ್ಮ ಸ್ನೇಹಿತರೊಂದಿಗೆ ಸುತ್ತಾಡಿ, ರಾತ್ರಿ 12 ಗಂಟೆ ಸುಮಾರಿಗೆ ಚಂದಾಪುರದ ಕೀರ್ತಿ ಲೇಔಟ್ ಸಮೀಪದಲ್ಲಿ ಸ್ನೇಹಿತನೊಬ್ಬನ ಪಿಜಿ ಬಳಿ ಕಾರು ನಿಲ್ಲಿಸಿದ್ದರು.

ನಸುಕಿನ ಜಾವ 3 ಗಂಟೆ ವೇಳೆಗೆ ಕಾರಿನ ಪಕ್ಕದಲ್ಲಿದ್ದ ಕಸದ ರಾಶಿಗೆ ಯಾರೋ ಬೆಂಕಿ ಹಚ್ಚಿದ್ದಾರೆ. ಇದರಿಂದ ಬೆಂಕಿಯ ಕಿಡಿ ಪಕ್ಕದಲ್ಲಿದ್ದ ಕಾರಿಗೆ ವ್ಯಾಪಿಸಿ, ಕಾರು ಕ್ಷಣಾರ್ಧದಲ್ಲಿ ಹೊತ್ತಿ ಉರಿದಿದೆ. ಕೂಡಲೇ ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಆಗಮಿಸಿದ್ದು, ಬೆಂಕಿ ನಂದಿಸಲು ಹರಸಾಹಸಪಟ್ಟಿದ್ದಾರೆ. ಸುಟ್ಟುಹೋದ ಕಾರಿನ ಪಕ್ಕದಲ್ಲಿ ಮತ್ತೊಂದು ಕಾರು, ದ್ವಿಚಕ್ರ ವಾಹನವಿದ್ದು, ಅದೃಷ್ಟವಶಾತ್ ಯಾವುದೇ ವಾಹನಗಳಿಗೆ ಹಾನಿಯಾಗಿಲ್ಲ. ಸದ್ಯ ಸೂರ್ಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



# ಮಧುಗಿರಿ ಅಭಿವೃದ್ಧಿಗೆ ಸರ್ಕಾರದಿಂದ 25 ಕೋಟಿ ಅನುದಾನ

**ತುಮಕೂರು:** ಮಧುಗಿರಿ ಪಟ್ಟಣದ ರಸ್ತೆ ಮತ್ತು ಚರಂಡಿ ಅಭಿವೃದ್ಧಿಗೆ ರಾಜ್ಯ ಸರ್ಕಾರದಿಂದ 25 ಕೋಟಿ ರೂ. ಅನುದಾನ ಮಂಜೂರಾಗಿದ್ದು, ಶೀಘ್ರವೇ ಕಾಮಗಾರಿ ಪ್ರಾರಂಭಿಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಆರ್.ರಾಜೇಂದ್ರ ತಿಳಿಸಿದರು. ಪಟ್ಟಣದ ಪ್ರಮುಖ ರಸ್ತೆಗಳಿಗೆ ಭೇಟಿ ನೀಡಿ ಗುಣಮಟ್ಟ ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ತುಮಕೂರು ಗೇಟ್‌ನಿಂದ ಶಿರಾ ರಸ್ತೆವರೆಗೆ, ಗೌರಿಬಿದನೂರು ಬೈಪಾಸ್‌ನಿಂದ ಸಿದ್ದಾಪುರ ಗೇಟ್‌ವರೆಗೆ ಡಬಲ್ ರಸ್ತೆ ಹಾಗೂ ಪಟ್ಟಣದ ಎಲ್ಲಾ ವಾರ್ಡ್ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿ ಮಾಡಿಸಲಾಗುವುದು ಎಂದರು. ಪಟ್ಟಣದ ಪ್ರಮುಖ ವೃತ್ತಗಳನ್ನು ವಿನೂತನವಾಗಿ ಅಭಿವೃದ್ಧಿ ಪಡಿಸಲಾಗುವುದು. ಹೈಟೆಕ್ ತಂಗುದಾಣ ನಿರ್ಮಾಣ, ವೈಜ್ಞಾನಿಕ ಹಂಪ್ ಹಾಗೂ ಪ್ರಮುಖ ರಸ್ತೆಗಳಿಗೆ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗುವುದು ಎಂದು ವಿವರಿಸಿದರು. ರಾಜೀವ್ ಗಾಂಧಿ ಕ್ರೀಡಾಂಗಣದ ಅಭಿವೃದ್ಧಿಗೆ 5 ಕೋಟಿ ರೂ. ಮಂಜೂರಾಗಿದೆ. ಈ ಅನುದಾನದಲ್ಲಿ ಕ್ರೀಡಾಪಟುಗಳು ಮತ್ತು ಮಕ್ಕಳಿಗೆ ಅನುಕೂಲವಾಗುವಂತೆ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸಲಾಗುವುದು ಹೇಳಿದರು.



## ಮೈಸೂರಿನಲ್ಲಿ ನಿಷೇಧಾಜ್ಞೆ

ಎರಡೂ ಸಮಾವೇಶಕ್ಕೆ ಅನುಮತಿ ನೀಡಿದರೆ ಗಲಾಟೆ ಆಗುವ ಸಾಧ್ಯತೆ ಇರುವ ಕಾರಣ ಮೈಸೂರು ಪೊಲೀಸರು ಅಲರ್ಟ್ ಆಗಿದ್ದಾರೆ. ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್ 163 ಅಡಿ ನಿಷೇಧಾಜ್ಞೆ ಜಾರಿ ಮಾಡಿ ಆದೇಶ ಹೊರಡಿಸಿದ್ದಾರೆ. ಈ ನಿಷೇಧಾಜ್ಞೆ ಭಾನುವಾರ ಮಧ್ಯರಾತ್ರಿಯಿಂದ ಇಂದು (ಸೋಮವಾರ) ಮಧ್ಯರಾತ್ರಿವರೆಗೂ ಜಾರಿಯಲ್ಲಿರಲಿದೆ.

ಉದಯಗಿರಿ ಪೊಲೀಸ್ ಠಾಣೆ ಗಲಭೆ ಪ್ರಕರಣದ ಪೊಲೀಸರಿಗೆ ದೊಡ್ಡ ಕಗ್ಗಂಟಾಗಿದೆ. ಪೊಲೀಸರಿಗೆ ಕಲ್ಲು ತೂರಿದ 980 ಪುಂಡರು ಎಲ್ಲಿದ್ದಾರೆ ಅನ್ನೋದೆ ದೊಡ್ಡ ಪ್ರಶ್ನೆಯಾಗಿದೆ. ಘಟನೆ ನಡೆದು 13 ದಿನ ಕಳೆದರೂ ಪುಂಡರು ಪೊಲೀಸರ ಕೈಗೆ ಸಿಕ್ಕಿಲ್ಲ. ಮೌಲ್ವಿಯನ್ನು ಮಾತ್ರ ಜೈಲಿಗೆ ಕಳುಹಿಸಿ ಉದಯಗಿರಿ ಪ್ರಕರಣದಲ್ಲಿ ಮೈಸೂರು ಪೊಲೀಸರು ತಣ್ಣಗಾದ್ರಾ ಅನ್ನೋ ಅನುಮಾನ ಶುರುವಾಗಿದೆ.

ಉದಯಗಿರಿ ಠಾಣೆ ಮೇಲೆ ಸಾವಿರಕ್ಕೂ ಹೆಚ್ಚು ಜನ ಕಲ್ಲು ತೂರಾಟ ನಡೆಸಿದ್ದರು ಎನ್ನಲಾಗುತ್ತಿತ್ತು. ಅದನ್ನು ಎಫ್‌ಐಆರ್ ನಲ್ಲೂ ಉಲ್ಲೇಖಿಸಲಾಗಿತ್ತು. ಸಿಸಿಟಿವಿಯಲ್ಲಿ ಇರುವ ಅಷ್ಟೂ ಜನ ಠಾಣೆ ಧ್ವಂಸಕ್ಕೆ ಯತ್ನಿಸಿದ್ದರು ಎಂದು ಆರೋಪಿಸಲಾಗಿತ್ತು. ಆದರೆ ಸಿಸಿಟಿವಿಯಲ್ಲಿ ಇರೋ ಅಷ್ಟು ಪುಂಡರ ಬಂಧನ ಯಾವಾಗ ಅನ್ನೋ ಕೂಗು ಕೇಳಿಬಂದಿದೆ. ಗಲಭೆಗೆ ಪ್ರಚೋದಿಸಿದ ಮೌಲ್ವಿ ಮಾತ್ರ ಜೈಲಿಗೆ ಕಳುಹಿಸಿ ಪೊಲೀಸ್ರು ಸುಮ್ಮನಾದ್ರಾ? ಅಥವಾ ಪೊಲೀಸರ ಮೇಲೆ ಯಾರಾದ್ರೂ ಒತ್ತಡ ತಂದ್ರಾ, ಅನ್ನೋ ಅನುಮಾನ ಮೂಡಿದೆ.

## ಗಳಿಕೆಯಲ್ಲಿ ರಾಜ್ಯವೇ ಫಸ್ಟ್

**ಎಲ್ಲೆಲ್ಲಿದೆ ಸೋಲಿ ಬುಡಕಟ್ಟು ಜನಾಂಗದವರ ನೆಲೆ:** 570 ಚದರ ಕಿ.ಮೀ ಅರಣ್ಯ ಪ್ರದೇಶದಲ್ಲಿ ಹರಡಿರುವ ಬಿಳಿಗಿರಿ ರಂಗನಾಥ ಸ್ವಾಮಿ ದೇವಾಲಯ ಹುಲಿ ಅಭಯಾರಣ್ಯ ಪ್ರದೇಶವು 40 ಕ್ಕೂ ಹೆಚ್ಚು ಹುಲಿಗಳು ಮತ್ತು 280 ಕ್ಕೂ ಹೆಚ್ಚು ಜಾತಿಯ ಅಪರೂಪದ ಪಕ್ಷಿಗಳಿಗೆ ನೆಲೆಯಾಗಿದೆ. ಸೋಲಿಗ ಬುಡಕಟ್ಟು ಕರ್ನಾಟಕದ ಚಾಮರಾಜನಗರದ ಬಿಳಿಗಿರಿ ರಂಗನ ಬೆಟ್ಟಗಳಲ್ಲಿ ಮತ್ತು ತಮಿಳುನಾಡಿನ ಈರೋಡ್ ಜಿಲ್ಲೆಯ ಕೆಲವು ಭಾಗಗಳಲ್ಲಿ ವಾಸಿಸುವ ಸ್ಥಳೀಯ ಬುಡಕಟ್ಟು ಜನಾಂಗವಾಗಿದೆ.

ಕಾಡು ಪ್ರಾಣಿಗಳಿಗೆ ನಮ್ಮ ಇತಿಹಾಸ ಮತ್ತು ಸಂಸ್ಕೃತಿಯಲ್ಲಿ ಸ್ಥಾನವಿದೆ. ಅನೇಕ ಪ್ರಾಣಿಗಳನ್ನು ನಮ್ಮ ದೇವರು ಮತ್ತು ದೇವತೆಗಳ ವಾಹನಗಳಾಗಿಯೂ ಗಮನಿಸಲಾಗಿದೆ ಎಂದು ಮೋದಿ ಹೇಳಿದ್ದಾರೆ.

**ಹುಲಿ ಕುಣಿತ ವೇಷದ ಬಗ್ಗೆಯೂ ಮೋದಿ ಮೆಚ್ಚುಗೆ:** ಕರ್ನಾಟಕದ ಹುಲಿ ವೇಷ ಕುಣಿತ, ತಮಿಳುನಾಡಿನ ಪುಲಿ ಮತ್ತು ಕೇರಳದ ಪುಲಿಕಲಿಯಂತಹ ಅನೇಕ ಸಾಂಸ್ಕೃತಿಕ ನೃತ್ಯಗಳು ನಮ್ಮಲ್ಲಿವೆ. ಇವು ಪ್ರಕೃತಿ ಮತ್ತು ವನ್ಯಜೀವಿಗಳೊಂದಿಗೆ ಸಂಬಂಧ ಹೊಂದಿವೆ. ವನ್ಯಜೀವಿ ರಕ್ಷಣೆಗೆ ಸಂಬಂಧಿಸಿದ ಕೆಲಸಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿರುವುದಕ್ಕಾಗಿ ನನ್ನ ಬುಡಕಟ್ಟು ಸಹೋದರ ಸಹೋದರಿಯರಿಗೆ ನಾನು ಧನ್ಯವಾದ ಹೇಳಲು ಬಯಸುತ್ತೇನೆ ಎಂದು ಮೋದಿ ಹೇಳಿದ್ದಾರೆ.

**ಬುಡಕಟ್ಟು ಜನಾಂಗದವರ ಬಗ್ಗೆ ಮೋದಿ ಮಾತು:** ಮಧ್ಯ ಭಾರತದ ಅನೇಕ ಬುಡಕಟ್ಟು ಜನಾಂಗದವರು ಬಾಗೇಶ್ವರನನ್ನು ಪೂಜಿಸುತ್ತಾರೆ. ಮಹಾರಾಷ್ಟ್ರದಲ್ಲಿ ವಾಘೋಬಾನನ್ನು ಪೂಜಿಸುವ ಸಂಪ್ರದಾಯವಿದೆ. ಅಯ್ಯಪ್ಪ ಸ್ವಾಮಿಗೂ ಹುಲಿಯೊಂದಿಗೆ ಸಂಬಂಧವಿದೆ. ಹುಲಿಯ ವಾಹನವಾಗಿರುವ ಬೊನ್ಬಿಬಿಯನ್ನು ಸುಂದರಬನದಲ್ಲಿ ಪೂಜಿಸಲಾಗುತ್ತದೆ ಎಂದು ಪ್ರಧಾನಿ ಹೇಳಿದ್ದಾರೆ.

ಏಷ್ಯಾಟಿಕ್ ಸಿಂಹ, ಹಂಗುಲ್, ಪಿಗ್ಮಿ ಹಾಗ್ ಮತ್ತು ಸಿಂಹ ಬಾಲದ ಮಕಾಕ್ ನಡುವಿನ ಹೋಲಿಕೆಯ ಬಗ್ಗೆ ಮೋದಿ ಉಲ್ಲೇಖಿಸಿದ್ದಾರೆ.

ಇವೆಲ್ಲವೂ ಜಗತ್ತಿನ ಬೇರೆಲ್ಲಿಯೂ ಕಂಡುಬರುವುದಿಲ್ಲ. ಅವು ನಮ್ಮ ದೇಶದಲ್ಲಿ ಮಾತ್ರ ಕಂಡುಬರುತ್ತವೆ. ನಿಜಕ್ಕೂ, ನಮ್ಮಲ್ಲಿ ಸಸ್ಯ ಮತ್ತು ಪ್ರಾಣಿಗಳ ಅತ್ಯಂತ ರೋಮಾಂಚಕ ಪರಿಸರ ವ್ಯವಸ್ಥೆ ಇದೆ ಎಂದು ಅವರು ಹೇಳಿದ್ದಾರೆ.

## ಪ್ರಧಾನಿ ಮೋದಿ

**ಆದಾಯದ ಹಣ ಬಳಕೆ ಹೇಗೆ ಅಧಿಕಾರಿಗಳು ಹೇಳಿದ್ದೇನು :** ಪರಿಸರ ಪ್ರವಾಸೋದ್ಯಮದಿಂದ ಬರುವ ಹಣದಿಂದ ಸಿಬ್ಬಂದಿ ವೇತನ, ವನ್ಯಜೀವಿಗಳ ಆವಾಸಸ್ಥಾನ ಅಭಿವೃದ್ಧಿ, ಲಂಟಾನ ಹಾಗೂ ಸೆನ್ನಾ ಕಳೆ ಗಿಡ ತೆಗೆಯಲು, ಅಗ್ನಿಶಾಮಕ ಉಪಕರಣಗಳಿಗೆ ಬಳಸಿಕೊಳ್ಳುವ ಮೂಲಕ ಹುಲಿ ಸಂರಕ್ಷಿತ ಪ್ರದೇಶದ ನಿರ್ವಹಣೆ ಮಾಡಲಾಗುವುದು ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ.

ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ ಬಂಡೀಪುರ ಆದಾಯ

ಬಂಡಿಪುರದ ಅರಣ್ಯ ಹಾಗೂ ಇಲ್ಲಿನ ವನ್ಯಜೀವಿಗಳ ವೀಕ್ಷಣೆಗೆಂದು ನಿತ್ಯ ನೂರಾರು ಪ್ರವಾಸಿಗರು ಬರತೊಡಗಿದ್ದಾರೆ. ಹೀಗೆ ಬರುವ ಪ್ರವಾಸಿಗರಿಗೆ ಇಲ್ಲಿ ಖಂಡಿತ ನಿರಾಸೆಯಾಗುವುದಿಲ್ಲ. ಸಫಾರಿಗೆ ತೆರಳುವ ಪ್ರವಾಸಿಗರು ಹಸಿರ ಸಿರಿಯನ್ನು ಕಣ್ತುಂಬಿಕೊಂಡು ವನ್ಯಜೀವಿಗಳನ್ನು ನೋಡಿ ಖುಷಿಪಡುತ್ತಾರೆ. ಒಟ್ಟಾರೆ ತನ್ನ ವನ್ಯಸಂಪತ್ತಿನಿಂದ ಕಂಗೊಳಿಸುತ್ತಿರುವ ಬಂಡೀಪುರ ಪ್ರವಾಸಿಗರನ್ನು ಕೈಬೀಸಿ ಕರೆಯುತ್ತಿದ್ದು ವರ್ಷ ವರ್ಷ ಆದಾಯವು ಹೆಚ್ಚಾಗುತ್ತಿದೆ.

ಬಂಡೀಪುರ ಅರಣ್ಯವನ್ನು ರಾಷ್ಟ್ರೀಯ ಹುಲಿ ಸಂರಕ್ಷಿತಾರಣ್ಯವೆಂದು ಘೋಷಿಸಿ 50 ವರ್ಷಗಳು ಸಂದ ಸಂದರ್ಭದಲ್ಲಿ 2023ರ ಏಪ್ರಿಲ್ 9ರಂದು ಪ್ರಧಾನಿ ನರೇಂದ್ರ ಮೋದಿ ಬಂಡೀಪುರ ರಾಷ್ಟ್ರೀಯ ಉದ್ಯಾನವನಕ್ಕೆ ಭೇಟಿ ನೀಡಿ ಸಫಾರಿ ನಡೆಸಿದ್ದರು. ಈ ವಿಚಾರ ದೇಶ ಮಟ್ಟದಲ್ಲಿ ಸುದ್ದಿಯಾಗಿತ್ತು. ನಂತರ ಬಂಡೀಪುರಕ್ಕೆ ಭೇಟಿ ನೀಡುವವರ ಸಂಖ್ಯೆಯಲ್ಲಿಯೂ ಹೆಚ್ಚಳವಾಗಿತ್ತು.

## ಮಹಿಳೆ ಆತ್ಮಹತ್ಯೆ

**ಏನು ಕಾರಣ?:** ಬಿಬಿಎಂಪಿ ಕಚೇರಿಯಲ್ಲಿ ಕೆಲಸ ಮಾಡಿಕೊಂಡಿದ್ದ ನಂದಿನಿ, 8 ವರ್ಷಗಳ ಹಿಂದೆ ಸೂರ್ಯ ಎಂಬಾತನೊಂದಿಗೆ

ಮೊದಲನೇ ಪುಟದಿಂದ...

ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದರು. ದಂಪತಿಗೆ ಒಂದು ಹೆಣ್ಣು ಮತ್ತು ಒಂದು ಗಂಡು ಮಗು ಇದೆ. ನಂದಿನಿಗೆ ವ್ಯಕ್ತಿಯೊಬ್ಬ ಆಗಾಗ್ಗೆ ಫೋನ್ ಮಾಡಿ ಕಿರಿಕುಳ ನೀಡುತ್ತಿದ್ದ ಎಂಬ ಆರೋಪ ಕೇಳಿಬಂದಿದೆ. ಇದರಿಂದಾಗಿ ಪತಿ-ಪತ್ನಿ ನಡುವೆ ಆಗಾಗ್ಗೆ ಗಲಾಟೆ ನಡೆಯುತ್ತಿತ್ತು. ವ್ಯಕ್ತಿಯ ನಿರಂತರ ಕಿರುಕುಳದಿಂದ ಮನನೊಂದಿದ್ದ ನಂದಿನಿ ಆತ್ಮಹತ್ಯೆ ಮಾಡಿಕೊಂದಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಸದ್ಯ ಈ ಕುರಿತು ಪ್ರಕರಣ ದಾಖಲಿಸಿಕೊಂಡಿರುವ ಚಾಮರಾಜಪೇಟೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಸಚಿವೆ ವಿರುದ್ಧ ಕಿಡಿ!

ಸಚಿವೆ ಹೆಬ್ಬಾಳ್ಕರ್ ಅವರ ಈ ನಡೆಯು ಸಾರ್ವಜನಿಕ ವಲಯದಲ್ಲಿ ಅಸಮಾಧಾನ ಕಾರಣವಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಸಚಿವರ ವಿರುದ್ಧ ಆಕ್ರೋಶ ವ್ಯಕ್ತವಾಗಿದ್ದು, ಕೆಲವರು ಕೀಳುಮಟ್ಟದ ಪದಗಳಿಂದ ನಿಂದಿಸಿದ್ದಾರೆ.

ಕಂಡಕ್ಟರ್ ಮೇಲಿನ ಹಲ್ಲೆಯ ಘಟನೆಯಿಂದಾಗಿ ಕನ್ನಡಪರ ಸಂಘಟನೆಗಳು ಹಾಗೂ ಕನ್ನಡಿಗರಿಂದ ಭಾರೀ ವಿರೋಧ ವ್ಯಕ್ತವಾಗಿದೆ. ಈ ರೀತಿಯ ಬೆಳವಣಿಗೆ ನಡೆಯುವುದಕ್ಕೆ ಬೆಳಗಾವಿಯಲ್ಲಿ ಹೊಂದಾಣಿಕೆ ರಾಜಕೀಯವೇ ಕಾರಣ. ಕರ್ನಾಟಕದಲ್ಲಿ ಹೊಂದಾಣಿಕೆಯ ರಾಜಕೀಯ ಮುಂದುವರಿದಿದೆ. ಅದರಲ್ಲೂ ಬೆಳಗಾವಿಯಲ್ಲಿನ ಶಾಸಕರು ಈ ಬಗ್ಗೆ ಧ್ವನಿಯೇ ಎತ್ತುತ್ತಿಲ್ಲ ಎನ್ನುವ ಆರೋಪಗಳು ಇವೆ. ಆದರೆ ಇಷ್ಟೆಲ್ಲ ಬೆಳವಣಿಗೆಗಳ ನಡುವೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಮರಾಠಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿರುವುದಲ್ಲೇ ಮರಾಠಿಯಲ್ಲೇ ಭಾಷಣ ಮಾಡಿರುವುದು ಭಾರೀ ಚರ್ಚೆಗೆ ಕಾರಣವಾಗಿದೆ.

ಬೆಳಗಾವಿಯಲ್ಲಿ ಮರಾಠಿ ಹಾಗೂ ಕನ್ನಡ ಭಾಷೆ ವಿವಾದ ಹಾಗೂ ಗಡಿ ವಿವಾದ ಇಲ್ಲಿ ದಶಕಗಳಿಂದ ಇದೆ. ಮರಾಠಿ ಪುಂಡರು ಇದೀಗ ಮತ್ತೆ ಬಾಲ ಬಿಚ್ಚಿದ್ದಾರೆ. ಆದರೆ, ಇಲ್ಲಿ ರಾಜಕಾರಣಿಗಳು ಮತಕ್ಕಾಗಿ ಇಬ್ಬಗೆಯ ನೀತಿಯನ್ನು ಅನುಸರಿಸುತ್ತಿದ್ದಾರೆ ಎನ್ನುವ ಆರೋಪವು ಸಾರ್ವಜನಿಕರಿಂದ ಕೇಳಿ ಬಂದಿದೆ. ಇದರ ಬೆನ್ನಲ್ಲೇ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ವಿರುದ್ಧ ಗಂಭೀರ ಆರೋಪವೊಂದು ಕೇಳಿ ಬಂದಿದೆ.

**ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಎಂದಿಗೂ ಮತ ಹಾಕುವುದಿಲ್ಲ:** ಎಕ್ಸ್‌ನಲ್ಲಿ ಬೆಳಗಾವಿ ಕನ್ನಡಿಗರು ಎನ್ನುವ ಖಾತೆಯಿಂದ ಒಬ್ಬರು ಪೋಸ್ಟ್ ಮಾಡಿದ್ದು, ''ಯಾವ ಊರಲ್ಲಿ ಕನ್ನಡ ಕಂಡಕ್ಟರ್ ಮೇಲೆ ಹಲ್ಲೆ ಆಯ್ತೋ ಅದೇ ಊರಲ್ಲಿ ನಿನ್ನೆ ಮರಾಠಿ ಕಾರ್ಯಕ್ರಮದಲ್ಲಿ ರಾಜಾರೋಷವಾಗಿ ಪಾಲ್ಗೊಂಡ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್. ಈ ಕಾರ್ಯಕ್ರಮ ಅಂತು ಸಂಪೂರ್ಣ ಮರಾಠಿಮಯವಾಗಿತ್ತು. ಎಲ್ಲಾ ಕನ್ನಡಿಗರು ಇಂದೇ ನಿರ್ಧಾರ ಮಾಡಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಎಂದಿಗೂ ಮತ ಹಾಕುವುದಿಲ್ಲ'' ಎಂದು ಪೋಸ್ಟ್ ಮಾಡಲಾಗಿದೆ.

**ಮರಾಠಿ ಪುಂಡರ ಪುಂಡಾಟದ ಬಗ್ಗೆ ಸಚಿವೆ ಮಾತನಾಡಿಲ್ಲ ಏಕೆ?:** ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಸೇರಿದಂತೆ ಹಲವು ಬೆಳಗಾವಿಯ ಹಲವು ರಾಜಕಾರಣಿಗಳು ಈ ವಿಚಾರದ ಬಗ್ಗೆ ಮಾತನಾಡಿಲ್ಲ ಎನ್ನುವ ಆರೋಪ ಕೇಳಿ ಬಂದಿದೆ. ಇದರ ಬೆನ್ನಲ್ಲೇ ಯಾವೆಲ್ಲ ರಾಜಕಾರಣಿಗಳು ಏನು ಮಾತನಾಡಿಲ್ಲ ಎಂದು ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಲಾಗುತ್ತಿದೆ. ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಅವರು ಮಾತ್ರ ಈ ವಿಚಾರದ ಬಗ್ಗೆ ಮಾತನಾಡಿದ್ದಾರೆ. ಉಳಿದಂತೆ ಯಾವುದೇ ರಾಜಕಾರಣಿಗಳು ಸಹ ತುಟಿಕ್ ಪಿಟಿಕ್ ಎಂದಿಲ್ಲ ಎಂದು ದೂರಿದ್ದಾರೆ.

**ಬೇಸರ ಹೊರ ಹಾಕುತ್ತಿರುವ ಕನ್ನಡಿಗರು!:** ಬೆಳಗಾವಿಯಲ್ಲಿ ನಡೆಯುತ್ತಿರುವ ಬೆಳವಣಿಗೆಗೆ ಕನ್ನಡಿಗರು ಬೇಸರ ವ್ಯಕ್ತಪಡಿಸಿದ್ದಾರೆ. ಬೆಳಗಾವಿಯಲ್ಲಿ ನಡೆಯುವ ಯಾವುದೇ ಗಲಭೆ ಅಥವಾ ಗಲಾಟೆಗಳು ಕನ್ನಡಿಗರಿಂದ ಪ್ರಾರಂಭವಾದ ಉದಾಹರಣೆಗಳೇ ಇಲ್ಲ, ಇಲ್ಲಿ ಕನ್ನಡಿಗರ ಮೇಲೆ ವಿನಾಕಾರಣ ಹಲ್ಲೆಗಳು ನಡೆಯುತ್ತಿದ್ದರೂ ಇಲ್ಲಿನ ರಾಜಕಾರಣಿಗಳು ಧ್ವನಿ ಎತ್ತುತ್ತಿಲ್ಲ. ಇದೇ ಪರಿಸ್ಥಿತಿ ಮುಂದುವರಿದರೆ ಕನ್ನಡಿಗರು ಈ ರಾಜಕಾರಣಿಗಳಿಗೆ ಬುದ್ಧಿ ಕಲಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

## ಬದುಕ್ತು ಜೀವ!

ತಂಪಾದ ನೀರನ್ನು ಆನಂದಿಸುತ್ತಿರುವಾಗ ಇದ್ದಕ್ಕಿದ್ದಂತೆ ಕಾಲಿಗೇನೋ ತಾಗಿತೆಂದು ಕೈಯಲ್ಲಿ ಹಿಡಿದು ನೋಡಿದಾಗ ಅದು ಮೀನಾಗಿರಲಿಲ್ಲ, ಮೊಸಳೆಯಾಗಿತ್ತು. ತಕ್ಷಣ ಭಯದಿಂದ ಅದನ್ನು ದೂರ ಎಸೆದು ಓಡಿಬಂದು ದೋಣಿಹತ್ತಿ ಬಚಾವಾಗುವ ದೃಶ್ಯ ಒಮ್ಮೆಲೆ ಯಾರನ್ನಾದರೂ ಭಯಗೊಳಿಸುವಂತಿದೆ.

ಈ ವೈರಲ್ ವೀಡಿಯೊ ಅಪ್‌ಲೋಡ್ ಆದ ಎರಡೇ ದಿನಗಳಲ್ಲಿ 637,000 ಕ್ಕೂ ಹೆಚ್ಚು ಲೈಕ್‌ಗಳನ್ನು ಗಳಿಸಿದೆ, ಆಘಾತಕ್ಕೊಳಗಾದ ಸಾವಿರಾರು ವೀಕ್ಷಕರು ಈ ಕ್ಷಣದ ಬಗ್ಗೆ ಕಮೆಂಟ್ ಮಾಡಿದ್ದಾರೆ. ಈಗ ದೊಡ್ಡ ಮೀನು ಹಿಡಿದಿದ್ದೇನೆ ಎಂದುಕೊಂಡಿರಬೇಕು ಎಂದು ಬರೆದರೆ ಮತ್ತೊಬ್ಬರು ಪುರುಷರು ಧೈರ್ಯವಂತರು ಎಂದು ಬರೆದಿದ್ದಾರೆ, ಮತ್ತೊಬ್ಬರು ನಿಮಗೆ ಬದುಕಲು ಮತ್ತೊಂದು ಅವಕಾಶ ಸಿಕ್ಕಿದೆ ಅಭಿನಂದನೆಗಳು ಎಂದು ಬರೆದಿದ್ದಾರೆ. ಈ ರೋಮಾಂಚಕಾರಿ ವೀಡಿಯೊ ಪ್ರಕೃತಿ ಅನಿರೀಕ್ಷಿತ ಎಂಬುದನ್ನು ನೆನಪಿಸುತ್ತದೆ, ಮತ್ತು ಕೆಲವೊಮ್ಮೆ ನಮ್ಮ ಅಣತಿಗೆ ಮೀರಿ ಏನೇನೋ ಸಂಭವಿಸಿಬಿಡುತ್ತವೆ.

## ಅತ್ಯಾಚಾರ

ಆತ ಕರೆ ಮಾಡಿ ತಂಗಿಗೆ ಬರುವಂತೆ ಕೇಳಿಕೊಂಡಿದ್ದಾನೆ, ಆಕೆ ಸ್ಥಳಕ್ಕೆ ಬಂದಾಗ ಆರೋಪಿಗಳು ಆಕೆಯ ಸಹೋದರ ಮತ್ತು ಆಕೆಯನ್ನು ಕರೆದೊಯ್ಯುತ್ತಿದ್ದ ಆಟೋರಿಕ್ಷಾ ಚಾಲಕನನ್ನು ಥಳಿಸಿ ಆಕೆಯನ್ನು ಎಳೆದುಕೊಂಡು ಹೋಗಿದ್ದಾರೆ.

ಆರೋಪಿಗಳು ನಾಗಾಂವ್‌ನ ಶಾಲೆಯ ಬಳಿ ಮತ್ತು ಫಾತಿಮಾನಗರದ ಪಿಕಪ್ ವ್ಯಾನ್‌ನೊಳಗೆ ಆಕೆಯ ಮೇಲೆ ಅತ್ಯಾಚಾರ ಮಾಡಿದ್ದಾರೆ. ಯುವತಿ ಮೇಲೆ ಎರಡು ವಿಭಿನ್ನ ಸ್ಥಳಗಳಲ್ಲಿ ಸಾಮೂಹಿಕ ಅತ್ಯಾಚಾರ ನಡೆದಿದೆ ಎಂದು ಸೂಚಿಸುತ್ತದೆ. ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾದ ನಂತರ ಆಕೆ ಪೊಲೀಸ್ ಠಾಣೆಗೆ ಬಂದು ದೂರು ಕೊಟ್ಟಿದ್ದಾಳೆ.

ಎಲ್ಲಾ ಆರು ಆರೋಪಿಗಳ ವಿರುದ್ಧ ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಅಡಿಯಲ್ಲಿ ಅತ್ಯಾಚಾರ, ಸಾಮೂಹಿಕ ಅತ್ಯಾಚಾರ ಮತ್ತು ಇತರ ಅಪರಾಧಗಳಿಗೆ ವಿವಿಧ ವಿಭಾಗಗಳ ಅಡಿಯಲ್ಲಿ ಆರೋಪ ಹೊರಿಸಲಾಗಿದ್ದು, ಅವರನ್ನು ಇನ್ನೂ ಬಂಧಿಸಲಾಗಿಲ್ಲ ಎಂದು ಅಧಿಕಾರಿ ತಿಳಿಸಿದ್ದಾರೆ.

## ಡಂಪಿಂಗ್

ಹೌದು. ಅಕ್ರಮವಾಗಿ ಬಯೋ ಮೆಡಿಕಲ್ ವೇಸ್ಟ್ ಕೂಡ ತಂದು ಮಂಗಳೂರಿನ ಸಿಕ್ಕ ಸಿಕ್ಕ ಹಳ್ಳಕ್ಕೆ ಬೀಸಾಕಿ ಹೋಗುತ್ತಿದ್ದರು. ಇದರಿಂದ ಜಲಚರಗಳಿಗೆ ಹಾಗೂ ಜೀವ ರಾಶಿಗಳ ಮೇಲೆ ಕೆಟ್ಟ ಪರಿಣಾಮ ಬೀರುವ ಸಾಧ್ಯತೆ ಇದೆ. ಮಂಗಳೂರು ನಗರ ಪಾಲಿಕೆ ಸೇರಿದ ಎರಡು ಟ್ಯಾಂಕರ್‌ಗಳು ಕೃತ್ಯದಲ್ಲಿ ಭಾಗಿಯಾಗಿತ್ತು. ಪಾಲಿಕೆ ಅಧಿಕಾರಿಗಳು ಕೃತ್ಯದಲ್ಲಿ ಕೈಜೋಡಿಸಿದ್ರು ಅಂತ ಅಧಿಕಾರಿಗಳ ವಿರುದ್ಧ ಕೇಸ್ ಹಾಕಲಾಗಿದೆ.

ಈ ಬೆನ್ನಲ್ಲೇ ಮಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳ ಜೊತೆ ಸಭೆ ನಡೆಸಿದ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ನರೇಂದ್ರ ಸ್ವಾಮಿ ಕಟ್ಟುನಿಟ್ಟಿನ ಕ್ರಮಕ್ಕೆ ಸೂಚನೆ ನೀಡಿದ್ದಾರೆ.

ಕೇರಳದಿಂದ ಈ ರೀತಿಯಲ್ಲಿ ಬಯೋ ಮೆಡಿಕಲ್ ವೇಸ್ಟ್ ಸುರಿಯುವ ವಿಚಾರ ಭಾರೀ ಆತಂಕಕಾರಿ.. ಇದರಿಂದ ರೋಗ ರುಜಿನ ಹರಡುವ ಸಾಧ್ಯತೆ ಹೆಚ್ಚಿದೆ. ಹೀಗಾಗಿ ಪಾಲಿಕೆ ಈ ವಿಚಾರ ಗಂಭೀರವಾಗಿ ತೆಗೆದುಕೊಂಡು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕಿದೆ.

## ಮುಕ್ತ

ಸಂಚಾರ ಮುಕ್ತಗೊಳಿಸಲಾಗಿದೆ.

ಹೊಸಕೋಟೆಯ ಇಂಟರ್ ಚೇಂಜ್‌ನಿಂದ ಚೆನ್ನೈವರೆಗೆ 280 ಕಿ.ಮೀ ಉದ್ದದ ಎಕ್ಸ್‌ಪ್ರೆಸ್ ವೇ ಇದಾಗಿದೆ. ಸದ್ಯ ಹೊಸಕೋಟೆ ಸ್ಯಾಟಲೈಟ್ ರಿಂಗ್ ರಸ್ತೆಯಿಂದ, ಆಂಧ್ರ ಗಡಿ ಸುಂದರಪಾಳ್ಯದವರೆಗಿನ ರಸ್ತೆ ಸಂಚಾರಕ್ಕೆ ರೆಡಿಯಾಗಿದೆ.

ಆಂಧ್ರ ಪ್ರದೇಶ, ತಮಿಳುನಾಡು ಭಾಗದಲ್ಲಿ ಕಾಮಗಾರಿ ಮುಂದುವರೆದಿದೆ. ಈ ವರ್ಷಾಂತ್ಯಕ್ಕೆ ಸಂಪೂರ್ಣ ಮಾರ್ಗ ಸಂಚಾರ ಮುಕ್ತಗೊಳ್ಳುವ ಸಾಧ್ಯತೆಯಿದೆ. ಸಂಪೂರ್ಣ ಕಾಮಗಾರಿ ಮುಕ್ತಾಯಗೊಂಡು ಅಧಿಕೃತ ಉದ್ಘಾಟನೆ ಬಳಿಕ ಟೋಲ್ ಸಂಗ್ರಹ ಆರಂಭಿಸಲಾಗುವುದು ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಪ್ರದೇಶಿಕ ಅಧಿಕಾರಿ ವಿಲಾಸ್ ಪಿ.ಬ್ರಹ್ಮಂಕರ್ ತಿಳಿಸಿದ್ದಾರೆ.

ಈ ಎಕ್ಸ್‌ಪ್ರೆಸ್ ವೇಗೆ ಮಾಲೂರು, ಬಂಗಾರಪೇಟೆ, ಮತ್ತು ಆಂಧ್ರ ಗಡಿ ಸುಂದರ ಪಾಳ್ಯದಲ್ಲಿ ಮೂರು ಇಂಟರ್ ಚೇಂಜ್ ಗಳಿವೆ. ವೇಗದ ಮಿತಿ 100ಕ್ಕೆ ಸೀಮಿತಗೊಳಿಸಲಾಗಿದೆ.

ಸಂಜೆ ಮುಗಿಲು
ಸೋಮವಾರ
24.2.2025





**ವಾರ್ಷಿಕೋತ್ಸವ** ಸಹಕಾರಿ ಕ್ಷೇತ್ರದಲ್ಲಿ ದಾಪುಗಾಲಿ ಟ್ಟಿರುವ ಡಾ. ಪ್ರಭಾಕರ್ ಕೋರೆ ಬಹುರಾಜ್ಯ ಸೌಹಾರ್ದ ಸಹಕಾರಿ ನಿ. ಇದರ ಬೆಂಗಳೂರು ರಾಜಾಜಿನಗರ ಶಾಖೆಯ 10ನೇ ವರ್ಷದ ವಾರ್ಷಿಕೋತ್ಸವದ ನಿಮಿತ್ಯ ಮಹಾಲಕ್ಷ್ಮಿ ಪೂಜೆಯನ್ನು ನೆರವೇರಿಸಲಾಯಿತು ಈ ಸಂದರ್ಭದಲ್ಲಿ ಶಾಖೆಯ ಅಧ್ಯಕ್ಷರು ನಿರ್ದೇಶಕರು ಸಿಬ್ಬಂದಿ ಹಾಗೂ ಗ್ರಾಹಕರ ಉಪಸ್ಥಿತರಿದ್ದರು

# ಮೊಬೈಲ್‌ನಿಂದ ವಿದ್ಯಾರ್ಥಿಗಳಲ್ಲಿ ಜ್ಞಾಪಕ ಶಕ್ತಿ ಕ್ಷೀಣ

**ಪಿರಿಯಾಪಟ್ಟಣ:** ಇತ್ತೀಚಿನ ದಿನಗಳಲ್ಲಿ ಮಕ್ಕಳ ಕೈಗೆ ಸುಲಭವಾಗಿ ಮೊಬೈಲ್ ಗಳು ಸಿಗುತ್ತಿರುವ ಪರಿಣಾಮ ಮಕ್ಕಳಲ್ಲಿ ಸೃಜನಾತ್ಮಕ ಚಟುವಟಿಕೆಗಳು ಕ್ಷೀಣಿಸುತ್ತವೆ ಇದರಿಂದ ಮಕ್ಕಳ ಪ್ರತಿಭೆಗೆ ಕುಂದುಂಟಾಗುತ್ತಿದೆ ಆದ್ದರಿಂದ ಪೋಷಕರು ಮಕ್ಕಳನ್ನು ಟಿವಿ ಮತ್ತು ಮೊಬೈಲ್ ಗಳಿಂದ ದೂರ ಇಡಬೇಕು ಎಂದು ಅನಿಕೇತನ ಪದವಿ ಪೂರ್ವ ಕಾಲೇಜಿ ಕಾರ್ಯದರ್ಶಿ ಡಾ.ಜೆ.ಸೋಮಣ್ಣ ತಿಳಿಸಿದರು

ಪಟ್ಟಣದ ಹೊರಹೊಲಯದ ಸಿದ್ದಾಪುರ ರಸ್ತೆಯಲ್ಲಿರುವ ಜ್ಞಾನಗಂಗಾ ಇಂಟರ್ ನ್ಯಾಷಿನಲ್ ಪಬ್ಲಿಕ್ ಸ್ಕೂಲ್ ನಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು. ಮಕ್ಕಳು ದಿನದ ಬಹುತೇಕ ಸಮಯವನ್ನು ಮೊಬೈಲ್ ಬಳಕೆ ಹಾಗೂ ಸಾಮಾಜಿಕ ಜಾಲತಾಣಗಳ ಬಳಕೆಯಲ್ಲಿಯೇ ಮುಳುಗುತ್ತಿರುವ ಪರಿಣಾಮ ವಿದ್ಯಾರ್ಥಿಗಳಲ್ಲಿ ಚಿಂತನೆಯ ಸಾಮರ್ಥ್ಯ ಕುಸಿಯುತ್ತಿದೆ, ಅಲ್ಲದೆ ಎಲ್ಲದಕ್ಕೂ ಮೊಬೈಲ್ ಅವಲಂಬನೆ ವಿದ್ಯಾರ್ಥಿಗಳಲ್ಲಿ ಜ್ಞಾಪಕ ಶಕ್ತಿ ಕಡಿಮೆ ಮಾಡುತ್ತಿದೆ. ಸುಸಂಸ್ಕೃತರನ್ನಾಗಿ ಬೆಳೆಸಿ: ಮಕ್ಕಳು ಸೃಜನಾತ್ಮಕವಾಗಿ ಬೆಳೆಯಬೇಕಾದರೆ ಮಕ್ಕಳಲ್ಲಿ ಚಿಕ್ಕ ವಯಸ್ಸಿನಲ್ಲಿಯೇ ಮಾನವೀಯ ಮೌಲ್ಯಗಳನ್ನು ತುಂಬಿ ಆ ಮೂಲಕ ಉತ್ತಮ ಪ್ರಜೆಯಾಗಿ ಮಾಡಬೇಕು, ಇಲ್ಲದಿದ್ದರೆ ಮಕ್ಕಳು ಸಮಾಜಕ್ಕೆ ಹೊರೆಯಾಗಿ ಪರಿಣಮಿಸುತ್ತಾರೆ ಎಂದರು. ಕ್ಷೇತ್ರ ಸಂಪನ್ಮೂಲ ಅಧಿಕಾರಿ ಬಿ.ಶಿವರಾಜ್ ಮಾತನಾಡಿ ಮಕ್ಕಳಲ್ಲಿನ ಪ್ರತಿಭೆಗಳನ್ನು ಗುರುತಿಸಲು ಶಾಲಾ ಹಂತದಲ್ಲಿ ಪ್ರತಿಭಾ ಪುರಸ್ಕಾರದಂತಹ ಪಠ್ಯೇತರ ರಚನಾತ್ಮಕ ಕಾರ್ಯಕ್ರಮಗಳನ್ನು ನಡೆಯಬೇಕು ಇಂಥಹ ಕಾರ್ಯಕ್ರಮಗಳು ಮಕ್ಕಳಲ್ಲಿ ಇರುವಂತಹ ಸ್ಪರ್ಧಾ ಮನೋಭಾವವನ್ನು ಹೊರತೆಗೆಯಲು ಸಹಕಾರಿಯಾಗುತ್ತವೆ ಎಂದರು.

ನಿವೃತ್ತ ಉಪನ್ಯಾಸಕ ಬಿ.ಎಂ.ಶಿವಸ್ವಾಮಿ ಮಾತನಾಡಿ ಶಿಕ್ಷಕರು ಕಲಿಸುವುದರ ಜೊತೆಗೆ ತಾವೂ ಕೂಡ ಕಲಿಯಬೇಕು, ಆಗ ಮಾತ್ರ ಅವರು ಉತ್ತಮ ಶಿಕ್ಷಕರಾಗಲು ಸಾಧ್ಯ, ಕಾಲ ಬದಲಾದಂತೆ ಶೈಕ್ಷಣಿಕ ಸಿದ್ಧಾಂತಗಳು ಕೂಡ ಬದಲಾಗುತ್ತಿದ್ದು, ಶಿಕ್ಷಣ ಕೌಶಲ್ಯಗಳ ನವೀಕರಣವನ್ನು ಮಕ್ಕಳಿಗೆ ತಿಳಿಸುವಂತಾಗಬೇಕು ಆಗ ಮಾತ್ರ ನಾವು ಸರಿಯಾದ ಹಾಗೂ ಮೌಲ್ಯಯುತ ಸಮಾಜ ಕಟ್ಟಲು ಸಾಧ್ಯವಾಗುತ್ತದೆ ಶಿಕ್ಷಣ ವ್ಯವಸ್ಥೆ ಬೆಳೆದಂತೆಲ್ಲ ಮೌಲ್ಯಯುತ ಶಿಕ್ಷಣ ಕಣ್ಮರೆಯಾಗುತ್ತಿರುವುದು ವಿಷಾದನೀಯ. ಇಂದಿನ ಶಿಕ್ಷಣದಲ್ಲಿ ಮೂಲ ಅರ್ಥಗರ್ಭಿತ ವಿಷಯ ಮರೆಮಾಚಲಾಗುತ್ತಿದ್ದು ಇದರಿಂದ ಮಕ್ಕಳಿಗೆ ಸರಿಯಾದ ಜ್ಞಾನ ಸಿಗುತ್ತಿಲ್ಲ, ಶಿಕ್ಷಣ ನೀತಿ ಮೇಲಿಂದ ಮೇಲೆ ಬದಲಾಗಬಾರದು, ಎಲ್ಲ ಮಕ್ಕಳಿಗೂ ಒಂದೇ ರೀತಿಯ ಶಿಕ್ಷಣ ಸಿಗುವಂತಾಗಬೇಕು. ಶಿಕ್ಷಕರು ಬೋಧಿಸುವ ಕ್ರಮ ಮಕ್ಕಳನ್ನು ಶಿಕ್ಷಣಕ್ಕೆ ಸೆಳೆಯುವಂತಿರಬೇಕು ಶಿಕ್ಷಣ ಪಡೆಯುವ ಮಕ್ಕಳು ತಪ್ಪು ಮಾಡಿದರೆ ಅವರನ್ನು ತಿದ್ದಲು ಶಿಕ್ಷೆಗೂ ಅವಕಾಶ ಇದೆ ಆದರೆ ಕಾಲಕ್ರಮೇಣ ಶಿಕ್ಷೆ ನೀಡುವುದು ಒಂದು ಅಪರಾಧ ಎಂದು ಪರಿಗಣಿಸಿದಾಗ ಶಿಕ್ಷಕರು ಮಕ್ಕಳಿಗೆ ತಮ್ಮ ಕ್ರಿಯಾಶೀಲತೆಯಿಂದಲೇ ಗಮನ ಸೆಳೆದು ಜ್ಞಾನದ ಬೀಜವನ್ನು ಅವರು ತಲೆಯಲ್ಲಿ ಬಿತ್ತಬೇಕಾಗುತ್ತದೆ ಎಂದರು.

# ರಾಜ್ಯದ 9 ವಿವಿ ಮುಚ್ಚಲು ಮುಂದಾಗಿರುವ ಕ್ರಮ ಖಂಡಿಸಿ ಎಬಿವಿಪಿ ಹೋರಾಟ

**ಚಾಮರಾಜನಗರ:** ರಾಜ್ಯ ಸರ್ಕಾರವು ರಾಜ್ಯದಲ್ಲಿರುವ 9 ವಿಶ್ವವಿದ್ಯಾನಿಲಯಗ ಳನ್ನು ಮುಚ್ಚಲು ಮುಂದಾಗಿ ರುವ ಕ್ರಮ ಖಂಡಿಸಿ ಎಬಿವಿಪಿ ವತಿಯಿಂದ ರಾಜ್ಯಾದ್ಯಂತ ಹೋರಾಟ ಮಾಡಲಾಗುವುದು ಎಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ರಾಜ್ಯ ಕಾರ್ಯದರ್ಶಿ ಎಚ್.ಕೆ.ಪ್ರವೀ ಣ್ ತಿಳಿಸಿದರು. ಸ್ಥಳೀಯವಾಗಿ ವಿಶ್ವವಿದ್ಯಾನಿ ಲಯಗಳನ್ನು ತೆರೆದಿದ್ದರಿಂದ ಗ್ರಾಮೀಣ ಭಾಗದ ವಿದ್ಯಾಥಿ 9ಗಳಿಗೆ ಅನುಕೂಲವಾಗುತ್ತಿತ್ತು. 9 ವಿವಿಗಳನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ರಾಜ್ಯಾದ್ಯಂತ ವಿದ್ಯಾರ್ಥಿ ಆಂದೋಲನ, ಪತ್ರ ಚಳವಳಿ ಹಾಗೂ ವ್ಯಾಪಕ ಜನಜಾಗೃತಿಯನ್ನು ಮಾಡಲಾಗುವುದು ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು. ವಿವಿಗಳನ್ನು ಮುಚ್ಚುವುದರಿಂದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ, ಹೆಣ್ಣು ಮಕ್ಕಳ ಉನ್ನತ ಶಿಕ್ಷಣಕ್ಕೆ ಅಷ್ಟೇ ಅಲ್ಲದೇ ಪ್ರಾದೇಶಿಕವಾಗಿ ಆಯಾ ಜಿಲ್ಲೆಗಳ ಸರ್ವಾಂಗೀಣ ಅಭಿವೃದ್ಧಿಗೆ ಮಾರಕವಾಗಲಿದೆ. ಖಾಸಗಿ ವಿವಿಗಳಲ್ಲಿ ಹೆಚ್ಚು ಹಣ ವಸೂಲಿ ಮಾಡುವುದರಿಂದ ಅಲ್ಲಿ ಬಡ ಮಕ್ಕಳು ಶಿಕ್ಷಣ ಪಡೆಯಲು ಆಗುವುದಿಲ್ಲ. ಈ ಸಂಬಂಧ ವಿದ್ಯಾರ್ಥಿಗಳಿಗೆ ವಿವಿಗಳ ಅನಿವಾರ್ಯತೆ ಕುರಿತು ಮನವರಿಕೆ ಮಾಡಿಕೊಡಲಾಗುವುದು. ಅಲ್ಲದೇ ಆಯಾ ಜಿಲ್ಲೆಗಳಲ್ಲಿ ಕಪ್ಪು ಪಟ್ಟಿ ಧರಿಸಿ ಧರಣಿ ನಡೆಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಎಬಿವಿಪಿ ರಾಜ್ಯ ಕಾರ್ಯದರ್ಶಿ ಪ್ರಜ್ವಲ್, ನಗರ ಸಂಘಟನಾ ಕಾರ್ಯದರ್ಶಿ ಮನೋಜ್ ಇದ್ದರು.



# ಭಾಗ್ಯಲಕ್ಷ್ಮಿ ಬಾಂಡ್ ಫಲಾನುಭವಿಗಳ ಮಾಹಿತಿ ನಮೂದಿಗೆ ಯಾವುದೇ ಶುಲ್ಕ ಪಾವತಿಸುವಂತಿಲ್ಲ

**ಚಾಮರಾಜನಗರ:** ಭಾಗ್ಯಲಕ್ಷ್ಮಿ ಬಾಂಡ್ ಸೌಲಭ್ಯ ಪಡೆದುಕೊಂಡಿರುವ ಫಲಾನುಭವಿಗಳಿಗೆ ಪರಿಪಕ್ವ ಮೊತ್ತ ನೀಡುವ ಸಂಬಂಧ ಆನ್‌ಲೈನ್ ನಲ್ಲಿ ಮಾಹಿತಿ ನಮೂದಿಸಲು ಯಾವುದೇ ಶುಲ್ಕ ಪಾವತಿಸುವಂತಿಲ್ಲ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ತಿಳಿಸಿದೆ. ಭಾಗ್ಯಲಕ್ಷ್ಮಿ ಬಾಂಡ್ ಸೌಲಭ್ಯ ಪಡೆದು 18 ವರ್ಷ ಪೂರ್ಣಗೊಂಡಿರುವ ಅರ್ಹ ಫಲಾನುಭವಿಗಳಿಗೆ ಏಪ್ರಿಲ್ 2024ರ ನಂತರ ಪರಿಪಕ್ವ ಮೊತ್ತ ನೀಡುವ ಸಂಬಂಧ ಅರ್ಹತಾ ಮಾನದಂಡಗಳನ್ವಯ ಸಂಬಂಧಿಸಿದ ಶಿಶು ಅಭಿವೃದ್ಧಿ ಯೊಜನಾಧಿಕಾರಿಗಳು ದೃಢೀಕರಣದೊಂದಿಗೆ ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಆನ್‌ಲೈನ್ ನಲ್ಲಿ ಅನುಮೋದನೆ ನೀಡಲು ಭಾರತೀಯ ಜೀವ ವಿಮಾ ನಿಗಮಕ್ಕೆ ಪ್ರಸ್ತಾವನೆಯನ್ನು ಕಳಿಸುವಂತೆ ಸೂಚಿಸಲಾಗಿದೆ. ಫಲಾನುಭವಿಗಳ ಮಾಹಿತಿಯನ್ನು ಆನ್‌ಲೈನ್ ನಲ್ಲಿ ನಮೂದಿಸಲು ಯಾವುದೇ ಶುಲ್ಕ ಪಾವತಿಸುವಂತಿಲ್ಲ. ಒಂದು ವೇಳೆ ಶುಲ್ಕ ಪಾವತಿಸಲು ಅಥವಾ ಹಣ ನೀಡುವಂತೆ ಬೇಡಿಕೆ ಇಟ್ಟಲ್ಲಿ ಸಂಬಂಧಪಟ್ಟ ಫಲಾನುಭವಿಗಳು, ಪೋಷಕರು ಹಾಗೂ ಸಾರ್ವಜನಿಕರು ತಕ್ಷಣವೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಜಿಲ್ಲಾ ಕಚೇರಿ ಅಥವಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಲಿಖಿತವಾಗಿ ಅಥವಾ ದೂರವಾಣಿ ಕರೆ ಮೂಲಕ ದೂರು ದಾಖಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಚಾಮರಾಜನಗರದ ಶಿಶು ಅಭಿವೃದ್ಧಿ ಯೋಜನಾ ಕಚೇರಿ ದೂ.ಸಂ 08226-222603, ಸಂತೇಮರಳ್ಳಿಯ ಶಿಶು ಅಭಿವೃದ್ಧಿ ಯೋಜನಾ ಕಚೇರಿ ದೂ.ಸಂ 08226-240215, ಕೊಳ್ಳೇಗಾಲದ ಶಿಶು ಅಭಿವೃದ್ಧಿ ಯೋಜನಾ ಕಚೇರಿ ದೂ.ಸಂ 08224-252367, ಗುಂಡ್ಲುಪೇಟೆಯ ಶಿಶು ಅಭಿವೃದ್ಧಿ ಯೋಜನಾ ಕಚೇರಿ ದೂ.ಸಂ 08229-222286 ಹಾಗೂ ಯಳಂದೂರು ಶಿಶು ಅಭಿವೃದ್ಧಿ ಯೋಜನಾ ಕಚೇರಿ ದೂ.ಸಂ 08226-240224 ಸಂಪರ್ಕಿಸಬಹುದು.

## ನಮೂನೆ-3, 3ಎ ಪಡೆಯಲು ಸಹಾಯವಾಣಿ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸರ್ಕಾರದ ಅಧಿಸೂಚನೆಯಂತೆ ಗಣಕೀಕೃತ ನಮೂನೆ-3 ಮತ್ತು ನಮೂನೆ-3ಎ ಯನ್ನು ಪಡೆದುಕೊಳ್ಳುವ ಸಂಬಂಧ ಸಹಾಯವಾಣಿಯನ್ನು ತೆರೆಯಲಾಗಿದೆ. ಚಾಮರಾಜನಗರ ನಗರಸಭೆ ಸಹಾಯವಾಣಿ ಹಾಗೂ ವಾಟ್ಸಪ್ ಸಂಖ್ಯೆ 7892236642, ಕೊಳ್ಳೇಗಾಲ ನಗರಸಭೆಯ ಸಹಾಯವಾಣಿ ಸಂಖ್ಯೆ 08224-252016, ವಾಟ್ಸಪ್ ಸಂಖ್ಯೆ 6363565500, ಗುಂಡ್ಲುಪೇಟೆ ಪುರಸಭೆ ಸಹಾಯವಾಣಿ ಸಂಖ್ಯೆ ಹಾಗೂ ವಾಟ್ಸಪ್ ಸಂಖ್ಯೆ 9945295054, ಯಳಂದೂರು ಪಟ್ಟಣ ಪಂಚಾಯಿತಿಯ ಸಹಾಯವಾಣಿ ಸಂಖ್ಯೆ 08226-240026, ವಾಟ್ಸಪ್ ಸಂಖ್ಯೆ 868535978 ಹಾಗೂ ಹನೂರು ಪಟ್ಟಣ ಪಂಚಾಯಿತಿ ಸಹಾಯವಾಣಿ ಮತ್ತು ವಾಟ್ಸಪ್ ಸಂಖ್ಯೆ 8971341419 ಸಂಪರ್ಕಿಸಿ ಮಾಹಿತಿ ಪಡೆಯಬಹುದೆಂದು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ತಿಳಿಸಿದ್ದಾರೆ.

### ಚಾಮರಾಜ ಕ್ಷೇತ್ರದ ವಿಧಾನ ಸಭಾ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಸಲಹೆ

# ಬಂಜಾರಾ ಸಮುದಾಯದಲ್ಲಿರಲಿ ಒಗ್ಗಟ್ಟು

**ಮೈಸೂರು:** ಒಗಟ್ಟಿನಿಂದ ಬಂಜಾರಾ ಸಮುದಾಯಗಳು ಕಾರ್ಯನಿರ್ವಹಿಸಬೇಕು, ಎಲ್ಲರೂ ಒಗ್ಗಟ್ಟಿನಿಂದ ಒಂದೇ ವೇದಿಕೆಯಲ್ಲಿ ಕೆಲಸ ಮಾಡುವಂತೆ ಆಗಬೇಕು. ನಾವು ಒಗ್ಗಟ್ಟಾಗಿ ಇದ್ದಾಗ ಮಾತ್ರ ನಮ್ಮ ಹಕ್ಕುಗಳನ್ನು ಪಡೆದುಕೊಳ್ಳುವುದರಲ್ಲಿ ಸಫಲರಾಗುತ್ತೇವೆ ಅದರಿಂದ ಎಲ್ಲರನ್ನೂ ಒಗ್ಗೂಡಿಸಿ ಒಗ್ಗಟ್ಟಿನಿಂದ ಕೆಲಸ ಮಾಡಿಬೇಕು ಎಂದು ಚಾಮರಾಜ ಕ್ಷೇತ್ರದ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಕೆ ಹರೀಶ್ ಗೌಡ ಅವರು ಹೇಳಿದರು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಸಂತ ಸೇವಾಲಾಲ್ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದರು.

ಬಂಜಾರ ಸಮುದಾಯ ಎಂಬುದು ಕರ್ನಾಟಕ ರಾಜ್ಯದಲ್ಲಿ ಒಂದು ಚಿಕ್ಕ ಸಮುದಾಯ ಅದರಲ್ಲಿ ಉತ್ತರ ಕರ್ನಾಟಕದಲ್ಲಿ ಹೆಚ್ಚು ಜನಸಂಖ್ಯೆ ಇರುವಂತಹ ಸಮುದಾಯ ಮೈಸೂರಿನ ಭಾಗಗಳಲ್ಲಿ ಏಳರಿಂದ ಎಂಟು ಸಾವಿರ ಜನಸಂಖ್ಯೆ ಮಾತ್ರ ಇದೆ ಎಂದು ಹೇಳಿದರು.

ನಮ್ಮ ಚಾಮರಾಜ ಕ್ಷೇತ್ರದಲ್ಲಿ ಬಂಜಾರ ಸಮುದಾಯದ ವರಿಗೆ ಸಮುದಾಯ ಭವನವನ್ನು ಲೋಕಾರ್ಪಣೆ ಮಾಡಿದ್ದೇವೆ. ಬಂಜಾರ ಸಮುದಾಯ ಕೇಳುವಂತಹ ಮೂಲಭೂತ ಸೌಕರ್ಯಗಳನ್ನು ನಾನು ಒದಗಿಸುತ್ತೇನೆ ಎಂಬ ಭರವಸೆಯನ್ನು ನೀಡಿದರು.

ಲಂಬಾಣಿ ಸಮುದಾಯ ಕರ್ನಾಟಕಕ್ಕಿಂತ ಹೆಚ್ಚಾಗಿ ಉತ್ತರ ಕರ್ನಾಟಕದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಅದರಲ್ಲಿಯೂ ಹೈದರಾಬಾದ್ ಕರ್ನಾಟಕದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಾಸ ಮಾಡುತ್ತಿರುವುದನ್ನು ನಾವು ಕಾಣಬಹುದಾಗಿದೆ ಎಂದು ತಿಳಿಸಿದರು.

ನಮ್ಮ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಲಂಬಾಣಿ ಸಮುದಾಯಗಳಿಗೆ ಸ್ಥಾನಮಾನ ನೀಡಬೇಕು ಎಂಬ ದೃಷ್ಟಿಯಿಂದ ಬಂಜಾರದ ಸಮುದಾಯಗಳಿಗೆ ಉಪ ನಿರ್ದೇಶಕರನ್ನು ನೇಮಕ ಮಾಡಿದ್ದಾರೆ. ಜೊತೆಗೆ ಬಂಜಾರ ಸಮುದಾಯದ ಪ್ರಾಧಿಕಾರವನ್ನು ನಮ್ಮ ಕಾಂಗ್ರೆಸ್ ಸರ್ಕಾರ ಮಾಡಿದೆ ಎಂದು ಹೇಳಿದರು.

ನಮ್ಮ ಸರ್ಕಾರ ಕಡಿಮೆ ಜನಸಂಖ್ಯೆ ಇರುವ ಸಮುದಾಯಗಳು ಹಾಗೂ ಅಲ್ಪಸಂಖ್ಯಾತ ಸಮುದಾಯ ಗಳು ಅವುಗಳನ್ನೆಲ್ಲ ಮೇಲೆತ್ತುವಂತಹ ಕೆಲಸವನ್ನು ಪ್ರಾಮಾಣಿಕತೆಯಿಂದ ಮಾಡುತ್ತಿದೆ. ನಾನು ಸಹ ನನ್ನ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವಂತಹ ಲಂಬಾಣಿ ಸಮುದಾಯಗಳ ಅಭಿವೃದ್ಧಿ ಪೂರಕವಾಗಿ ಕೆಲಸ



ಮಾಡುತ್ತಿದ್ದೇನೆ ಎಂದು ಹೇಳಿದರು.

ಮೈಸೂರು ಜಿಲ್ಲಾಡಳಿತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಬಹಳ ಸಂಭ್ರಮಯುತವಾಗಿ ಆಚರಣೆಗಳು ನಡೆಯುತ್ತಾ ಬರುತ್ತ ಇರುವುದು ಬಹಳ ಸಂತೋಷಕರವಾದಂತಹ ವಿಷಯ ಎಂದರು.

ವಿಧಾನ ಪರಿಷತ್ ನ ಶಾಸಕರಾದ ಸಿ. ಎನ್. ಮಂಜೇಗೌಡ ಮಾತನಾಡಿ ಮನುಷ್ಯ ಏನಾದರೂ ಕಲಿಯಬೇಕು ಎಂದರೆ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು, ಯಾರೂ ಸಹ ಸರ್ವಜ್ಞರಲ್ಲ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಿಸುವುದರಿಂದ ಜ್ಞಾನವನ್ನು ಹೆಚ್ಚಿಸಿಕೊಳ್ಳಬಹುದು ಎಂದು ಹೇಳಿದರು.

280 ವರ್ಷಗಳ ಹಿಂದೆ ಸಂತ ಸೇವಾಲಾಲ್ ರವರು ಮಾಡಿರುವಂತಹ ಕೆಲಸಗಳು ಅಪಾರವಾದದ್ದು ಅವುಗಳನ್ನು ಪ್ರಚಾರ ಮಾಡಲು ಯಾವುದೇ ಮಾಧ್ಯಮಗಳು ಇರಲಿಲ್ಲ ಹಾಗೂ ಅವರ ಪುಸ್ತಕಗಳನ್ನು ಪ್ರಚಾರ ಮಾಡಲು ಯಾರು ಇರಲಿಲ್ಲ ಅಂತಹ ಕಾಲದಲ್ಲಿಯೇ ಸಂತ ಸೇವಾಲಾಲ್ ಅವರು ಎಷ್ಟೋ ಜನರ ಮನಸ್ಸುಗಳನ್ನು ಗೆದ್ದಿದ್ದಾರೆ ಎಂದರೆ ಅವರು ಮಾಡಿದಂತಹ ಕೆಲಸ ಸಮಾಜಕ್ಕೆ ಕೊಟ್ಟಿರುವಂತಹ ಕೊಡುಗೆ ಅಪಾರವಾದದ್ದು ಎಂದು ಹೇಳಿದರು.

ಯಾವುದೇ ಒಂದು ಸಮಾಜ ರಾಜಕೀಯವಾಗಿ ಧಾರ್ಮಿಕವಾಗಿ ಶಕ್ತಿಯುತವಾಗಿ ಬೆಳೆಯಬೇಕೆಂದರೆ ನಮ್ಮಲ್ಲಿ ಒಗ್ಗಟ್ಟಿನ ಜೊತೆಗೆ ಶಕ್ತಿ ಹಾಗೂ ಬುದ್ಧಿವಂತಿಕೆ ಇರಬೇಕು ಎಂದರು.

ಈ ಲಂಬಾಣಿ ಸಮುದಾಯದಲ್ಲಿ ಮಹಿಳೆಯರಿಗೆ ಹೆಚ್ಚು ಆದ್ಯತೆ ಕೊಟ್ಟಿರುವುದು ಬಹಳ ಸಂತೋಷವಾಗಿದೆ. ಮಹಿಳೆಯನ್ನು ಗೌರವಿಸಿದರೆ ನೂರು ದೇವರುಗಳನ್ನು ಪೂಜೆ ಮಾಡಿದ ಹಾಗೆ ಎಂಬ ಮಾತು ಸತ್ಯವಾದದ್ದು ಎಂದು ತಿಳಿಸಿದರು.

ಪ್ರತಿಯೊಂದು ಸಮಾಜವು ಮುಂದೆ ಬರಬೇಕು, ಬಲಿಷ್ಠವಾಗಿ ಬೆಳೆಯಬೇಕು, ನಾವು ಏನೇ ಮಾಡಬೇಕಾದರೂ ಆದರ್ಶ ವಾದಂತಹ ಮಾತುಗಳನ್ನು ಹಾಡಬೇಕು, ನುಡಿಗಳನ್ನು ನುಡಿಯಬೇಕು, ಆದರ್ಶ ನುಡಿಗಳನ್ನು ನುಡಿಯಬೇಕಾದರೆ ಆದರ್ಶ ವ್ಯಕ್ತಿಯಾಗಿ ಬೆಳೆಯಬೇಕು ಎಂದು ಹೇಳಿದರು.

ಪ್ರತಿಯೊಬ್ಬ ಸಾಧಕರು ನಮಗೆ ಕೊಟ್ಟಿರುವಂತಹ ನುಡಿಮುತ್ತುಗಳನ್ನು, ಭಾವನೆಗಳನ್ನು ಸ್ವೀಕರಿಸಬೇಕು. ಸಂತ ಸೇವಾಲಾಲ್ ಪುಸ್ತಕಗಳನ್ನು ಓದಬೇಕು. ಸಂತ ಸೇವಾಲಾಲ್ ಆಗದಿದ್ದರೂ ಪರವಾಗಿಲ್ಲ ನಿಮ್ಮಲ್ಲಿ ಒಬ್ಬನಾದರೂ ಸಂತ ಸೇವಾಲಾಲ್ ಅವರ ರೀತಿ ಬೆಳೆಯಬೇಕು ಎಂದು ಹೇಳಿದರು.

ಕಲಬುರಗಿ ಜಿಲ್ಲೆಯ ಅಬಕಾರಿ ಅಧೀಕ್ಷಕರಾದ ಶ್ರೀ ರಾಮ್ ದೇವಸೋಥ್ ಅವರು ವಿಶೇಷ ಉಪನ್ಯಾಸವನ್ನು ನೀಡಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿಯ ಇಲಾಖೆಯ ಜಂಟಿ ನಿರ್ದೇಶಕರಾದ ವಿ .ಎನ್ ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕರಾದ ಡಾ. ಎಂ.ಡಿ ಸುದರ್ಶನ್, ಬಂಜಾರಾ ಸೇವಾ ಸಂಘದ ಅಧ್ಯಕ್ಷರಾದ ಎಂ.ಸುಂದರ್ , ಉಪಾಧ್ಯಕ್ಷ ತೇಜಾನಾಯಕ್, ಕಾರ್ಯದರ್ಶಿ ಎಂ. ಅನಿಲ್ , ಬಂಜಾರ ಸಮುದಾಯದ ಖಜಾಂಚಿ ಕಾವೇರಿ ಬಾಯಿ, ಬಂಜಾರ ಮಹಿಳಾ ಸಂಘದ ಅಧ್ಯಕ್ಷರಾದ ಧರಣಿಭಾಯಿ ಸುದರ್ಶನ್ ಹಾಗೂ ಮತ್ತಿತರ ಉಪಸ್ಥಿತರಿದ್ದರು.

# ಉತ್ತಮವಾಗಿ ತಮ್ಮ ಜವಾಬ್ದಾರಿ ನಿಭಾಯಿಸುವ ಮೂಲಕ ರೈತರಿಗೆ ಅನುಕೂಲ ಕಲ್ಪಿಸಲು ಸಲಹೆ

**ಹನೂರು:** ವಿಧಾನಸಭಾ ಕ್ಷೇತ್ರದ ಬಗರು ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಯ ನೂತನ ಸದಸ್ಯರಾದ ಪಿಜಿ ಮಣಿ ಹಾಗೂ ಮಹಾದೇವರವರು ಮಾಜಿ ಶಾಸಕ ಆರ್ ನರೇಂದ್ರ ರವರನ್ನು ಸನ್ಮಾನಿಸಿದರು. ಹನೂರು ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಮಾಜಿ ಶಾಸಕ ಆರ್ ನರೇಂದ್ರ ರವರನ್ನು ಭೇಟಿಯಾದ ನೂತನ ಸದಸ್ಯರು ಶಾಲು, ಹಾರ ಪೇಟ ತೊಡಿಸಿ ಗೌರವಿಸಿದರು. ನಂತರ ಮಾಜಿ ಶಾಸಕ ಆರ್ ನರೇಂದ್ರ ಮಾತನಾಡಿ ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮೂರು ಸದಸ್ಯರನ್ನು ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಗೆ ಸರ್ಕಾರ ನೇಮಕ ಮಾಡಿದೆ. ಈ ಸಮಿತಿಗೆ ಶಾಸಕರು ಅಧ್ಯಕ್ಷರಾಗಿದ್ದು ಇವರು ಸದಸ್ಯರಾಗಿ ಕರ್ತವ್ಯ ನಿರ್ವಹಿಸಲಿದ್ದಾರೆ. ಕಳೆದ ಹಲವಾರು ವರ್ಷಗಳಿಂದ ಉಳುಮೆ ಮಾಡಿರುವ ರೈತರು ಅಕ್ರಮ ಸಕ್ರಮದಡಿ ಅರ್ಜಿ ಸಲ್ಲಿಸಿದ್ದಾರೆ. ನಾನು ಶಾಸಕನಾಗಿದ್ದಾಗ ಹಲವಾರು ಅರ್ಜಿಗಳನ್ನು ವಿಲೇವಾರಿ ಮಾಡಿ ರೈತರಿಗೆ ಜಮೀನು ಮಂಜೂರು ಮಾಡಿಸಿಕೊಟ್ಟಿದ್ದೇನೆ . ಇನ್ನು ಸಹ ಸುಮಾರು ಅರ್ಜಿಗಳು ಬಾಕಿ ಇರುವುದರಿಂದ ಶಾಸಕರು ಹಾಗೂ ಸದಸ್ಯರು ಅರ್ಜಿಗಳನ್ನು ಪರಿಶೀಲನೆ ಮಾಡಿ ಶಿಫಾರಸ್ಸು ಮಾಡಿದರೆ ಹಲವಾರು ವರ್ಷಗಳಿಂದ ಕಷ್ಟಪಟ್ಟಿರುವ ರೈತರಿಗೆ ಸಹಕಾರಿಯಾಗಲಿದೆ ಈ ನಿಟ್ಟಿನಲ್ಲಿ, ಉತ್ತಮವಾಗಿ ತಮ್ಮ ಜವಾಬ್ದಾರಿ ನಿಭಾಯಿಸುವ ಮೂಲಕ ರೈತರಿಗೆ ಅನುಕೂಲ ಕಲ್ಪಿಸುವಂತೆ ಸಲಹೆ ನೀಡಿದರು.ಈ ವೇಳೆ ಚಾಮುಲ್ ನಿರ್ದೇಶಕ ಶಾಹುಲ್ ಅಹಮದ್, ರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಈಶ್ವರ್ ಪ್ರಧಾನ ಕಾರ್ಯದರ್ಶಿ ಸಿದ್ದರಾಜು ಮುಖಂಡರಾದ ಚಿಕ್ಕ ತಮ್ಮಯ್ಯ ಯುವ ಮುಖಂಡ ಮಂಜೇಶ್ ಸೇರಿದಂತೆ ಇನ್ನಿತರರು ಹಾಜರಿದ್ದರು.



# ಸಿಂಗಲ್ ಫೇಸ್ ವಿದ್ಯುತ್ ಸರಬರಾಜಿನ ವೇಳೆ ಕೃಷಿ ಪಂಪ್ ಸೆಟ್ ಬಳಸದಿರಲು ಮನವಿ

**ಚಾಮರಾಜನಗರ:** ರಾತ್ರಿ ವೇಳೆ ಸಿಂಗಲ್ ಫೇಸ್ ವಿದ್ಯುತ್ ಸರಬರಾಜಿನ ಸಮಯದಲ್ಲಿ ಕೃಷಿ ಪಂಪ್‌ಸೆಟ್ ಗಳನ್ನು ಬಳಸದಂತೆ ಕೊಳ್ಳೇಗಾಲ ವಿಭಾಗದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಮನವಿ ಮಾಡಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಕಾಡಂಚಿನ ಪ್ರದೇಶಗಳಿಗೆ ಹಾಗೂ ಫಾರಂ ಹೌಸ್ ಹೊಂದಿರುವ 11 ಕೆವಿ ಮಾರ್ಗಗಳಿಗೆ ಪ್ರತಿದಿನ ಸಂಜೆ 6 ರಿಂದ ಬೆಳಿಗ್ಗೆ 6 ರವರೆಗೆ ನೀರಾವರಿ ಫೀಡರ್‌ಗಳ ಮೂಲಕ ತೋಟದ ಮನೆಗಳ ಗೃಹಬಳಕೆಗೆ ಹಾಗೂ ಅಲ್ಲಿ ವಾಸಿಸುವ ವಿದ್ಯಾರ್ಥಿಗಳಿಗಾಗಿ ಸಿಂಗಲ್ ಫೇಸ್ ವಿದ್ಯುತ್ ಸರಬರಾಜು ಓಪನ್ ಡೆಲ್ಟಾ ಮೂಲಕ ನೀಡಲಾಗುತ್ತಿದೆ. ಆದರೆ ಈ ಸಮಯದಲ್ಲಿ ಸಿಂಗಲ್ ಫೇಸ್ ಕೃಷಿ ಪಂಪ್‌ಸೆಟ್ ಗಳನ್ನು ಬಳಸಬಾರದು ಎಂದು ಈಗಾಗಲೇ ಹಲವಾರು ಬಾರಿ ಜನಸಂಪರ್ಕ ಸಭೆಗಳಲ್ಲಿ ಹಾಗೂ ಇತರೆ ಸಭೆಗಳಲ್ಲಿ ಮನವಿ ಮಾಡಲಾಗಿದೆ. 11 ಕೆವಿ ಮಾರ್ಗಗಳಿಗೆ ಪ್ರತಿದಿನ ಸಂಜೆ 6 ರಿಂದ ಬೆಳಿಗ್ಗೆ 6 ರವರೆಗೆ ಸಿಂಗಲ್ ಫೇಸ್ ವಿದ್ಯುತ್ ಪೂರೈಸುವಾಗ ಕೆಲವರು ಕೃಷಿ ಪಂಪ್‌ಸೆಟ್‌ಗಳನ್ನು ನೀರಾವರಿ ಫೀಡರ್ ಮೂಲಕ ಬಳಸುತ್ತಿದ್ದು, ಇದರಿಂದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತಿದೆ. ಇದರಿಂದ ರಾತ್ರಿ ವೇಳೆಯಲ್ಲಿ ಕಾಡಂಚಿನ ಪ್ರದೇಶದ ಮನೆಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕೆ ತೊಂದರೆ ಉಂಟಾಗುತ್ತದೆ. ಆದ್ದರಿಂದ ಈ ಸಮಯದಲ್ಲಿ ಸಿಂಗಲ್ ಫೇಸ್ ಕೃಷಿ ಪಂಪ್‌ಸೆಟ್ ಬಳಸದಂತೆ ಮನವಿ ಮಾಡಲಾಗಿದೆ. ಕೃಷಿ ಪಂಪ್ ಸೆಟ್‌ಗಳಿಗೆ ಮೂರು ಪಾಳಿಗಳಲ್ಲಿ ಹಗಲಿನ ವೇಳೆ ಬೆಳಿಗ್ಗೆ 4 ರಿಂದ 11 ಗಂಟೆಯವರೆಗೆ, ಎರಡನೇ ಪಾಳಿಯಲ್ಲಿ 11 ರಿಂದ ಸಂಜೆ 6 ಗಂಟೆಯವರೆಗೆ ಹಾಗೂ 3ನೇ ಪಾಳಿಯಲ್ಲಿ ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ತ್ರೀ ಫೇಸ್ ವಿದ್ಯುತ್ ಪೂರೈಸಲಾಗುತ್ತಿದೆ. ಹಳ್ಳಿಗಳಲ್ಲಿ ಮನೆಗಳಿಗೆ ನಿರಂತರ ಜ್ಯೋತಿ ಮೂಲಕ ದಿನದ 24 ಗಂಟೆಯೂ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.



ಮಂಡ್ಯ ತಾಲ್ಲೂಕಿನ ಮುದ್ದನಘಟ್ಟ ಗ್ರಾಮದಲ್ಲಿ ಪಟ್ಟಲದಮ್ಮ ದೇವಸ್ಥಾನದ ಆವರಣದಲ್ಲಿ ವಿಜೃಂಭಣೆಯಿಂದ ಉತ್ಸವ ನಡೆಯಿತು. ಮುಖಂಡ ಮುದ್ದನಘಟ್ಟ ಮಹಾಲಿಂಗೇಗೌಡ ಮಾತನಾಡಿ, ಆಂಜನೇಯ ಸ್ವಾಮಿ, ಮಾರಮ್ಮ ದೇವಿಯ ಉತ್ಸವವನ್ನು ಏರ್ಪಡಿಸಲಾಗಿದೆ. ಈ ಹಬ್ಬವು ವರ್ಷಕ್ಕೆ ಒಂದು ಬಾರಿ ಬರುತ್ತದೆ. ಹಾಗಾಗಿ ನಾವು ಸಂತೋಷವಾಗಿ ಹಬ್ಬವನ್ನು ಆಚರಿಸಿಕೊಂಡು ಬರುತ್ತಿದ್ದೇವೆ. ಈ ಹಬ್ಬಕ್ಕೆ ನೆರೆದಿರುವ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. ಸುತ್ತಮುತ್ತಲ ಗ್ರಾಮಸ್ಥರು ಈ ಹಬ್ಬದಲ್ಲಿ ಭಾಗವಹಿಸಿ ಗಮನ ಸೆಳೆದರು. ದೇವಾಲಯ ಮೂರ್ತಿಗಳನ್ನು ಬೆಳ್ಳಿಯ ಸಾರೋಟಿನಲ್ಲಿ ಮೆರವಣಿಗೆ ಮಾಡಲಾಯಿತು. ಭಕ್ತರು ಭಕ್ತಿ ಭಾವದಿಂದ ದೇವರ ದರ್ಶನ ಪಡೆದು ಪುನೀತರಾದರು.

# ನಮೂನೆ-3, ನಮೂನೆ-3ಎ ಪಡೆದುಕೊಳ್ಳಲು ಸೂಚನೆ

**ಚಾಮರಾಜನಗರ, :** ಹನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಕಟ್ಟಡಗಳು, ನಿವೇಶನಗಳನ್ನು ಹೊಂದಿರುವ ಆಸ್ತಿ ಮಾಲೀಕರು, ಅನುಭೋಗದಾರರು ಸರ್ಕಾರದ ಅಧಿಸೂಚನೆಯಂತೆ ಗಣಕೀಕೃತ ನಮೂನೆ-3 ಮತ್ತು ನಮೂನೆ-3ಎ ಯನ್ನು ಪಡೆದುಕೊಳ್ಳುವಂತೆ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಸರ್ಕಾರದ ಅಂತಿಮ ಅಧಿಸೂಚನೆ ಅನ್ವಯ ಎಲ್ಲಾ ರೀತಿಯ ಕಟ್ಟಡ ನಿವೇಶನಗಳಿಗೆ ಆಸ್ತಿತೆರಿಗೆ ನಿರ್ಧರಣೆಗೊಳಿಸಿ ಆಸ್ತಿತೆರಿಗೆಯನ್ನು 2024-25ನೇ ಸಾಲಿನ ಅಂತ್ಯದವರೆಗೆ ಪೂರ್ಣ ಪ್ರಮಾಣದಲ್ಲಿ ಪಾವತಿಸಿಕೊಂಡು ಸಂಬಂಧಪಟ್ಟ ಆಸ್ತಿ ಮಾಲೀಕರಿಂದ ಅವಶ್ಯಕ ದಾಖಲೆಗಳನ್ನು ಪಡೆದು ಕರ್ನಾಟಕ ಪೌರಸಭೆಗೆ ಅಧಿನಿಯಮದ 1964ರ ಸೆಕ್ಷನ್ 106(1ಬಿ)() ಅನ್ವಯ ರಿಜಿಸ್ಟರ್-ಎ ರಲ್ಲಿ (ನಮೂನೆ-3) ಅಧಿಕೃತ ಸ್ವತ್ತುಗಳು ಹಾಗೂ ರಿಜಿಸ್ಟರ್-ಬಿ ನಲ್ಲಿ (ನಮೂನೆ-3ಎ) ಅನಧಿಕೃತ ಸ್ವತ್ತುಗಳ ಮಾಹಿತಿಯುಳ್ಳ ವಹಿಯನ್ನು ನಿರ್ವಹಿಸಬೇಕಾಗುತ್ತದೆ.

ಹನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯೊಳಗೆ ಬರುವ ಸರ್ಕಾರಿ ಜಾಗ, ಅರೆಸರ್ಕಾರಿ, ಸ್ಥಳೀಯ ಸಂಸ್ಥೆಗಳ ಒಡೆತನದಲ್ಲಿರುವ ಸ್ವತ್ತುಗಳನ್ನು ಹೊರತುಪಡಿಸಿ ಇನ್ನುಳಿದ ಕಟ್ಟಡಗಳ, ನಿವೇಶನಗಳ ಮಾಲೀಕರು ತಮ್ಮ ಆಸ್ತಿಗಳಿಗೆ ಸಂಬಂಧಿಸಿದ ಪೂರಕ ನೋಂದಾಯಿತ ದಾಖಲೆ ಪತ್ರಗಳು, ಸ್ವತ್ತಿನ ಭಾವಚಿತ್ರ, ಮಾಲೀಕರ ಫೋಟೋ, ನಮೂನೆ-15 (ಇಸಿ), ಕೆ.ಇ.ಬಿ ಬಿಲ್, ಕುಡಿಯುವ ನೀರಿನ ಬಿಲ್, ಕಟ್ಟಡ ಪರವಾನಗಿ ಮತ್ತು ಅನುಮೋದಿತ ನಕ್ಷೆ, ಏಕ ನಿವೇಶನ ವಿನ್ಯಾಸ ಅನುಮೋದನೆ ಅಥವಾ ಅನುಮೋದಿತ ಬಡಾವಣೆಯ ನಕ್ಷೆ, ಅಲಿನೇ?ನ್ ನಕಲು ಪ್ರತಿ, ಆರ್.ಟಿಸಿ, ಮ್ಯೂಟೇಶನ್ ನಕಲು ಪ್ರತಿ, ಮಾಲೀಕರ ಆಧಾರ್ ಕಾರ್ಡ್ ಪ್ರತಿ, ಪಾನ್ ಕಾರ್ಡ್ ಪ್ರತಿ ಅಥವಾ ಚುನಾವಣಾ ಗುರುತಿನ ಚೀಟಿ ಹಾಗೂ ಇತರೆ ಅವಶ್ಯಕ ದಾಖಲಾತಿಗಳನ್ನು ಪಟ್ಟಣ ಪಂಚಾಯಿತಿ ಕಚೇರಿಗೆ ಸಲ್ಲಿಸಿ ಸ್ವತ್ತಿಗೆ ಸಂಬಂಧಪಟ್ಟ ಆಸ್ತಿ ತೆರಿಗೆಯನ್ನು ಪಾವತಿಸಬೇಕು. ಆಸ್ತಿಯನ್ನು ಗಣಕೀಕರಿಸಿಕೊಂಡು ನಮೂನೆ-3, ನಮೂನೆ-3ಎಗಳನ್ನು ಪಡೆದುಕೊಂಡು ನೋಂದಾಯಿತ ಕಚೇರಿಯಲ್ಲಿ ಕ್ರಯ ಪತ್ರ, ದಾನ ಪತ್ರ, ವಿಭಾಗ ಪತ್ರ, ಹಕ್ಕು ಖುಲಾಸೆ ಹಾಗೂ ಇತರೆ ದಾಖಲೆ ಪತ್ರಗಳನ್ನು ನೊಂದಣಿ ಮಾಡಿಸಿಕೊಂಡು ಸದುಪಯೋಗ ಮಾಡಿಕೊಳ್ಳುವ ಅವಕಾಶ ಪಡೆಯಬಹುದಾಗಿರುತ್ತದೆ. ಸರ್ಕಾರದ ಅಧಿಸೂಚನೆಯಂತೆ ಗಣಕೀಕೃತ ನಮೂನೆ-3 ಮತ್ತು ನಮೂನೆ-3ಎ ರನ್ನು ಪಡೆದುಕೊಳ್ಳಬೇಕು. ತಪ್ಪಿದಲ್ಲಿ ಸಂಬಂಧಪಟ್ಟ ಆಸ್ತಿ ಮಾಲೀಕರಿಗೆ ನಿಯಮ 10ಎ ರಂತೆ ನಿಯಮಾನುಸಾರ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು, ಕಂದಾಯ ಶಾಖೆಯ ಸಿಬ್ಬಂದಿಯನ್ನು ಸಂಪರ್ಕಿಸುವಂತೆ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

# ಭಾರತದ ಸಂವಿಧಾನವು ಕೇವಲ ಒಂದು ಧರ್ಮ, ಜಾತಿಗೆ ಸೀಮಿತವಲ್ಲ

**ಚಾಮರಾಜನಗರ :** ಭಾರತದ ಸಂವಿಧಾನವು ಕೇವಲ ಒಂದು ಧರ್ಮ, ಜಾತಿಗೆ ಸೀಮಿತವಲ್ಲ. ಬದಲಿಗೆ ಎಲ್ಲ ಧರ್ಮಗಳ ಮೂಲ ಗ್ರಂಥವಾಗಿದೆ ಎಂದು ಹೈಕೋ ರ್ಟ್ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನದಾಸ್ ಅಭಿಪ್ರಾಯಪಟ್ಟರು.

ಚಾಮರಾಜನಗರದ ಜಿಲ್ಲಾಡಳಿತ ಭವನದ ಜೆ.ಎಚ್ .ಪಟೇಲ್ ಸಭಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಸಂವಿಧಾನ ಓದು ಅಧ್ಯಯನ ಶಿಬಿರ ಉದ್ಘಾಟಿಸಿ ಮಾತನಾಡಿ, ಮಹಾಭಾರತ, ರಾಮಾಯಣ, ಭಗವದ್ಗೀತೆ, ಕುರಾನ್, ಬೈಬಲ್ಗಳು ಆಯಾ ಧರ್ಮಗಳ ಜನರಿಗೆ ಮಾತ್ರ ಸೀಮಿತವಾಗಿವೆ. ಆದರೆ, ಡಾ. ಬಿ.ಆರ್ .ಅಂಬೇಡ್ಕರ್ ರಚಿಸಿದ ಸಂವಿಧಾನ ಎಲ್ಲ ಧರ್ಮಗಳ ಮೂಲ ಗ್ರಂಥವಾಗಿದೆ. ಭಾರತ ಸಂವಿಧಾನ ಕೇವಲ ಗ್ರಂಥವಲ್ಲ ಬಡವರ, ದಲಿತರ, ಧಮನಿತರ ಗೀತೆಯಾಗಿದೆ. ಸಂವಿಧಾನ ರಕ್ಷಿಸಿದರೆ ಅದು ದೇಶವನ್ನು ರಕ್ಷಣೆ ಮಾಡುತ್ತದೆ. ಆದ್ದರಿಂದ ಪ್ರತಿಯೊಬ್ಬರು ಯೋಧರಾಗಿ ಸಂವಿಧಾನದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು. ಪ್ರತಿಯೊಬ್ಬರು ಸಮಾಜದಲ್ಲಿ ಉತ್ತಮ ಭಾಷಣಕಾರರಾಗಬೇಕು. ಸಂವಿಧಾನದ ಬಗ್ಗೆ ಭಾಷಣ ಮಾಡಬೇಕು. ಹೊಲ, ಗದ್ದೆ, ಗುಡಿಸಲು, ಮನೆ, ಟೀ ಅಂಗಡಿ, ಹೋಟೆಲ್ಗಳ ಬಳಿ ಮಾತನಾಡಬೇಕು. ಸಂವಿಧಾನದ ಬಗ್ಗೆ ಚರ್ಚೆ ಮಾಡಬೇಕು. ಜನರಿಗೆ ಅರ್ಥವಾಗುವ ರೀತಿ ಹೇಳಬೇಕು. ಗ್ರಾಮೀಣ ಜನರಿಗೆ ಸಂವಿಧಾನದ ಪುಸ್ತಕ ಕೊಟ್ಟರೆ ಓದಲು ಆಗುವುದಿಲ್ಲ. ಗ್ರಾಮೀಣ ಭಾಗದಲ್ಲಿ ಅನಕ್ಷರಸ್ಥರಿದ್ದು ಜನರ ಮಧ್ಯೆ ಇದ್ದು ಸಂವಿಧಾನದ ಬಗ್ಗೆ ಅರಿವು ಮೂಡಿಸಬೇಕು ಎಂದು ತಿಳಿಸಿದರು. ಸಂವಿಧಾನವನ್ನು ಓದಿ ಅರ್ಥ ಮಾಡಿಕೊಂಡು ಅದರಂತೆ ಬದುಕಬೇಕು. ಸಂವಿಧಾನವು ದೀಪಗಳಾಗಿ ಬೆಳಗಬೇಕು. ರಾಜ್ಯದಲ್ಲಿ ಸಂವಿಧಾನ ಓದು ಸೈನ್ಯ ಕಟ್ಟಬೇಕಿದೆ. ಪ್ರತಿ ಜಿಲ್ಲೆಗಳಲ್ಲೂ 2 ದಿನಗಳ ಕಾಲ ಕಾರ್ಯಾಗಾರ ಮಾಡಲು ಪ್ರಾರಂಭಿಸಿದ್ದು ಕಳೆದ ಒಂದು ವರ್ಷದಿಂದ 10 ಜಿಲ್ಲೆಗಳಲ್ಲಿ 10 ಕಾರ್ಯಕ್ರಮಗಳನ್ನು ಮಾಡಲಾಗಿದೆ. ಜನರಿಗೆ ಅರಿವಿನ ಕೊರತೆಯಿಂದಾಗಿ ತಮಗೆ ನೀಡಿರುವ ಹಕ್ಕುಗಳ ಬಗ್ಗೆ ಅರಿವು ಇಲ್ಲ. ಆದ್ದರಿಂದ ಜನರಲ್ಲಿ ಸಂವಿಧಾನದ ಬಗ್ಗೆ ಅರಿವು ಮೂಡಿಸಬೇಕು ಎಂದರು. ದಲಿತ ಸಂಘರ್ಷ ಸಮಿತಿ(ಅಂಬೇಡ್ಕರ್ ವಾದ) ರಾಜ್ಯ ಸಂಚಾಲಕ ಮಾವಳ್ಳಿ ಶಂಕರ್ ಮಾತನಾಡಿ, ಸಂವಿಧಾನದ ಮೇಲೆ ಅನೇಕ ರೀತಿಯಲ್ಲಿ ದಾಳಿಯಾಗುತ್ತಿದೆ. ಮೀಸಲಾತಿ ಬಗ್ಗೆ ಜನರಲ್ಲಿ ತಪ್ಪು ಗ್ರಹಿಕೆ ಇದ್ದು ಮೀಸಲಾತಿಯು ಕೇವಲ ಎಸ್ಸಿ, ಎಸ್ಟಿ ಜನಾಂಗಗಳಿಗೆ ಮಾತ್ರ ಸೀಮಿತ ಅನ್ನೋ ಮನೋಭಾವ ಇದೆ. ಆದರೆ, ಸಂವಿಧಾನವು ಎಲ್ಲ ಸಮುದಾಯದವರಿಗೂ ಮೀಸಲಾತಿ ನೀಡಿದೆ. ಸಂವಿಧಾನವು ದೇಶದ ವ್ಯವಸ್ಥೆಯನ್ನು ಕಾಪಾಡುತ್ತದೆ. ಆದರೆ, ಸಂವಿಧಾನವನ್ನು ಅರ್ಥ ಮಾಡಿಕೊಳ್ಳಲು ಅರ್ಧ ಶತಮಾನವೇ ಬೇಕಾಯಿತು. ಸಂವಿಧಾನದ ಅಭಿಯಾನ ರಾಜ್ಯದಲ್ಲಿ ಅಲ್ಲದೇ ರಾಷ್ಟ್ರದಲ್ಲಿಯೂ ಆಂದೋಲನ ಉಂಟು ಮಾಡಿದೆ ಎಂದರು. ಶಾಸಕ ಸಿ.ಪುಟ್ಟರಂಗಶೆಟ್ಟಿ, ದೀನಬಂಧು ಸಂಸ್ಥೆ ಗೌರವ ಕಾರ್ಯದರ್ಶಿ ಪ್ರೊ.ಜಿ.ಎಸ್.ಜಯದೇವ್, ಸಾಹಿತಿ ಮಹದೇವ್ ಶಂಕನಪುರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮುನಿರಾಜು, ಆಹಾರ ಇಲಾಖೆಯ ಉಪನಿರ್ದೇಶಕ ಯೋಗಾನಂದ, ಬಿಎಸ್ಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್.ಪಿ.ಮಹೇಶ್, ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಯ ಮಾಲೀಕ ಗೋವಿಂದರಾಜು, ಗಾಯಕ ಸಿ.ಎಂ.ನರಸಿಂಹಮೂರ್ತಿ ಇದ್ದರು.

### ಅಂತಾರಾಷ್ಟ್ರೀಯ ಮಾತೃಭಾಷಾ ದಿನಾಚರಣೆ ಉದ್ಘಾಟಿಸಿದ ಪ್ರೊ.ಕಪಿಲ್ ಕಪೂರ್ ಬೇಸರ

# ವಸಾಹತು ಕಾಲದ ಶಿಕ್ಷಣವೇ ಮುಂದುವರಿಕೆ

**ಮೈಸೂರು:** ದೇಶದಲ್ಲಿ ಈಗಲೂ ವಸಾಹತು ಕಾಲದ ಶಿಕ್ಷಣವೇ ಮುಂದುವರಿದಿದೆ. ಇಂಗ್ಲಿಷ್ ಉದ್ಯೋಗದ ಭಾಷೆಯೆಂದು ಬಿಂಬಿಸಲಾಗಿದೆ ಎಂದು ಜವಾಹರ್ ಲಾಲ್ ನೆಹರು ವಿಶ್ವವಿದ್ಯಾಲಯದ ನಿವೃತ್ತ ಭಾಷಾ ವಿಜ್ಞಾನಿ ಪ್ರೊ.ಕಪಿಲ್ ಕಪೂರ್ ಬೇಸರ ವ್ಯಕ್ತಪಡಿಸಿದರು.

ನಗರದ ಭಾರತೀಯ ಭಾಷಾ ಸಂಸ್ಥಾನದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಾತೃಭಾಷಾ ದಿನಾ ಚರಣೆಯನ್ನು ವರ್ಚುವಲ್ ಮೂಲಕ ಉದ್ಘಾಟಿಸಿ ಮಾತ ನಾಡಿದ ಅವರು, ಪ್ರತಿ ಭಾಷೆಯೂ ಅಂತಾರಾಷ್ಟ್ರೀಯ ಭಾಷೆಯಾಗಿದೆ. ಎಲ್ಲ ಭಾಷೆಗಳಿಗೂ ಇತಿಹಾಸವಿದ್ದು, ಭಾಷೆ ಉಳಿಸಿದರೆ ಸಂಸ್ಕೃತಿಯನ್ನು ಉಳಿಸಿದಂತೆ ಎಂದರು.

9ರಿಂದ 16ನೇ ಶತಮಾನದವರೆಗೆ ಪರ್ಷಿಯನ್ ಹಾಗೂ ಅರೇಬಿಕ್ ಅಂತಾರಾಷ್ಟ್ರೀಯ ಭಾಷೆಗಳಾಗಿದ್ದವು. ರೋಮ್ ನಿಂದ ಭಾರತದವರೆಗೂ ಸಂವಹನ ನಡೆಸಲು ಈ ಭಾಷೆಗಳು ಬಳಕೆಯಾಗುತ್ತಿದ್ದವು. ನಂತರ ಫ್ರೆಂಚ್, ರಷ್ಯನ್, ಸ್ಪ್ಯಾನಿಷ್ ಹಾಗೂ ಇಂಗ್ಲಿಷ್ ಭಾಷೆಗಳು ಜಾಗ ತಿಕ ಅಧಿಕಾರವು ಬದಲಾದಂತೆ ಅರೇಬಿಕ್ ಹಾಗೂ ಪರ್ಷಿ ಯನ್ ಭಾಷೆಗಳ ಸ್ಥಾನ ತುಂಬಿದವು ಎಂದು ತಿಳಿಸಿದರು.

ಎಲ್ಲ ಭಾಷೆಗಳೂ ಜ್ಞಾನ ಸಂಪತ್ತನ್ನು ಹೊಂದಿವೆ. ಆದ್ದರಿಂದ, ಮಕ್ಕಳ ಶಿಕ್ಷಣ ಮಾಧ್ಯಮವು ಮಾತೃ ಭಾಷೆ

ಯಲ್ಲಿಯೇ ಆಗಬೇಕು. ವಿಜ್ಞಾನ ಶಿಕ್ಷಣವನ್ನು ಮಾತೃ ಭಾಷೆಯಲ್ಲಿನೀಡಲಾಗದೆಂಬುದು ಹುಸಿಕಲ್ಪನೆಯಾಗಿದೆ. ಪರ್ಯಾಯ ಪದಗಳ ಸಂಪತ್ತು ಭಾರತೀಯ ಭಾಷೆಗಳಲ್ಲಿವೆ. ಸಂಸ್ಕೃತವು ಎಲ್ಲ ಭಾಷೆಗಳಿಗೂ ಪದ ಸಂಪತ್ತನ್ನು ನೀಡಿದೆ.



ಹೀಗಾಗಿ, ಯಾವುದೇ ಭಾಷೆಯಲ್ಲಿ ಮಾತನಾಡಿದರೂ ಅರ್ಥ ವಾಗುತ್ತದೆ ಎಂದರು. ರಾಜ್ಯ ಪೊಲೀಸ್ ಅಕಾಡೆಮಿ ನಿರ್ದೇಶಕ ಎಸ್.ಎಲ್. ಚೆನ್ನಬಸವಣ್ಣ ಮಾತನಾಡಿ, ಭಾರತದ ವಿವಿಧ ಭಾಷೆಗಳು, ಸಂಸ್ಕೃತಿ ವೈವಿಧ್ಯವೇ ಶಕ್ತಿಯಾಗಿದೆ. ಭಾರತಕ್ಕೆ ಜಾಗತಿಕ ನಾಯಕನಾಗುವ ಅರ್ಹತೆ ಇದೆ. ರಾಜ್ಯದ ಗಡಿ ಭಾಗಗಳಲ್ಲಿನ ಇತರೆ ಭಾಷೆಗಳನ್ನು ಕಲಿಯಬೇಕು. ನಾನು ಚಾಮರಾಜನಗರದಲ್ಲಿ ಅಧಿಕಾರಿಯಾಗಿದ್ದಾಗ ತಮಿಳು, ಬೀದರ್‌ನಲ್ಲಿದ್ದಾಗ ಮರಾಠಿ, ತೆಲುಗು ಕಲಿತಿದ್ದೆ. ಹೆಚ್ಚು ಭಾಷೆಗಳನ್ನು ಕಲಿಯಬೇಕು. ಮಾತೃಭಾಷೆಯನ್ನು ಪ್ರೀತಿಸಬೇಕು ಎಂದು ಕಿವಿಮಾತು ಹೇಳಿದರು.

ಭಾಷಾ ಕಲಿಕೆ, ಭದ್ರತೆ ಸೇರಿದಂತೆ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಸಿಐಐಎಲ್ ಹಾಗೂ ರಾಜ್ಯ ಪೊಲೀಸ್ ಅಕಾಡೆಮಿ ಪರಸ್ಪರ ಒಪ್ಪಂದಕ್ಕೆ ಸಹಿ ಹಾಕಿದವು. ಭಾಷಾ ವಿಜ್ಞಾನಿಗಳಾದ ದೆಹಲಿ ವಿಶ್ವವಿದ್ಯಾಲಯದ ಪ್ರೊ.ಆರ್ ಸಿ.ಶರ್ಮ, ಕೇರಳ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರೊ. ಎಲ್. ರಾಮಮೂರ್ತಿ, ಸಿಐಐಎಲ್ ನಿರ್ದೇಶಕ ಪ್ರೊ. ಶೈಲೇಂದ್ರ ಮೋಹನ್, ಮಾಜಿ ನಿರ್ದೇಶಕ ಪ್ರೊ.ರಾಜೇಶ್ ಸಚ್ ದೇವ, ಪ್ರೊ.ಪಿ.ಉಮಾರಾಣಿ ಮತ್ತಿತರರು ಉಪಸ್ಥಿತರಿದ್ದರು.

# ಸೋಲು–ಗೆಲುವಿಗಿಂತ ಕ್ರೀಡೆಗಳಲ್ಲಿ ಭಾಗವಹಿಸುವುದು ಮುಖ್ಯ

**ಚಿಕ್ಕಬಳ್ಳಾಪುರ:** ಸೋಲು ಗೆಲುವಿಗಿಂತ ಕ್ರೀಡೆಗಳಲ್ಲಿ ಭಾಗವಹಿಸುವುದು ಬಹು ಮುಖ್ಯ ಇದರಲ್ಲಿ ಭಾಗವಹಿಸುವುದರಿಂದ ಮಾನಸಿಕ ಹಾಗೂ ದೈಹಿಕವಾಗಿ ಸದಢನಾಗುವುನಲ್ಲದೇ ನಿತ್ಯದ ಕಾರ್ಯಗಳನ್ನು ಉತ್ಸಾಹದಿಂದ ಮಾಡಲು ಸಾಧ್ಯವಾಗಲಿದೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕೆ. ವಿ.ಮುನಿರತ್ನ ಹೇಳಿದರು.

ಅವರು ನಗರ ಹೊರಹೊಲಯದ ಶ್ರೀ ಕೆವಿ ಕ್ಯಾಂಪಸ್ ಮೈದಾನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳ ನಿಲಯರ್ಥಿಗಳ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಯುವಕರು ಸ್ಪರ್ಧಾತ್ಮಕ ಮನೋಭಾವ ಹೊಂದುವುದು ಅತ್ಯಗತ್ಯ ಇದರಿಂದಾಗಿ ಪ್ರತಿಯೊಬ್ಬರಲ್ಲೂ ಭಾವನೆ ಮತ್ತು ಮತ್ತು ಭಾವನಾತ್ಮಕತೆ ಗಟ್ಟಿಗೊಳ್ಳಲು ಕಾರಣವಾಗುತ್ತದೆ ಆದ್ದರಿಂದ ಪ್ರತಿಯೊಬ್ಬರೂ ಕ್ರೀಡೆಗಳಲ್ಲಿ ಅತ್ಯಂತ ಉತ್ಸಾಹದಿಂದ ಪಾಲ್ಗೊಳ್ಳಬೇಕು ಇದು ಆರೋಗ್ಯಕ್ಕೂ ಒಂದು ಸದೃಢವಾದ ವ್ಯಾಯಮ ಆಗಲಿದೆ ಎಂದ ಅವರು ಸರ್ಕಾರಿ ಉದ್ಯೋಗಕ್ಕೆ ಕ್ರೀಡಾಪಟುಗಳಿಗೂ ಮೀಸಲಾತಿ ಇರುವುದರಿಂದ ಕ್ರೀಡಾ ಮನೋಭಾವನೆಗಳನ್ನು ಹೆಚ್ಚು ಹೆಚ್ಚು ರೂಡಿಸಿಕೊಳ್ಳಬೇಕು ಎಂದರು.



ಡಾ//ಪ್ರಸನ್ನ ಅಸಿಸ್ಟೆಂಟ್ ಪ್ರೊಫೆಸರ್ ಮುದ್ದೇನಹಳ್ಳಿಯ ವಿಟಿಯು ಕಾಲೇಜ್ ಸಹಾಯಕ ಪ್ರಾಧ್ಯಾಪಕ ಪ್ರೊ ಡಾಕ್ಟರ್ ಪ್ರಸನ್ನ ಮಾತನಾಡಿ ಕ್ರೀಡೆ ದೇಹದ ಮಜಲುಗಳನ್ನು ಗಟ್ಟಿಗೊಳಿಸುತ್ತದೆ ಕ್ರೀಡೆಗಳಲ್ಲಿ ಪಾಲ್ಗೊಳ್ಳುವ ಜೊತೆಗೆ ಪ್ರತಿದಿನ ನಿರಂತರವಾಗಿ ವ್ಯಾಯಾಮ ಮಾಡುವುದು ಅತಿ ಮುಖ್ಯ ಎಂದರು. ಇದೇ ವೇಳೆ ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್ ಹಾಗೂ ವಾಲಿಬಾಲ್. ಥ್ರೋ ಬಾಲ್ ಕ್ರಿಕೆಟ್ . ಹಗ್ಗ ಜಗ್ಗಾಟ ಇನ್ನಿತರ ಕ್ರೀಡಾಕೂಟಗಳನ್ನು ಏರ್ಪಡಿಸಲಾಗಿತ್ತು ವಿವಿಧ ನಿಲಯದ ನಿಲಯಾರ್ಥಿಗಳು ಎಲ್ಲಾ ಕ್ರೀಡೆಗಳಲ್ಲಿ ಖುಷಿ ಖುಷಿಯಿಂದ ಭಾಗವಹಿಸಿದ್ದರು ದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಇದೇ ವೇಳೆ ನಗದು ಬಹುಮಾನ ನೀಡಲಾಯಿತು

ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾದವರಿಗೆ ಟ್ರೋಫಿ ಮತ್ತು ಮೆಡಲ್ ಹಾಗೂ ನಗದು ಬಹುಮಾನಗಳನ್ನ ಎಸ್ ಜೆ ಸಿ ಐ ಟಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಶ್ವೇತಾ ಜಿ ವಿತರಣೆ ಮಾಡಿದರು. ಕಾರ್ಯಕ್ರಮದಲ್ಲಿ ಶ್ರೀ ಕೆವಿ ದೈಹಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಆರ್ ವೆಂಕಟೇಶ್. ಬಿಜಿಎಸ್ ದೈಹಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಶಿವಶಂಕರ್ . ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಕುಸುಮಾ ಭಟ್. ವಿಟಿಯು ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ ಪ್ರಸನ್ನ ನಿಲಯ ಪಾಲಕರಾದ ಡಿ ವೈ ಮಂಜುನಾಥ್. ವರಲಕ್ಷ್ಮಿ. ನಿಲಯ ಮೇಲ್ವಿಚಾರಕರಾದ ವೇಣು. ಶುಭ ಸೇರಿದಂತೆ ಇನ್ನಿತರ ಸಿಬ್ಬಂದಿ ವರ್ಗದವರು ಇದ್ದರು. .

## ಪಿಯು ಕಾಲೇಜಿನ ವಿದ್ಯಾರ್ಥಿಗಳಿಗೆ ಅರಿವು

**ಹನೂರು:** ಪಟ್ಟಣದ ಜಿ ವಿ ಗೌಡ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಹನೂರು ಪೋಲೀಸ್ ಠಾಣೆಯ ಡಬ್ಲ್ಯು ಪಿ ಸಿ ಚೈತ್ರರವರು ಭೇಟಿ ನೀಡಿ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು, ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಸಂಚಾರ ನಿಯಮಗಳ ಹಾಗೂ ಸೈಬರ್ ಸಹಾಯವಾಣಿ 1930 ಮೂಲಕ ಪಿ ಯು ಕಾಲೇಜಿನ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಈ ದೇಶದ ಯುವ ಶಕ್ತಿಗಳು ಉತ್ತಮ ಮಾರ್ಗದಲ್ಲಿ ನಡೆದರೆ ಈ ದೇಶ ಪ್ರಬುದ್ಧ ಭಾರತವಾಗುತ್ತದೆ. ಆದರೆ ಇಂದು ಯುವಕರು, ಬಾಲಕಿಯರು ಮಾದಕ ವ್ಯಸನಕ್ಕೆ ತುತ್ತಾಗಿದ್ದಾರೆ ಇದರಿಂದ ಹೊರ ಬರಬೇಕಾದರೆ ಅರಿವು ಅಗತ್ಯವಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಇಂದಿಗೂ ಕೂಡ ಬಾಲ್ಯ ವಿವಾಹ ನಡೆಯುತ್ತದೆ ಇದು ಕಾನೂನಿಗೆ ವಿರೋಧವಾಗಿದೆ ಇದರ ಬಗ್ಗೆ ಮಾಹಿತಿಗಳಿದ್ದರೆ ತಿಳಿಸಿ. ಬಾಲ್ಯ ವಿವಾಹದಿಂದ ಬಾಲೆಯರ ಜೀವನ ನಾಶವಾಗುತ್ತದೆ. ಹನೂರು ಸುತ್ತಲಿನ ಪ್ರದೇಶಗಳು ಕಾಡಿಂಚಿನವಾಗಿರುವುದರಿಂದ ಮಕ್ಕಳ ಮೇಲೆ ಅತ್ಯಾಚಾರಗಳು ನಡೆಯುತ್ತಿರುತ್ತದೆ ಇದರಿಂದ ಪೋಕ್ಸೋಗಳ ಪ್ರಕರಣಗಳು ಜಾಸ್ತಿಯಾಗಿದೆ ಇದು ಕಡಿಮೆಯಾಗಬೇಕಾದರೆ ಅರಿವು ಮುಖ್ಯವಾಗಿದೆ.ಹಾಗೂ ಇನ್ನೂ ಅನೇಕ ವಿಷಯಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಲಾಜರಸ್, ಉಪನ್ಯಾಸಕರಾದ ಫರ್ಹಾನ ಬೇಗಂ, ನಂಜುಂಡಯ್ಯ, ಶಿವಕುಮಾರ್, ಸವಿತ, ಕುಸುಮ, ಹರೀಶ್, ಮಹೇಂದ್ರ, ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

## ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ ವಿತರಣೆ

ಮಂಡ್ಯ: ಸರ್ಕಾರಿ ಶಾಲೆ ಹಾಗೂ ಅನುದಾನಿತ ಶಾಲೆಗಳಿಗೆ ಸಿಎಸ್ಆರ್ ಯೋಜನೆ ಅಡಿಯಲ್ಲಿ 34 ವಿದ್ಯಾರ್ಥಿಗಳಿಗೆ ಒಟ್ಟು ಮೂರು ಲಕ್ಷದ 2ಸಾವಿರದ ವಿದ್ಯಾರ್ಥಿ ವೇತನದ ಚೆಕ್ ಅನ್ನು ಶಾಸಕ ಪಿ ರವಿಕುಮಾರ್ ಗೌಡ ವಿತರಿಸಿದರು, ನಗರದ ರೈತ ಸಭಾಂಗಣದಲ್ಲಿ ಮಲಬಾರ್ ಗೋಲ್ಡ್ ವತಿಯಿಂದ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಮಲಬಾರ್ ಗೋಲ್ಡ್ ಟ್ರಸ್ಟ್ ವತಿಯಿಂದ ಸಮಾಜಮುಖಿ ಕೆಲಸ ಮಾಡುತ್ತಿರುವುದು ಮೆಚ್ಚುಗೆ ತಂದಿದೆ ಹಾಗೆಯೇ ಅಗತ್ಯ ಇರುವ ಕಡೆ ಮಲಬಾರ್ ಟ್ರಸ್ಟ್ ವತಿಯಿಂದ ಶುದ್ಧ ಕುಡಿಯುವ ಘಟಕವನ್ನು ನಿರ್ಮಿಸಿ ಬೇಸಿಗೆಯಲ್ಲಿ ಜನರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಮಾಡುವಂತೆ ಸಲಹೆ ನೀಡಿದರು. ಸಮಾರಂಭದಲ್ಲಿ ಮಲಬಾರ್ ಗೋಲ್ಡ್ ಶಾಖ ಮುಖ್ಯಸ್ಥ ದಿಲೀಪ್ ಹೆಗಡೆ ಪ್ರಾಂಶುಪಾಲರಾದ ತಮ್ಮೇಗೌಡ ನಾರಾಯಣ ಉಪನ್ಯಾಸಕರಾದ ಲಿಂಗೇಗೌಡ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು

## ಅವನಿಕ್ಷೇತ್ರ ರಕ್ಷಕರಾದ ಆಧಿಜಾಂಬುವಂತ ದೇವರಿಗೆ ಮೊದಲ ಪೂಜೆ

ಕೋಲಾರ: ಮುಳಬಾಗಿಲು ತಾಲ್ಲೂಕಿನ ಆವನಿ ರಾಮಲಿಂಗೇಶ್ವರ ದೇವರಿಗೆ ವಿಶೇಶ ಪೂಜೆಯನ್ನು ಮಾಡುವುದರೊಂದಿಗೆ ಪ್ರಸಿದ್ದ ಆವನಿಯ ಆಧಿಜಾಂಭವಂತನ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ .ಕೆಹೆಚ್. ಮುನಿಯಪ್ಪ ದೇವರ ದರ್ಶನ ಪಡೆದರು. ನಂತರ ಮಾತನಾಡಿ ಅವನಿಕ್ಷೇತ್ರ ರಕ್ಷಕರಾದ ಆಧಿಜಾಂಬುವಂತನಿಗೆ ಮೊದಲ ಪೂಜೆ ನಂತರ ಜಾತ್ರೆಗೆ ಚಾಲನೆ ನೀಡಲಾಗುತ್ತದೆ . ಜಾಂಭವಂತನ ಜಯಂತೋತ್ಸವವನ್ನು ಆಡಳಿತ ಮಂಡಳಿಯು ವಿಶೇಷವಾಗಿ ಆಚರಣೆ ಮಾಡಿದ್ದು ಈ ಭಾಗದ ಜನರಿಗೆ ಅನುಕೂಲವಾಗುವಂತೆ ಕಲ್ಯಾಣ ಮಂಟಪವನ್ನು ಕಟ್ಟಿಸಲು ಕ್ರಮ ವಹಿಸಲಾಗುವುದು ಮತ್ತು ಮಕ್ಕಳು ಉನ್ನತ ವ್ಯಾಸಾಂಗವನ್ನು ಮಾಡುವುದರೊಂದಿಗೆ ಸಮುದಾಯದ ಅಭಿವೃದ್ಧಿಯಾಗಬೇಕು ಎರಡುಸಾವಿರ ವರ್ಷಗಳ ಹಿತಿಹಾಸವಿರುವ ಕಡಪ ಮಠದ ಸ್ವಾಮಿಯವರಿಗೆ ವಂದಿಸಿಶೃಂಗೇರಿ ಶಾರದಮ್ಮ ,ರಾಮಲಿಂಗೇಶ್ವರ ,ಜಾಂಬುವಂತ ಎಲ್ಲರಿಗೂ ಆಶೀರ್ವದಿಸಲಿ ಮೂಲ ರಾಮಲಿಂಗೇಶ್ವರರ ದೇವಾಲಯವು ಹಿತಿಹಾಸವಿರುವ ಆಲಯವಾಗಿದ್ದು ಜಾಂಬುವಂತ ದೇವಾಲಯದ ಜಾಗದ ಮಾಹಿತಿ ಪಡೆದು ಸಭೆ ನಡೆಸಿ ಜಾಗವನ್ನು ಬಿಡುಗಡೆಗೊಳಿಸಿ ಸಮಾಜಕ್ಕೆ ಅನುಕೂಲ ಮಾಡಿಕೊಡುವುದು ಮುಖ್ಯ ಉದ್ದೇಶವಾಗಿದೆ ಕಲ್ಯಾಣ ಮಂಟಪ ನಿರ್ಮಾಣ ಶೀಘ್ರವಾಗಿ ನಡೆಯುವಂತಾಗಲಿ ದೇವಾಲಯ ಅಭಿವೃದ್ಧಿಯಾಗಲಿ ಎಂದು ಹೇಳಿ ಎಲ್ಲರಿಗೂ ಧನ್ಯವಾದಗಳನ್ನು ತಿಳಿಸಿದರು,. ಆದಿ ಜಾಂಬವ ಮುಖಂಡ ಮಾಜಿ ನಗರಸಭಾ ಸದಸ್ಯ ಬುಲ್ಲೆಟ್ ನಾರಾಯಣಸ್ವಾಮಿ, ಎಂ ಶಂಕರ್ ರಾಜ್ಯಾಧ್ಯಕ್ಷರು. ತಹಸೀಲ್ದಾರ ರಾದ ವಿ ಗೀತಾ ಜಯದೇವ ,ಶಾಸ್ತ್ರಿ,ಶ್ರೀಶೈಲ ಆನಂದಂ ಗುರೂಜಿ ,ಅವನಿ ಪಂಚಾಯತಿ ಅಧ್ಯಕ್ಷರು ಲಕ್ಷ್ಮೀಪ್ರಿಯಾ , ಶ್ರೀಮತಿ ಶಾಲಿನಿ , ರಾಮಲಿಂಗಾರೆಡ್ಡಿ ,ಡಾಕ್ಟರ್ ರಮೇಶ್ ,ರಾಜು ,ಪ್ರಸಾದ್ ಬಾಬು ,ನಾಗರಾಜು ,ಕಾರ್ಗಿಲ್ವೆಂಕಟೇಶ್ ,ಶ್ರೀನಿವಾಸ್ ,ಮಾರ್ಕೊಂಡಪ್ಪ ,ಹೊಶೆಟ್ಟಿಹಳ್ಳಿ ಮಾರ್ಕೊಂಡಪ್ಪ ,ಸಿ ಆರ್ ಪಿ ವೆಂಕಟೇಶ್ ,ಹಾರೋಹಳ್ಳಿ ವೆಂಕಟೇಶ್ ,ಕೃಷ್ಣನ್ನ ಟ್ರಸ್ಟ್ ಅಧ್ಯಕ್ಷರು ಕಗ್ಗಿನಲ್ಲಿ ,ಶ್ರೀನಿವಾಸ್ ,ಅರೋಹಳ್ಳಿ ರವಿ,ಅಭಿ ,ಕೃಷ್ಣಮೂರ್ತಿ ಮುಂತಾದವರಿದ್ದರು.




ಜಿಲ್ಲಾ ಪರಿಶಿಷ್ಟ ಜಾತಿ ಪಂಗಡ ಸಭೆಯಲ್ಲಿ ದಲಿತ ಮುಖಂಡರ ಆಗ್ರಹ

# ದೌರ್ಜನ್ಯಕ್ಕೆ ಕಡಿವಾಣ ಹಾಕಿ

**ಚಾಮರಾಜನಗರ:** ದಲಿತರ ಮೇಲಿನ ದೌರ್ಜನ್ಯ, ಬಹಿಷ್ಕಾರ ಪದ್ಧತಿ, ದಲಿತರ ಬಡಾವಣೆಗಳಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕ್ರಮವಹಿಸಬೇಕು ಎಂದು ಮುಖಂಡರು ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಪರಿಶಿಷ್ಟ ಜಾತಿ ಪಂಗಡ ಸಭೆಯಲ್ಲಿ ದಲಿತ ಮುಖಂಡರು ಆಗ್ರಹಿಸಿದರು.

ಚಾಮರಾಜನಗರದ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ ಎಸ್ಸಿ, ಎಸ್ಟಿ ಮುಖಂಡರ ಸಭೆಯಲ್ಲಿ ಬಸವಾಪುರ ಗ್ರಾಮದ ನಾಗರಾಜು ಮಾತನಾಡಿ, 1995ರಲ್ಲಿ ಸುಬ್ಬರಾವ್ ಎಂಬುವವರು ತಮ್ಮ ಒಂದು ಎಕರೆ ಜಮೀನನನ್ನು ತಮಿಳುನಾಡಿನ ವೇಲುಮಣಿ ಎಂಬುವವರಿಗೆ ಮಾರಾಟ ಮಾಡಿದ್ದಾರೆ. ಪ್ರಸ್ತುತ ವೇಲುಮಣಿ ಎಂಬುವವರು ತಮ್ಮ ಸುತ್ತ ಇರುವ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿದ್ದು 3 ಎಕರೆ ಇದೆ ಅಂತ ಅಕ್ಕಪಕ್ಕದವರಿಗೆ ತೊಂದರೆ ಕೊಡುತ್ತಿದ್ದಾರೆ. ಆದ್ದರಿಂದ ಸರ್ವೆ ಮಾಡಿಸಿ ಸರ್ಕಾರಿ ಆಸ್ತಿಯನ್ನು ರಕ್ಷಣೆ ಮಾಡುವ ಜೊತೆಗೆ ಜನರಿಗೆ ತೊಂದರೆ ಕೊಡುತ್ತಿರುವ ವೇಲುಮಣಿ ವಿರುದ್ಧ ಸೂಕ್ತ ಕಾನುನು ಕ್ರಮ ಜರುಗಿಸಬೇಕು ಎಂದು ಸೂಕ್ತ ಕ್ರಮವಹಿಸುವುದಾಗಿ ಭರವಸೆ ನೀಡಿದರು.

ದಸಂಸ ಮುಖಂಡ ದೊಡ್ಡಿಂದುವಾಡಿ ಸಿದ್ದರಾಜು ಮಾತನಾಡಿ, ಜಿಲ್ಲೆಯಲ್ಲಿ ದಲಿತರ ಮೇಲೆ ನಡೆದಿರುವ ದೌರ್ಜನ್ಯ ಪ್ರಕರಣ, ಪರಿಹಾರ, ಮುಕ್ತಾಯಗೊಂಡಿರುವ ಪ್ರಕರಣಗಳ ಬಗ್ಗೆ ಮಾಹಿತಿ ಕೊಡಬೇಕು. ಅಲ್ಲದೇ ಹನೂರು ಭಾಗದಲ್ಲಿ ಗಾಂಜಾ ಪ್ರಕರಣಗಳು ಜಾಸ್ತಿಯಾಗುತ್ತಿದ್ದು ಇದಕ್ಕೆ ಕಡಿವಾಣ ಹಾಕಬೇಕು ಎಂದು ಮನವಿ ಮಾಡಿದರು.

ಚಾಮರಾಜನಗರ ತಾಲಕ್ಲೂಕಿನ ಸಾಗಡೆ ಗ್ರಾಮದ ನಂಜುಂಡನಾಯಕ ಮಾತನಾಡಿ, ಸಾಗಡೆ ಗ್ರಾಮದಲ್ಲಿ 3 ವರ್ಷಗಳ ಹಿಂದೆ ಸ್ವಂತ ಜಾಗದಲ್ಲಿ ದೇವಸ್ಥಾನ ನಿರ್ಮಾಣ ಮಾಡಿಕೊಂಡಿದ್ದೇವೆ. ಆದರೆ, ಉಪ್ಪಾರ ಜನಾಂಗದವರು ದೇವಸ್ಥಾನ ಸಂಬಂಧ ತಕರಾರು ಅರ್ಜಿ ಕೊಟ್ಟಿದ್ದಾರೆ ಎಂದರು.

ಡಿವೈಎಸ್ಪಿ ಲಕ್ಷ್ಮಯ್ಯ ಮಾತನಾಡಿ, ಈ ಸಂಬಂಧ ಸ್ಥಳ ಪರಿಶೀಲನೆ ಮಾಡಲಾಗಿದೆ. ಅಲ್ಲದೇ ನಾಯಕ ಜನಾಂಗದ ಮುಖಂಡರೊಂದಿಗೆ ಸಭೆ ನಡೆಸಲಾಗಿದೆ. ಪಿಡಿಓ ಬಳಿ ದಾಖಲಾತಿಗಳನ್ನು ಕೇಳಿದ್ದು ಆ ನಂತರ ವರದಿ ಸಲ್ಲಿಸಲಾಗುವುದು ಎಂದರು.



ಸಿದ್ದಯ್ಯನಪುರ ಗ್ರಾಮದ ಸಿದ್ಧರಾಜು ಮಾತನಾಡಿ, ಚಾಮರಾಜನಗರದ ಸೋಮವಾರಪೇಟೆ ಬಳಿಯ ಬೈಪಾಸ್ ಸಂಪರ್ಕ ಕಲ್ಪಿಸುವ ವೃತ್ತ, ಮೂಡ್ಲುಪುರ, ದೊಡ್ಡರಾಯಪೇಟೆ ಕ್ರಾಸ್ ಬಳಿ ಅವೈಜ್ಞಾನಿಕ ರಸ್ತೆ ನಿರ್ಮಾಣದಿಂದಾಗಿ ಅಪಘಾತಗಳು ಹೆಚ್ಚಾಗುತ್ತಿವೆ. ಈ ಸ್ಥಳದಲ್ಲಿ ಸಿಗ್ನಲ್ ವ್ಯವಸ್ಥೆ ಮಾಡುವ ಮೂಲಕ ಅಪಘಾತಗಳನ್ನು ತಡೆಯಲು ಮುಂದಾಗಬೇಕು ಎಂದು ಮನವಿ ಮಾಡಿದರು.

ಹೊನ್ನೂರು ಗ್ರಾಮದ ಕೃಷ್ಣಮೂರ್ತಿ ಮಾತನಾಡಿ, ಜಿಲ್ಲೆಯಲ್ಲಿ ವೀಲಿಂಗ್ ಜಾಸ್ತಿಯಾಗುತ್ತಿದೆ. ಚಾಮರಾಜನಗರದ ಹೌಸಿಂಗ್ ಬೋರ್ಡ್ ಬಡಾವಣೆಯಲ್ಲಿ ವೀಲಿಂಗ್ನಿಂದಾಗಿ ಮಕ್ಕಳ ಮೇಲೆ ಅಪಘಾತಗಳಾಗುತ್ತವೆ. ವೀಲಿಂಗ್ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು. ಅಲ್ಲದೇ ದಲಿತರ ಬಡಾವಣೆಗಳಲ್ಲಿ ಅಕ್ರಮವಾಗಿ ಅಂಗಡಿಗಳಲ್ಲಿ ಮದ್ಯ ಮಾರಾಟ ಮಾಡಲಾಗುತ್ತಿದ್ದು ಇದರ ಕಡಿವಾಣಕ್ಕೂ ಮುಂದಾಗಬೇಕು ಎಂದರು.

ಯರಿಯೂರು ಗ್ರಾಮದ ರವಿಕುಮಾರ್ ಮಾತನಾಡಿ, ಯರಿಯೂರು ಗ್ರಾಮದಲ್ಲಿ ಬಹಿಷ್ಕಾರ ಪದ್ಧತಿ ಹೆಚ್ಚಾಗಿದೆ. ನಮ್ಮ ಕುಟುಂಬಕ್ಕೆ ಸ್ವಜಾತಿಯವರೇ ಬಹಿಷ್ಕಾರ ಹಾಕಿದ್ದು ಇದರ ಕಡಿವಾಣಕ್ಕೆ ಮುಂದಾಗಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಎಸ್ಪಿ ಪ್ರತಿಕ್ರಿಯಿಸಿ, ಈ ಸಂಬಂಧ ಸ್ಥಳಕ್ಕೆ ಹೋಗಿ ಪರಿಶೀಲಿಸಿ ಕ್ರಮ ಜರುಗಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ಅಂಬಳೆ ಗ್ರಾಮದ ಶ್ರೀನಿವಾಸ್ ಮಾತನಾಡಿ, ದೂರು ನೀಡಲು ಹೋಗಿದ್ದವರ ಮೇಲೆ ಅಸಭ್ಯವಾಗಿ ಮಾತನಾಡಿರುವ ಯಳಂದೂರು ಪೊಲೀಸ್ ಠಾಣೆಯ ಸಬ್ ಇನ್ಸ್ಪೆಕ್ಟರ್ ಹನುಮಂತ ಉಪ್ಪಾರ್ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆ ಒತ್ತಾಯಿಸಿದರು.

ಇದಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಕವಿತ ಉತ್ತರಿಸಿ, ಈ ಸಂಬಂಧ ಪರಿಶೀಲಿಸಿ ಕ್ರಮವಹಿಸುವುದಾಗಿ ಭರವಸೆ ನೀಡಿದರು. ಧರಣೇಂದ್ರ ಮಾತನಾಡಿ, ನನ್ನ ಮೇಲೆ ಯಾವುದೇ ಪ್ರಕರಣ ಇಲ್ಲ. ಆದರೂ ಕೂಡ ರೌಡಿಶೀಟರ್ ತೆರೆಯಲಾಗಿದೆ. ಆದ್ದರಿಂದ ರೌಡಿಶೀಟರ್ ಅನ್ನು ರದ್ದುಗೊಳಿಸಬೇಕು ಎಂದು ಮನವಿ ಮಾಡಿದರು. ಪೊಲೀಸ್ ವರಿಷ್ಠಾಧಿಕಾರಿ ಡಾ.ಕವಿತ ಪ್ರತಿಕ್ರಿಯಿಸಿ, ಯಾವುದೇ ಸಮಸ್ಯೆ ಇಲ್ಲದಿದ್ದರೆ ಪರಿಶೀಲಿಸಿ ರೌಡಿಶೀಟರ್ ರದ್ದುಪಡಿಸಲು ಕ್ರಮವಹಿಸಲಾಗುವುದು ಎಂದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಶಿಧರ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ಎಸ್. ಬಿಂದ್ಯಾ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ನಂಜುಂಡೇಗೌಡ, ಡಿವೈಎಸ್ಪಿ ಲಕ್ಷ್ಮಯ್ಯ ಸೇರಿದಂತೆ ಪೊಲೀಸ್ ಅಧಿಕಾರಿಗಳು, ಎಸ್ಸಿ, ಎಸ್ಟಿ ಜನಾಂಗದ ಮುಖಂಡರು ಹಾಜರಿದ್ದರು.

## ಹೆಚ್ಚಿನ ಶ್ರಮ ವಹಿಸಿ ಓದಿದರೆ ಉತ್ತಮ ಫಲಿತಾಂಶ ಸಾಧ್ಯ

**ಹುಳಿಯಾರು:** ವಿದ್ಯೆ ಎಂಬುದು ಕದಿಯಲಾರದ ಸಂಪತ್ತು. ಅದು ಜೀವನದಲ್ಲಿ ಎಂದೆಂದಿಗೂ ಉತ್ತಮ ಫಲಿತಾಂಶವನ್ನೇ ನೀಡುತ್ತದೆ. ವಿದ್ಯಾರ್ಥಿ ಜೀವನದಲ್ಲಿ ಎಸ್ಎಸ್ಎಲ್ಸಿ ಪ್ರಮುಖ ಘಟ್ಟವಾಗಿದ್ದು, ಹೆಚ್ಚಿನ ಶ್ರಮ ವಹಿಸಿ ಓದಿದರೆ ಉತ್ತಮ ಫಲಿತಾಂಶ ಬರುತ್ತದೆ ಎಂದು ಗ್ರಾಪಂ ಸದಸ್ಯ ಹಾಗೂ ಲೇಖಕ ಕೆ.ಮರಿಯಪ್ಪ ಹೇಳಿದರು.

ಹುಳಿಯಾರು ಹೋಬಲಿಯ ದಸೂಡಿ ಸರ್ಕಾರಿ ಪ್ರೌಢಶಾಲೆಯ 2024–2025 ಸಾಲಿನ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಶುಕ್ರವಾರ ಏರ್ಪಡಿಸಿದ್ದ ಬೀಳ್ಕೊಡಿಗೆ ಸಮಾರಂಭ ಹಾಗೂ ಶಾರದಾ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇಂದಿನ ವಿದ್ಯಾರ್ಥಿಗಳು ನಾಳೆಯ ಡಾಕ್ಟರ್, ಎಂಜಿನಿಯರ್, ಐಎಎಸ್, ಐಪಿಎಸ್ ಅಧಿಕಾರಿಗಳಾಗ ಬಹುದು ರಾಜಕಾರಣಿ, ವ್ಯಾಪಾರಿ, ಡ್ರೈವರ್, ಕೂಲಿಕಾರ್ಮಿಕರೂ ಆಗಬಹುದು. ಆದರೆ ಎಸ್ಎಸ್ಎಲ್ಸಿಯಲ್ಲಿಯೇ ಮುಂದೆ ನಾನೇನಾಗಬೇಕು ಎಂದು ನಿರ್ಧರಿಸಬೇಕು. ಅದರಲ್ಲೂ ವಿದ್ಯಾರ್ಥಿಗಳು ದೊಡ್ಡ ಕನಸುಗಳನ್ನು ಕಾಣುವುದಷ್ಟೇ ಅಲ್ಲದೆ, ಅವುಗಳನ್ನು ಸಾಕಾರಗೊಳಿಸಿಕೊಳ್ಳಲು ಶ್ರಮಿಸಬೇಕು. ಛಲ ಬಿಡದೆ ಕನಸುಗಳ ಬೆನ್ನು ಹತ್ತಿದಾಗ ಮಾತ್ರವೇ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದರು.

ಮುಖ್ಯಶಿಕ್ಷಕರಾದ ರುದ್ರೇಶ್ ಮಾತನಾಡಿ ಸಮಯ ಎನ್ನುವದು ಅಮೂಲ್ಯ. ಈ ಅಮೂಲ್ಯವಾದ ಸಮಯವನ್ನು ಬಹಳ ಉಪಯುಕ್ತವಾಗಿ ಬಳಸಿಕೊಳ್ಳಬೇಕು ಕಳೆದು ಹೋದ ಸಮಯ ಮತ್ತೆ ಸಿಗುವದಿಲ್ಲ. ಆದ್ದರಿಂದ ಸಮಯವ್ಯರ್ಥ ಮಾಡದೇ ಓದಿ ಉತ್ತಮ ಫಲಿತಾಂಶ ತಂದು ಶಾಲೆಗೆ ಕೀರ್ತಿ ತನ್ನಿ ಎಂದು ಹೇಳುವುದರ ಜೊತೆಗೆ ಗ್ರಾಮ ಪಂಚಾಯಿತಿ ಸದಸ್ಯರಾದ ಮರಿಯಪ್ಪ ನವರು ಮೂರು ವರ್ಷದಿಂದಲೂ ದಬ್ಬಗುಂಟೆ ಮತ್ತು ದಸುಡಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ಮಿತ್ರ ' ಸಂಚಿಕೆಯನ್ನು ಪಂಚಾಯತಿ ವತಿಯಿಂದ ವಿತರಿಸಿ ಮಕ್ಕಳ ಕಲಿಕೆಗೆ ನೆರವಾಗುತ್ತಿದ್ದಾರೆ ಎಂದರು.

ರಂಗೋಲಿ ಸ್ಪರ್ಧೆ, ಗಣಿತ ಮತ್ತು ವಿಜ್ಞಾನ, ರಂಗೋತ್ಸವ ಮತ್ತಿತರ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಎಸ್ಡಿಎಂಸಿ ಅಧ್ಯಕ್ಷ ಜಯಣ್ಣ, ಸಹಶಿಕ್ಷಕ ಚಂದ್ರಶೇಖರ್, ಪ್ರಕಾಶ್, ಚಂದ್ರಶೇಖರ್, ಅಭಿಷೇಕ್, ರಂಗಸ್ವಾಮಿ, ಶೇಖರ್, ವಿಜಯಲಕ್ಷ್ಮೀ, ಮತ್ತಿತರರು ಉಪಸ್ಥಿತರಿದ್ದರು.





**ಮೈಸೂರಿನ ಪುರಭವನ ( ಟೌನ್ ಹಾಲ್ ) ನಲ್ಲಿ ಕರ್ನಾಟಕ ಸಾಂಸ್ಕೃತಿಕ ಹಾಗೂ ಸಾಹಿತ್ಯ ಪರಿಷತ್ತು ( ರಿ) ವತಿಯಿಂದ ಡ್ಯಾನ್ಸ್ ಹಾಗೂ ಕರೋಕೆ ಕಾರ್ಯಕ್ರಮ ಮತ್ತು ವಿವಿಧ ಕ್ಷೇತ್ರದ ಸಾಧಕರಿಗೆ ಕರ್ನಾಟಕ ಕೇಸರಿ ಶ್ರೇಷ್ಠ ರಾಜ್ಯ ಪ್ರಶಸ್ತಿ ಪ್ರಧಾನ ಮಾಡಲಾಯಿತು. ಹಾಗೂ ಉಚಿತ ಕಣ್ಣು ತಪಾಸಣೆ ಮತ್ತು ಉಚಿತ ಕನ್ನಡಕ ವಿತರಣೆ ಮಾಡಲಾಯಿತು. ಹಾಗೂ ಕರ್ನಾಟಕ ಫ್ಯಾಷನ್ ಶೋ ಕೂಡ ನಡೆಯಿತು. ಫ್ಯಾಷನ್ ಶೋ ವಿಜೇತರಿಗೆ ಬಹುಮಾನವನ್ನು ನೀಡಲಾಯಿತು. ಸಂಸ್ಥಾಪಕ ಗೌರವಾಧ್ಯಕ್ಷರು ಹಾಗೂ ಖ್ಯಾತ ಮನೋವಿಜ್ಞಾನಿ ಶ್ರೀಮತಿ ಡಾರೇಖಾ ಮನ: ಶಾಂತಿ ಮತ್ತು ಸಂಸ್ಥಾಪಕ ರಾಜ್ಯಾಧ್ಯಕ್ಷರು ಡಾ ಕಸ್ತೂರಿ ಚಂದ್ರು ಹಾಗೂ ಮೈಸೂರು ನಗರಾಧ್ಯಕ್ಷರು ಶ್ರೀಮತಿ ಡಾ ಮೌಲ್ಯಜೈಕುಮಾರ್, ಮೈಸೂರು ಜಿಲ್ಲಾಧ್ಯಕ್ಷರು ಅಮೀನಾ ಬೇಗಂ, ಸಂಸ್ಥಾಪಕ ಕಾರ್ಯದರ್ಶಿ ಡಾ ತೇಜಸ್ ಪೃಥ್ವಿರಾಜ್, ಮೈಸೂರು ಜಿಲ್ಲಾಧ್ಯಕ್ಷರು ಡಾ ನಟರಾಜು ಹೆಚ್. ಪಿ., ಮೈಸೂರು ನಗರಾಧ್ಯಕ್ಷರು ಗಿರಿಧರ್, ಹಾಗೂ ಡಾ ಜೀ ಪ್ರೇಮ್ ಮತ್ತು ಡಾ ನಯನ ಹರಿಶ್ಚಂದ್ರ, ಡಾ ಜಿ ಪ್ರೇಮ್ ಭಾಗಿಯಾಗಿದ್ದರು.**

## ಕೆಪಿಎಸ್ ಶಾಲೆಯ ಮಕ್ಕಳ ಸಂತೆಯಲ್ಲಿ ಭರ್ಜರಿ ವ್ಯಾಪಾರ

**ಹುಳಿಯಾರು:** ಹುಳಿಯಾರು–ಕೆಂಕೆರೆ ಕೆಪಿಎಸ್ ಶಾಲೆಯ ಹೈಸ್ಕೂಲ್ ವಿಭಾಗದಲ್ಲಿ ಶನಿವಾರ ಮಕ್ಕಳ ಸಂತೆ ಏರ್ಪಡಿಸಲಾಗಿತ್ತು. ಸಂತೆಯಲ್ಲಿರುವಂತೆ ಇಲ್ಲಿಯೂ ಸಹ ತರಹೇವಾರಿ ಸ್ಟಾಲ್ಗಳು ಇದ್ದವಾದರೂ ವಿದ್ಯಾರ್ಥಿಗಳೇ ತಾವು ಬೆಳೆದ ಹಣ್ಣು, ತರಕಾರಿ ತಂದು ಮಾರಾಟಕ್ಕಿಟ್ಟಿದ್ದು ವಿಶೇಷವಾಗಿತ್ತು. ಅದರಲ್ಲೂ ತಮ್ಮ ಮರದ ಬೆಲ್ಲವತ್ತೆ ಹಣ್ಣು ತಂದು ಜ್ಯೂಸ್ ಮಾಡಿ ಮಾರಿದ್ದು, ತಾವೇ ಬೆಳೆದ ಮೋಸಂಬೆಗೆ ಉಪ್ಪುಖಾರ ಹಾಕಿ ಕೊಡುತ್ತಿದದ್ದು, ತಮ್ಮ ಮನೆಯ ಮೊಸರನ್ನು ಮಜ್ಜಿಗೆ ಮಾಡಿ, ನಿಂಬೆ ಹಣ್ಣನ್ನು ಜ್ಯೂಸ್ ಮಾಡಿ ವಿತರಿಸುತ್ತಿದ್ದು ಗಮನ ಸೆಳೆಯಿತು. ಉಳಿದಂತೆ ಸೊಪ್ಪು, ತರಕಾರಿ, ಎಳನೀರು, ಬೀನ್ಸ್, ಹಣ್ಣು ತಂದು ಮಾರಾಟ ಮಾಡಿದ್ರು. ಸಂತೆಯಲ್ಲಿರುವಂತೆ ಇಲ್ಲಿಯೂ ಸಹ ಚುರುಮುರಿ, ಪಾನಿಪೂರಿ, ಗೋಲ್ಗಪ್ಪ, ನಿಪ್ಪಟ್ಟು ಮಸಾಲ, ಫ್ರೂಟ್ ಸಾಲಡ್, ಖಾರಮಂಡಕ್ಕಿ ಹೀಗೆ ಕುರಕಲು ತಿಂಡಿಯ ಸ್ಟಾಲ್ಗಳನ್ನೂ ಸಹ ಹಾಕಿ ವ್ಯಾಪಾರಿಗಳನ್ನು ಮೀರಿಸುವಂತೆ ಕೂಗಿ ತಮ್ಮದೇ ಆದ ಶೈಲಿಯಲ್ಲಿ ವ್ಯಾಪಾರ ಮಾಡಿದರು. 600 ರೂ. ಖರ್ಚ್ ಮಾಡಿ ಗೋಲ್ಗಪ್ಪ ಸ್ಟಾಲ್ ಹಾಕಿದ್ದೆ 1600 ರೂ ವ್ಯಾಪಾರ ಆಗಿ ಬರೋಬ್ಬರಿ 1 ಸಾವಿರ ಲಾಭ ಪಡೆದಿದ್ದೇನೆ, ಮನೆಯ ಬೆಲ್ಲವತ್ತೆ ಹಣ್ಣು ತಂದು ಒಂದು ಕೆಜಿ ಬೆಲ್ಲ, ಸ್ವಲ್ಪ ಏಲಕ್ಕಿ ಹಾಕಿ ಜ್ಯೂಸ್ ಮಾಡಿ ಮಾರಿ 100 ರೂ. ಲಾಭ ಗಳಿಸಿದ್ದೇನೆ ಹೀಗೆ ಅನೇಕ ವಿದ್ಯಾರ್ಥಿಗಳು ಸಂಭ್ರಮದಿಂದ ದುಡ್ಡು ಎಣಿಸುತ್ತ ಹೇಳಿಕೊಂಡರು.



ಕೆಪಿಎಸ್ ಶಾಲೆಯ ಉಪಪ್ರಾಚಾರ್ಯೆ ಜ್ಯೋತಿ ಅವರು ಮಾತನಾಡಿ ಆಹಾರ ಹೇಗೆ ತಯಾರು ಮಾಡಬೇಕು, ಅದರಲ್ಲಿರುವ ಪೌಷ್ಟಿಕಾಂಶಗಳ ಬಗ್ಗೆ ತಿಳಿವಳಿಕೆ, ಶುಚಿ–ರುಚಿಯ ಬಗ್ಗೆ ತಿಳಿಸುವುದು ಕಾರ್ಯಕ್ರಮದ ಉದ್ದೇಶ, ಮಕ್ಕಳಿಗೆ ಪಠ್ಯ ಚಟುವಟಿಕೆಗಳ ಜೊತೆಗೆ ಆರ್ಥಿಕ ವ್ಯವಹಾರದ ಬಗ್ಗೆ ತಿಳಿಸುವುದರಿಂದ ಅವರ ಬೌದ್ಧಿಕ ಜ್ಞಾನ ವಿಕಾಸ ಮತ್ತು ವ್ಯಕ್ತಿತ್ವ ರೂಪುಗೊಳ್ಳುತ್ತದೆಂದು ಮಕ್ಕಳ ಸಂತೆ ಏರ್ಪಡಿಸಲಾಗಿತ್ತು. ಮಕ್ಕಳು ತುಂಬ ಉತ್ಸಾಹದಿಂದ ಮನೆಯಿಂದಲೇ ತಿಂಡಿ ತಿನಿಸುಗಳನ್ನು ಮಾಡಿಕೊಂಡು ಬಂದು ಮಾರಾಟ ಮಾಡಿ ಲೆಕ್ಕಾಚಾರ ಪ್ರವೃತ್ತಿ ಹಾಗೂ ಗ್ರಾಹಕರೊಂದಿಗೆ ವರ್ತಿಸುವ ವ್ಯವಹಾರ ಜ್ಞಾನ ಅರಿಯುವ ಮೂಲಕ ಯಶಸ್ವಿಗೊಳಿಸಿದ್ದಾರೆ ಎಂದರು. ತಾಲೂಕು ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಗವೀರಂಗಯ್ಯ, ಎಸ್ಡಿಎಂಸಿ ಉಪಾಧ್ಯಕ್ಷ ಪ್ರದೀಪ್ ಸದಸ್ಯರುಗಳಾದ ಚನ್ನಕೇಶವ, ರವಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶನೇಶ್ವರಸ್ವಾಮಿ ಪಲ್ಲಕ್ಕಿ ಉತ್ಸವ



**ಎಚ್.ಡಿ.ಕೋಟೆ:** ತಾಲ್ಲೂಕಿನ ಮೊತ್ತ ಗ್ರಾಮದಲ್ಲಿ ಶ್ರೀ ಶನೇಶ್ವರ ಸ್ವಾಮಿಯವರ ಮತ್ತು ಶ್ರೀ ಆದಿತ್ಯ ನವಗ್ರಹ ದೇವಸ್ಥಾನದ ವಾರ್ಷಿಕೋತ್ಸವ ಮತ್ತು ಪಲ್ಲಕ್ಕಿ ಕಾರ್ಯಕ್ರಮ ಶನಿವಾರ ಅದ್ದೂರಿಯಾಗಿ ನೆರವೇರಿತು. ಶನೇಶ್ವರ ಸ್ವಾಮಿ ಮತ್ತು ಆದಿತ್ಯ ನವಗ್ರಹ ದೇವಸ್ಥಾನವನ್ನು ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಉದ್ಘಾಟಿಸಿದ್ದರು. ದೇಗುಲ ನಿರ್ಮಾಣವಾಗಿ ಈಗ5 ವರ್ಷಗಳಾಗಿದ್ದು, ಇದರ ಅಂಗವಾಗಿ ವಾರ್ಷಿಕೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು, ಶನಿವಾರ ಬೆಳಿಗ್ಗೆ 5 ಗಂಟೆಯಿಂದಲೇ ಅನೇಕ ಪೂಜಾ ಕೈಂಕರ್ಯಗಳು ನೆರವೇರಲಿವೆ. ಮಧ್ಯಾಹ್ನ 12 ಗಂಟೆಗೆ ಅನ್ನದಾನ, ಕಳಸದ ಪೂಜೆ, ರಾತ್ರಿ ಶನೇಶ್ವರ ಸ್ವಾಮಿಯ ಪಲ್ಲಕ್ಕಿ ಉತ್ಸವ ಹಾಗೂ ವಿವಿಧ ವಿಶೇಷ ಕಾರ್ಯಕ್ರಮಗಳು ಬಹಳ ಭಕ್ತಿಪೂರ್ವಕವಾಗಿ ಹಾಗು ವಿಜೃಂಭಣೆಯಿಂದ ನೆರವೇರಿತು.

ಕಾರ್ಯಕ್ರಮದಲ್ಲಿ ಪಟಾಕಿ ಸಿಡಿಸಿ, ಕಂಸಾಳೆ ನೃತ್ಯ, ವೀರಗಾಸೆ, ಪೂಜಾ ಕುಣಿತ, ನರ್ತಕಿಯರ ಕುಣಿತ ಸೇರಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಗ್ರಾಮದ ರಾಜಬೀದಿಗಳಲ್ಲಿ ಬೆಳ್ಳಿ ರಥದಲ್ಲಿ ವಿರಾಜಮಾನರಾಜ ಶ್ರೀ ಶನೇಶ್ವರ ಸ್ವಾಮಿಯನ್ನು ಮೆರವಣಿಗೆ ಮಾಡಲಾಯಿತು, ಪಲ್ಲಕ್ಕಿ ಉತ್ಸವದಲ್ಲಿ ಮೊತ್ತ ಗ್ರಾಮಸ್ಥರು ಸೇರಿ ಅಕ್ಕಪಕ್ಕದ ಸಾವಿರಾರು ಭಕ್ತರು ಭಾಗವಹಿಸಿ ಪೂಜೆ ಸಲ್ಲಿಸಿ, ಶನೇಶ್ವರ ಸ್ವಾಮಿಯನ್ನು ಕಣ್ತುಂಬಿಕೊಂಡು ಪುನೀತರಾದರು.

# ಮ.ಬೆಟ್ಟ ಪ್ಲಾಸ್ಟಿಕ್ ಮುಕ್ತವಲಯ; ಪ್ರಾಧಿಕಾರ ದಿಟ್ಟ ನಿರ್ಧಾರ

**ಹನೂರು:** ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಪ್ಲಾಸ್ಟಿಕ್ ಮುಕ್ತವಲಯವನ್ನಾಗಿ ಮಾಡಲು ಪ್ರಾಧಿಕಾರ ದಿಟ್ಟ ನಿರ್ಧಾರ ತೆಗೆದುಕೊಂಡಿರುವುದು ಶ್ಲಾಘನೀಯ ವಿಚಾರ ಎಂದು ಶಾಸಕ ಎಂಆರ್ ಮಂಜುನಾಥ್ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಲೂಕಿನ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಪ್ರಾಧಿಕಾರ ವ್ಯಾಪ್ತಿಯ ತಾಳು ಬೆಟ್ಟದಲ್ಲಿ ನಿರ್ಮಾಣ ಮಾಡಿರುವ ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಂದಿನ ಪೀಳಿಗೆಗಾಗಿ ಪರಿಸರ ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹೊಸ ಹೆಜ್ಜೆ ಇಡುವ ಮೂಲಕ ಪ್ಲಾಸ್ಟಿಕ್ ಪದಾರ್ಥಗಳಿಗೆ ನಾಂದಿ ಹಾಡಲಾಗುತ್ತಿದೆ. ಶ್ರೀ ಕ್ಷೇತ್ರದಲ್ಲಿ ಪ್ಲಾಸ್ಟಿಕ್ ಮುಕ್ತ ವಲಯವನ್ನಾಗಿ ಮಾಡಲು ಪ್ರತಿಯೊಬ್ಬರು ಸಹಕಾರ ನೀಡಬೇಕು. ತಾಳುಬೆಟ್ಟದಲ್ಲಿ ಒಮ್ಮೆ ಬಳಸಿದ ನಂತರ ಮತ್ತೊಮ್ಮೆ ಮರುಬಳಕೆ ಮಾಡುವಂತಹ ಗಾಜಿನ ಬಾಟಲ್ ಮೂಲಕ ಭಕ್ತಾದಿಗಳಿಗೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಶ್ರೀ ಕ್ಷೇತ್ರದಲ್ಲಿ ಒಮ್ಮೆಲೇ ಪ್ಲಾಸ್ಟಿಕ್ ಮುಕ್ತವನ್ನಾಗಿ ಮಾಡಲು ತೊಂದರೆ ಆಗುತ್ತದೆ. ಈ ನಿಟ್ಟಿನಲ್ಲಿ ಹಂತ ಹಂತವಾಗಿ ಪ್ಲಾಸ್ಟಿಕ್ ಬಾಟಲ್ ಗಳಲ್ಲಿ ತಯಾರು



ಮಾಡುವ ಕುಡಿಯುವ ನೀರು ಸೇರಿದಂತೆ ಅಗತ್ಯ ಪದಾರ್ಥಗಳಿಗೆ ಪರ್ಯಾಯ ವ್ಯವಸ್ಥೆ ಮಾಡಿ ಸಂಪೂರ್ಣವಾಗಿ ಪ್ಲಾಸ್ಟಿಕ್ ನಿಷೇಧ ಮಾಡಲಾಗುವುದು ಎಂದು ತಿಳಿಸಿದರು.

ಶ್ರೀ ಕ್ಷೇತ್ರ ಮಲೆ ಮಾದೇಶ್ವರ ಬೆಟ್ಟವನ್ನು ಪ್ಲಾಸ್ಟಿಕ್ ಮುಕ್ತ ವಲಯವನ್ನಾಗಿ ಈಗಾಗಲೇ ಘೋಷಣೆ ಮಾಡಲಾಗಿದೆ. ಆದರೂ ಪ್ಲಾಸ್ಟಿಕ್ ಮುಕ್ತವಾಗಿಲ್ಲ. ಈ ನಿಟ್ಟಿನಲ್ಲಿ ಮೈಕಾಪ್ಸ್ ಹಾಗೂ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಹಸಿರು ನಾಳೆ ಮಹದೇಶ್ವರ ಬೆಟ್ಟ ನೂತನ ಯೋಜನೆಯಡಿ ಮಲೆ ಮಹದೇಶ್ವರ ಬೆಟ್ಟವನ್ನು ಹಸಿರುಮಯ ವಾಗಿಸುವ ಖಾತರಿಯೊಂದಿಗೆ ಅಗತ್ಯವಿರುವ ಸಮಗ್ರ ತ್ಯಾಜ್ಯ ನಿರ್ವಹಣೆ ಯೋಜನೆ, ತ್ಯಾಜ್ಯ ಸಂಗ್ರಹ ವ್ಯವಸ್ಥೆಯನ್ನು ಸುಸ್ಥಿರ ಗೊಳಿಸುವುದು, ತ್ಯಾಜ್ಯ ಸಂಗ್ರಹಣೆಯಿಂದ ಬರುವ ಆದಾಯವನ್ನು ಸ್ಥಳೀಯವಾಗಿ ನೀಡುವುದು ಸೇರಿದಂತೆ ವೈಜ್ಞಾನಿಕವಾಗಿ ತ್ಯಾಜ್ಯ ನಿರ್ವಹಣೆ ಮಾಡುವ ಉದ್ದೇಶವು ಹೊಂದಿದೆ. ಇದೇ ನಿಟ್ಟಿನಲ್ಲಿ ಪ್ಲಾಸ್ಟಿಕ್ ಬಾಟಲ್ ನಿಷೇಧ ಮಾಡಿರುವ ಹಿನ್ನೆಲೆ 10 ಲಕ್ಷ ವೆಚ್ಚದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ತೆರೆದು, ಒಂದು ಲೀಟರಿನ ಗಾಜಿನ ಬಾಟಲ್ ಗಳಲ್ಲಿ 50 ರೂಪಾಯಿಗೆ ಭಕ್ತಾದಿಗಳಿಗೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ನೀರು ಕುಡಿದ ನಂತರ ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ಯಾವುದೇ ಮಳಿಗೆಗಳಿಗೆ ವಾಪಸ್ ಬಾಟಲ್ ಕೊಟ್ಟರು 30 ರೂಪಾಯಿ ನೀಡಲಿದ್ದಾರೆ. ಕುಡಿಯುವ ನೀರಿಗೆ ಕೇವಲ ರೂ. 20 ರೂ ಯಷ್ಟೇ ಪಡೆಯುತ್ತಿದ್ದೇವೆ. ಈ ಯೋಜನೆಯನ್ನು ಭಕ್ತರು ಸದ್ಬಳಕೆ ಮಾಡಿಕೊಳ್ಳುವ ಮೂಲಕ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಇವೇಳೆ ಮಲೆ ಮಹದೇಶ್ವರ ವಲಯದ ಉಪ ವಲಯ ಅರಣ್ಯಾಧಿಕಾರಿ ಶಿವರಾಜ್, ಪ್ರಾಧಿಕಾರದ ದ್ವಿತೀಯ ದರ್ಜೆ ಸಹಾಯಕ ಮಹೇಶ್, ಮುಖಂಡರಾದ ವಿಜಯಕುಮಾರ್, ಮಂಜೇಶ್ ಸೇರಿದಂತೆ ಪ್ರಾಧಿಕಾರದ ಸಿಬ್ಬಂದಿಗಳು ಹಾಜರಿದ್ದರು.

ಸಂಜೆ ಮುಗಿಲು
ಸೋಮವಾರ
24.2.2025



# ಜಮೀನಿನಲ್ಲಿ ಸ್ಫೋಟಕ ಸಿಡಿದು ಜಾನುವಾರುಗಳ ಸಾವು

**ಹನೂರು:** ಜಮೀನುಗಳಲ್ಲಿ ಮೇವು ಮೇಯಲು ತೆರಳಿದ್ದ ವೇಳೆ ಸ್ಫೋಟಕ ಸಿಡಿದು ಹಲವಾರು ಜಾನುವಾರುಗಳ ಮುಖ ಸಿಡಿದು ಮೃತಪಡುತ್ತಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ. ಟಿ ಕವಿತಾ ವಿಶೇಷ ತಂಡ ರಚನೆ ಮಾಡಿ ತಪ್ಪಿತಸ್ಥರ ಬಂಧನಕ್ಕೆ ಕ್ರಮ ಕೈಗೊಂಡಿದ್ದಾರೆ.

ಹನೂರು ತಾಲೂಕಿನ ಕೌದಳ್ಳಿ, ಭದ್ರಯ್ಯನಹಳ್ಳಿ , ಹನೂರು ಪಟ್ಟಣ ವ್ಯಾಪ್ತಿಯ 7 ನೇ ಹಾಗೂ 12ನೇ ವಾರ್ಡ್ ವ್ಯಾಪ್ತಿಯ ರೈತರುಗಳ ಜಾನುವಾರುಗಳು ಮೇವು ಮೇಯಲು ತೆರಳಿದ್ದಾಗ ಕಿಡಿಗೇಡಿಗಳು ಮೇವಿನ ಮಧ್ಯೆ ಇಟ್ಟಿದ್ದ ನಾಡ ಬಾಂಬ್ ಗಳು ಕಚ್ಚುತ್ತಿದ್ದಂತೆ ಸ್ಫೋಟವಾಗಿ ಹಸು ಹಾಗೂ ಇನ್ನಿತರ ಜಾನುವಾರುಗಳ ಬಾಯಿ ಛಿದ್ರವಾಗಿ ನರಳುತ್ತಾ ಮೃತಪಡುತ್ತಿದ್ದವು.

ಈ ಸಂಬಂಧ ಮಾಧ್ಯಮಗಳಲ್ಲಿ ವರದಿ ಪ್ರಕಟವಾಗಿತ್ತು. ನೊಂದ ರೈತರುಗಳು ಮೃತಪಟ್ಟಿರುವ ಜಾನುವಾರುಗಳಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸಿ ಕಿಡಿಗೇಡಿಗಳನ್ನು ಪತ್ತೆ ಹಚ್ಚಿ ಶಿಕ್ಷೆ ಕೊಡಿಸುವಂತೆ ಒತ್ತಾಯಿಸಿದ್ದರು.

ಜಾನುವಾರುಗಳು ಹನೂರು ತಾಲೂಕು ವ್ಯಾಪ್ತಿಯಲ್ಲಿಯೇ ಅತೀ ಹೆಚ್ಚು ಮೃತಪಡುತ್ತಿರುವುದರಿಂದ ಕಿಡಿಗೇಡಿಗಳನ್ನು



ಪತ್ತೆ ಹಚ್ಚಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಬಿ ಟಿ ಕವಿತಾ ಹಾಗೂ ಕೊಳ್ಳೇಗಾಲ ಉಪ ವಿಭಾಗದ ಡಿವೈಎಸ್ಪಿ ಧರ್ಮೇಂದ್ರ, ನೇತೃತ್ವದಲ್ಲಿ ಶುಕ್ರವಾರ ಜಿಲ್ಲಾ ಬಾಂಬ್ ನಿಷ್ಕ್ರಿಯದಳ ಹಾಗೂ ಸಿಬ್ಬಂದಿಗಳು ಭದ್ರಯ್ಯನ ಹಳ್ಳಿ ಗ್ರಾಮದಲ್ಲಿ ಜಾನುವಾರುಗಳು ಸ್ಫೋಟಗೊಂಡು ಗಾಯಗೊಂಡಿದ್ದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಘಟನಾ ಸ್ಥಳದಲ್ಲಿ ಯಾವುದೇ ಸಿಡಿಮದ್ದುಗಳು ಕಂಡು ಬಂದಿಲ್ಲ ಎಂದು ತಿಳಿದುಬಂದಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಬಿ ಟಿ ಕವಿತಾ ರವರು ಮಾಧ್ಯಮದವರೊಂದಿಗೆ ಮಾತನಾಡಿ ಹನೂರು ತಾಲೂಕು ವ್ಯಾಪ್ತಿಯಲ್ಲಿ ಕಳೆದ ಒಂದು ತಿಂಗಳ ಅವಧಿಯಲ್ಲಿ ಸಿಡಿಮದ್ದುಗಳು ಸಿಡಿದು ಜಾನುವಾರುಗಳು ಮೃತಪಡುತ್ತಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ,ನಾಡ ಬಾಂಬ್ ಪತ್ತೆ ಮಾಡಲು ವಿಶೇಷ ಶ್ವಾನದಳ ಕರೆತರಲಾಗಿತ್ತು. ಆದರೆ ಯಾವುದೇ ಸಿಡಿ ಮದ್ದುಗಳು ಪತ್ತೆಯಾಗಿಲ್ಲ, ಗ್ರಾಮಸ್ಥರು ಮೊದಲ ಪ್ರಕರಣವಾದಾಗ ಗಮನಕ್ಕೆ ತಂದಿದ್ದರೆ ಇದನ್ನು ತಡೆಗಟ್ಟಬಹುದಾಗಿತ್ತು. ಆದರೂ ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಮರುಕಳಿಸದಂತೆ ಸೂಕ್ತ ಕ್ರಮ ವಹಿಸಲಾಗುವುದು. ಗ್ರಾಮಸ್ಥರು ಸಹ ತಮ್ಮ ಸುತ್ತಮುತ್ತಲಿನ ಪರಿಸರಗಳಲ್ಲಿ ಇಂತಹ ಘಟನೆಗಳು ಕಂಡು ಬಂದರೆ ನೇರವಾಗಿ ಮಾಹಿತಿ ನೀಡಿದರೇ ಅಂತಹವರ ಹೆಸರನ್ನು ಗೌಪ್ಯವಾಗಿ ಇಡಲಾಗುವುದು. ಸಾರ್ವಜನಿಕರು ಸಹಕಾರ ನೀಡಿದರೆ ಕಿಡಿ ಗೇಡಿಗಳನ್ನು ಆದಷ್ಟು ಬೇಗ ಪತ್ತೆ ಹಚ್ಚಬಹುದು ಎಂದು ತಿಳಿಸಿದರು.

ಕಾರ್ಯಾಚರಣೆ ವೇಳೆ ರಾಮಾಪುರ ಪ್ರಭಾರ ಇನ್ಸ್ಪೆಕ್ಟರ್ ಶೇಷಾದ್ರಿ, ಸೇರಿದಂತೆ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

## ಶಿವರಾತ್ರಿ ಹಬ್ಬದ ಪ್ರಯುಕ್ತ ವಿಶೇಷ ಪೂಜೆ

**ಮಂಡ್ಯ:** ತಾಲೂಕು ಹೊಳಲು ಗ್ರಾಮದ ಎಲ್ಲಾ ದೇವಸ್ಥಾನಗಳಲ್ಲಿ ಶಿವರಾತ್ರಿ ಹಬ್ಬದ ಪ್ರಯುಕ್ತ ವಿಶೇಷ ಪೂಜೆ ಹಾಗೂ ಅನ್ನ ಸಂತರ್ಪಣೆಕಾರ್ಯಕ್ರಮ ಏರ್ಪಡಿಸಲಾಗಿದೆ. ಹೊಳಲು ಗ್ರಾಮದ ಶ್ರೀ ದೊಡ್ಡಯ್ಯ ಸ್ವಾಮಿ ದೇವಸ್ಥಾನದಲ್ಲಿ ದೇವರಿಗೆ ವಿಶೇಷ ಹೂವಿನ ಅಲಂಕಾರ ಹಾಗೂ ರಾತ್ರಿ 7.30 ಕ್ಕೆ ಅನ್ನ ಸಂತರ್ಪಣೆ. ಶ್ರೀ ತಾಂಡವೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಶ್ರೀ ತಾಂಡವೇಶ್ವರ ಸ್ವಾಮಿಯ ಮೂರ್ತಿಗೆ ಬೆಳಗ್ಗೆಯಿಂದಲೇ ವಿಶೇಷವಾಗಿ ಕ್ಷೀರಾಭಿಷೇಕ, ರುದ್ರಾಭಿಷೇಕ, ಕುಂಕುಮಾರ್ಚನೆ ಹಾಗೂ ಮಹಾಮಂಗಳಾರತಿ. ಸಂಜೆ 7:00 ಗಂಟೆಗೆ ತಾಂಡವಶ್ವರ ದೇವಾಲಯದ ಅಭಿವೃದ್ಧಿ ಸಮಿತಿ ವತಿಯಿಂದ ಮಂಡ್ಯದ ಮಹದೇಶ್ವರ ಚಿಲ್ಡ್ರನ್ ಸ್ಕೂಲ್ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ಭರತನಾಟ್ಯ ಹಾಗೂ ಯೋಗ ಕಾರ್ಯಕ್ರಮನು ಹಮ್ಮಿಕೊಳ್ಳಲಾಗಿದೆ. ರಾತ್ರಿ ದೇವಾಲಯ ವತಿಯಿಂದ ಅನ್ನಸಂತರ್ಪಣೆ ಕಾರ್ಯಕ್ರಮ. ಶ್ರೀ ಸಿದ್ದಪ್ಪಾಜಿ ದೇವಸ್ಥಾನದಲ್ಲಿ ದೇವರಿಗೆ ವಿಶೇಷ ಪೂಜೆ ಹಾಗೂ ಶ್ರೀ ಬಲಮುರಿ ಗಣಪತಿ ದೇವಸ್ಥಾನದಿಂದ ಹೂವು ಹೊಂಬಾಳೆ ಬಾಯಿ ಬೀಗ , ಮೆರವಣಿಗೆ ಮುಖಾಂತರ ಶ್ರೀ ಸಿದ್ದಪ್ಪಾಜಿ ದೇವಸ್ಥಾನಕ್ಕೆ ಪ್ರಮುಖ ಬೀದಿಗಳಲ್ಲಿ ತಲುಪುವುದು ನಂತರ ಬೆಳಗ್ಗೆ 7:30ಕ್ಕೆ ಕೊಂಡೋತ್ಸವ ಅನ್ನ ಸಂತರ್ಪಣೆ ಕಾರ್ಯಕ್ರಮ: ಶ್ರೀ ಶನೇಶ್ವರ ದೇವಸ್ಥಾನದಲ್ಲಿ ದೇವರಿಗೆ ವಿಶ್ಲೇಷ ಹೂವಿನ ಅಲಂಕಾರ ಹಾಗೂ ಗುರುವಾರ ಮಧ್ಯಾಹ್ನ 12:30ಗೆ ಅನ್ನ ಸಂತರ್ಪಣೆ ಕಾರ್ಯಕ್ರಮ. ಶ್ರೀ ಮುನೇಶ್ವರ ಸ್ವಾಮಿ, ದೊಡ್ಡಮ್ಮತಾಯಿ ,ಚಿಕ್ಕಮ್ಮತಾಯಿ, ಪಾರ್ವತಿ ದೇವಿ, ದೇವಸ್ಥಾನದಲ್ಲಿ ದೇವರಿಗೆ ವಿಶೇಷ ಪೂಜೆ ಹಾಗೂ ಪ್ರಸಾದ ವಿನಿಯೋಗ. ಸಾವಿರಾರು ವರ್ಷದ ಹಳೆಯ ದೇವಸ್ಥಾನವಾದ ಶ್ರೀ ಸಪ್ತ ಮಾತೃಕೆಯ ದೇವಸ್ಥಾನ (ಹೊಳಲಮ್ಮ ದೇವಿ) ದಲ್ಲಿ ವಿಶೇಷವಾಗಿ ಅಮ್ಮನಿಗೆ ಹೂವಿನ ಅಲಂಕಾರ ಮಹಾಮಂಗಳಾರತಿ ನಂತರ ಅನ್ನಸಂತರ್ಪಣೆ ಕಾರ್ಯಕ್ರಮ. ಆದ್ದರಿಂದ ದೇವಸ್ಥಾನಕ್ಕೆ ಧನ, ಧಾನ್ಯ, ಧನಸಹಾಯ ಮಾಡುವವರು ಆಯಾಯ ದೇವಸ್ಥಾನಗಳಿಗೆ ತಲುಪಿಸಬೇಕು. ಎಲ್ಲಾ ದೇವಸ್ಥಾನದ ಸೇವಾ ಸಮಿತಿಯ ಸದಸ್ಯರುಗಳು ಪದಾಧಿಕಾರಿಗಳು, ಹೊಳಲು ಗಾಮದ ಮುಖಂಡರುಗಳು, ಹಾಗೂ ಶ್ರೀ ತಾಂಡವೇಶ್ವರ ದೇವಸ್ಥಾನದ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಎಚ್.ಎಸ್. ಮೋಹನ್ ಕುಮಾರ್ ರವರು ಪ್ರಕಟಣೆ ತಿಳಿಸಿದ್ದಾರೆ.

## ಸೈಕಲಿಂಗ್ ಮ್ಯಾರಥಾನ್

**ಚಾಮರಾಜನಗರ :** ನಗರದಲ್ಲಿ ಚಾಲೆಂಜರ್ಸ್ ಸ್ಕೇಟಿಂಗ್ ಅಕಾಡೆಮಿ ವತಿಯಿಂದ ಪ್ರಥಮ ಬಾರಿಗೆ ಸೈಕಲಿಂಗ್ ಮ್ಯಾರಥಾನ್ ನಡೆಯಿತು. ಚಾಮರಾಜನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಸೈಕಲಿಂಗ್ ಮ್ಯಾರಥಾನ್ಗೆ ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಕರ್ (ಮುನ್ನಾ) ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ನಗರದಲ್ಲಿ ಮೊಟ್ಟಮೊದಲ ಬಾರಿಗೆ ಸೈಕಲಿಂಗ್ ಮ್ಯಾರಥಾನ್ ಹಮ್ಮಿಕೊಂಡಿರುವುದು ತುಂಬಾ ಸಂತಸದ ವಿಷಯ. ಕ್ರೀಡೆಯಲ್ಲಿ ಸೋಲು ಗೆಲುವು ಸಹಜ. ಈ ಕ್ರೀಡೆ ಯಶಸ್ವಿಯಾಗಿಲಿ ಎಂದು ತಿಳಿಸಿದರು. ಶ್ರೀ ಚಾಮರಾಜೇಶ್ವರ ದೇವ ಸ್ಥಾನದದಿಂದ ಹೊರಟ ಸೈಕಲಿಂಗ್ ಮ್ಯಾರಥಾನ್ ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿ ರಸ್ತೆ, ಡಿವಿಯೇಷನ್ ರಸ್ತೆ, ಸುಲ್ತಾನ್ ಷರೀಫ್ ವೃತ್ತ, ಗುಂಡ್ಲುಪೇಟೆ ವೃತ್ತ, ಎಲ್ಐಸಿ ಆಫೀಸ್ ರಸ್ತೆಗಳಲ್ಲಿ ನಡೆಯಿತು. ಕ್ರೀಡಾಪಟುಗಳು ಉತ್ಸಾಹದಿಂದ ಸೈಕಲಿಂಗ್ ಮ್ಯಾರಥಾನ್ನಲ್ಲಿ ಪಾಲ್ಗೊಂಡರು. ನಂತರ ಮ್ಯಾರಥಾನ್ನಲ್ಲಿ ಭಾಗವಹಿಸಿದ್ದ ಕ್ರೀಡಾಪಟುಗಳಿಗೆ ಮೆಡಲ್ ಹಾಗೂ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ನೆಟ್ಬಾಲ್ ಅಸೋಸಿಯೇಷನ್ ಅಧ್ಯಕ್ಷ ವಿ.ಶ್ರೀನಿವಾಸಪ್ರಸಾದ್ ಸೇರಿದಂತೆ ಇತರರಿದ್ದರು.



## ರೇಷ್ಮೆ ಬೆಳೆಗಾರರ, ರೈತರ ಸೇವಾ ಸಹಕಾರ ಸಂಘದ ಚುನಾವಣೆ

**ಆನೇಕಲ್ :** ಸರ್ಜಾಪುರದ ರೇಷ್ಮೆ ಬೆಳೆಗಾರರ ಹಾಗೂ ರೈತರ ಸೇವಾ ಸಹಕಾರ ಸಂಘದ ಐದು ವಷಗಳ ಅವಧಿಯ ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಕ್ಕೆ ಚುನಾವಣೆ ಪ್ರಕ್ರಿಯೆ ನಡೆದಿದ್ದು ಅದರಲ್ಲಿ ಈಗಾಗಲೇ 10 ಸ್ಥಾನಕ್ಕೆ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಗೊಂಡಿದ್ದು ಇನ್ನು ಉಳಿದ 2 ಸ್ಥಾನಕ್ಕೆ ಫೆಬ್ರವರಿ 9 ರಂದು ಚುನಾವಣೆ ನಡೆದಿದ್ದು. ಇಂದು 2 ಸ್ಥಾನಕ್ಕೆ ನಡೆದ ಚುನಾವಣೆಯ ಫಲಿತಾಂಶ ಹೊರ ಬಂದಿದೆ. ಪರಿಶಿಷ್ಟ ಜಾತಿ ಮೀಸಲು ಸ್ಥಾನಕ್ಕೆ ಸ್ಪರ್ಧೆ ಮಾಡಿದ್ದ ಗುರುಸ್ವಾಮಿ. ಸಿ 71 ಮತಗಳನ್ನು ಪಡೆದರೆ ಪ್ರತಿಸ್ಪರ್ಧಿ ಎಸ್.ವಿ ಶ್ವೇತ ರಾಘವೇಂದ್ರ 687 ಮತಗಳನ್ನು ಪಡೆದು ವಿಜೇತರಾದರು ಹಾಗೆಯೇ ಹಿಂದುಳಿದ ಪ್ರವರ್ಗ ಎ ಮೀಸಲು ಸ್ಥಾನಕ್ಕೆ ರಮೇಶ್ ಎಂ.ಜಿ 85 ಮತಗಳನ್ನು ಪಡೆದರೆ ಪ್ರತಿಸ್ಪರ್ಧಿ ವೆಂಕಟೇಶ್ 675 ಮತಗಳನ್ನು ಪಡೆದು ವಿಜೇತರಾದರು. ನಂದಕುಮಾರ್ ಕೆ, ಟಿ.ಪಿಲ್ಲರೆಡ್ಡಿ, ಬ್ರಮರೇಶ್ ಬಿ.ಆರ್, ವಿಶ್ವನಾಥ್ ಕೆ, ಸುಬ್ಬಾರೆಡ್ಡಿ, ಹರೀಶ್ ಬಾಬು ವೈ, ಸಾಮಾನ್ಯ ಕ್ಷೇತ್ರದಿಂದ ಅವಿರೋಧವಾಗಿ ಆಯ್ಕೆಯಾದರೂ. ಪರಿಶಿಷ್ಟ ಪಂಗಡದಿಂದ ಪವನ್ ಕುಮಾರ್, ಹಿಂದುಳಿದ ಪ್ರವರ್ಗ ಬಿ ಸತೀಶ್ ಕುಮಾರ್ ಟಿ.ಸಿ, ಮಹಿಳಾ ಮೀಸಲು ಸ್ಥಾನದಿಂದ ಸುಧಾ ಜಿ ಮತ್ತು ಆಶಾ ಕಿರಣ್ ಅವಿರೋಧವಾಗಿ ವಿಜಯಶಾಲಿಗಳಾಗಿದ್ದಾರೆ. ಒಟ್ಟು 12ಮಂದಿ ನಿರ್ದೇಶಕರಾಗಿ ಚುನಾಯಿತರಾಗಿದ್ದಾರೆ. ಬಿಜೆಪಿ ಪಕ್ಷದ ಮುಖಂಡ ಎಸ್.ವಿ ರಾಘವೇಂದ್ರ ಮಾತನಾಡಿ, ಮಾತನಾಡಿ, ಸಂಘವು ಉತ್ತಮ ಆಡಳಿತಾತ್ಮಕ ಕಾರ್ಯಗಳನ್ನು ಕೈಗೊಂಡು ರಾಜ್ಯದಲ್ಲಿಯೇ ಮಾದರಿ ಸಂಘವಾಗಿ ಬದಲಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ನಮ್ಮ ಅಭ್ಯರ್ಥಿಗಳ ಜಯಕ್ಕೆ ಬೆಂಬಲವನ್ನು ನೀಡಿದ ರೈತಪಿ ಕುಟುಂಬ ವರ್ಗಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ಇನ್ನು ಇದೇ ಸಂದರ್ಭದಲ್ಲಿ ಅತ್ಯಧಿಕ ಮತಗಳ ಅಂತರದಿಂದ ಗೆಲುವನ್ನು ಸಾಧಿಸಿದ ಎಸ್.ವಿ.ಶ್ವೇತ ರಾಘವೇಂದ್ರ ಮತ್ತು ವೆಂಕಟೇಶ್ ರವರಿಗೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಬೃಹತ್ ಗಾತ್ರದ ಹೂವಿನ ಹಾರ ಹಾಕಿ ಸಿಹಿ ಹಂಚಿ ಶುಭ ಕೋರಿದರು. ಬಿಜೆಪಿ ಮುಖಂಡರಾದ ಕೆ.ವಿ.ಶಿವಪ್ಪ, ಬುಲೆಟ್ ಬಾಬು, ಮುರಳಿಕೃಷ್ಣ, ಎಸ್. ಆರ್ ಗೋಪಾಲ್ ರೆಡ್ಡಿ, ಕೆ.ಸಿ ಜಯಪ್ರಕಾಶ್, ಪಂಡಿತನ ಅಗ್ರಹಾರ ಅಶೋಕ್, ಕೆ.ವಿ.ಕೇಶವರೆಡ್ಡಿ, ವಿ.ಶ್ರೀನಿವಾಸ್, ಶಿವಶಂಕರ್, ರಂಜೇಶ್, ಅನಿಲ್ ರೆಡ್ಡಿ ಹಾಗೂ ಮತ್ತಿತ್ತರರು ಹಾಜರಿದ್ದರು.

### ಸರ್ಕಾರ ಬಂದು ಎರಡು ವರ್ಷಗಳಾದರೂ

# ಕಾರ್ಯಕರ್ತರಿಗೆ ಅಧಿಕಾರ ಸಿಕ್ಕಿಲ್ಲ

**ಹನೂರು:** ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಪಕ್ಷದ ಕಾರ್ಯಕರ್ತರೇ ಮುಖ್ಯ, ರಾಜ್ಯದಲ್ಲಿ ನಮ್ಮದೇ ಸರ್ಕಾರ ಬಂದು ಎರಡು ವರ್ಷಗಳಾದರೂ ಕಾರ್ಯಕರ್ತರಿಗೆ ಅಧಿಕಾರ ಸಿಕ್ಕಿಲ್ಲ ಈ ನಿಟ್ಟಿನಲ್ಲಿ ಉಪಮುಖ್ಯಮಂತ್ರಿಗಳು ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿಕೆ ಶಿವಕುಮಾರ್ ಅವರು ಕಾರ್ಯಕರ್ತರಿಗೆ ಅಧಿಕಾರ ನೀಡಬೇಕು ಎಂದು ಸಂಸದ ಸುನಿಲ್ ಬೋಸ್ ತಿಳಿಸಿದರು.

ಹನೂರು ಪಟ್ಟಣದ ಡಾ. ಬಿ ಆರ್ ಅಂಬೇಡ್ಕರ್ ಭವನದಲ್ಲಿ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯಾವುದೇ ಒಂದು ಪಕ್ಷ ಸದೃಢವಾಗಬೇಕಾದರೆ ಅದಕ್ಕೆ ಕಾರ್ಯಕರ್ತರ ಪರಿಶ್ರಮ ಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಹೊಸದಾಗಿ ಆಯ್ಕೆಯಾಗಿರುವ ಯುವಕರ ಪಕ್ಷವನ್ನು ಸದೃಢವಾಗಿ ಸಂಘಟನೆ ಮಾಡಿ ಮುಂದಿನ ದಿನಗಳಲ್ಲಿ ತಡೆಯ ಚುನಾವಣೆಗಳಲ್ಲಿ ಅಧಿಕಾರಕ್ಕೆ ತರಲು ಶ್ರಮಿಸಬೇಕು. ನಮ್ಮ ಪಕ್ಷದ ಕಾರ್ಯಕರ್ತರಿಗೆ ನಿಗಮ ಮಂಡಳಿಗಳಲ್ಲಿ ನಿರ್ದೇಶಕರು ಹಾಗೂ ಅವಕಾಶವಿರುವ ಕಡೆ ಸ್ಥಾನಮಾನ ಒದಗಿಸಿಕೊಟ್ಟರೆ ಇನ್ನಷ್ಟು ಹುಮ್ಮಸ್ಸಿನಿಂದ ಪಕ್ಷ ಸಂಘಟನೆ ಮಾಡುತ್ತಾರೆ ಎಂದು ತಿಳಿಸಿದರು.

ಕಳೆದ 2018ರ ಚುನಾವಣೆಯಲ್ಲಿ ನಮ್ಮ ಲೋಕೋಪಯೋಗಿ ಸಚಿವರಾಗಿದ್ದ ಮಹದೇವಪ್ಪನವರು ಟಿ.ನರಸೀಪುರ ಕ್ಷೇತ್ರದಲ್ಲಿ ಸಮಗ್ರ ಅಭಿವೃದ್ಧಿ ಮಾಡಿದರು ಅನಿವಾರ್ಯ ಕಾರಣಗಳಿಂದ ಸೋಲುಂಟಾಯಿತು. ಅದೇ ರೀತಿ ಕಳೆದ 15 ವರ್ಷಗಳಿಂದ ಶಾಸಕರಾಗಿದ್ದ ಆರ್ ನರೇಂದ್ರ ರವರು ಕ್ಷೇತ್ರದಲ್ಲಿ ಸಾವಿರಾರು ಕೋಟಿ ಅನುದಾನ ತಂದು ಅಭಿವೃದ್ಧಿ ಮಾಡಿದ್ದಾರೆ. ಆದರೆ ನಮ್ಮಲ್ಲಿನ ಕಾರ್ಯಕರ್ತರ ವೈಮನಸ್ಸು ಹಾಗೂ ಕೆಲವು ಸಣ್ಣಪುಟ್ಟ ವ್ಯತ್ಯಾಸಗಳಿಂದ ಸೋಲುಂಟಾಗಿದೆ. ಪ್ರಸ್ತುತವಾಗಿ ಹನೂರು ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷದ ಕಾರ್ಯಕರ್ತರು ಮುಖಂಡರುಗಳು ಹುಮ್ಮಸ್ಸು ನೋಡಿದರೆ ಈಗ ಚುನಾವಣೆಯಾದರೂ ಆರ್ ನರೇಂದ್ರ ಅಣ್ಣನವರು ಹೆಚ್ಚಿನ ಬಹುಮತಗಳಿಂದ ಜಯಗಳಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನೀರಾವರಿ ಯೋಜನೆಗಳಿಗೆ 35,000 ಕೋಟಿ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದೇನೆ ಅವರು ಅಂತಹ ಹಂತವಾಗಿ ಅನುದಾನ ನೀಡುವುದಾಗಿ



ಭರವಸೆ ನೀಡಿದ್ದಾರೆ ಈ ನಿಟ್ಟಿನಲ್ಲಿ ಹನೂರು ವಿಧಾನಸಭಾ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಕೊಡಿಸಲಾಗುವುದು ಎಂದರು.

ಮಾಜಿ ಶಾಸಕ ಆರ್ ನರೇಂದ್ರ, ಮಾತನಾಡಿ ರಾಜ್ಯದ್ಯಂತ ಪಕ್ಷ ಸಂಘಟನೆ ಮಾಡುವ ದೃಷ್ಟಿಯಿಂದ ಉಪಮುಖ್ಯಮಂತ್ರಿಗಳು ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿಕೆ ಶಿವಕುಮಾರ್ ರವರು ಎಲ್ಲಾ ಸಮುದಾಯದವರಿಗೂ ಅಧಿಕಾರ ನೀಡಿ ಪಕ್ಷ ಸಂಘಟನೆಗೆ ಒತ್ತು ನೀಡಿದ್ದಾರೆ. ಈ ನಿಟ್ಟಿನಲ್ಲಿ ಹನೂರು ವಿಧಾನಸಭಾ ಕ್ಷೇತ್ರದ ಅಲ್ಪಸಂಖ್ಯಾತ ಘಟಕ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಕ್ಕೆ ಅಧ್ಯಕ್ಷ, ಉಪಾಧ್ಯಕ್ಷರ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ನೂತನ ಪದಾಧಿಕಾರಿಗಳು ಪಕ್ಷ ಸಂಘಟನೆಗೆ ಒತ್ತು ನೀಡಿ ಪಕ್ಷವನ್ನು ಅಧಿಕಾರಕ್ಕೆ ತರಲು ಹಗಲಿರುಳು ಶ್ರಮಿಸುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಡ ಅಧ್ಯಕ್ಷ ಮರಿಸ್ವಾಮಿ, ಕೆಪಿಸಿಸಿ ರಾಜ್ಯ ಉಪಾಧ್ಯಕ್ಷರಾದ ನಂಜುಂಡಸ್ವಾಮಿ

ಹನೂರು ವಿಧಾನಸಭಾ ಕ್ಷೇತ್ರದ ಕ ಉಸ್ತುವಾರಿಗಳಾದ ಮಿಲ್ಲನ್ ಧರ್ಮ ಸೇನಾ, ಅಲ್ಪಸಂಖ್ಯಾತರ ಘಟಕದ ಅದ್ಯಕ್ಷ ಅಬ್ದುಲ್ ಷರೀಫ್, ಪ್ರಧಾನ ಕಾರ್ಯದರ್ಶಿ ಮಹಮದ್ ಶಮ್ಮಿಉಲ್ಲಾ, ಚಾಮುಲ್ ನಿರ್ದೇಶಕರಾದ ಶಾಹುಲ್ ಅಹಮದ್ ಪಪಂ ಸದಸ್ಯ ಗಿರೀಶ್, ಹರೀಶ್, ಸಂಪತ್ ಕುಮಾರ್, ಸುದೇಶ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಈಶ್ವರ್, ಮುಕುಂದವರ್ಮ, ಬಗರು ಹುಕುಂ ಸಮಿತಿ ಸದಸ್ಯ ಪಿಜಿ ಮಣಿ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ಬಸವರಾಜು, ಕೊಪ್ಪಳಿ ಮಹದೇವ ನಾಯಕ,ತಾಪಂ ಮಾಜಿ ಸದಸ್ಯರಾದ ಜಾವೇದ್ ಅಹಮದ್, ಮುರಳಿ, ಯುವ ಕಾಂಗ್ರೆಸ್ ಜಿಲ್ಲಾದ್ಯಕ್ಷ ಯೋಗೇಂದ್ರ, ರಾಜ್ಯ ಪ್ರಧಾನ ಕಾರ್ಯದರ್ಶಿ ಶಿವು ಹನೂರು ಕ್ಷೇತ್ರದ ಅದ್ಯಕ್ಷ ಮಾದೇಶ್, ರಮೇಶ್ ಸೇರಿದಂತೆ ಇನ್ನಿತರರು ಹಾಜರಿದ್ದರು.

### ಭೂಮಿ ಪೂಜೆ

**ಶಾಸಕರಾಗಿದ್ದ ಆರ್ ನರೇಂದ್ರ, ರವರು ಹನೂರು ವಿಧಾನಸಭಾ ಕ್ಷೇತ್ರದಲ್ಲಿನ ಕೆಲವು ರಸ್ತೆಗಳು ದುರಸ್ತಿಕೊಂಡಿದ್ದರಿಂದ ಹಿಂದಿನ ಸರ್ಕಾರಕ್ಕೆ ಕ್ರಿಯಾಯೋಜನೆ ಮಾಡಿ ಅನುಮೋದನೆಗೆ ಕಳುಹಿಸಿಕೊಟ್ಟಿದ್ದರು. ಅನುದಾನವು ಬಿಡುಗಡೆಯಾಗುವ ವೇಳೆಗೆ ಚುನಾವಣೆ ಬಂದಿದ್ದರಿಂದ ಭೂಮಿ ಪೂಜೆ ಮಾಡಲು ಸಾಧ್ಯವಾಗಲಿಲ್ಲ ಇದೀಗ 70 ಕೋಟಿ ಅನುದಾನ ಬಂದಿದ್ದು ಪ್ರಮುಖ ರಸ್ತೆಗಳನ್ನು ದುರಸ್ತಿ ಪಡಿಸಿ ಅಭಿವೃದ್ಧಿ ಪಡಿಸಲಾಗುವುದು, ಮುಂದಿನ ತಿಂಗಳು ದಿನಾಂಕ ನಿಗದಿ ಮಾಡಿ ಭೂಮಿ ಪೂಜೆ ನೆರವೇರಿಸಲಾಗುವುದು ಎಂದರು. ಕಾರ್ಯಕ್ರಮದಲ್ಲಿ ವಿವಿಧ ಘಟಕಗಳ ಅಧ್ಯಕ್ಷರು ಉಪಾಧ್ಯಕ್ಷರು ಪದಾಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರ ವಿತರಿಸಲಾಯಿತು.**

# ಶಿವಾಜಿ ಶಿವನ ಅವತಾರ: ಸುರೇಶ್ ಎನ್ ಋಗ್ವೇದಿ

**ಚಾಮರಾಜನಗರ:** ವಿಶ್ವದ ಇತಿಹಾಸದಲ್ಲಿಯೇ ಶಿವಾಜಿ ದಿವ್ಯ ತೇಜಸ್ಸು ,ಯಶಸ್ಸು ,ಸಾಹಸ, ಧೈರ್ಯ ಹಾಗೂ ಯುವಶಕ್ತಿಯ ಆರಾಧ್ಯ ದೈವ ಆಗಿದ್ದಾರೆ ಎಂದು ಜೈ ಹಿಂದ್ ಪ್ರತಿಷ್ಠಾನದ ಅಧ್ಯಕ್ಷರು, ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಜಿಲ್ಲಾ ಯುವ ಸಂಘಟನೆಗಳ ಒಕ್ಕೂಟ ಮತ್ತು ಋಗ್ವೇದಿ ಯೂಥ್ ಕ್ಲಬ್ ಅಮಚವಾಡಿಯಲ್ಲಿ ಹಮ್ಮಿಕೊಂಡಿದ್ದ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ಶಿವಾಜಿ ಶಿವನ ಅವತಾರವಾಗಿ ಭಾರತದಲ್ಲಿ ಮರಾಠ ಸಾಮ್ರಾಜ್ಯವನ್ನು ಸ್ಥಾಪಿಸಿ, ಭಾರತವನ್ನು ಮೊಘಲರ ಮತ್ತು ಆದಿಲ್ ಶಾಹಿಗಳ ವಿರುದ್ಧ ಸಂರಕ್ಷಣೆ ಮಾಡಿದ ಮಹಾನ್ ವೀರ. ಶಿವಾಜಿಯ ಸಾಧನೆಗೆ ಆತನಲ್ಲಿದ್ದ ದೇಶಭಕ್ತಿ, ಮಾತೃಭಕ್ತಿ, ಗುರು ಭಕ್ತಿಯ ಕಾರಣ. ಇಂದಿನ ಯುವಕರು ಶಿವಾಜಿಯ ಆದರ್ಶ ಗುಣಗಳಾದ ಮಾತೃಭಕ್ತಿ, ಗುರು ಭಕ್ತಿ ಹಾಗೂ ದೇಶಭಕ್ತಿಯನ್ನು ಉಸಿರಾಗಿಸಿಕೊಂಡು ಮುನ್ನಡೆಯಬೇಕು. ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಲು ಗುರು ಹಿರಿಯರ, ತಂದೆ



ತಾಯಿಯರ ಆಶೀರ್ವಾದವಿದ್ದಾಗ ಹೊಸ ರಾಷ್ಟ್ರವನ್ನೇ ಮುನ್ನಡೆಸುವ ಹಾಗೂ ಕಟ್ಟುವ ಶಕ್ತಿ, ಚೈತನ್ಯ, ಸ್ಫೂರ್ತಿ ಸಾಧ್ಯವಾಗುತ್ತದೆ. ಶಿವಾಜಿಯ ರಾಷ್ಟ್ರ ನಿರ್ಮಾಣಕ್ಕೆ ತಾಯಿ ಜೀಜಾಬಾಯಿ ,ದಾದಾ ಜಿ ಕೊಂಡ ದೇವ ,ಗುರು ರಾಮದಾಸರ ಪ್ರೇರಣೆ ಕಾರಣವಾಗಿದೆ. ಯುವಕರು ತಮ್ಮ ಜೀವನದಲ್ಲಿ ಇಂತಹ ಸದ್ಗುಣಗಳ ಮೌಲ್ಯವನ್ನು ಕಟ್ಟಿಕೊಳ್ಳಬೇಕು. ದೇಶಕ್ಕೆ ಸಮರ್ಪಣೆಯ ಭಾವವನ್ನು ಭಕ್ತಿಯನ್ನು ಬೆಳೆಸಿಕೊಳ್ಳಲು ಶಿವಾಜಿಯಂತಹ ಮಹಾನ್ ವೀರರ ಇತಿಹಾಸವನ್ನು ಅಧ್ಯಯನ ಮಾಡಿ ಹೋರಾಟದ ಸಾಹಸದ ಕಥೆಗಳನ್ನು ತಿಳಿಯಿರಿ.

ಶಿವಾಜಿ ತನ್ನದೇ ಆದ ವಿಶಿಷ್ಟವಾದ ಸೇನಾ ನಿರ್ಮಾಣ, ಆಡಳಿತ, ದಕ್ಷತೆ ವಿಶಿಷ್ಟತೆ ಹಾಗೂ ನೌಕಾಪಡೆಯ ನಿರ್ಮಾಣ ತಂತ್ರದ ಚಿಂತನೆ ಮಾದರಿಯಾದದ್ದು. ಸಮಾಜದಲ್ಲಿ,ಯುದ್ಧದ ನಂತರದಲ್ಲೂ ಯಾವುದೇ ರೀತಿಯಲ್ಲೂ ಸ್ತ್ರೀಗೆ ಅವಮಾನವಾಗುವುದನ್ನು ಸಹಿಸದ ಶಿವಾಜಿಯಂತಹ ರಾಜರು ಅಗತ್ಯ. ಹಾಗೆಯೇ ಸಮಾಜವನ್ನು ಸ್ತ್ರೀ ಶೋಷಣೆಯಿಂದ ನಿರ್ಮೂಲನೆ ಮಾಡುವ ದೃಢ ನಿರ್ಧಾರವನ್ನು, ಆಡಳಿತವನ್ನು ನಡೆಸಲು ಶಿವಾಜಿ ಪ್ರೇರಣೆಯನ್ನು ನೀಡಲಿ ಎಂದು ತಿಳಿಸಿದರು.

ಜಿಲ್ಲಾ ಯುವ ಸಂಘಟನೆಗಳ ಒಕ್ಕೂಟದ ಕಾರ್ಯದರ್ಶಿ ದೊಡ್ಡ ಮೋಳೆ ಸುರೇಶ್ ಮಾತನಾಡಿ ಜಿಲ್ಲಾ ಯುವ ಸಂಘಟನೆಗಳ ಮೂಲಕ ಶಿವಾಜಿ ಆದರ್ಶಗಳನ್ನು ಮತ್ತು ಅವರ ಇತಿಹಾಸದ ಹೋರಾಟಗಳನ್ನು ತಿಳಿಸುವ ಕಾರ್ಯವನ್ನು ಮಾಡುತ್ತಿದೆ. ಯುವಕರು ಪ್ರಕೃತಿಯ ಸಂರಕ್ಷಣೆ ಸಮಾಜದ ನವ ನಿರ್ಮಾಣಕ್ಕೆ ತೊಡಗಿಸಿಕೊಳ್ಳಬೇಕು .ಶಿಕ್ಷಣವನ್ನು ಪ್ರೀತಿಸಿ ,ಅಧ್ಯಯನಶೀಲರಾಗಿ, ಶ್ರೇಷ್ಠ ಭಾರತವನ್ನಾಗಿ ರೂಪಿಸೋಣ ಎಂದರು.

ಯುವ ಸಂಘಟನೆಗಳ ಪದಾಧಿಕಾರಿಗಳಾದ ಗುರುರಾಜ್, ಕೀರ್ತಿ ವಿಕಾಸ್ ,ಚಂದನ್ ಮಂಜು ಸೂರ್ಯ ,ಮನೋಜ್ ಮುಂತಾದವರು ಇದ್ದರು

## ಹಳೆ ಮನೆಯ ಕಿಟಕಿ ಬಾಗಿಲುಗಳು ಮರುಬಳಕೆ ಆಗಲಿ

**ಚಿತ್ರದುರ್ಗ:** ಹಳೆ ಮನೆಯ ಕೆಡವಿದಾಗ ದೊರಕುವ ಕಿಟಕಿ, ಬಾಗಿಲು, ಮರದ ತುಂಡುಗಳು, ನೀರಿನ ಸಂಗ್ರಹಣೆ ಮಾಡುವ ಸಿಂಟೆಕ್ಸ್ ಟೈಲ್ಸ್ ಗಳು, ಕಬ್ಬಿಣದ ಕಿಟಕಿಗಳು, ಬಾಗಿಲುಗಳು, ಗೇಟ್ ಗಳು, ಸರಳುಗಳು, ಸಣ್ಣ ಸಣ್ಣ ಮನೆ ಕಟ್ಟುವವರಿಗೆ, ಬಡವರಿಗೆ, ಗ್ರಾಮೀಣ ಜನರಿಗೆ, ಮರುಬಳಕೆ ಮಾಡಲು ಅನುಕೂಲಕರವಾಗಿದೆ, ಹಾಗಾಗಿ ಯಾವುದೇ ಮನೆಯ ಹಳೆಯ ಸಾಮಾನುಗಳನ್ನ ವ್ಯರ್ಥ ಮಾಡದೆ ಮತ್ತೆ ಮನೆ ಕಟ್ಟುವವರಿಗೆ ಅವುಗಳನ್ನು ಒದಗಿಸಿ, ಪರಿಸರ ಸಮತೋಲನ ಕಾಪಾಡಲು ಸಹಕರಿಸಬೇಕು ಎಂದು ಹಳೆ ಮನೆಯ ಮಾಲೀಕರಿಗೆ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ವಿನಂತಿಸಿಕೊಂಡಿದ್ದಾರೆ.

ಕೆಲವೊಂದು ನಗರಗಳಲ್ಲಿ, ಪ್ರತಿಯೊಂದು ಊರುಗಳಲ್ಲೂ ಸಹ, ಹಳೆಯ ಕಿಟಕಿ, ಬಾಗಿಲು, ಸರಳುಗಳು ಗೇಟ್ ಗಳನ್ನ ಮರುಬಳಕೆ ಮಾಡಲು, ಮಾರಾಟ ಮಾಡುತ್ತಿರುತ್ತಾರೆ, ಅವುಗಳನ್ನ ನಗರದ ಜನರು ಹೆಚ್ಚಾಗಿ ಕೊಂಡುಕೊಳ್ಳದೆ, ಗ್ರಾಮೀಣ ಜನರು ಮಾತ್ರ ಅವುಗಳನ್ನು ಕೊಂಡುಕೊಂಡು, ತಮ್ಮ ಹಳೆಯ ಮನೆಗಳಿಗೆ, ದನದ ಕೊಟ್ಟಿಗೆಗಳಿಗೆ ಬಳಕೆ ಮಾಡಿ, ಹಣ ಉಳಿತಾಯದ ಜೊತೆಗೆ ಪರಿಸರವನ್ನು ಸಹ ಸಂರಕ್ಷಿಸಲು ಸಹಕಾರಿಯಾಗುತ್ತಿದ್ದಾರೆ ಎಂದರು.

ಬಹಳಷ್ಟು ಶ್ರೀಮಂತರು ಹಳೆ ಮನೆಗಳನ್ನು ಕೆಡವಿ, ಹೊಸ ಮನೆಗಳನ್ನು ಕಟ್ಟುತ್ತಿರುವುದರಿಂದ, ಹಳೆಯ ಮನೆಯ ಕಿಟಕಿ, ಬಾಗಿಲು, ಹೆಂಚುಗಳು, ಮರದ ರೀಪರ್ಗಳು, ಸಿಂಟೆಕ್ಸ್ ಗಳು, ಕಬ್ಬಿಣದ ವಸ್ತುಗಳು ಮತ್ತೆ ಹಲವಾರು ಮನೆ ಬಳಕೆಗೆ ಬರುವಂತಹ ಉಪಯುಕ್ತ ವಸ್ತುಗಳನ್ನು ಕಡಿಮೆ ವೆಚ್ಚದಲ್ಲಿ, ಕಡಿಮೆ ದರದಲ್ಲಿ, ಮಾರಾಟ ಮಾಡುತ್ತಿರುವುದರಿಂದ ಅವುಗಳನ್ನು ಬಳಸಿ, ಮತ್ತೆ ಸಣ್ಣ ಸಣ್ಣ ಮನೆಗಳನ್ನ ನಿರ್ಮಾಣ ಮಾಡಲು ಉಪಯೋಗಿಸಿಕೊಳ್ಳಬಹುದು ಎಂದರು.

ಕೆಲವೊಂದಿಷ್ಟು ವ್ಯಾಪಾರಸ್ಥರು ಕೆಡುವುವ ಮನೆಗಳನ್ನ ಮುಂಗಡ ಹಣ ಕೊಟ್ಟು ಕೊಂಡುಕೊಂಡು, ಅವುಗಳನ್ನು ಮಾರಾಟ ಮಾಡಿ ನಂತರ ಉಳಿದ ಹಣವನ್ನು ಮಾಲೀಕರಿಗೆ ನೀಡುವಂತ ವ್ಯವಸ್ಥೆ ಇದೆ. ಹಾಗಾಗಿ ಇಂತಹ ವ್ಯಾಪಾರಸ್ಥರಿಗೆ ಹಳೆಯ ಮನೆಯ ಸಾಮಾನುಗಳನ್ನು ನೀಡಿದರೆ, ಅವರೇ ಮನೆಗಳನ್ನು ಕೆಡವಿ, ಅವುಗಳನ್ನು ತೆಗೆದುಕೊಂಡು ಹೋಗಿ, ವ್ಯಾಪಾರ ಮಾಡಿ, ಮಾಲೀಕರಿಗೆ ಹಣ ಹಿಂತಿರುಗಿಸುವ ವ್ಯವಸ್ಥೆ ಇದ್ದು, ಅದನ್ನು ಹೆಚ್ಚು ರೀತಿಯಲ್ಲಿ ಪ್ರೋತ್ಸಾಹಿಸಬೇಕಾಗಿದೆ ಎಂದರು.

ಹಳೆಯ ಮನೆಯ ಸಾಮಾನುಗಳನ್ನ ಮಾರಾಟ ಮಾಡುವ ವ್ಯಾಪಾರಸ್ಥರಿಗೆ, ಸರ್ಕಾರ ಮತ್ತು ನಗರ ಸಭೆಯ ಇಲಾಖೆಗಳು ಪರಿಸರ ಸಂರಕ್ಷಣೆಯ ಭಾಗವಾಗಿ, ಅವರಿಗೆ ಕೆಲವೊಂದಿಷ್ಟು ರಿಯಾಯಿತಿಗಳನ್ನು ನೀಡಿ, ಹಳೆಯ ವಸ್ತುಗಳನ್ನು ಮಾರಾಟ ಮಾಡಲು ಸಹಕರಿಸಬೇಕು ಎಂದು ವಿನಂತಿಸಿಕೊಂಡಿದ್ದಾರೆ.



**ಮಂಡ್ಯ ತಾಲೂಕು ಗ್ರಾಮದ ಶ್ರೀ ವೆಂಕಟೇಶ್ವರ ವಿದ್ಯಾನಿಕೇತನ ಶಾಲೆಯಲ್ಲಿ ಶಾಲಾ ವಾರ್ಷಿಕೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪತ್ರಿಕಾ ಛಾಯಾಗ್ರಾಹಕರಾದ ಕೆ.ಪಿ.ಕುಮಾರ್ ಹಾಗೂ ಸಮಾಜಸೇವಕ ಕೃಷಿಕ ಸಮಾಜದ ನಿರ್ದೇಶಕರಾದ ಎಚ್. ಎಲ್. ಶಂಕರ್ ರವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಎಚ್.ಬಿ .ರಾಮು, ರಾಜ್ಯ ಒಕ್ಕಲಿಗ ಸಂಘದ ಮಾಜಿ ಉಪಾಧ್ಯಕ್ಷರಾದ ಹೆಚ್.ಎಲ್. ಶಿವಣ್ಣ, ಅಭಿನವ ಭಾರತಿ ಶಿಕ್ಷಣ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ, ಶಿವಮೂರ್ತಿ ಕಿಲಾರ, ಡೈರಿ ಅಧ್ಯಕ್ಷ ಶಿವರಾಮು, ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಿಂಗೇಗೌಡ, ಶಾಲೆ ಮುಖ್ಯಪಾಧ್ಯಾಯರುಗಳಾದ ಸಿ.ಜೆ.ಜವರೇಗೌಡ, ವೀಣಾ ಹಾಗೂ ಆಡಳಿತ ಅಧಿಕಾರಿ ಸುಮಾ, ಸಂಯೋಜಕರಾದ ಶೋಭಾ, ಶಿಕ್ಷಕರಾದ ಕುಸುಮ, ಪ್ರಸನ್ನ ಕುಮಾರ್ ಇದ್ದರು.**

## ಚಾಮರಾಜನಗರದಲ್ಲಿ ಅಪರಿಚಿತ ಶವ ಪತ್ತೆ

**ಚಾಮರಾಜನಗರ:** ನಗರದ ಖಾಸಗಿ ಬಸ್ ನಿಲ್ದಾಣ ಬಳಿ ಅಪರಿಚಿತ ಪುರುಷ ಶವ ಒಂದು ಪತ್ತೆಯಾಗಿದೆ. 60 ರಿಂದ 65 ವರ್ಷ ವಯಸ್ಸಿನವರಾಗಿದ್ದು ,5.8 ಅಡಿ ಎತ್ತರ, ಸಾಧಾರಣ ದೇಹ,ಕೋಲುಮುಖ,ಕಪ್ಪುಮೈ ಬಣ್ಣ,ಕಪ್ಪು ಬಿಳಿ ಮಿಶ್ರಿತ ಕೂದಲು ಹೊಂದಿರುತ್ತಾರೆ. ಮಾಸಲು ಬಣ್ಣದ ಅಂಗಿ,ಕಪ್ಪು ಪ್ಯಾಂಟ್, ಕಪ್ಪು– ಕೆಂಪು ಬಣ್ಣದ ಟೋಪಿ ಧರಿಸಿರುತ್ತಾರೆ.

ಇವರ ವಾರಸುದಾರರು ಇದ್ದಲ್ಲಿ ಚಾಮರಾಜನಗರದ ಪಟ್ಟಣ ಪೊಲೀಸ್ ಠಾಣೆ ಗೆ ಮಾಹಿತಿ ನೀಡುವಂತೆ ಠಾಣೆಯ ಪೊಲೀಸ್ ಇನ್ಸ್ಪೆಕ್ಟರ್ ರಾಜೇಶ್ ತಿಳಿಸಿದ್ದಾರೆ.

## ಕಾಮಗಾರಿಗೆ ಅನುದಾನ ನೀಡುವಂತೆ ಮನವಿ

**ಹನೂರು:** ತಾಲೂಕು ಕೇಂದ್ರದಲ್ಲಿ ನಿರ್ಮಾಣ ಮಾಡುತ್ತಿರುವ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಭವನದ ಕಾಮಗಾರಿಗೆ ಅನುದಾನ ನೀಡುವಂತೆ ಅಧ್ಯಕ್ಷ ಮಹಾದೇಶ್ ಸಂಸದ ಸುನಿಲ್ ಬೋಸ್ ರವರಿಗೆ ಮನವಿ ಮಾಡಿದರು.

ಕಾರ್ಯನಿಮಿತ್ತ ಹನೂರು ಪಟ್ಟಣಕ್ಕೆ ಆಗಮಿಸಿದ್ದ ವೇಳೆ ಸಂಘದ ಸದಸ್ಯರುಗಳ ಜೊತೆಗೂಡಿ ಮಾತನಾಡಿದ ಅವರು ಚಾಮರಾಜನಗರ ಜಿಲ್ಲೆಯ ನಾಲ್ಕು ತಾಲೂಕುಗಳ ಪೈಕಿ ಹನೂರು ತಾಲೂಕಿನಲ್ಲಿಯೇ ಮೊಟ್ಟ ಮೊದಲ ಬಾರಿಗೆ ತಾಲೂಕು ಕಾರ್ಯನಿರತ ಪತ್ರಕರ್ತರ ಭವನವನ್ನು 40 ಲಕ್ಷ ವೆಚ್ಚದಲ್ಲಿ ನಿರ್ಮಾಣ ಮಾಡಲು ಕ್ರಿಯಾ ಯೋಜನೆ ಮಾಡಲಾಗಿದ್ದು ಅಂದಿನ ಶಾಸಕ ಆರ್ ನರೇಂದ್ರ 5 ಲಕ್ಷ ವಿಧಾನ ಪರಿಷತ್ ವ್ಯವಸ್ಥೆ ಮಧು ಮಾದೇಗೌಡ 2.5 ಲಕ್ಷ, ಸಂಸದರಾಗಿದ್ದ ಶ್ರೀನಿವಾಸ್ ಪ್ರಸಾದ್ ರವರು 5. ಲಕ್ಷ ಅನು ದಾನ ನೀಡಿದ್ದರು. ಆದರೆ ಕಾಮಗಾರಿ ಪೂರ್ಣಗೊಳ್ಳಲು ಇನ್ನು ಹೆಚ್ಚಿನ ಅನುದಾನ ಬೇಕಿರುವುದರಿಂದ ತಾವು ತಮ್ಮ ಸಂಸದರ ನಿಧಿಯಿಂದ ಹೆಚ್ಚಿನ ಅನುದಾನ ನೀಡುವಂತೆ ಮನವಿ ಮಾಡಿದರು. ಈ ಹಿಂದೆ ಸಂಸದರಾಗಿದ್ದ ವಿ ಶ್ರೀನಿವಾಸ್ ಪ್ರಸಾದ್ ರವರ ನೀಡಿರುವ ಅನುದಾನವನ್ನು ಜಿಲ್ಲಾ ಪಂಚಾಯಿತಿಗೆ ನೀಡಿದ್ದಾರೆ. ತಾವುಗಳು ನಿರ್ಮಿಸಿ ಕೇಂದ್ರಕ್ಕೆ ವರ್ಗಾಯಿಸಲು



ಪತ್ರ ವ್ಯವಹಾರ ಮಾಡುವಂತೆ ಮನವಿ ಮಾಡಲಾಯಿತು.

ಸಂಸದ ಸುನಿಲ್ ಬೋಸ್ ಮಾತನಾಡಿ ಮುಂದಿನ ತಿಂಗಳು 5 ಲಕ್ಷ ರೂಪಾಯಿ ಅನುದಾನ ನೀಡುತ್ತೇನೆ. ಮುಂದಿನ ದಿನಗಳಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರ ಭವನ ನಿರ್ಮಾಣ ಮಾಡಲು ಹಂತ ಹಂತವಾಗಿ ಅನುದಾನ ನೀಡುತ್ತೇನೆ .ಜೊತೆಗೆ ನಾಳೆಯೇ ಜಿಲ್ಲಾ ಪಂಚಾಯಿತಿಯಿಂದ ನಿರ್ಮಿತಿ ಕೇಂದ್ರಕ್ಕೆ ಅನುದಾನ ವರ್ಗಾಯಿಸಲು ಪತ್ರ ಬರೆಯುವುದಾಗಿ ಭರವಸೆ ನೀಡಿದರು.

ಮಾಜಿ ಶಾಸಕ ಆರ್ ನರೇಂದ್ರ, ಮಾತನಾಡಿ ಹನೂರು ತಾಲೂಕು ಕೇಂದ್ರದಲ್ಲಿ ಪತ್ರಕರ್ತರ ಭವನ ನಿರ್ಮಾಣ ಮಾಡಲು 10 ಸೆಂಟ್ ನಿವೇಶನ ಮಂಜೂರು ಮಾಡಿಸಿ 5 ಲಕ್ಷ ಅನುದಾನ ನೀಡಿದ್ದೇನೆ. ತಾವು ಸಹ ತಮ್ಮ ಸಂಸದರ ನಿಧಿಯಿಂದ ಹೆಚ್ಚಿನ ಅನುದಾನ ನೀಡುವುದರ ಮೂಲಕ ಪತ್ರಕರ್ತರ ಭವನ ನಿರ್ಮಾಣ ಮಾಡಲು ಸಹಕಾರ ನೀಡಬೇಕು ಎಂದರು. ಈ ವೇಳೆ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಸಹ ಕಾರ್ಯದರ್ಶಿ ಗೋವಿಂದ್, ಖಜಾಂಚಿ ಮಹದೇವಸ್ವಾಮಿ, ನಿರ್ದೇಶಕರಾದ ರಮೇಶ್, ಮಧು, ಸದಸ್ಯರುಗಳಾದ ಅಭಿಲಾಶ್, ಶಿವಕುಮಾರ್, ರವಿ, ಲಿಂಗರಾಜು, ನಿರಂಜನ್ , ಸುರೇಶ್, ರಾಜೇಶ್ ಸೇರಿದಂತೆ ಇನ್ನಿತರರು ಹಾಜರಿದ್ದರು.

## ವಿವಿಗಳನ್ನು ಮುಚ್ಚುವುದು ಸರ್ಕಾರಕ್ಕೆ ಶೋಭೆ ಅಲ್ಲ

**ತಿಪಟೂರು :** ರಾಜ್ಯ ಸರ್ಕಾರವು ಒಂಬತ್ತು ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಸಚಿವ ಸಂಪುಟ ತೀರ್ಮಾನ ತೆಗೆದುಕೊಂಡಿರುವುದು ದುರ್ದೈವದ ಸಂಗತಿಯಾಗಿದೆ. ಸರ್ಕಾರ ನಡೆ ಆಯಾ ಜಿಲ್ಲೆಯ ವಿದ್ಯಾರ್ಥಿಗಳಿಗೆ ಮಾಡಿದ ಅನ್ಯಾಯವಾಗಿದೆ ಕೇವಲ ಹಣಕಾಸಿನ ದೃಷ್ಟಿಯಿಂದ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಹೊರಟಿರುವುದು ಘನ ಸರ್ಕಾರಕ್ಕೆ ಶೋಭೆ ತರುವಂಥದ್ದಲ್ಲ ಎಂದು ತುಮಕೂರು ವಿಶ್ವವಿದ್ಯಾನಿಲಯ



ಮಾಜಿ ಸಿಂಡಿಕೇಟ್ ಸದಸ್ಯ ರಾಜು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದರು. ಸರ್ಕಾರ ವಿ.ವಿಗಳನ್ನು ಬಲಿ?ಟ್ಗೊಳಿಸುವ ಕಾಳಜಿ ಮತ್ತು ಇಚ್ಛಾಶಕ್ತಿಯನ್ನು ರಾಜ್ಯ ಸರ್ಕಾರ ಮಾಡಬೇಕು ರಾಜ್ಯದಲ್ಲಿ ಇತ್ತೀಚೆಗೆ ಖಾಸಗಿ ವಿಶ್ವವಿದ್ಯಾನಿಲಯಗಳು ಎಚ್ಚೆತ್ತಿರುವ ಸಂದರ್ಭದಲ್ಲಿ ಸರ್ಕಾರಿ ವಿವಿಗಳನ್ನು ಮುಚ್ಚುತ್ತಿರುವುದರಿಂದ ರಾಜ್ಯದ ದಲಿತ ಬಡವ ಹಿಂದುಳಿದ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮಾಡುತ್ತಿರುವ ಅನ್ಯಾಯವಾಗಿದೆ. ರಾಜ್ಯ ಸರ್ಕಾರ ಉಚಿತ ಗ್ಯಾರಂಟಿ ಯೋಜನೆಗಳಿಗಾಗಿ ಸಾವಿರಾರು ರೂಪಾಯಿಗಳು ಬಜೆಟ್‌ನಲ್ಲಿ ಕೊಟ್ಟಿದೆ ಆದರೆ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಹಣವನ್ನು ಆಗದೆ ಒಂಬತ್ತು ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಹೊರಟಿರುವುದು ಶಿಕ್ಷಣಕ್ಕೆ ಮಾಡಿದ ಅನ್ಯಾಯವಾಗಿದೆ ಯಾವ ಶಿಕ್ಷಣ ತಜ್ಞರ ಶಿಫಾರಸ್ಸಿನ ಮೇಲೆ ವಿವಿ ಮುಚ್ಚಲು ಸಚಿವ ಸಂಪುಟ ತೀರ್ಮಾನಿಸಿದ್ದೀರಿ ಎಂಬುದನ್ನು ರಾಜ್ಯದ ಜನತೆಗೆ ತಿಳಿಸಿ ಕ್ಷಮೆ ಯಾಚಿಸಬೇಕು ಎಂದು ಅಗ್ರಹ ಮಾಡುತ್ತೇನೆ. ರಾಜ್ಯದ ಉನ್ನತ ಶಿಕ್ಷಣ ಪರಿ?ತ್ ಶಿಫಾರಸು ಮಾಡಿರುವ ಹಣವನ್ನು ರಾಜ್ಯ ಸರ್ಕಾರ ಕೂಡಲೇ ಬಿಡುಗಡೆ ಮಾಡಬೇಕು ವಿದ್ಯಾರ್ಥಿಗಳ ಭವಿ?ದ ದೃಷ್ಟಿಯಿಂದ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದ ಎಲ್ಲಾ ವಿವಿಗಳಲ್ಲೂ ಈ ಕೂಡಲೇ ಜಾರಿಗೊಳಿಸಬೇಕು ತುಮಕೂರು ವಿಶ್ವವಿದ್ಯಾನಿಲಯ ಸೇರಿದಂತೆ ರಾಜ್ಯದ ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಬೋಧಕ ಹಾಗೂ ಬೋಧಕ ಹುದ್ದೆಗಳನ್ನು ಈ ಕೂಡಲೇ ಭರ್ತಿ ಮಾಡಲು ಸೂಚಿಸಬೇಕು ಈ ಮೂಲಕ ಸರ್ಕಾರಕ್ಕೆ ಅಗ್ರಹಪಡಿಸುತ್ತೇನೆ.

# ಸಂಜೆ ಟಿಪ್ಸ್

## ಗುರುವಂದನಾ ಸಮಾರಂಭ

ಮಹಾಲಕ್ಷ್ಮಿ ಪುರಂ ನ ಬಿ ಜಿ ಎಸ್ ವಿದ್ಯಾ ಸಂಸ್ಥೆಯಲ್ಲಿ ಎ ಸಿ ಎಮ್ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳ ಒಕ್ಕೂಟ ಹಮ್ಮಿಕೊಂಡಿದ್ದ ಗುರುವಂದನಾ ಸಮಾರಂಭ ಹಾಗೂ ಹಿರಿಯ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಶ್ರೀಆದಿ ಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಜಗದ್ಗುರು ಶ್ರೀಶ್ರೀ ಶ್ರೀನಿರ್ಮಲಾನಂದನಾಥ ಸ್ವಾಮೀಜಿ ಗಳಿಗೆ ಕಾಮಧೇನು ಪುತ್ತಳಿಯನ್ನು ಶಾಸಕರಾದ ಕೆ ಗೋಪಾಲಯ್ಯನವರು ನೀಡಿ ಅಭಿನಂದಿಸಿದರು. ಸಮಾರಂಭದಲ್ಲಿ ಶ್ರೀಮಠದ ಪ್ರಧಾನ ಕಾರ್ಯದರ್ಶಿ ಶ್ರೀಶ್ರೀಪುರುಷೋತ್ತಮನಾಥ ಸ್ವಾಮೀಜಿ, ಶ್ರೀಸೌಮ್ಯನಾಥ ಸ್ವಾಮೀಜಿ, ಹಾಗೂ ಹಿರಿಯ ವಿದ್ಯಾರ್ಥಿಗಳು ಬಿಜೆಪಿ ಮುಖಂಡ ಗಂಗಾ ಹನುಮಯ್ಯ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.



## ನಿಮಗಿದು ಗೊತ್ತೇ''

ಎಂ. ವೆಂಕಟೇಶ್ ಶೇಷಾದ್ರಿ

49. ಜೋಗಕ್ಕೆ ಭೇಟಿಯಿತ್ತಾಗ ಜೋಗ ಜಲಪಾತವನ್ನು ನೋಡಿ 'ಎಂತಹ ವ್ಯರ್ಥ' ಎಂದು ಉದ್ಗರಿಸಿದವರು ಯಾರು ?

ಉತ್ತರ: ಸರ್ ಎಂ. ವಿಶ್ವೇಶ್ವರಯ್ಯ

## ಕೋಳಿ ಹುಳಿ ಗೊಜ್ಜು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಚರ್ಮ ತೆಗೆದ ಕೋಳಿ ಮಾಂಸ ½ ಕಿಲೋ, ಶುಂಠಿ ಬೆಳ್ಳುಳ್ಳಿ ಪೇಸ್ಟ್ – 2 ಚಮಚ, ಚಿಕನ್ ಮಸಾಲ ಪುಡಿ – 50 ಗ್ರಾಮ್, ಕರಿಮೆಣಸಿನಪುಡಿ – ಸ್ವಲ್ಪ, ಈರುಳ್ಳಿ – 2, ಟೊಮೆಟೋ – 4, ಹಸಿ ಮೆಣಸಿನಕಾಯಿ – 4, ಕೊತ್ತಂಬರಿ ಸೊಪ್ಪು – ಸ್ವಲ್ಪ, ನಿಂಬೆಹಣ್ಣು – ½ ಹೋಳು, ಅರಿಶಿಣಪುಡಿ – ಸ್ವಲ್ಪ

### ಮಾಡುವ ವಿಧಾನ

ಕಾದ ಬಾಣಲೆಗೆ ಸ್ವಲ್ಪ ಅಡುಗೆ ಎಣ್ಣೆ ಸೇರಿಸಿ ಕಾಯಿಸಿ, ನಂತರ ಕತ್ತರಿಸಿದ ಮೆಣಸಿನಕಾಯಿ ಹಾಗೂ ಈರುಳ್ಳಿ ಹಾಕಿ ಕೆಂಪಗಾಗುವವರೆಗೆ ಚೆನ್ನಾಗಿ ಹುರಿಯಿರಿ. ಈಗ ಕತ್ತರಿಸಿದ ಟೊಮೆಟೋ ಹಾಗೂ ಶುಂಠಿ ಬೆಳ್ಳುಳ್ಳಿ ಪೇಸ್ಟ್ ಸೇರಿಸಿ 5 ನಿಮಿಶ ಹುರಿಯಿರಿ. ಇದಕ್ಕೆ ತೊಳೆದಿಟ್ಟದ್ದ ಕೋಳಿ ಮಾಂಸ ಹಾಗೂ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ 10 ನಿಮಿಶ ಹುರಿಯಿರಿ. ಈಗ ಅರಿಶಿಣಪುಡಿ ಸೇರಿಸಿ, ಸ್ವಲ್ಪ ನೀರು ಹಾಕಿ ಬೇಯಿಸಿ. ನಂತರ ಚಿಕನ್ ಮಸಾಲ ಹಾಗೂ ಮೆಣಸಿನಪುಡಿ ಸೇರಿಸಿ ಹೆಚ್ಚು ಗಟ್ಟಿಯಾಗದಂತೆ ನೋಡಿಕೊಳ್ಳಿ, ಬೇಕಿದ್ದರೆ ಸ್ವಲ್ಪ ನೀರು ಸೇರಿಸಿ. ಈಗ ಕತ್ತರಿಸಿಟ್ಟದ್ದ ಕೊತ್ತಂಬರಿ ಸೊಪ್ಪನ್ನು ಸೇರಿಸಿ ಬೇಯಿಸಿ ನಂತರ ನಿಂಬೆಹಣ್ಣನ್ನು ಹಿಂಡಿ ಕಡಿಮೆ ಉರಿಯಲ್ಲಿ ಬೇಯಿಸಿ ಆರಿಸಿ. ಬೇಕಿದ್ದರೆ ಸ್ವಲ್ಪ ಪುದೀನ ಸೊಪ್ಪನ್ನು ಉದುರಿಸಬಹುದು. ಈಗ ರುಚಿಯಾದ ಕೋಳಿ ಹುಳಿ ಗೊಜ್ಜು ಸವಿಯಲು ರೆಡಿ.

# ಗೆಳತಿಯ ಜೊತೆ ಸಿಕ್ಕಿಬಿದ್ದ ಸಲ್ಮಾನ್ ಖಾನ್!



ಬಾಲಿವುಡ್ನ ಖ್ಯಾತ ನಟ ಸಲ್ಮಾನ್ ಖಾನ್ ಅವತು ಸಾಗರದಷ್ಟು ಅಭಿಮಾನಿಗಳನ್ನು ಸಂಪಾದಿಸಿಕೊಂಡಿದ್ದಾರೆ. ಸಿನಿಮಾಗಳ ಕುರಿತಷ್ಟೆ ಅಲ್ಲದೆ ಸಲ್ಮಾನ್ ಖಾನ್ ತಮ್ಮ ಮದುವೆಯ ವಿಚಾರವಾಗಿಯೂ ಆಗಾಗ ಸುದ್ದಿಯಲ್ಲಿರುತ್ತಾರೆ. ಆದರೆ, ಇದೀಗ ನಟ ತಮ್ಮ ಗೆಳತಿಯೊಂದಿಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿ ಬಿದ್ದಿದ್ದು, ಬಾಲಿವುಡ್‌ನಲ್ಲಿ ಈ ಕುರಿತು ಬಿಸಿ ಬಿಸಿ ಚರ್ಚೆ ಶುರುವಾಗಿದೆ.

ಇತ್ತೀಚೆಗೆ, ಸಲ್ಮಾನ್ ಖಾನ್ ಅವರು ಸಿಕಂದರ್ ಸಿನಿಮಾದಲ್ಲಿ ಬ್ಯೂಸಿಯಾಗಿದ್ದಾರೆ. ಇವರಿಗೆ ಜೋಡಿಯಾಗಿ ಈ ಚಿತ್ರದಲ್ಲಿ ರಶ್ಮಿಕಾ ಮಂದಣ್ಣ ನಟಿಸುತ್ತಿರುವುದು ಕೂಡ ಗೊತ್ತೇ ಇದೆ. ಸಿನಿಮಾ ವಿಚಾರವಾಗಿ ಅಷ್ಟೇ ಅಲ್ಲದೆ, ತಮ್ಮ ವೈಯಕ್ತಿಕ ಕಾರಣಗಳಿಂದಲೂ ಸಲ್ಲು ಭಾಯ್ ಆಗಾಗ ಚರ್ಚೆಯಾಗುತ್ತಿರುತ್ತಾರೆ. ಸಲ್ಮಾನ್ ಖಾನ್ ಅವರಿಗೆ ಇತ್ತೀಚೆಗೆ ಕೊಲೆ ಬೆದರಿಕೆಗಳು ಬರಲು ಆರಂಭಿಸಿದ್ದವು, ಇದರಿಂದ ಅವರು ಇತ್ತೀಚೆಗೆ ಸಾಕಷ್ಟು ಸುರಕ್ಷತೆಯನ್ನು ತೆಗೆದುಕೊಂಡಿದ್ದಾರೆ. ಅವರಿಗಾಗಿ ಜೆಡ್ ಸೆಕ್ಯುರಿಟಿಯನ್ನು ಕೂಡ ಆಯೋಜಿಸಲಾಗಿದ್ದು, ಸಾಕಷ್ಟು ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಲಾಗಿದೆ.

ಸಲ್ಮಾನ್ ಖಾನ್ ಅವರು ಈ ನಡುವೆ ಅವರ ತಂದೆ ಸಲೀಂ ಖಾನ್ ಅವರೊಂದಿಗೆ ಸಾಜಿದ್ ನಾಡಿಯಾದ್ವಾಲಾ ಅವರ ಕಚೇರಿಗೆ ಹೋಗುತ್ತಾ ಕಾಣಿಸಿಕೊಂಡರು, ಇಲ್ಲಿ ಅನಿರೀಕ್ಷಿತವಾಗಿ ಪಪ್ಪರಾಜಿಗಳ ಕಣ್ಣಿಗೆ ಸಲ್ಮಾನ್ ಖಾನ್ ಅವರ ರೂಮರ್ಡ್ ಗರ್ಲ್ಫ್ರೆಂಡ್ ಯುಲಿಯಾ ಕೂಡ ಕಾಣಿಸಿಕೊಂಡರು. ತಂದೆ ಅಷ್ಟೆ ಅಲ್ಲದೆ ಯುಲಿಯಾ ಜೊತೆ ಸಲ್ಮಾನ್ ಖಾನ್ ಜೊತೆಯಾಗಿ ಸಾಜಿದ್ ನಾಡಿಯಾದ್ವಾಲಾ ಅವರ ಕಚೇರಿಗೆ ಬಂದಿದ್ದು ಇದೀಗ ಚರ್ಚೆಯನ್ನು ಹುಟ್ಟುಹಾಕಿದೆ.

ಕಳೆದು 10 ವರ್ಷಗಳಿಂದ ಯುಲಿಯಾ ಹಾಗೂ ಸಲ್ಮಾನ್ ಖಾನ್ ಡೇಟಿಂಗ್ ಮಾಡುತ್ತಿದ್ದಾರೆ ಎನ್ನುವ ಸುದ್ದಿ ಹರಿದಾಡುತ್ತಿದೆ. ಇದೀಗ ಇವರಿಬ್ಬರು ಜೊತೆ ಜೊತೆಯಾಗಿ ತಂದೆಯ ಜೊತೆ ಕಾಣಿಸಿಕೊಂಡಿದ್ದು ಮತ್ತಷ್ಟು ಚರ್ಚೆಗಳನ್ನು ಹುಟ್ಟುಹಾಕಿದೆ. 59 ವರ್ಷವಾದ್ರೂ ಸಲ್ಮಾನ್ ಖಾನ್ ಮದುವೆಯಾಗಿಲ್ಲ ಎನ್ನುವ ಚಿಂತೆ ಅಭಿಮಾನಿಗಳಲ್ಲಿ ಹೆಚ್ಚಾಗಿಯೇ ಇದೆ, ಇದರ ಬೆನ್ನಲ್ಲೆ 44 ವರ್ಷದ ಯುಲಿಯಾ ಕೂಡ ಇನ್ನು ಮದುವೆಯಾಗದೆ ಉಳಿದಿದ್ದು, ಈ ಜೋಡಿ ಡೇಟಿಂಗ್ ಮಾಡುತ್ತಿರುವುದು ಕನ್‌ಫರ್ಮ್ ಎಂದು ಬಿ ಟೌನ್ ಇದೀಗ ಮಾತನಾಡಿಕೊಳ್ಳಲು ಶುರು ಮಾಡಿದೆ.

## ನಿದ್ದೆಗೆ ಉತ್ತಮ ಮನೆಮದ್ದು

### ಹೆಲ್ತ್ ಟಿಪ್ಸ್



ನೀವು ಸಹ ನಿದ್ರಾಹೀನತೆಯ ಸಮಸ್ಯೆಯಿಂದ ಬಳಲುತ್ತಿದ್ದರೆ ಔಷಧಿಯನ್ನು ತೆಗೆದುಕೊಳ್ಳುವುದರ ಬದಲು ಔಷಧಿಯಿಲ್ಲದೇ ಈ ಸಮಸ್ಯೆಯನ್ನು ಹೋಗಲಾಡಿಸಬಹುದು. ಪೌಷ್ಟಿಕತಜ್ಞರ ಸಲಹೆಯ ಮೇರೆಗೆ, ನೀವು ಈ ಮನೆಮದ್ದುಗಳನ್ನು ಅಳವಡಿಸಿಕೊಳ್ಳಬಹುದು. ಅಂತಹ ಪರಿಸ್ಥಿತಿಯಲ್ಲಿ ಕಪ್ಪು ಒಣದ್ರಾಕ್ಷಿ ಮತ್ತು ಕೇಸರಿ ಹಾಲಿನ ಸೇವನೆಯು ಪ್ರಯೋಜನಕಾರಿಯಾಗಿದೆ.

ಇದು ನಿದ್ರಾಹೀನತೆಗೆ ಉತ್ತಮವಾದ ಪರಿಹಾರವಾಗಿದೆ. ಮೆಗ್ನೀಸಿಯಮ್ ಮತ್ತು ಪೊಟ್ಯಾಸಿಯಮ್ ಕಪ್ಪು ಒಣದ್ರಾಕ್ಷಿಗಳಲ್ಲಿ ಹೇರಳವಾಗಿ ಕಂಡುಬರುತ್ತದೆ. ಇದು ಸ್ನಾಯುಗಳಿಗೆ ವಿಶ್ರಾಂತಿ ನೀಡುತ್ತದೆ ಮತ್ತು ಒತ್ತಡವನ್ನು ಕಡಿಮೆ ಮಾಡುತ್ತದೆ. ಕೇಸರಿಯು ಟ್ರಿಪ್ಟೊಫಾನ್ ಎಂಬ ಅಂಶವನ್ನು ಹೊಂದಿದೆ, ಇದು ಮೆದುಳನ್ನು ಶಾಂತಗೊಳಿಸುತ್ತದೆ ಮತ್ತು ನಿದ್ರೆಯನ್ನು ಪ್ರಚೋದಿಸಲು ಸಹಾಯ ಮಾಡುತ್ತದೆ.

10 ರಿಂದ 12 ಕಪ್ಪು ಒಣದ್ರಾಕ್ಷಿಗಳನ್ನು ನಾಲ್ಕೈದು ಗಂಟೆಗಳ ಕಾಲ ನೀರಿನಲ್ಲಿ ನೆನೆಸಿಡಿ.

ಬೆಳಿಗ್ಗೆ, ಒಣದ್ರಾಕ್ಷಿಗಳನ್ನು ನೀರಿನಿಂದ ತೆಗೆದುಕೊಂಡು, ಹಾಲಿನಲ್ಲಿ ಹಾಕಿ ಕುದಿಸಿ.

ಕುದಿದ ನಂತರ ಗ್ಯಾಸ್ನ್ನು ಆಫ್ ಮಾಡಿ ಮತ್ತು 2 ರಿಂದ 3 ನಿಮಿಷಗಳ ಕಾಲ ತಣ್ಣಗಾಗಲು ಬಿಡಿ.

ನಂತರ ಅದರಲ್ಲಿ ಕೇಸರಿ 2 ರಿಂದ 3 ಎಳೆಗಳನ್ನು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಮಲಗುವ ಮುನ್ನ ಉಗುರುಬೆಚ್ಚಗಿನ ಹಾಲನ್ನು ಕುಡಿಯಿರಿ. ಮಲಗುವ ಕೋಣೆಯನ್ನು ಕತ್ತಲೆಯಾಗಿ, ಶಾಂತವಾಗಿ ಮತ್ತು ತಂಪಾಗಿ ಇರಿಸಿ. ಮಲಗುವ ಮುನ್ನ ಎಲೆಕ್ಟ್ರಾನಿಕ್ ಸಾಧನಗಳನ್ನು ಬಳಸಬೇಡಿ, ಏಕೆಂದರೆ ಅವುಗಳಿಂದ ಹೊರಸೂಸುವ ನೀಲಿ ಬೆಳಕು ನಿದ್ರೆಗೆ ಅಡ್ಡಿಯಾಗಬಹುದು.

ನಿಯಮಿತ ವ್ಯಾಯಾಮವು ನಿದ್ರೆಯ ಗುಣಮಟ್ಟವನ್ನು ಸುಧಾರಿಸುತ್ತದೆ.ಪ್ರತಿದಿನ ಒಂದೇ ಸಮಯದಲ್ಲಿ ಮಲಗಲು ಮತ್ತು ಏಳಲು ಪ್ರಯತ್ನಿಸಿ. ಇದರೊಂದಿಗೆ, ದೇಹದ ಜೈವಿಕ ಗಡಿಯಾರವು ಉತ್ತಮವಾಗಿರುತ್ತದೆ ಮತ್ತು ಉತ್ತಮ ನಿದ್ರೆ ಪಡೆಯುತ್ತದೆ. ಮಲಗುವ ಕನಿಷ್ಠ 3 ಗಂಟೆಗಳ ಮೊದಲು ಊಟ ಮಾಡಿ. ರಾತ್ರಿ ಹೊಟ್ಟೆ ತುಂಬಾ ತಿನ್ನುವುದನ್ನು ತಪ್ಪಿಸಿ. ಇದು ಅಜೀರ್ಣ ಮತ್ತು ಹೊಟ್ಟೆಯ ಕಿರಿಕಿರಿಯನ್ನು ಉಂಟುಮಾಡಬಹುದು, ಇದು ನಿದ್ರೆಗೆ ಅಡ್ಡಿಯಾಗಬಹುದು.

ಮಲಗುವ ಮುನ್ನ ಕಾಫಿ, ಟೀ ಸೇವಿಸಬೇಡಿ. ಕೆಫೀನ್ ಮತ್ತು ಆಲ್ಕೋಹಾಲ್ ನರಮಂಡಲದ ಮೇಲೆ ಪರಿಣಾಮ ಬೀರುತ್ತದೆ ಮತ್ತು ನಿದ್ರೆಗೆ ಅಡ್ಡಿಪಡಿಸುತ್ತದೆ.

## ಆವಕಾಡೊ ಮತ್ತು ವಿಟಮಿನ್ ಇ ಫೇಸ್ ಮಾಸ್ಕ್

### ಬ್ಯೂಟಿ ಟಿಪ್ಸ್

ವಿಟಮಿನ್ ಇ ಪ್ರತಿರಕ್ಷಣಾ ವ್ಯವಸ್ಥೆ, ಜೀವಕೋಶದ ಕಾರ್ಯ ಮತ್ತು ಚರ್ಮದ ಆರೋಗ್ಯಕ್ಕೆ ಅತ್ಯಗತ್ಯ. ಇದು ಉತ್ಕರ್ಷಣ ನಿರೋಧಕವಾಗಿದ್ದು ಅದು ಅಕಾಲಿಕ ಚರ್ಮದ ವಯಸ್ಸನ್ನು ಉಂಟುಮಾಡುವ ಸ್ವತಂತ್ರ ರಾಡಿಕಲ್ಗಳೊಂದಿಗೆ ಹೋರಾಡುತ್ತದೆ.

**ಪದಾರ್ಥಗಳು:** ಒಂದು ಆವಕಾಡೊ, 1 ಚಮಚ ವಿಟಮಿನ್ ಇ ಎಣ್ಣೆ,

**ವಿಧಾನ:** ಆವಕಾಡೊದ ಬೀಜ ಮತ್ತು ಅದರ ಸಿಪ್ಪೆಯನ್ನು ತೆಗೆದುಹಾಕಿ: ಒಂದು ಬೌಲ್ನಲ್ಲಿ ಆವಕಾಡೊವನ್ನು ಮ್ಯಾಶ್ ಮಾಡಿ. ಒಂದು ಚಮಚ ವಿಟಮಿನ್ ಇ ಎಣ್ಣೆಯನ್ನು ಸೇರಿಸಿ. ಚೆನ್ನಾಗಿ ಮಿಶ್ರಣ ಮಾಡಿ ಮತ್ತು ಸ್ಥಿರತೆಯನ್ನು ಮುಖದ ಮೇಲೆ ಅನ್ವಯಿಸುವಷ್ಟು ದಪ್ಪವಾಗಿರಿಸಿಕೊಳ್ಳಿ. ಮಾಸ್ಕ್ ಹಾಕುವ ಮೊದಲು ಮೈಲ್ಡ್ ಕ್ಲೆನ್ಸರ್ ನಿಂದ ಮುಖ ತೊಳೆಯಿರಿ. ಮುಖವಾಡವನ್ನು 15-20 ನಿಮಿಷಗಳ ಕಾಲ ಇರಿಸಿಕೊಳ್ಳಿ ಮತ್ತು ತಣ್ಣನೆಯ ಉಗುರು ಬೆಚ್ಚಗಿನ ನೀರಿನಿಂದ ನಿಧಾನವಾಗಿ ತೊಳೆಯಿರಿ.

ಉತ್ತಮ ಫಲಿತಾಂಶಕ್ಕಾಗಿ ವಾರಕ್ಕೆ ಎರಡು ಬಾರಿ ಇದನ್ನು ಪುನರಾವರ್ತಿಸಿ.



# ಬಂಜೆತನದ ಬಗ್ಗೆ ಭಾರತದಲ್ಲಿ ಹೆಚ್ಚುತ್ತಿರುವ ಕಳವಳಗಳು: ಆರಂಭಿಕ ರೋಗಪತ್ತೆ ಮತ್ತು ಸಮಗ್ರ ಆರೈಕೆಗೆ ತಜ್ಞರ ಸಲಹೆ

ಭಾರತದಲ್ಲಿ ದಂಪತಿಗಳಲ್ಲಿ ಬಂಜೆತನದ ಆತಂಕಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿವೆ ಎಂದು ಸಮಗ್ರ ಬಂಜೆತನ ಸಮ್ಮೇಳನ (ಸಿಐಸಿ) 2025 ರಲ್ಲಿ ತಜ್ಞ ವೈದ್ಯರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಆರಂಭಿಕ ಹಂತದಲ್ಲಿಯೇ ರೋಗ ನಿರ್ಣಯ ಮಾಡುವುದು ಮತ್ತು ಸಮಗ್ರ ಗರ್ಭಧಾರಣೆ ಆರೈಕೆ ಚಿಕಿತ್ಸೆಗಳನ್ನು ಪಡೆದುಕೊಳ್ಳುವ ಅಗತ್ಯವಿದೆ ಎಂದು ಹೇಳಿದ್ದಾರೆ. ಅಧ್ಯಯನಗಳ ಪ್ರಕಾರ ಶೇ.50 ರಷ್ಟು ಪ್ರಕರಣಗಳಲ್ಲಿ ಈ ಬಂಜೆತನವು ಪುರುಷ ಮತ್ತು ಮಹಿಳೆಯರ ಮೇಲೆ ಗಂಭೀರವಾದ ಪರಿಣಾಮವನ್ನು ಬೀರುತ್ತದೆ. ಸಮಗ್ರ ಬಂಜೆತನ ಸಮ್ಮೇಳನ (ಸಿಐಸಿ) 2025 ರಲ್ಲಿ ಒಟ್ಟಾಗಿ ಸೇರಿದ್ದ ತಜ್ಞರು ಬಂಜೆತನ ಚಿಕಿತ್ಸೆಗಳಲ್ಲಿನ ಪ್ರಗತಿಗಳು ಮತ್ತು ಜೀವನಶೈಲಿಯ ಮಾರ್ಪಾಡುಗಳು ಸಂತಾನೋತ್ಪತ್ತಿ ಆರೋಗ್ಯದ ಮೇಲೆ ಬೀರುವ ಪ್ರಭಾವದ ಕುರಿತು ಸಮಗ್ರ ಚರ್ಚೆ ನಡೆಸಿದರು. ಭಾರತದ ಐಟಿ ಹಬ್ ಆಗಿರುವ ಬೆಂಗಳೂರಿನಲ್ಲಿ ಜನರು ಹೆಚ್ಚಿನ ಅವಧಿಯನ್ನು ಸ್ಕ್ರೀನ್ ಗಳ ಮುಂದೆ ಅಂದರೆ ಕಂಪ್ಯೂಟರ್ ಗಳ ಮುಂದೆ ಕಳೆಯುತ್ತಾರೆ. ಇದು ಸಂತಾನೋತ್ಪತ್ತಿ ಆಗುವುದರ ಮೇಲೆ ಗಂಭೀರ ಪರಿಣಾಮವನ್ನು ಬೀರುತ್ತದೆ.

ಗ್ಲೋಬಲ್ ಹೆಲ್ತ್ ಅಕಾಡೆಮಿ ಆಯೋಜಿಸಿದ್ದ ಈ ಸಿಐಸಿ 2025 ರಲ್ಲಿ ಬೆಂಗಳೂರಿನ 300 ಕ್ಕೂ ಹೆಚ್ಚು ಖ್ಯಾತನಾಮ ಸ್ತ್ರೀರೋಗ ತಜ್ಞರು ಪಾಲ್ಗೊಂಡಿದ್ದರು. ಗ್ಲೋಬಲ್ ಹೆಲ್ತ್ ಕೇರ್ ಅಕಾಡೆಮಿಯ ವ್ಯವಸ್ಥಾಪಕ ನಿರ್ದೇಶಕಿ ಅನಿತಾ ನಿರಂಜನ್ ಅವರು, ಸಮಗ್ರ ಬಂಜೆತನ ಸಮ್ಮೇಳನ 2025 ಸಂತಾನೋತ್ಪತ್ತಿ ಔಷಧದಲ್ಲಿನ ಇತ್ತೀಚಿನ ಆವಿಷ್ಕಾರಗಳು, ಸಂಶೋಧನೆ ಮತ್ತು ತಾಂತ್ರಿಕ ಪ್ರಗತಿಯ ಮೇಲೆ ಕೇಂದ್ರೀಕರಿಸಿದೆ ಎಂದು ಹೇಳಿದರು.

ಇದಲ್ಲದೇ, ಬಂಜೆತನ ನಿರ್ವಹಣೆಗೆ ಹೊಸ ಹೊಸ ಒಳನೋಟಗಳು ಮತ್ತು ಪರಿಹಾರಗಳನ್ನು ಒದಗಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿದ್ದು, ವೈದ್ಯಕೀಯ ಪ್ರಗತಿಯನ್ನು ರೋಗಿ-ಕೇಂದ್ರಿತ ವಿಧಾನದೊಂದಿಗೆ ಸಂಯೋಜನೆ ಮಾಡುವ ಮೂಲಕ ಬಂಜೆತನದಿಂದ ಬಳಲುತ್ತಿರುವ ದಂಪತಿಗಳಿಗೆ ಭರವಸೆಯನ್ನು ನೀಡುತ್ತದೆ ಎಂದರು.

ಸಿಐಸಿ 2025 ರ ಸಂಘಟನಾ ಅಧ್ಯಕ್ಷ ಡಾ.ಪ್ರವೀಣ್ ಜೋಶಿ ಅವರು ಮಾತನಾಡಿ, ''ನಗರ ಪ್ರದೇಶಗಳಲ್ಲಿ ಬಂಜೆತನ ಪ್ರಕರಣಗಳು ಹೆಚ್ಚಾಗುತ್ತಿವೆ. ಇತ್ತೀಚಿನ ಅಧ್ಯಯನಗಳ ಪ್ರಕಾರ ಶೇ.40-50 ರಷ್ಟು ಬಂಜೆತನ ಪ್ರಕರಗಳು ಪುರುಷರಿಗೆ ಸಂಬಂಧಿಸಿವೆ. ಕಳೆದ ಒಂದು ದಶಕದಲ್ಲಿ ನಾವು ವಿಶೇಷವಾಗಿ ಕಿರಿಯ ಪುರುಷರಲ್ಲಿ ಸ್ಥಿರವಾದ ಹೆಚ್ಚಳವನ್ನು ಕಾಣುತ್ತಿದ್ದೇವೆ. ಇದಕ್ಕೆ ಪ್ರಮುಖ ಕಾರಣ ಅವರಲ್ಲಿ ವೀರ್ಯಾಣುಗಳ ಪ್ರಮಾಣದಲ್ಲಿ ಕಡಿಮೆ ಇರುವುದು, ಕಳಪೆ ಮಟ್ಟದ ಚಟುವಟಿಕೆಗಳು, ಹಾರ್ಮೋನುಗಳ ಅಸಮತೋಲನ, ಅನುವಂಶಿಕ ಪರಿಸ್ಥಿತಿಗಳು ಮತ್ತು ಧೂಮಪಾನ, ಅತಿಯಾದ ಮದ್ಯಪಾನ, ಬೊಜ್ಜು ಮತ್ತು ದೀರ್ಘಕಾಲದವರೆಗೆ ಶಾಖ ಮತ್ತು ವಿಕಿರಣಕ್ಕೆ ಒಡ್ಡಿಕೊಳ್ಳುವಂತಹ ಜೀವನಶೈಲಿಯ ಅಭ್ಯಾಸಗಳ ಕೊರತೆ ಸೇರಿವೆ. ಇದಲ್ಲದೇ, ಬೆಂಗಳೂರಿನಂತಹ ನಗರಗಳಲ್ಲಿ ಹೆಚ್ಚುತ್ತಿರುವ ಮಾಲಿನ್ಯದ ಮಟ್ಟವೂ ವೀರ್ಯದ ಆರೋಗ್ಯ ಸ್ಥಿತಿಯನ್ನು ಕಡಿಮೆ ಮಾಡಲು ಕಾರಣವಾಗಿದೆ'' ಎಂದು ಕಳವಳ ವ್ಯಕ್ತಪಡಿಸಿದರು.





ಮಹಿಳೆಯರ ಬಂಜೆತನದ ಬಗ್ಗೆ ಮತನಾಡಿದ ಡಾ. ಮೇಘನಾ ನ್ಯಾಪತಿ ಅವರು, ''ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ-5 (2019-20), ರ ಪ್ರಕಾರ, ವಿವಾಹವಾದ 15 ರಿಂದ 49 ರ ವಯೋಮಾನದ ಪ್ರತಿ 1000 ಮಹಿಳೆಯರಲ್ಲಿ 18.7 ರಷ್ಟು ಮಂದಿಯಲ್ಲಿ ಬಂಜೆತನ ಸಮಸ್ಯೆ ಎದುರಾಗುತ್ತಿದೆ. ಅಂದರೆ ಮದುವೆಯಾದ ಕನಿಷ್ಟ 5 ವರ್ಷಗಳವರೆಗೆ ಈ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ಗೋವಾ, ಲಕ್ಷದ್ವೀಪ ಮತ್ತು ಚತ್ತೀಸ್ ಗಢದಂತಹ ಪ್ರದೇಶಗಳಲ್ಲಿ ಈ ಪ್ರಮಾಣ ಅಧಿಕವಾಗಿದೆ. ಕರ್ನಾಟಕದಲ್ಲಿ ಜಿಲ್ಲಾ ಮಟ್ಟದ ಹೌಸ್ ಹೋಲ್ಡ್ ಅಂಡ್ ಫರ್ಟಿಲಿಟಿ ಸರ್ವೇ (ಡಿಎಲ್ ಎಚ್‌ಎಸ್) ಪ್ರಕಾರ ಸುಮಾರು ಶೇ.5.9 ರಷ್ಟು ಪ್ರತಿ ವಿವಾಹಿತ ಮಹಿಳೆಯರು ಬಂಜೆತನದ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಇದರ ಪ್ರಮಾಣ ಗ್ರಾಮೀಣ ಪ್ರದೇಶದಲ್ಲಿ ಸ್ವಲ್ಪ ಹೆಚ್ಚು ಅಂದರೆ ಶೇ.6.1 ರಷ್ಟಿದ್ದರೆ, ನಗರ ಪ್ರದೇಶದಲ್ಲಿ ಶೇ.5.5 ರಷ್ಟಿದೆ. ಈ ವ್ಯತ್ಯಾಸಗಳನ್ನು ಗಮನಿಸಿದರೆ ವಿವಿಧ ಪ್ರದೇಶಗಳಲ್ಲಿ ಮಹಿಳೆಯರಿಗೆ ಸಂತಾನೋತ್ಪತ್ತಿ ಆರೋಗ್ಯ ರಕ್ಷಣೆಯನ್ನು ಸುಧಾರಿಸುವ ತುರ್ತು ಅಗತ್ಯವನ್ನು ಎತ್ತಿ ತೋರಿಸುತ್ತದೆ. ಸಂತಾನೋತ್ಪತ್ತಿ ಔಷಧದಲ್ಲಿ ಪ್ರಗತಿಗಳ ಹೊರತಾಗಿಯೂ ಪುರುಷರಲ್ಲಿ ಬಂಜೆತನವು ಕಳಂಕಿತ ಮತ್ತು ರೋಗನಿರ್ಣಯ ಮಾಡದಂತಹ ಸಮಸ್ಯೆಯಾಗಿ ಉಳಿದಿದೆ'' ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಹೆಲ್ತ್ ಕೇರ್ ಗ್ಲೋಬಲ್ ಎಂಟರ್ ಪ್ರೈಸಸ್ ಲಿಮಿಟೆಡ್ ನ ಕಾರ್ಯಕಾರಿ ಅಧ್ಯಕ್ಷ ಡಾ.ಬಿ.ಎಸ್.ಅಜಯ್ ಕುಮಾರ್ ಅವರು, ಬಂಜೆತನದ ಬಗ್ಗೆ ಇರುವ ಸಾಮಾಜಿಕ ನಿಷೇಧಗಳಂತಹ ಪದ್ಧತಿಗಳನ್ನು ತೊಡೆದುಹಾಕುವುದು ಅಗತ್ಯವಾಗಿದೆ ಎಂದು ಹೇಳುತ್ತಾ, ಬಂಜೆತನ ಕೇವಲ ಮಹಿಳೆಯರ ಸಮಸ್ಯೆ ಎಂದು ನೋಡಬಾರದು. ಯಶಸ್ವಿ ಚಿಕಿತ್ಸೆಯ ಫಲಿತಾಂಶಗಳಿಗೆ ಪುರುಷರು ಸಕಾಲಿಕ ವೈದ್ಯಕೀಯ ಚಿಕಿತ್ಸೆಯನ್ನು ಪಡೆಯುವಂತೆ ಪ್ರೋತ್ಸಾಹಿಸುವುದು ನಿರ್ಣಾಯಕವಾಗಿದೆ'' ಎಂದು ಸಲಹೆ ನೀಡಿದರು.

ಇಂತಹ ಆತಂಕಕಾರಿ ಅಂಕಿಅಂಶಗಳಿದ್ದರೂ ಬಂಜೆತನದ ಬಗ್ಗೆ ಜನರಲ್ಲಿ ಅರಿವು ಇನ್ನೂ ಕಡಿಮೆ ಇದೆ. ಗರ್ಭಧಾರಣೆಯ ತೊಂದರೆಗಳನ್ನು ಎದುರಿಸುತ್ತಿರುವ ದಂಪತಿಗಳು ಒಟ್ಟಾಗಿ ವೈದ್ಯಕೀಯ ಮೌಲ್ಯಮಾಪನಗಳಿಗೆ ಒಳಗಾಗುವುದು ಅಗತ್ಯವಾಗಿದೆ ಎಂದು ಹೇಳಿದ ಡಾ.ಮೇಘನಾ ನ್ಯಾಪತಿ, ''ಬಂಜೆತನವು ಒಂದು ಸಾಮಾನ್ಯವಾದ ಕಾಳಜಿಯಾಗಿದೆ. ಫಲವತ್ತತೆಯ ಸಮಸ್ಯೆಗಳನ್ನು ಎದುರಿಸುತ್ತಿರುವ ಪುರುಷರು ಆರಂಭಿಕ ಹಂತದಲ್ಲಿ ವೀರ್ಯ ವಿಶ್ಲೇಷಣೆ ಮತ್ತು ಹಾರ್ಮೋನ್ ಪರೀಕ್ಷೆ ಮಾಡಿಸುವುದು ಸೂಕ್ತವಾಗಿದೆ. ಸಕಾಲಿಕ ರೋಗನಿರ್ಣಯ ಮತ್ತು ವೈದ್ಯಕೀಯ ಚಿಕಿತ್ಸೆಯ ನೆರವಿನಿಂದ ಗರ್ಭಧಾರಣೆಯ ಸಾಧ್ಯತೆಗಳನ್ನು ಗಮನಾರ್ಹವಾಗಿ ಸುಧಾರಣೆ ಮಾಡಬಹುದಾಗಿದೆ'' ಎಂದು ತಿಳಿಸಿದರು. ಜೀವನಶೈಲಿಯ ಮಾರ್ಪಾಡುಗಳು ಮತ್ತು ಔಷಧಿಗಳಿಂದ ಹಿಡಿದು ಗರ್ಭಾಶಯದ ಗರ್ಭಧಾರಣೆ, ಇನ್ ವಿಟ್ರೋ ಫರ್ಟಿಲೈಸೇಶನ್ ಮತ್ತು ಇಂಟ್ರಾಸೈಟೋಪ್ಲಾಸ್ಮಿಕ್ ಸ್ಪರ್ಮ್ ಇಂಜೆಕ್ಷನ್ ನಂತಹ ನೆರವಿನಿಂದ ಸಂತಾನೋತ್ಪತ್ತಿ ತಂತ್ರಜ್ಞಾನಗಳ ವರೆಗೆ ವೈದ್ಯಕೀಯ ಪ್ರಗತಿಗಳು ಹಲವಾರು ಚಿಕಿತ್ಸಾ ಆಯ್ಕೆಗಳನ್ನು ನೀಡುತ್ತವೆ. ಇದಲ್ಲದೇ, ಹೆಚ್ಚುವರಿಯಾಗಿ ಸಂಕೀರ್ಣ ಬಂಜೆತನ ಪ್ರಕರಣಗಳಿಗೆ ಮೈಕ್ರೋ -ಟಿಇಎಸ್ಇ (ಮೈಕ್ರೋಸರ್ಜಿಕಲ್ ಟೆಸ್ಟಿಕ್ಯುಲರ್ ಸ್ಪರ್ಮ್ ಎಕ್ಸ್ಟ್ರಾಕ್ಷನ್) ಮತ್ತು ವೀರ್ಯ ಡಿಎನ್ಎ ವಿಘಟನಾ ಪರೀಕ್ಷೆಯಂತಹ ಅತ್ಯಾಧುನಿಕ ತಂತ್ರಗಳು ಈಗ ಲಭ್ಯವಿವೆ'' ಎಂದು ಡಾ.ಮೇಘನಾ ತಿಳಿಸಿದರು. ಬಂಜೆತನದ ಬಗ್ಗೆ ಜನರಲ್ಲಿ ಇರುವ ಕೆಟ್ಟ ಭಾವನೆಯನ್ನು ಹೋಗಲಾಡಿಸುವ ನಿಟ್ಟಿನಲ್ಲಿ ಸಾರ್ವಜನಿಕ ಜಾಗೃತಿ ಮೂಡಿಸುವ ಅಭಿಯಾನಗಳನ್ನು ಕೈಗೊಳ್ಳುವುದು ಅತ್ಯಗತ್ಯವಾಗಿದೆ ಎಂದು ಡಾ.ಪ್ರವೀಣ್ ಜೋಶಿ ತಿಳಿಸಿದರು. ಹೆಲ್ತ್ ಕೇರ್ ಗ್ಲೋಬಲ್ ಎಂಟರ್ ಪ್ರೈಸಸ್ ಲಿಮಿಟೆಡ್ ನ ಕಾರ್ಯಕಾರಿ ನಿರ್ದೇಶಕರಾದ ಡಾ.ಅಂಜಲಿ ಅಜಯ್ ಕುಮಾರ್ ಅವರು ಮಾತನಾಡಿ, ''ಭಾರತದಲ್ಲಿ ಬಂಜೆತನದ ಹೊರೆಯನ್ನು ಕಡಿಮೆ ಮಾಡಲು ಸಮಗ್ರ ವಿಧಾನದ ಅಗತ್ಯವಿದೆ. ಇದರಲ್ಲಿ ಆರಂಭಿಕ ರೋಗನಿರ್ಣಯ, ಜೀವನಶೈಲಿಯಲ್ಲಿ ಮಾರ್ಪಾಡುಗಳು ಮತ್ತು ಅತ್ಯಾಧುನಿಕ ಫಲವತ್ತತೆ ಚಿಕಿತ್ಸೆಗಳು ಸೇರಿವೆ'' ಎಂದರು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಕುಟುಂಬದಲ್ಲಿ ಪ್ರೀತಿ, ಯತ್ನ ಕಾರ್ಯಗಳಲ್ಲಿ ವಿಳಂಬ, ಅಕಾಲ ಭೋಜನ, ಕೈ ಕಾಲು ನೋವು, ಪರರ ಧನ ಪ್ರಾಪ್ತಿ.

**ವೃಷಭ:** ತೀರ್ಥಯಾತ್ರ ದರ್ಶನ, ದಾಂಪತ್ಯದಲ್ಲಿ ಪ್ರೀತಿ, ಮನೆಯ ನಿರ್ಮಾಣಕ್ಕೆ ಖರ್ಚು, ಶತ್ರು ಭಾದೆ.

**ಮಿಥುನ:** ಹೆಚ್ಚು ತಿರುಗಾಟ, ಸಗಟು ವ್ಯಾಪಾರದಲ್ಲಿ ಅಧಿಕ ಲಾಭ, ಮನಶಾಂತಿ, ಅನಾರೋಗ್ಯ, ಆಲಸ್ಯ.

**ಕಟಕ:** ಕ್ರಯ ವಿಕ್ರಯಗಳಲ್ಲಿ ಲಾಭ, ಸ್ವಯಂ ಸಾಮರ್ಥ್ಯದಿಂದ ಅವಕಾಶ, ವಾಹನ ಖರೀದಿ.

**ಸಿಂಹ:** ದುಂದು ವೆಚ್ಚ, ಶತ್ರು ಭಾದೆ ನಿವಾರಣೆ, ವಿದೇಶ ವ್ಯವಹಾರಗಳಲ್ಲಿ ಲಾಭ, ಸಣ್ಣಪುಟ್ಟ ವಿಷಯಗಳಿಂದ ಮನಸ್ತಾಪ.

**ಕನ್ಯಾ:** ಪರಿಚಿತರಿಂದ ಮೋಸ, ಆತ್ಮೀಯರಲ್ಲಿ ಪ್ರೀತಿ, ಮನಶಾಂತಿ, ಭೋಗ ವಸ್ತು ಖರೀದಿ, ಶತ್ರು ಭಾದೆ.

**ತುಲಾ:** ಯಾರನ್ನು ನಂಬಬೇಡಿ, ಅನ್ಯ ವಿಚಾರಗಳಲ್ಲಿ ಆಸಕ್ತಿ, ಸುಖ ಭೋಜನ, ಉದ್ಯೋಗದಲ್ಲಿ ಕಿರಿಕಿರಿ, ಚಂಚಲ ಸ್ವಭಾವ.

**ವೃಶ್ಚಿಕ:** ಋಣ ಭಾದೆ, ವಿಪರೀತ ಖರ್ಚು, ಕಾರ್ಯ ವಿಘಾತ, ಅಲ್ಪ ಲಾಭ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಧನಸ್ಸು:** ಮನಸ್ಸಿನಲ್ಲಿ ಗೊಂದಲ, ಪರಸ್ತ್ರೀ ಸಹವಾಸದಿಂದ ಅಪಮಾನ, ದಂಡ ಕಟ್ಟುವಿರಿ, ಮನೋವ್ಯಥೆ, ಅನಾರೋಗ್ಯ.

**ಮಕರ:** ದೃಷ್ಟಿ ದೋಷದಿಂದ ತೊಂದರೆ, ವಿದೇಶ ಪ್ರಯಾಣ, ಅಧಿಕ ಖರ್ಚು, ಯತ್ನ ಕಾರ್ಯ ಅನುಕೂಲ, ಅತಿಯಾದ ನೋವು.

**ಕುಂಭ:** ಹಿರಿಯರಿಂದ ಉಪದೇಶ, ಸಾಲ ಮರುಪಾವತಿ, ಹಿತ ಶತ್ರು ಭಾದೆ, ಹಲವು ವಿಷಯಗಳಲ್ಲಿ ಗೊಂದಲ.

**ಮೀನ:** ಅತಿಯಾದ ಆತ್ಮವಿಶ್ವಾಸ ಒಳ್ಳೆಯದಲ್ಲ, ದುಡುಕು ಸ್ವಭಾವ, ನಾನಾ ಮೂಲಗಳಿಂದ ಧನ ಲಾಭ, ದಾಂಪತ್ಯದಲ್ಲಿ ವಿರಸ.

## ಕೇಂದ್ರ ಅಬಕಾರಿ ದಿನ





2023ರ ಕೇಂದ್ರ ಅಬಕಾರಿ ದಿನವನ್ನು ಫೆಬ್ರವರಿ 24 ರಂದು ಆಚರಿಸಲಾಗುತ್ತದೆ. ಫೆಬ್ರವರಿ 24, 1944 ರಂದು ಜಾರಿಗೆ ತರಲಾದ ಕೇಂದ್ರ ಅಬಕಾರಿ ಮತ್ತು ಉಪ್ಪು ಕಾಯ್ದೆಯ ಸ್ಮರಣಾರ್ಥ ಇದನ್ನು ವಾರ್ಷಿಕವಾಗಿ ಆಚರಿಸಲಾಗುತ್ತದೆ.

1944 ರ ಫೆಬ್ರವರಿ 24 ರಂದು ಜಾರಿಗೆ ತರಲಾದ ಕೇಂದ್ರ ಅಬಕಾರಿ ಮತ್ತು ಉಪ್ಪು ಕಾಯ್ದೆಯ ಸ್ಮರಣಾರ್ಥ 2023 ರ ಕೇಂದ್ರ ಅಬಕಾರಿ ದಿನವನ್ನು ಪ್ರತಿ ವರ್ಷ ಫೆಬ್ರವರಿ 24 ರಂದು ಆಚರಿಸಲಾಗುತ್ತದೆ. ಈ ದಿನವು ಏನನ್ನು ಸೂಚಿಸುತ್ತದೆ ಮತ್ತು ಈ ದಿನದ ಅರ್ಥವನ್ನು ಕೆಳಗೆ ತಿಳಿಯಿರಿ.

ದೇಶಕ್ಕೆ ಮತ್ತು ಅದರೊಂದಿಗೆ ಸಂಬಂಧಿಸಿದ ಅಧಿಕಾರಿಗಳಿಗೆ ಮತ್ತು ಅದರ ಸೇವೆಗಳಿಗೆ ಕೇಂದ್ರ ಪರೋಕ್ಷ ತೆರಿಗೆಗಳು ಮತ್ತು ಕಸ್ಟಮ್ಸ್ ಮಂಡಳಿಯ (ಸಿಬಿಐಸಿ) ಕೊಡುಗೆಯನ್ನು ಈ ದಿನವು ಗೌರವಿಸುತ್ತದೆ. ಈ ದಿನವು ಅಧಿಕಾರಿಗಳು ತಮ್ಮ ಕರ್ತವ್ಯಗಳನ್ನು ಅತ್ಯಂತ ಪ್ರಾಮಾಣಿಕತೆಯಿಂದ ನಿರ್ವಹಿಸಲು ಪ್ರೋತ್ಸಾಹಿಸುತ್ತದೆ. ಪ್ರತಿ ವರ್ಷ, ಉತ್ಪಾದನಾ ವಲಯದಿಂದ ಸರಕುಗಳ ಭ್ರಷ್ಟಾಚಾರವನ್ನು ಪರಿಶೀಲಿಸುವ ಕರ್ತವ್ಯಗಳನ್ನು ಅಧಿಕಾರಿಗಳು ಮಾಡುತ್ತಾರೆ. ದೇಶದ ಕೈಗಾರಿಕಾ ಅಭಿವೃದ್ಧಿಯಲ್ಲಿ ಕೇಂದ್ರ ಅಬಕಾರಿ ಇಲಾಖೆ ಪ್ರಮುಖ ಪಾತ್ರ ವಹಿಸುತ್ತದೆ. ತೆರಿಗೆ ಪಾವತಿಯನ್ನು ಸುಲಭಗೊಳಿಸಲು ಸಚಿವಾಲಯವು ತೆರಿಗೆ ವ್ಯವಸ್ಥೆಯನ್ನು ಸುಧಾರಿಸಿದೆ ಮತ್ತು ತಂತ್ರಗಳ ಬಳಕೆಯನ್ನು ಹೆಚ್ಚಿಸಿದೆ. ಈ ದಿನವನ್ನು ಆಚರಿಸುವ ಉದ್ದೇಶವು ದೇಶದ ಜನರಿಗೆ ಕೇಂದ್ರ ಅಬಕಾರಿ ಮತ್ತು ಕಸ್ಟಮ್ಸ್ ಮಂಡಳಿಯ ಮಹತ್ವದ ಬಗ್ಗೆ ತಿಳಿಸುವುದು. ಈ ದಿನದಂದು ಮಂಡಳಿಯು ವಿಚಾರ ಸಂಕಿರಣಗಳು, ಕಾರ್ಯಾಗಾರಗಳು, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು, ಜಾಗೃತಿ ಕಾರ್ಯಕ್ರಮಗಳು, ಸ್ಪರ್ಧೆಗಳು ಮತ್ತು ಪ್ರಶಸ್ತಿ ಪ್ರದಾನ ಸಮಾರಂಭಗಳು ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸುತ್ತದೆ.

ಇದು ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಅಡಿಯಲ್ಲಿ ಬರುವ ಕಂದಾಯ ಇಲಾಖೆಯ ಒಂದು ಭಾಗವಾಗಿದೆ. ಕಸ್ಟಮ್ಸ್, ಕೇಂದ್ರ ಅಬಕಾರಿ ಸುಂಕಗಳು, ಕೇಂದ್ರ ಸರಕು ಮತ್ತು ಸೇವಾ ತೆರಿಗೆ ಮತ್ತು IGST, ಕಳ್ಳಸಾಗಣೆ ತಡೆಗಟ್ಟುವಿಕೆ ಮತ್ತು ಕಸ್ಟಮ್ಸ್, ಕೇಂದ್ರ ಅಬಕಾರಿ, ಕೇಂದ್ರ ಸರಕು ಮತ್ತು ಸೇವಾ ತೆರಿಗೆ, IGST, ಮತ್ತು ಮಾದಕ ದ್ರವ್ಯಗಳಿಗೆ ಸಂಬಂಧಿಸಿದ ವಿಷಯಗಳ ಆಡಳಿತಕ್ಕೆ ಸಂಬಂಧಿಸಿದ ನೀತಿಯನ್ನು ರೂಪಿಸುವುದು ಇದರ ಕೆಲಸವಾಗಿದೆ. ಅದರ ಅಧೀನ ಸಂಸ್ಥೆಗಳಿಗೆ, ಮಂಡಳಿಯು ಆಡಳಿತಾತ್ಮಕ ಪ್ರಾಧಿಕಾರವಾಗಿದ್ದು, ಕಸ್ಟಮ್ಸ್ ಹೌಸ್ಗಳು, ಕೇಂದ್ರ ಅಬಕಾರಿ ಮತ್ತು ಕೇಂದ್ರ ಜಿಎಸ್‌ಟಿ ಆಯುಕ್ತಾಲಯ ಮತ್ತು ಕೇಂದ್ರ ಆದಾಯ ನಿಯಂತ್ರಣ ಪ್ರಯೋಗಾಲಯವನ್ನು ಒಳಗೊಂಡಿದೆ.

ಸಂಜೆ ಮುಗಿಲು
ಸೋಮವಾರ
24.2.2025





# ಮಹಾ ಕುಂಭ ಮೇಳಕ್ಕೆ ಭಾರೀ ಜನ ಸಮೂಹ

ನವದೆಹಲಿ: ಕಳೆದ ವಾರಾಂತ್ಯದಲ್ಲಿ ನಡೆದ ಮಹಾ ಕುಂಭದಲ್ಲಿ ಪವಿತ್ರ ಸ್ನಾನಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ನಗರದಲ್ಲಿ ಜಮಾಯಿಸಿದ್ದರಿಂದ ಭಾನುವಾರ ಮುಂಜಾನೆ ಉತ್ತರ ಪ್ರದೇಶದ ಪ್ರಯಾಗ್ರಾಜ್ನಲ್ಲಿ 25 ಕಿ.ಮೀ ಉದ್ದದ ಸಂಚಾರ ದಟ್ಟಣೆ ಉಂಟಾಗಿತ್ತು. ಮಹಾ ಕುಂಭ ಮುಕ್ತಾಯಕ್ಕೆ ಮುಂಚಿತವಾಗಿ ಭಾನುವಾರ ಕೊನೆಯ ವಾರಾಂತ್ಯವಾಗಿರುವುದರಿಂದ, ಹೆಚ್ಚಿನ ಸಂಖ್ಯೆಯ ಭಕ್ತರು ಪವಿತ್ರ ಸ್ನಾನ ಮಾಡಲು ಜಮಾಯಿಸಿದರು.

ಜನವರಿ 13 ರಂದು ಪ್ರಾರಂಭವಾದ ಮಹಾ ಕುಂಭವು ಮಹಾಶಿವರಾತ್ರಿಯ ಸಂದರ್ಭದಲ್ಲಿ ಫೆಬ್ರವರಿ 26 ರಂದು ಕೊನೆಗೊಳ್ಳಲಿದೆ.

ಅದನ್ನು ತೆರವುಗೊಳಿಸುವ ಮೊದಲು ಭಕ್ತರು ಹಲವಾರು ಗಂಟೆಗಳ ಕಾಲ ಟ್ರಾಫಿಕ್ ಜಾಮ್ ನಲ್ಲಿ ಸಿಲುಕಿಕೊಂಡರು. ಉತ್ತರ ಪ್ರದೇಶದ ಮುಗಲ್ಸರಾಯ್ನ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಜಂಕ್ಷನ್ನಲ್ಲಿ ಭಾನುವಾರ ದೊಡ್ಡ ಜನಸಂದಣಿ ಕಂಡುಬಂದಿದೆ. ಈ ರೈಲು ನಿಲ್ದಾಣವು ಬಿಹಾರ, ಬಂಗಾಳ, ಜಾರ್ಖಂಡ್, ಒಡಿಶಾ ಮತ್ತು ಈಶಾನ್ಯ ರಾಜ್ಯಗಳಿಗೆ ಪ್ರಮುಖ ಪ್ರವೇಶದ್ವಾರವಾಗಿದೆ.

ಇಲ್ಲಿಯವರೆಗೆ, ಸುಮಾರು 60 ಕೋಟಿ ಭಕ್ತರು ವಿಶ್ವದ ಅತಿದೊಡ್ಡ ಧಾರ್ಮಿಕ ಮತ್ತು ಸಾಂಸ್ಕೃತಿಕ ಸಭೆಯಲ್ಲಿ ಭಾಗವಹಿಸಿದ್ದಾರೆ, ಗಂಗಾ, ಯಮುನಾ ಮತ್ತು ಸರಸ್ವತಿಯ ಪವಿತ್ರ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.

ಜನವರಿ 13 ರಂದು ಪ್ರಾರಂಭವಾದ ಮಹಾ ಕುಂಭವು ಅಂತಿಮ ಹಂತವನ್ನು ಪ್ರವೇಶಿಸುತ್ತಿದ್ದಂತೆ, ಪ್ರತಿದಿನ ಅಂದಾಜು ಒಂದು ಕೋಟಿ ಭಕ್ತರು ಆಗಮಿಸುತ್ತಿದ್ದಾರೆ ಎಂದು ಸರ್ಕಾರ ತಿಳಿಸಿದೆ. ಭಾರತದ 110 ಕೋಟಿ ಸನಾತನ ಅನುಯಾಯಿಗಳಲ್ಲಿ ಅರ್ಧಕ್ಕಿಂತ ಹೆಚ್ಚು ಜನರು ಪವಿತ್ರ ಸಂಗಮದಲ್ಲಿ ಸ್ನಾನ ಮಾಡಿದ್ದಾರೆ ಮತ್ತು ಅಂತಿಮ ವೇಳೆಗೆ ಈ ಸಂಖ್ಯೆ 65 ಕೋಟಿಯನ್ನು ಮೀರುವ ನಿರೀಕ್ಷೆಯಿದೆ.

# ಮಹಾ ಕುಂಭದಲ್ಲಿ ಡಿಜಿಟಲ್ ಸೇವೆ

ಮಹಾಕುಂಭಮೇಳದಲ್ಲಿ ಸ್ನಾನ ಮಾಡಲು ಸಾಧ್ಯವಾಗದವರು ತಮ್ಮ ಫೋಟೋ ಮತ್ತು ಹಣವನ್ನು ವಾಟ್ಸಾಪ್ ಮೂಲಕ ಕಳುಹಿಸಿದರೆ, ಇವರು ಅದನ್ನು ಮುದ್ರಿಸಿ ನಂತರ ಫೋಟೋವನ್ನು ನೀರಿನಲ್ಲಿ ಮುಳುಗಿಸುತ್ತಾರೆ. ಇದು ಒಂದು ರೀತಿಯ ಡಿಜಿಟಲ್ ಸ್ನಾನ. ಇದಕ್ಕೆ ಶುಲ್ಕ 1,100 ರೂ. ಘಟನಾ ಸ್ಥಳದ ದೃಶ್ಯಗಳನ್ನು ಹಂಚಿಕೊಂಡಿರುವ ರಾಷ್ಟ್ರೀಯ ಮಾಧ್ಯಮಗಳು ಇದನ್ನು ವರದಿ ಮಾಡಿವೆ. ಸ್ಥಳೀಯ ನಿವಾಸಿಯೊಬ್ಬರು ಈ ವ್ಯಾಪಾರವನ್ನು ಪ್ರಾರಂಭಿಸಿದ್ದಾರೆ.. ಅಲ್ಲದೆ, ಸಾಮಾಜಿಕ ಮಾಧ್ಯಮಗಳ ಮೂಲಕ ಹೆಚ್ಚಿನ ಪ್ರಚಾರ ಮಾಡುತ್ತಿದ್ದಾರೆ ಎಂದು ಸುದ್ದಿಯಾಗಿದೆ. ಸದ್ಯ ವೈರಲ್ ಆಗುತ್ತಿರುವ ವಿಡಿಯೋದಲ್ಲಿ ವ್ಯಕ್ತಿ ಕೈಯಲ್ಲಿ ಫೋಟೋಗಳನ್ನು ಹಿಡಿದಿರುವ ದೃಶ್ಯಗಳನ್ನು ಕಾಣಬಹುದು.

ಈ 'ಡಿಜಿಟಲ್ ಸ್ನಾನ' ಪರ ಮತ್ತು ವಿರೋಧವಾಗಿ ಅನೇಕ ಜನರು ಮುಂದೆ ಬರುತ್ತಿದ್ದಾರೆ. 'ನಿಮಗೆ ನಾಚಿಕೆಯಾಗುವುದಿಲ್ಲವೇ' ಮತ್ತು 'ನೀವು ಸನಾತನ ಧರ್ಮವನ್ನು ಅವಮಾನಿಸುತ್ತಿದ್ದೀರಿ' ಎಂಬಂತಹ ಹಲವು ಕಾಮೆಂಟ್‌ಗಳು ವೀಡಿಯೊದ ಅಡಿಯಲ್ಲಿ ನೋಡಬಹುದು.

ಮಹಾಕುಂಭ ಮೇಳವು ಪ್ರತಿ 144 ವರ್ಷಗಳಿಗೊಮ್ಮೆ ನಡೆಯುವ ಹಬ್ಬವಾಗಿದೆ. ಈ ವರ್ಷ ಜನವರಿ 13 ರಂದು ಪ್ರಾರಂಭವಾದ ಈ ಉತ್ಸವವು ಫೆಬ್ರವರಿ 26 ರಂದು ಕೊನೆಗೊಳ್ಳಲಿದೆ. ಮಹಾ ಕುಂಭಮೇಳದಲ್ಲಿ ಭಾಗವಹಿಸಲು ಮತ್ತು ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಲು ಪ್ರತಿದಿನ ಲಕ್ಷಾಂತರ ಭಕ್ತರು ಬರುತ್ತಿದ್ದಾರೆ.




# ಗುವಾಹಟಿಯಲ್ಲಿ ಆರ್ ಸಿಪಿಎಲ್ ನ ಹೊಸ ಬಾಟ್ಲಿಂಗ್ ಘಟಕ ಉದ್ಘಾಟಿಸಿದ ಸಿಎಂ ಹಿಮಂತ ಬಿಸ್ವಾ ಶರ್ಮಾ

**ಗುವಾಹಟಿ:** ಸಾಮಾನ್ಯ ಜನರು ಕ್ಯಾಂಪಾದ ಉತ್ಪನ್ನಗಳನ್ನು ಕೈಗೆಟುಕುವ ಬೆಲೆಯಲ್ಲಿ ಖರೀದಿಸಬಹುದು. ಇದು ಕ್ಯಾಂಪಾ ಕೋಲಾದ ದೊಡ್ಡ ಅನುಕೂಲಗಳಲ್ಲಿ ಒಂದಾಗಿದೆ. ಈ ಪಾನೀಯವನ್ನು ಕೈಗೆಟುಕುವ ಬೆಲೆಯಲ್ಲಿ ನೀಡುತ್ತಿದ್ದರೂ ಗುಣಮಟ್ಟದೊಂದಿಗೆ ರಾಜಿ ಮಾಡಿಕೊಳ್ಳುತ್ತಿಲ್ಲ, ಇದು ಇತರ ಜಾಗತಿಕ ಮಾನದಂಡಗಳಿಗೆ ಸಮನಾಗಿರುತ್ತದೆ. ಈ ಬ್ರ್ಯಾಂಡ್ ಒಂದು ಬಲದಿಂದ ಮತ್ತೊಂದು ಬಲಕ್ಕೆ ಬೆಳೆಯುತ್ತದೆ ಮತ್ತು ಇನ್ನಷ್ಟು ವಿಸ್ತರಿಸಲು ಅವಕಾಶವನ್ನು ಹೊಂದಿರುತ್ತದೆ ಎಂದು ನಾನು ನಂಬುತ್ತೇನೆ,'' ಎಂದು ಅಸ್ಸಾಂ ಮುಖ್ಯಮಂತ್ರಿ ಡಾ. ಹಿಮಂತ ಬಿಸ್ವಾ ಶರ್ಮಾ ಹೇಳಿದರು.

ಅಸ್ಸಾಂನ ರಾಜಧಾನಿ ಗುವಾಹಟಿಯಲ್ಲಿ ಶನಿವಾರ ಪ್ರಮುಖ ಎಫ್‌ಎಂಸಿಜಿ ಹಾಗೂ ಪಾನೀಯ ಕಂಪನಿಯಾದ ರಿಲಯನ್ಸ್ ಕನ್ಸ್ಯೂಮರ್ ಪ್ರಾಡಕ್ಟ್ಸ್ ಲಿಮಿಟೆಡ್ (ಆರ್ ಸಿಪಿಎಲ್) ಹೊಸ ಬಾಟ್ಲಿಂಗ್ ಘಟಕವನ್ನು ಉದ್ಘಾಟನೆ ಮಾಡಿ, ಮಾತನಾಡಿ, ರಿಲಯನ್ಸ್ ಕನ್ಸ್ಯೂಮರ್ ಪ್ರಾಡಕ್ಟ್ಸ್ ಲಿಮಿಟೆಡ್ ಮತ್ತು ಜೆರಿಕೊಗೆ ಶುಭ ಹಾರೈಸುತ್ತೇನೆ. ಈ ಪ್ರಯಾಣವು ಅತ್ಯಂತ ಯಶಸ್ವಿಯಾಗಲಿ ಹಾಗೂ ಅಸ್ಸಾಂನ ಜನರಿಗೆ ಸಾಕಷ್ಟು ಉದ್ಯೋಗಾವಕಾಶಗಳನ್ನು ಸೃಷ್ಟಿಸಲಿ. ಮತ್ತು ಈ ಪ್ರಯಾಣವು ಜಾಗತಿಕ ಬ್ರ್ಯಾಂಡ್ನೊಂದಿಗೆ ಭಾರತೀಯ ಬ್ರ್ಯಾಂಡ್ ಸ್ಪರ್ಧಿಸಬಹುದು ಎಂಬುದನ್ನು ಪ್ರತಿಬಿಂಬಿಸಲಿ ಎಂದರು.

ಆರ್ ಸಿಪಿಎಲ್ ಇದೀಗ ಈಶಾನ್ಯ ಭಾರತದಲ್ಲಿ ಕ್ಯಾಂಪಾದ ಪೋರ್ಟ್ ಫೋಲಿಯೋ ಇರುವಿಕೆಯನ್ನು ಬಲಪಡಿಸಿದೆ. ಸ್ಥಳೀಯ ಪಾಲುದಾರ ಜೆರಿಕೋದ ಜೊತೆಗೆ ಸಹಭಾಗಿತ್ವವನ್ನು ವಹಿಸಿ, ಈ ಬಾಟ್ಲಿಂಗ್ ಸ್ಥಾವರ ಅಭಿವೃದ್ಧಿಪಡಿಸಿದ್ದು, ಈ ಪ್ರದೇಶದ ಕೈಗಾರಿಕೆ ಮತ್ತು ಆರ್ಥಿಕ ವಿಸ್ತರಣೆಯಲ್ಲಿ ಇದರ ಪಾತ್ರ ಎಷ್ಟು ಪ್ರಮುಖವಾದದ್ದು ಎಂದು ಹೇಳಿದರು.



ರಿಲಯನ್ಸ್ ಕನ್ಸ್ಯೂಮರ್ ಪ್ರಾಡಕ್ಟ್ಸ್ ಲಿಮಿಟೆಡ್ನ ಸಿಒಒ ಖೇತನ್ ಮೋದಿ ಮಾತನಾಡಿ, ಇಂದು ನಾವು ಜೆರಿಕೊ ಜೊತೆಗಿನ ಪಾಲುದಾರಿಕೆಯಲ್ಲಿ ಗುವಾಹಟಿ ಘಟಕವನ್ನು ಉದ್ಘಾಟಿಸುತ್ತಿರುವುದು ಮಹತ್ವದ ಮೈಲುಗಲ್ಲು ಆಗಿದೆ. ಇಲ್ಲಿನ ನಮ್ಮ ಕಾರ್ಯಾಚರಣೆಗಳು ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತವೆ, ಸ್ಥಳೀಯ ಆರ್ಥಿಕ ಬೆಳವಣಿಗೆಗೆ ನೇರವಾಗಿ ಕೊಡುಗೆ ನೀಡುತ್ತವೆ. ಈ ವಿಸ್ತರಣೆಯು ಭಾರತದ ಪರಂಪರೆಯ ಬ್ರ್ಯಾಂಡ್ಗಳನ್ನು ಪುನರುಜ್ಜೀವನಗೊಳಿಸುವ ಮತ್ತು ಪ್ರದೇಶಕ್ಕೆ ಸುಸ್ಥಿರ ಅಭಿವೃದ್ಧಿಯನ್ನು ಉತ್ತೇಜಿಸುವ ನಮ್ಮ ಕಾರ್ಯತಂತ್ರದಲ್ಲಿ ಪ್ರಮುಖ ಹೆಜ್ಜೆಯಾಗಿದೆ,'' ಎಂದು ಹೇಳಿದರು. ಜೆರಿಕೊ ಫುಡ್ಸ್ ಅಂಡ್ ಬಿವರೇಜಸ್ ಎಲ್‌ಎಲ್ಪಿ ಸಂಸ್ಥಾಪಕ ಆಶಿಸ್ ಅಗರ್ವಾಲ್ ಮಾತನಾಡಿ, ಗುವಾಹಟಿಯಲ್ಲಿ ಈ ವಿಶ್ವ ದರ್ಜೆಯ ಕ್ಯಾಂಪಾ ಬಾಟ್ಲಿಂಗ್ ಘಟಕ ಪ್ರಾರಂಭಿಸುವುದು ಅಸ್ಸಾಂನ ಮೊದಲ ತಲೆಮಾರಿನ ಆಹಾರ ಮತ್ತು ಪಾನೀಯ ವ್ಯವಹಾರವಾಗಿ ಜೆರಿಕೊ ಫುಡ್ಸ್‌ಗೆ ಹೆಮ್ಮೆಯ ಮೈಲುಗಲ್ಲು. ಅಸ್ಸಾಂ ಅನ್ನು ಪ್ರಮುಖ ಉತ್ಪಾದನಾ ತಾಣವಾಗಿ ರೂಪಿಸಲು, ಆ ಮೂಲಕ ಜೀವನ ಉತ್ಕೃಷ್ಟಗೊಳಿಸುವ ಉನ್ನತ ಉತ್ಪನ್ನಗಳನ್ನು ತಯಾರಿಸಲು ನಾವು ಬದ್ಧರಾಗಿದ್ದೇವೆ. ವಿಸ್ತರಣೆಯು ಈ ಪ್ರದೇಶದಲ್ಲಿ ಆಹಾರ ಮತ್ತು ಪಾನೀಯ ತಯಾರಿಕೆಯ ಶ್ರೇಷ್ಠತೆ, ನಾವೀನ್ಯತೆ ಮತ್ತು ಭವಿಷ್ಯಕ್ಕೆ ನಮ್ಮ ಬದ್ಧತೆಯನ್ನು ಬಲಪಡಿಸುತ್ತದೆ,'' ಎಂದರು.

## ವ್ಯಾಪಾರಿಗಳಿಗಾಗಿ ಪೇಟಿಎಂ ಭಾರತದಲ್ಲಿ ಮೊದಲ ಸೌರ ಸೌಂಡ್ಬಾಕ್ಸ್ ಲಾಂಚ್

**ದೆಹಲಿ:** ಭಾರತದ ಪ್ರಮುಖ ಪಾವತಿ ಮತ್ತು ಆರ್ಥಿಕ ಸೇವೆಗಳ ವಿತರಣಾ ಸಂಸ್ಥೆ ಹಾಗೂ QR ಕೋಡ್, ಸೌಂಡ್ಬಾಕ್ಸ್ ಮತ್ತು ಮೊಬೈಲ್ ಪಾವತಿಯ ಮುಂಚೂಣಿ ಪೇಟಿಎಂ (One97 Communications Limited) `Paytm Solar Soundbox' ಅನ್ನು ವ್ಯಾಪಾರಿಗಳಿಗಾಗಿ ಪ್ರಾರಂಭಿಸಿದೆ. ಇದು ಭಾರತದ ಪ್ರಥಮ-of-its-kind ಉಪಕರಣವಾಗಿದೆ. ಈ ನವೀನ ಸಾಧನವು ಕಡಿಮೆ ಸೂರ್ಯನ ಬೆಳಕಿನಲ್ಲಿ ತ್ವರಿತವಾಗಿ ಚಾರ್ಜ್ ಆಗಿ, ಇಡೀ ದಿನ ಶಕ್ತಿ ಒದಗಿಸುತ್ತದೆ, ಇದು ಸಣ್ಣ ಅಂಗಡಿ ಮಾಲೀಕರು ಮತ್ತು ವ್ಯಾಪಾರಿಗಳಿಗೆ ಅಡೆತಡೆರಹಿತ ಪಾವತಿ ಮತ್ತು ನಂಬಿಸಿಕೆಗೆ ಯೋಗ್ಯ ಸೇವೆಯನ್ನು ನೀಡುತ್ತದೆ.

Made in India Paytm Solar Soundbox ಒಂದು ಪರಿಸರ ಸ್ನೇಹಿ ಪರಿಹಾರವಾಗಿದ್ದು, ಕಡಿಮೆ ವೆಚ್ಚದ ಪರ್ಯಾಯ ಶಕ್ತಿಯ ಮೂಲವನ್ನು ಬಳಸುತ್ತದೆ. ಇದರಿಂದಾಗಿ ಗ್ರಾಮೀಣ ಮತ್ತು ದೂರಸ್ಥ ಪ್ರದೇಶಗಳಲ್ಲಿನ ವ್ಯಾಪಾರಿಗಳು ಮತ್ತು ವಿದ್ಯುತ್ ಕೊರತೆ ಅನುಭವಿಸುವ ಸ್ಥಳಗಳು ಡಿಜಿಟಲ್ ಇಕೊಸಿಸ್ಟಂಗೆ ಭಾಗಿಯಾಗಲು ಸಹಾಯ ಮಾಡುತ್ತದೆ. ಇದರಿಂದ ಪೇಟಿಎಂ ವ್ಯಾಪಾರಿಗಳಿಗೆ ಬೆಂಬಲ ನೀಡಲು, ಹಣಕಾಸು ಸಮಾವೇಶವನ್ನು ಉತ್ತೇಜಿಸಲು ಮತ್ತು ದೇಶಾದ್ಯಂತ ಸಸ್ತೋಮತೋ ಹರಿ ಶ್ರೇಣಿಯನ್ನು ಕಾಪಾಡಲು ಮುಂದುವರಿಯುತ್ತದೆ.

## ತಮಿಳುನಾಡಿನಲ್ಲಿ ಲೋಕಸಭಾ ಕ್ಷೇತ್ರಗಳ ಸಂಖ್ಯೆ ಇಳಿಕೆ ಸಾಧ್ಯತೆ; ಸ್ಟಾಲಿನ್ ಕಳವಳ!

**ಚೆನ್ನೈ:** ತಮಿಳುನಾಡು ಪರಿಣಾಮಕಾರಿಯಾಗಿ ಕುಟುಂಬ ಯೋಜನೆ ಕಾರ್ಯಕ್ರಮವನ್ನು ಜಾರಿಗೊಳಿಸಿದ್ದರಿಂದಾಗಿ ಅದು ಲೋಕಸಭಾ ಸ್ಥಾನಗಳ ಸಂಖ್ಯೆಯಲ್ಲಿ ಇಳಿಕೆಯಾಗುವಂತಹ ಪರಿಸ್ಥಿತಿಯನ್ನು ಎದುರಿಸುತ್ತಿದೆಯೆಂದು ತಮಿಳುನಾಡು ಮುಖ್ಯಮಂತ್ರಿ ಹಾಗೂ ಡಿಎಂಕೆ ಅಧ್ಯಕ್ಷ ಎಂ.ಕೆ.ಸ್ಟಾಲಿನ್ ರವಿವಾರ ಹೇಳಿದ್ದಾರೆ. ಸ್ವಕ್ಷೇತ್ರವಾದ ಕೊಲತ್ತೂರಿನಲ್ಲಿ ಡಿಎಂಕೆಯ ಹಿರಿಯ ಪದಾಧಿಕಾರಿಯೊಬ್ಬರ ಕುಟುಂಬದ ವಿವಾಹದಲ್ಲಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು. ನವದಂಪತಿಗಳು ಅವರ ಮಕ್ಕಳಿಗೆ ತಮಿಳು ಹೆಸರುಗಳನ್ನು ಇಡುವಂತೆಯೂ ಅವರು ಕರೆ ನೀಡಿದರು. ತಮಿಳುನಾಡು ಕುಟುಂಬ ಯೋಜನೆಯ ಕಾರ್ಯಕ್ರಮವನ್ನು ನಿರಂತರವಾಗಿ ಅನುಸರಿಸಿಕೊಂಡು ಬಂದಿದ್ದರಿಂದ ಅದು ಕ್ಷೇತ್ರ ಪುನರ್ ವಿಂಗಡಣೆ ಪ್ರಕ್ರಿಯೆಯೊಂದಿಗೆ ಸಂಸದೀಯ ಸ್ಥಾನಗಳ ಇಳಿಕೆಯ ಸನ್ನಿವೇಶವನ್ನು ಎದುರಿಸುತ್ತಿದೆ ಎಂದವರು ಹೇಳಿದರು.ತಮಿಳುನಾಡು, 39 ಲೋಕಸಭಾ ಕ್ಷೇತ್ರಗಳನ್ನು ಹೊಂದಿದೆ. ಆದರೆ ಮತದಾರರ ಸಂಖ್ಯೆಯ ಇಳಿಕೆಯಿಂದಾಗಿ ಕ್ಷೇತ್ರ ಪುನರ್‌ವಿಂಗಡಣೆಯ ಪ್ರಕ್ರಿಯೆ ಮೂಲಕ ಲೋಕಸಭಾ ಸ್ಥಾನಗಳನ್ನು ಕಡಿಮೆಗೊಳಿಸುವುದನ್ನು ವಿರೋಧಿಸುತ್ತಾ ಬಂದಿದೆ. ಲೋಕಸಭಾ ಕ್ಷೇತ್ರಗಳ ಪುನರ್‌ವಿಂಗಡಣೆಯ ಪ್ರಕ್ರಿಯೆಯು, ಜನರು 16 ಮಕ್ಕಳಿಗೆ ಜನ್ಮ ನೀಡಲು ಯೋಚಿಸುವಂತೆ ಮಾಡಿದೆ ಎಂದು ಸ್ಟಾಲಿನ್ ಈ ಹಿಂದೆ ಹೇಳಿದ್ದರು. 16 ವಿಧದ ಸಂಪತ್ತಿನಲ್ಲಿ ಮಕ್ಕಳೂ ಕೂಡಾ ಒಂದೆಂದು ಅವರು ಪುರಾತನ ತಮಿಳು ನಾಣ್ಣುಡಿಯನ್ನು ಉಲ್ಲೇಖಿಸಿದ್ದರು.



## ಶಶಿ ತರೂರ್‌ರಿಂದ ಕಾಂಗ್ರೆಸ್ ನಯಕರಿಗೆ ಎಚ್ಚರಿಕೆ

**ತಿರುವನಂತಪುರಂ:** ಒಂದು ವೇಳೆ ಪಕ್ಷವು ನನ್ನನ್ನು ಗೌರವಿಸದಿದ್ದರೆ ನನಗೆ ಪರ್ಯಾಯ ಆಯ್ಕೆಗಳಿವೆ ಎಂದು ಕಾಂಗ್ರೆಸ್ ನಾಯಕ ಶಶಿ ತರೂರ್ ಪಕ್ಷದ ನಾಯಕತ್ವಕ್ಕೆ ಎಚ್ಚರಿಕೆ ರವಾನಿಸಿದ್ದಾರೆ. ಸಂದರ್ಶನ ನೀಡಿರುವ ಶಶಿ ತರೂರ್, ಕೇರಳದಲ್ಲಿ ಕಾಂಗ್ರೆಸ್ ನಾಯಕತ್ವದ ಬಿಕ್ಕಟ್ಟು ಎದುರಿಸುತ್ತಿದ್ದು, ಸತತ ಮೂರನೆಯ ಬಾರಿ ಅಧಿಕಾರ ಕಳೆದುಕೊಳ್ಳುವ ಅಪಾಯದಲ್ಲಿದೆ ಎಂದು ಹೇಳಿದ್ದಾರೆ. ಅಲ್ಲದೆ, ಪಕ್ಷವು ನನ್ನ ಸಾಮರ್ಥ್ಯವನ್ನು ಮತ್ತಷ್ಟು ಉತ್ತಮವಾಗಿ ಬಳಸಿಕೊಳ್ಳಬೇಕು ಎಂದೂ ಆಗ್ರಹಿಸಿದ್ದಾರೆ. ಒಂದು ವೇಳೆ ಪಕ್ಷವೇನಾದರೂ ನನ್ನನ್ನು ಬಳಸಿಕೊಳ್ಳಲು ಬಯಸಿದರೆ, ನಾನು ಲಭ್ಯವಿದ್ದೇನೆ. ಇಲ್ಲವಾದರೆ, ನನಗೆ ನನ್ನದೇ ಆದ ಬಾಧ್ಯತೆಗಳಿವೆ ಎಂದು ಅವರು ಹೇಳಿದ್ದಾರೆ. ಜಾಗತಿಕ ಕಾರ್ಯಕ್ರಮಗಳು, ಪುಸ್ತಕಗಳು ಹಾಗೂ ಉಪನ್ಯಾಸ ಅವಕಾಶಗಳನ್ನು ಉಲ್ಲೇಖಿಸಿರುವ ಅವರು, ನನಗೆ ಅವಕಾಶಗಳ ಕೊರತೆ ಇದೆ ಎಂದು ಪಕ್ಷ ಭಾವಿಸಬಾರದು ಎಂದು ಪರೋಕ್ಷವಾಗಿ ಎಚ್ಚರಿಸಿದ್ದಾರೆ. ಕಾಂಗ್ರೆಸ್ ಅನ್ನು ವಿರೋಧಿಸುವವರೂ ಕೂಡಾ ನನಗೆ ತಿರುವನಂತಪುರಂನಲ್ಲಿ ಮತ ಚಲಾಯಿಸಿದ್ದರು. ಜನರು ನನ್ನ ಭಾಷಣಗಳು ಪ್ರಶಂಸಿಸುತ್ತಾರೆ. 2026ರ ಚುನಾವಣೆಯಲ್ಲಿ ಪಕ್ಷಕ್ಕೆ ಇಂತಹ ಕಾರ್ಯಕ್ರಮಗಳ ಅವಶ್ಯಕತೆ ಇದೆ ಎಂದು ಅವರು ಪ್ರತಿಪಾದಿಸಿದ್ದಾರೆ.



## ಪೋಪ್ ಫ್ರಾನ್ಸಿಸ್ ಆರೋಗ್ಯ ಗಂಭೀರ

**ರೋಮ್:** ನ್ಯೂಮೋನಿಯಾ ಮತ್ತು ಶ್ವಾಸಕೋಶದ ಸೋಂಕಿನಿಂದ ಬಳಲುತ್ತಿರುವ ಪೋಪ್ ಫ್ರಾನ್ಸಿಸ್ ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ವ್ಯಾಟಿಕನ್ ಮಾಹಿತಿ ನೀಡಿದೆ. ತೀವ್ರ ಉಸಿರಾಟ ಸಮಸ್ಯೆಯಿಂದ ಬಳಲುತ್ತಿರುವ 88 ವರ್ಷ ವಯಸ್ಸಿನ ಪೋಪ್ ಚಿಕಿತ್ಸೆಗೆ ಸ್ಪಂದಿಸುತ್ತಿದ್ದಾರೆ. ಉಸಿರಾಟದ ಸಮಸ್ಯೆ ಹಿನ್ನೆಲೆಯಲ್ಲಿ ಆಕ್ಸಿಜನ್ ಪೂರೈಸಲಾಗುತ್ತಿದೆ. ಹಾಗೆಯೇ ಪ್ಲೇಟ್ಲೆಟ್ಸ್ ಕಡಿಮೆಯಾಗಿದ್ದರಿಂದ ರಕ್ತ ನೀಡಲಾಗುತ್ತಿದೆ ಎಂದು ವ್ಯಾಟಿಕನ್ ತಿಳಿಸಿದೆ. ಫೆ.14ರಂದು ಆಸ್ಪತ್ರೆಗೆ ದಾಖಲಾದ ಬಳಿಕ ಇದೇ ಮೊದಲ ಸಲ ಪೋಪ್ ಗಂಭೀರವಾಗಿದ್ದಾರೆ ಎಂದು ಪ್ರಕಟಣೆಯಲ್ಲಿ ಲಿಖಿತವಾಗಿ ತಿಳಿಸಲಾಗಿದೆ. ಪೋಪ್ಗೆ ನೋವು ಹೆಚ್ಚಿರುವುದರಿಂದ ಅವರನ್ನು ಆರ್ಮ್ ಚೇರ್ನಲ್ಲಿಯೇ ನಿನ್ನೆ ಇರಿಸಲಾಗಿತ್ತು. ವಯಸ್ಸು, ದುರ್ಬಲತೆ ಮತ್ತು ದೀರ್ಘಕಾಲದಿಂದ ಇರುವ ಶ್ವಾಸಕೋಶ ಸಮಸ್ಯೆಯಿಂದ ಆರೋಗ್ಯ ಮತ್ತಷ್ಟು ಹದಗೆಟ್ಟಿದ್ದು, ಈಗಲೇ ಏನೂ ಹೇಳಲಾಗುವುದಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ. ಪೋಪ್ ಫ್ರಾನ್ಸಿಸ್ ಅವರ ಉಸಿರಾಟದ ವ್ಯವಸ್ಥೆಯಲ್ಲಿರುವ ಕೆಲವು ಸೂಕ್ಷ್ಮ ಜೀವಿಗಳು ರಕ್ತಪ್ರವಾಹಕ್ಕೆ ಹಾದು ಸೆಪ್ಸಿಸ್ಗೆ ಕಾರಣವಾಗುತ್ತಿವೆ. ಸೆಪ್ಸಿಸ್ ರೋಗ ಅಂಗಾಂಗ ವೈಫಲ್ಯ ಮತ್ತು ಪ್ರಾಣ ಹಾನಿಕರವಾಗಬಹುದು. ಸೆಪ್ಸಿಸ್ ರೋಗ, ಉಸಿರಾಟದ ಸಮಸ್ಯೆ ಮತ್ತು ಅವರ ವಯಸ್ಸಿನಿಂದಾಗಿ ಪೋಪ್ ಚೇತರಿಸಿಕೊಳ್ಳುವುದು ಕಷ್ಟ ಎಂದು ರೋಮ್ನ ಜೆಮೆಲಿ ಆಸ್ಪತ್ರೆಯ ಔಷಧ ಮತ್ತು ಶಸ್ತ್ರಚಿಕಿತ್ಸೆಯ ಮುಖ್ಯಸ್ಥ ಡಾ.ಸೆರ್ಗಿಯೊ ಅಲ್ಫಿಯೆರಿ ತಿಳಿಸಿದ್ದಾರೆ.

# ದೆಹಲಿಯಲ್ಲಿ ವಿರೋಧ ಪಕ್ಷ ನಾಯಕಿಯಾಗಿ ಅತಿಶಿ ಆಯ್ಕೆ

**ನವದೆಹಲಿ:** ರಾಷ್ಟ್ರರಾಜಧಾನಿ ದೆಹಲಿಯ ವಿಧಾನಸಭೆ ಚುಕ್ಕಾಣಿಯು ಮಹಿಳೆಯರ ಪಾಲಾಗಿದೆ. ಸಿಎಂ ಆಗಿ ಈಗಾಗಲೇ ಬಿಜೆಪಿಯ ರೇಖಾ ಗುಪ್ತಾ ಅವರು ಪದಗ್ರಹಣ ಮಾಡಿದ್ದಾರೆ. ಇದೀಗ, ವಿರೋಧ ಪಕ್ಷದ ನಾಯಕಿಯಾಗಿ ಆಮ್ ಆದ್ಮಿ ಪಕ್ಷದ (ಆಪ್) ಅತಿಶಿ ಅವರು ಆಯ್ಕೆಯಾಗಿದ್ದಾರೆ.

ಭಾನುವಾರ ಇಲ್ಲಿ ನಡೆದ ಆಪ್ ಶಾಸಕಾಂಗ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಅತಿಶಿ ಅವರನ್ನು ದೆಹಲಿ ವಿಧಾನಸಭೆಯ ವಿರೋಧ ಪಕ್ಷದ ನಾಯಕಿಯಾಗಿ ಆಯ್ಕೆ ಮಾಡಲಾಯಿತು. ಸಭೆಯಲ್ಲಿ ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಮತ್ತು ಪಕ್ಷದ 22 ಶಾಸಕರು ಭಾಗವಹಿಸಿದ್ದರು.

ಸಭೆಯ ನಂತರ ಮಾಧ್ಯಮಗೋಷ್ಟಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಆಪ್ನ ಹಿರಿಯ ನಾಯಕ ಗೋಪಾಲ್ ರೈ, ಇಂದು ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಅತಿಶಿ ಅವರನ್ನು ವಿಧಾನಸಭೆಯ ವಿರೋಧ ಪಕ್ಷದ ನಾಯಕಿಯಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಪಕ್ಷಕ್ಕೆ ಇದು ಸವಾಲಿನ ಸಮಯ. ಅತಿಶಿ ಅವರು ದೆಹಲಿಯ ಸಿಎಂ ಆಗಿ ಸೇವೆ ಸಲ್ಲಿಸಿದ್ದಾರೆ. ಇದೀಗ, ವಿಪಕ್ಷ ನಾಯಕಿಯಾಗಿ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿಭಾಯಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಮಾಧ್ಯಮಗೋಷ್ಟಿಯಲ್ಲಿ ಮಾತನಾಡಿದ ನೂತನ ವಿಪಕ್ಷ ನಾಯಕಿ ಅತಿಶಿ, ಆಡಳಿತಾರೂಢ ಬಿಜೆಪಿಯು ನೀಡಿದ ಭರವಸೆಗಳನ್ನು ಈಡೇರಿಸುವಂತೆ ಸಮರ್ಥ ವಿಪಕ್ಷವಾಗಿ ಆಪ್ ಕೆಲಸ ಮಾಡಲಿದೆ. ಮಹಿಳೆಯರಿಗೆ ಮಾಸಿಕ 2500 ರೂ.ಗಳ ನೆರವು ನೀಡುವ ಯೋಜನೆಯನ್ನು ಜಾರಿಗೆ ತರುವ ನಿರ್ಧಾರವನ್ನು ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಮೊದಲ ಸಂಪುಟ ಸಭೆಯಲ್ಲಿ ಅಂಗೀಕರಿಸಿಲ್ಲ ಎಂದರು.

ದೆಹಲಿಯ ಜನರು ನಮ್ಮನ್ನು ವಿಪಕ್ಷ ಸ್ಥಾನದಲ್ಲಿ ಕೂರಿಸಿದ್ದಾರೆ. ಜನರ ಪರವಾಗಿ ವಿಧಾನಸಭೆಯಲ್ಲಿ ಧ್ವನಿ ಎತ್ತುವುದು ಹೇಗೆಂದು ನಮಗೆ ತಿಳಿದಿದೆ. ಆಪ್ ಆ ಜವಾಬ್ದಾರಿಯನ್ನು ನಿಭಾಯಿಸಲಿದೆ. ಬಿಜೆಪಿ ಅನೇಕ ಭರವಸೆಗಳನ್ನು ನೀಡಿದ್ದು, ಅವುಗಳ ಆಧಾರದ ಮೇಲೆ ಜನರು ಅಧಿಕಾರ ನೀಡಿದ್ದಾರೆ. ಎಲ್ಲ ಭರವಸೆಗಳನ್ನು ಈಡೇರಿಸುವಂತ ನಾವು ಕಾವಲು ಕಾಯಲಿದ್ದೇವೆ ಎಂದು ಅತಿಶಿ ಹೇಳಿದರು.

# ವೈದ್ಯಕೀಯ ಚಿಕಿತ್ಸಾ ವೆಚ್ಚ ಕಡಿಮೆ ಮಾಡಲು ನಾವು ಬದ್ಧ: ಮೋದಿ

**ಭೋಪಾಲ್:** ಪ್ರತಿಯೊಬ್ಬ ಭಾರತೀಯರ, ಅದರಲ್ಲೂ ವಿಶೇಷವಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಹೊರೆಯಾಗುತ್ತಿರುವ ವೈದ್ಯಕೀಯ ವೆಚ್ಚವನ್ನು ಕಡಿಮೆ ಮಾಡಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಹೇಳಿದ್ದಾರೆ.

2014ರಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ವೈದ್ಯಕೀಯ ಚಿಕಿತ್ಸಾ ವೆಚ್ಚಗಳು ವಿಪರೀತವಾಗಿದ್ದವು. ಆದರೆ ನಾಗರಿಕರ ವೈದ್ಯಕೀಯ ಚಿಕಿತ್ಸಾ ವೆಚ್ಚಗಳನ್ನು ಕಡಿಮೆ ಮಾಡಲು ನಮ್ಮ ಸರ್ಕಾರ ಬದ್ಧವಾಗಿದ್ದು, ಎಲ್ಲಾ ಅರ್ಹ ವ್ಯಕ್ತಿಗಳಿಗೆ 5 ಲಕ್ಷ ರೂಪಾಯಿಗಳವರೆಗೆ ಚಿಕಿತ್ಸಾ ವೆಚ್ಚವನ್ನು ಭರಿಸುವ ಆಯುಷ್ಮಾನ್ ಕಾರ್ಡ್ಗಳನ್ನು ನಾವು ನೀಡುತ್ತಿದ್ದೇವೆ. ಎಂದು ಮಧ್ಯಪ್ರದೇಶದ ಛತ್ತಾಪುರ ಜಿಲ್ಲೆಯಲ್ಲಿ ಬಾಗೇಶ್ವರ್ ಧಾಮ್ ವೈದ್ಯಕೀಯ ಮತ್ತು ವಿಜ್ಞಾನ ಸಂಶೋಧನಾ ಸಂಸ್ಥೆಗೆ ಶಂಕುಸ್ಥಾಪನೆ ನೆರವೇರಿಸಿದ ನಂತರ ಪ್ರಧಾನಿ ಹೇಳಿದರು.

ಹಲವಾರು ಧಾರ್ಮಿಕ ಸಂಸ್ಥೆಗಳು ಜೀವನದ ಆಧ್ಯಾತ್ಮಿಕ ಪಾಠಗಳ ಜೊತೆಗೆ ಉತ್ತಮ ಆರೋಗ್ಯಕ್ಕಾಗಿ ಜನರಿಗೆ ಸೇವೆ ಸಲ್ಲಿಸುತ್ತಿವೆ. ಚಿತ್ರಕೂಟ ಇದಕ್ಕೆ ಒಂದು ಉದಾಹರಣೆಯಾಗಿದೆ. ಇನ್ನು ಮುಂದೆ ಬಾಗೇಶ್ವರ ಧಾಮಕ್ಕೆ ಭೇಟಿ ನೀಡುವ ಜನ ಕೂಡ 'ಆರೋಗ್ಯ'ದ ಆಶೀರ್ವಾದ ಪಡೆಯಲಿದ್ದಾರೆ ಎಂದು ಅವರು ನುಡಿದರು.

70 ಅಥವಾ ಅದಕ್ಕಿಂತ ಹೆಚ್ಚಿನ ವಯಸ್ಸಿನ ಆಯುಷ್ಮಾನ್ ಕಾರ್ಡ್ ಹೊಂದಿರುವವರು ಈಗ 5 ಲಕ್ಷ ರೂ.ಗಳವರೆಗೆ ಉಚಿತ ಚಿಕಿತ್ಸೆಗೆ ಅರ್ಹರಾಗಿದ್ದಾರೆ. ಅರ್ಹ ಎಲ್ಲರೂ ಆಯುಷ್ಮಾನ್ ಕಾರ್ಡ್ ಅನ್ನು ಪಡೆದುಕೊಳ್ಳಿ. ಆಯುಷ್ಮಾನ್ ಕಾರ್ಡ್ ನೀಡಲು ಯಾರಾದರೂ ಲಂಚ ಕೇಳಿದರೆ ನೇರವಾಗಿ ನನಗೆ ಪತ್ರ ಬರೆಯಿರಿ ಎಂದು ಪ್ರಧಾನಿ ಹೇಳಿದರು.



ಕೇಂದ್ರ ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳು ಮತ್ತು ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಲು ಮತ್ತು ಸಮಾಜದಲ್ಲಿ ಆಯುಷ್ಮಾನ್ ಕಾರ್ಡ್ ನಂತಹ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವಂತೆ ಅವರು ಕರೆ ನೀಡಿದರು. ಬಾಗೇಶ್ವರ ಧಾಮಕ್ಕೆ ಭೇಟಿ ನೀಡಿದ ಪ್ರಧಾನಿ ಮೋದಿ, ಜಟಾಶಂಕರ್ ಮಹಾದೇವರಿಗೆ ಪೂಜೆ ಸಲ್ಲಿಸಿ ಧಾರ್ಮಿಕ ಗುರುಗಳಿಂದ ಆಶೀರ್ವಾದ ಪಡೆದರು.

# ಅಮೆರಿಕದಿಂದ ಮತ್ತೆ 12 ಭಾರತೀಯರ ಗಡಿಪಾರು



**ನವದೆಹಲಿ:** ಅಮೆರಿಕದಿಂದ ಗಡೀಪಾರು ಮಾಡಲ್ಪಟ್ಟ ಭಾರತದಿಂದ ಅಕ್ರಮ ವಲಸಿಗರ ನಾಲ್ಕನೇ ಬ್ಯಾಚ್ ಇಂದು ದೆಹಲಿಗೆ ಬಂದಿಳಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅವರು ಪನಾಮ ಮೂಲಕ ಭಾರತಕ್ಕೆ ಮರಳಿದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. 12 ಮಂದಿಯಲ್ಲಿ ನಾಲ್ವರು ಪಂಜಾಬ್ನ ಅಮೃತಸರಕ್ಕೆ ತೆರಳಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನೀತಿಗಳ ಅಡಿಯಲ್ಲಿ ಗಡೀಪಾರು ಮಾಡಲಾದ ಸುಮಾರು 300 ವಲಸಿಗರನ್ನು ಪನಾಮ ಹೋಟೆಲ್ನಲ್ಲಿ ಇರಿಸಲಾಗಿದೆ. 40 ರಷ್ಟು ಜನರು ಸ್ವಯಂಪ್ರೇರಿತ ವಾಪಸಾತಿಯನ್ನು ನಿರಾಕರಿಸುವುದರೊಂದಿಗೆ, ಯುಎನ್ ಏಜೆನ್ಸಿಗಳು ಪರ್ಯಾಯ ಸ್ಥಳಗಳನ್ನು ಹುಡುಕುತ್ತಿವೆ. ಪರಿಸ್ಥಿತಿಯು ಅವರ ಬಂಧನದ ಬಗ್ಗೆ ಕಳವಳವನ್ನು ಹೆಚ್ಚಿಸಿದೆ, ಏಕೆಂದರೆ ಪನಾಮವು ಸಾರಿಗೆ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ ಮತ್ತು ಯುಎಸ್ ವೆಚ್ಚಗಳನ್ನು ಭರಿಸುತ್ತದೆ.

ದಾಖಲೆರಹಿತ ವಿದೇಶಿ ಪ್ರಜೆಗಳನ್ನು ಸಾಮೂಹಿಕವಾಗಿ ಗಡೀಪಾರು ಮಾಡುವುದನ್ನು ಅಧ್ಯಕ್ಷ ಟ್ರಂಪ್ ಸಮರ್ಥಿಸಿಕೊಂಡಿದ್ದಾರೆ, ಅವರ ಆಡಳಿತವು ''ವಂಚಕರು, ಮೋಸಗಾರರು, ಜಾಗತೀಕರಣವಾದಿಗಳು ಮತ್ತು ಆಳವಾದ ರಾಜ್ಯ ಅಧಿಕಾರಿಗಳನ್ನು ಮನೆಗೆ ಕಳುಹಿಸುವ ಮೂಲಕ ಜೌಗು ಪ್ರದೇಶವನ್ನು ಬರಿದು ಮಾಡುತ್ತಿದೆ'' ಎಂದು ಹೇಳಿದರು.

# ಕೇಜ್ರಿವಾಲ್ ಸಮ್ಮುಖದಲ್ಲಿ ಎಎಪಿ ಸೇರಿದ ಪಂಜಾಬ್ ನಟಿ

**ನವದೆಹಲಿ:** ಕೀರ್ತಿ ಕಿಶನ್‌ನ ಯೂನಿಯನ್ ನಾಯಕ ಬಲದೇವ್ ಸಿಂಗ್ ಅವರ ಪುತ್ರಿ, ಪಂಜಾಬ್‌ನ ಬಹುಭಾಷಾ ನಟಿ ಸೋನಿಯಾ ಮನ್ ಎಎಪಿ ಮುಖ್ಯಸ್ಥರಾದ ಅರವಿಂದ್ ಕೇಜ್ರಿವಾಲ್ ಸಮ್ಮುಖದಲ್ಲಿ ಆಮ್ ಆದ್ಮಿ ಪಕ್ಷಕ್ಕೆ ಸೇರ್ಪಡೆಗೊಂಡಿದ್ದಾರೆ.

ಎಎಪಿಯ ಪಂಜಾಬ್ ಘಟಕವು ಎಕ್ಸ್‌ನಲ್ಲಿ 'ಕೀರ್ತಿ ಕಿಸಾನ್ ಯೂನಿಯನ್ ನಾಯಕ ಎಸ್ ಬಲದೇವ್ ಸಿಂಗ್ ಅವರ ಪುತ್ರಿ ಹಾಗೂ ಪಂಜಾಬಿ ನಟಿ ಸೋನಿಯಾ ಮಾನ್ ಅವರು ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರ ನೇತೃತ್ವದಲ್ಲಿ ಆಮ್ ಆದ್ಮಿ ಪಕ್ಷವನ್ನು ಸೇರಿದ್ದಾರೆ. ಅವರನ್ನು ಆಮ್ ಆದ್ಮಿ ಪಕ್ಷದ ಕುಟುಂಬಕ್ಕೆ ಸ್ವಾಗತಿಸುತ್ತಿದ್ದೇವೆ' ಎಂದು ಪೋಸ್ಟ್ ಹಂಚಿಕೊಂಡಿದ್ದಾರೆ.

ಸೋನಿಯಾ ಮಾನ್ ವಿವಿಧ ಭಾಷಾ ಚಿತ್ರಗಳಲ್ಲಿ ನಟಿಸಿದ್ದಾರೆ. ಮಲೆಯಾಳಂ, ಹಿಂದಿ, ತೆಲುಗು ಹಾಗೂ ಮರಾಠಿ ಸಿನಿಮಾಗಳಲ್ಲೂ ನಟಿಸಿದ್ದಾರೆ. ಹೈಡ್ ಆಂಡ್ ಸೀಕ್ ಎಂಬ ಮಲೆಯಾಳಂ ಸಿನಿಮಾದಲ್ಲೂ ನಟಿಸಿದ್ದು, 2014ರಲ್ಲಿ ಹಿಂದಿಯಲ್ಲಿ ತೆರೆಕಂಡ ಕಹಿನ್ ಹೈ ಮೇರಾ ಪ್ಯಾರ್ ಚಿತ್ರದಲ್ಲೂ ಅಭಿನಯಿಸಿದ್ದಾರೆ. 2020ರಲ್ಲಿ ಹ್ಯಾಪಿ ಹಾರ್ಡಿ ಮತ್ತು ಹೀರ್ ಚಿತ್ರಗಳಲ್ಲೂ ನಟಿಸಿದ್ದಾರೆ. ಸೋನಿಯಾ ತಂದೆ ಬಲದೇವ್ ಸಿಂಗ್ ಮಾಜಿ ನಾಯಕ ಮತ್ತು ಕಾರ್ಯಕರ್ತರಾಗಿದ್ದರು. ಅವರನ್ನು 1980 ರಲ್ಲಿ ಖಲಿಸ್ತಾನಿ ಉಗ್ರಗಾಮಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದರು. ಫೆಬ್ರವರಿ 8ರಂದು ನಡೆದ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಆಪ್ ಪಕ್ಷದ ಹೀನಾಯ ಸೋಲಿನ ನಂತರ, ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ 2027ರಲ್ಲಿ ನಡೆಯಲಿರುವ ಪಂಜಾಬ್ ವಿಧಾನಸಭಾ ಚುನಾವಣೆಯತ್ತ ಗಮನ ಹರಿಸಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ತ್ರಿವಿಕ್ರಂ ಪಾಲಿಗೆ ಒಲಿದ ಅದೃಷ್ಟ



## ಹೊಸ ಸೀರಿಯಲ್‌ಗೆ ಹೀರೋ ಆದ ಬಿಗ್ ಬಾಸ್ ರನ್ನರ್‌ಅಪ್

'ಬಿಗ್ ಬಾಸ್ ಕನ್ನಡ ಸೀಸನ್ 11' ರನ್ನರ್ ಅಪ್ ತ್ರಿವಿಕ್ರಂ ಅವರು ಒಂದೊಳ್ಳೆಯ ಅವಕಾಶಕ್ಕಾಗಿ ಕಾಯುತ್ತಾ ಇದ್ದರು. 'ಬಿಗ್ ಬಾಸ್'ನಿಂದ ಬದುಕು ಬದಲಾಗುತ್ತದೆ ಎಂದು ಲೆಕ್ಕಾಚಾರ ಹಾಕಿಕೊಂಡಿದ್ದರು. ಕೊನೆಗೂ ಅದು ನಿಜವಾಗಿದೆ. ಅವರಿಗೆ ಹೊಸ ಧಾರಾವಾಹಿಯಲ್ಲಿ ನಾಯಕನಾಗಿ ನಟಿಸೋ ಅವಕಾಶ ಸಿಕ್ಕಿದೆ. ಇದರ ಪ್ರೋಮೋನ ಕಲರ್ಸ್ ಕನ್ನಡ ವಾಹಿನಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದೆ. ಇದಕ್ಕೆ ಭರ್ಜರಿ ಲೈಕ್ಸ್‌ಗಳು ಸಿಕ್ಕಿವೆ. ಫ್ಯಾನ್ಸ್ ನಾನಾ ರೀತಿಯಲ್ಲಿ ಇದಕ್ಕೆ ಕಮೆಂಟ್ ಮಾಡುತ್ತಿದ್ದಾರೆ.

ಕಲರ್ಸ್ ಕನ್ನಡದಲ್ಲಿ ಪ್ರಸಾರ ಕಂಡಿದ್ದ 'ಪದ್ಮಾವತಿ' ಹೆಸರಿನ ಸೀರಿಯಲ್‌ನಲ್ಲಿ ತ್ರಿವಿಕ್ರಂ ಅವರು ನಟಿಸಿದ್ದರು. ಇದರಲ್ಲಿ ಕಥಾ ನಾಯಕನ ಪಾತ್ರ ಮಾಡಿದ್ದರು. ಆ ಬಳಿಕ ಅವರಿಗೆ ಹೆಚ್ಚು ಆಫರ್‌ಗಳು ಬಂದಿರಲಿಲ್ಲ. ಬಿಗ್ ಬಾಸ್‌ಗೆ ಬಂದ ಬಳಿಕ ಸಿನಿಮಾ ಅಥವಾ ಸೀರಿಯಲ್‌ಗಳಲ್ಲಿ ನಟಿಸೋಕೆ ಅವಕಾಶ ಸಿಗಬಹುದು ಎಂದು ಅವರು ಅಂದುಕೊಂಡಿದ್ದರು. ಅದು ನಿಜವಾಗಿದೆ.

ಕಲರ್ಸ್ ಕನ್ನಡದಲ್ಲಿ ಶೀಘ್ರವೇ 'ಮುದ್ದು ಸೊಸೆ' ಹೆಸರಿನ ಸೀರಿಯಲ್ ಪ್ರಸಾರ ಕಾಣಲಿದೆ. ಇದಕ್ಕೆ ತ್ರಿವಿಕ್ರಂ ಅವರು ಹೀರೋ ಆಗಿ ಆಯ್ಕೆ ಆಗಿದ್ದಾರೆ. ಕಥಾ ನಾಯಕಿ ವಿದ್ಯಾ ಇನ್ನೂ ಶಿಕ್ಷಣ ಪಡೆಯುತ್ತಿರುವ ಹುಡುಗಿ. ಸ್ಕೂಲ್‌ನಲ್ಲಿ ಆಕೆಯೇ ನಂಬರ್ 1. ಒಂದಿನ ಅಜ್ಜಿಗೆ ಅನಾರೋಗ್ಯ ಆಗಿದೆ ಎಂದು ಆಕೆಯನ್ನು ಶಾಲೆಯಿಂದ ಕರೆಸುತ್ತಾರೆ. ಮನೆಗೆ ಬಂದು ನೋಡಿದರೆ ಹೆಣ್ಣು ನೋಡುವ ಶಾಸ್ತ್ರಕ್ಕೆ ತಯಾರಿ ನಡೆಯುತ್ತಾ ಇರುತ್ತದೆ.

ವಿದ್ಯಾನ ನೋಡೋಕೆ ಬರೋದು ಕಥಾ ನಾಯಕನ ಪಾತ್ರದಲ್ಲಿರೋ ತ್ರಿವಿಕ್ರಂ. ವಿದ್ಯಾಗೆ ಡಾಕ್ಟರ್ ಆಗಬೇಕು ಎಂಬ ಆಸೆ. ಆದರೆ, ಮದುವೆ ಬಳಿಕೆ ಆಕೆಯನ್ನು ಶಾಲೆಗೆ ಕಳಿಸೋದು ಬೇಡ ಎಂಬ ನಿರ್ಧಾರಕ್ಕೆ ಎಲ್ಲರೂ ಬರುತ್ತಾರೆ. ಮುಂದೇನಾಗುತ್ತದೆ ಎಂಬುದು ಧಾರಾವಾಹಿಯ ಕಥೆ. ಸದ್ಯ ಪ್ರೋಮೋ ರಿಲೀಸ್ ಆಗಿದ್ದು, ಮುಂದಿನ ದಿನಗಳಲ್ಲಿ ಧಾರಾವಾಹಿಯ ಪ್ರಸಾರ ದಿನಾಂಕದ ಬಗ್ಗೆ ವಿವರ ಸಿಗಲಿದೆ.

ಸದ್ಯ ತ್ರಿವಿಕ್ರಂ ಅವರು 'ಸಿಸಿಎಲ್'ನಲ್ಲಿ ಬ್ಯುಸಿ ಇದ್ದಾರೆ. ಕ್ರಿಕೆಟ್ ಆಡುತ್ತಾ ಸಮಯ ಕಳೆಯುತ್ತಿದ್ದಾರೆ. ಶೀಘ್ರವೇ ಅವರು ಧಾರಾವಾಹಿ ಶೂಟ್‌ನಲ್ಲಿ ಬ್ಯುಸಿ ಆಗಲಿದ್ದಾರೆ ಅನ್ನೋದು ವಿಶೇಷ.



## ಹಸೆಮಣೆ ಏರಿದ ಮಾರ್ಟಿನ್ ಬೆಡಗಿ ವೈಭವಿ ಶಾಂಡಿಲ್ಯ

ನಟಿ ವೈಭವಿ ಶಾಂಡಿಲ್ಯ ಅವರು 'ಮಾರ್ಟಿನ್' ಸಿನಿಮಾದಲ್ಲಿ ನಟಿಸಿ ಗಮನ ಸೆಳೆದವರು. ಈ ಚಿತ್ರ ಅಂದುಕೊಂಡಂತೆ ಯಶಸ್ಸು ಕಂಡಿಲ್ಲ. ಈಗ ಚಿತ್ರದ ನಟಿ ವೈಭವಿ ಶಾಂಡಿಲ್ಯ ಅವರು ಸದ್ದಿಲ್ಲದೆ ಹಸೆಮಣೆ ಏರಿ ಸುದ್ದಿ ಆಗಿದ್ದಾರೆ. ಈ ಸಂದರ್ಭದ ಫೋಟೋಗಳನ್ನು ಹಂಚಿಕೊಂಡಿದ್ದಾರೆ.

ಸಾಮಾನ್ಯವಾಗಿ ಸೆಲೆಬ್ರಿಟಿಗಳು ಮದುವೆ ಆಗುತ್ತಿದ್ದಾರೆ ಎಂದರೆ ಸಾಕಷ್ಟು ಸುದ್ದಿ ಆಗುತ್ತದೆ. ಆದರೆ, ವೈಭವಿ ವಿವಾಹ ಆಗುವ ಯಾವುದೇ ಸೂಚನೆ ಇರಲಿಲ್ಲ. ಅವರು ಸೈಲೆಂಟ್ ಆಗಿ ಮದುವೆ ಆಗಿ ಎಲ್ಲರಿಗೂ ಶಾಕ್ ನೀಡಿದ್ದಾರೆ.

ವೈಭವಿ ವಿವಾಹ ಆಗಿರೋದು ಹರ್ಷವರ್ಧನ್ ಪಾಟೀಲ್ ಹೆಸರಿನ ವ್ಯಕ್ತಿಯನ್ನು. ವೃತ್ತಿಯಲ್ಲಿ ಇವರು ಛಾಯಾಗ್ರಾಹಕರು. ಮುಂಬೈ ಮೂಲದ ಛಾಯಾಗ್ರಾಹಕರು ಇವರಾಗಿದ್ದಾರೆ. ಆಪ್ತರ ಸಮ್ಮುಖದಲ್ಲಿ ಮದುವೆ ನಡೆದಿದೆ.

ವೈಭವಿ ಅವರು ಮರಾಠಿ ಸಿನಿಮಾ ಮೂಲಕ ಚಿತ್ರರಂಗಕ್ಕೆ ಕಾಲಿಟ್ಟರು. ಆ ಬಳಿಕ ಕನ್ನಡದ 'ರಾಜ್ ವಿಷ್ಣು' ಹೆಸರಿನ ಸಿನಿಮಾದಲ್ಲಿ ವೈಭವಿ ನಟಿಸಿದ್ದರು. 'ಗಾಳಿಪಟ 2' ಚಿತ್ರದಲ್ಲೂ ವೈಭವಿ ಅವರು ಬಣ್ಣ ಹಚ್ಚಿದ್ದಾರೆ. 'ಮಾರ್ಟಿನ್' ಅವರ ನಟನೆಯ ಕೊನೆಯ ಕನ್ನಡ ಸಿನಿಮಾ.

ಸದ್ಯ ವೈಭವಿ ಅವರು ಯಾವುದೇ ಹೊಸ ಸಿನಿಮಾ ಘೋಷಣೆ ಮಾಡಿಲ್ಲ. ಅವರು ವಿವಾಹದ ಬಳಿಕ ಸಣ್ಣ ಬ್ರೇಕ್ ಪಡೆಯುವ ಆಲೋಚನೆಯಲ್ಲಿ ಇದ್ದಾರೆ ಎನ್ನಲಾಗಿದೆ. ಅವರು ಸುತ್ತಾಟದಲ್ಲಿ ಇರಲಿದ್ದಾರೆ ಎಂದು ಹೇಳಲಾಗುತ್ತಿದೆ.



## ಅಲ್ಲು ಅರ್ಜುನ್-ತ್ರಿವಿಕ್ರಂ ಶ್ರೀನಿವಾಸ್ ಸಿನಿಮಾ ಬಗ್ಗೆ ಸಿಕ್ತು ದೊಡ್ಡ ಅಪ್‌ಡೇಟ್



ಅಲ್ಲು ಅರ್ಜುನ್ ಅವರು 'ಪುಷ್ಪ 2' ಚಿತ್ರದ ಬಳಿಕ ಸೈಲೆಂಟ್ ಆಗಿದ್ದಾರೆ. ಈ ಚಿತ್ರದ ಪ್ರೀಮಿಯರ್ ಶೋ ವೇಳೆ ನಡೆದ ಕಾಲ್ತುಳಿತ ಅವರ ಬಾಳಲ್ಲಿ ಕಪ್ಪು ಚುಕ್ಕೆ ಆಗಿದೆ. ಈ ಘಟನೆಯಿಂದ ಅವರು ಜೈಲಿನಲ್ಲಿ ಇರಬೇಕಾದ ಪರಿಸ್ಥಿತಿ ಕೂಡ ಬಂತು. ಈಗ ಅಲ್ಲು ಅರ್ಜುನ್ ಅವರು ಈ ಘಟನೆ ಮರೆತು ಮುಂದಿನ ಚಿತ್ರಕ್ಕಾಗಿ ಸಿದ್ಧತೆ ಮಾಡಿಕೊಳ್ಳಬೇಕಾದ ಅನಿವಾರ್ಯತೆ ಎದುರಾಗಿದೆ. ಈಗ ಅವರ ಮುಂದಿನ ಸಿನಿಮಾ ಬಗ್ಗೆ ದೊಡ್ಡ ಅಪ್‌ಡೇಟ್ ಒಂದು ಹೊರ ಬಿದ್ದಿದೆ.

ಅಲ್ಲು ಅರ್ಜುನ್ ಹಾಗೂ ತ್ರಿವಿಕ್ರಂ ಶ್ರೀನಿವಾಸ್ ಸಿನಿಮಾ ಮಾಡೋದು ಗೊತ್ತೇ ಇದೆ. ಇದಕ್ಕೆ ತಾತ್ಕಾಲಿಕವಾಗಿ 'ಎಎ22' ಎನ್ನುವ ಶೀರ್ಷಿಕೆ ಇಡಲಾಗಿದೆ. ಇಬ್ಬರೂ ಕೆಲವು ಸಿನಿಮಾಗಳಲ್ಲಿ ಒಟ್ಟಾಗಿ ಕೆಲಸ ಮಾಡಿದ್ದರು. ಹೀಗಾಗಿ, ಈ ಕಾಂಬಿನೇಷನ್ ಮೇಲೆ ಬೆಟ್ಟದಷ್ಟು ನಿರೀಕ್ಷೆ ಇದೆ. ಈ ಚಿತ್ರದ ಕಡೆಯಿಂದ ಯಾವುದೇ ಅಪ್‌ಡೇಟ್ ಬಂದಿರಲಿಲ್ಲ. ಈಗ ನಿರ್ದೇಶಕರು ಸಿನಿಮಾದ ಪ್ರಮುಖ ಕೆಲಸ ಒಂದನ್ನು ಆರಂಭಿಸಿದ್ದಾರೆ ಎನ್ನಲಾಗಿದೆ.

ತ್ರಿವಿಕ್ರಂ ಶ್ರೀನಿವಾಸ್ ಅವರು ಈ ಚಿತ್ರದ ಪಾತ್ರವರ್ಗ ಆಯ್ಕೆಯಲ್ಲಿ ತೊಡಗಿದ್ದಾರೆ. ಹೌದು, ತ್ರಿವಿಕ್ರಂ ಅವರು ಬೇರೆ ಭಾಷೆಯ ಹಾಗೂ ತೆಲುಗು ಭಾಷೆಯ ಕೆಲವು ಕಲಾವಿದರನ್ನು ಭೇಟಿ ಮಾಡಿ ಕಥೆ ಹೇಳಿದ್ದಾರೆ ಎನ್ನಲಾಗಿದೆ. ಈ ಪೈಕಿ ಕೆಲವರು ಸಿನಿಮಾಗೆ ಒಪ್ಪಿಗೆ ಸೂಚಿಸಿದ್ದಾರೆ.

ಅಲ್ಲು ಅರ್ಜುನ್ ಹಾಗೂ ತ್ರಿವಿಕ್ರಂ ಶ್ರೀನಿವಾಸ್ ಕಾಂಬಿನೇಷನ್‌ನಲ್ಲಿ ಮೂಡಿ ಬರುತ್ತಿರುವ ಚಿತ್ರ, ಪೌರಾಣಿಕ ಕಥಾ ಹಂದರವನ್ನು ಹೊಂದಿದೆ. ತ್ರಿವಿಕ್ರಂ ಶ್ರೀನಿವಾಸ್ ಅವರು ದೊಡ್ಡ ಕಲಾವಿದರನ್ನು ಆಯ್ಕೆ ಮಾಡುವುದರಲ್ಲಿ ಸದಾ ಮುಂದೆ ಇರುತ್ತಾರೆ. ಈ ಬಾರಿಯೂ ಅದೇ ಟ್ರೆಂಡ್‌ನ ಫಾಲೋ ಮಾಡೋ ಸಾಧ್ಯತೆ ಇದೆ.

ತ್ರಿವಿಕ್ರಂ ಶ್ರೀನಿವಾಸ್ ಅವರು ಇತ್ತೀಚೆಗೆ ಲಯ ಕಳೆದುಕೊಂಡಿದ್ದಾರೆ. ಅವರ ನಿರ್ದೇಶನದ 'ಗುಂಟೂರು ಖಾರಂ' ಗೆಲುವು ಕಂಡಿಲ್ಲ. ಜುಲಾಯಿ, ಸನ್ ಆಫ್ ಸತ್ಯಮೂರ್ತಿ, ಅಲಾ ವೈಕುಂಠಪುರಮುಲೋ ಸಿನಿಮಾಗಳಲ್ಲಿ ತ್ರಿವಿಕ್ರಂ ಹಾಗೂ ಅಲ್ಲು ಅರ್ಜುನ್ ಒಟ್ಟಾಗಿ ಕೆಲಸ ಮಾಡಿದ್ದಾರೆ. ಈ ಹಿಟ್ ಜೋಡಿ ಮತ್ತೆ ಒಂದಾಗುತ್ತಿದೆ ಎಂದಾಗ ನಿರೀಕ್ಷೆ ಬೆಳೆಯೋದು ಸಹಜ. ಆ ನಿರೀಕ್ಷೆಯನ್ನು ಸಿನಿಮಾ ತಲುಪುತ್ತದೆಯೇ ಎಂಬುದನ್ನು ನೋಡಬೇಕಿದೆ.

### ಕಿಂಗ್ ಕೊಹ್ಲಿ ಶತಕದೊಂದಿಗೆ ಭಾರತಕ್ಕೆ ವಿಜಯಮಾಲೆ

## ಹೈವೋಲ್ಟೇಜ್ ಪಂದ್ಯದಲ್ಲಿ ಪಾಕ್‌ಗೆ ಸೋಲು

**ದುಬೈ:** ಕಿಂಗ್ ಕೊಹ್ಲಿ ಆಕರ್ಷಕ ಶತಕ, ಶ್ರೇಯಸ್ ಫಿಫ್ಟಿ ಆಟದಿಂದ ಚಾಂಪಿಯನ್ಸ್ ಟ್ರೋಫಿಯ ಹೈವೋಲ್ಟೇಜ್ ಪಂದ್ಯದಲ್ಲಿ ಪಾಕ್ ವಿರುದ್ಧ ಟೀಂ ಇಂಡಿಯಾ 6 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

ಭಾರತದ ಶಿಸ್ತುಬದ್ಧ ಬೌಲಿಂಗ್‌ಗೆ ಪಾಕಿಸ್ತಾನ ಸಾಧಾರಣ ಮೊತ್ತ ಕಲೆ ಹಾಕಿತ್ತು. 49.4 ಓವರ್‌ಗೆ ಪಾಕ್ ತನ್ನೆಲ್ಲ ವಿಕೆಟ್ ಕಳೆದುಕೊಂಡು 241 ರನ್ ಗಳಿಸಿತ್ತು. 242 ರನ್ ಗುರಿ ಬೆನ್ನತ್ತಿದ ಭಾರತ 3 ವಿಕೆಟ್ ಕಳೆದುಕೊಂಡು 42.3 ಓವರ್‌ಗಳಲ್ಲಿ ಗುರಿ ತಲುಪಿತು.

ಓಪನರ್‌ಗಳಾದ ಕ್ಯಾಪ್ಟನ್ ರೋಹಿತ್ ಶರ್ಮಾ, ಶುಭಮನ್ ಗಿಲ್ ಹೊಡಿಬಡಿ ಆಟದೊಂದಿಗೆ ಪ್ರಾರಂಭಿಸಿದರು. ಫೋರ್, ಸಿಕ್ಸರ್ ಮೂಲಕವೇ ಹಿಟ್‌ಮ್ಯಾನ್ ತಂಡಕ್ಕೆ ಬೂಸ್ಟ್ ಕೊಟ್ಟರು. 15 ಬಾಲ್‌ಗೆ 20 ರನ್ ಗಳಿಸಿ ಔಟಾಗಿ ನಿರ್ಗಮಿಸಿದರು. ಈ ವೇಳೆ ಗಿಲ್‌ಗೆ ವಿರಾಟ್ ಕೊಹ್ಲಿ ಜೊತೆಯಾದರು. ನಿಧಾನಗತಿಯ ಆಟದೊಂದಿಗೆ ಜೋಡಿ 75 ಬಾಲ್‌ಗೆ 69 ರನ್ ಜೊತೆಯಾಟವಾಡಿತು. ಈ ನಡುವೆ 46 ರನ್‌ಗೆ ವಿಕೆಟ್ ಒಪ್ಪಿಸಿ ಗಿಲ್ ಹೊರನಡೆದರು.

ಕಿಂಗ್ ಕೊಹ್ಲಿಗೆ ಶ್ರೇಯಸ್ ಅಯ್ಯರ್ ಉತ್ತಮ ಸಾಥ್ ನೀಡಿದರು. 128 ಬಾಲ್‌ಗೆ 114 ರನ್‌ಗಳ ಆಕರ್ಷಕ ಜೊತೆಯಾಟವಾಡಿದರು. ಶ್ರೇಯಸ್ ಅಯ್ಯರ್ ಅರ್ಧಶತಕ ಸಿಡಿಸಿ (56 ರನ್, 67 ಬಾಲ್, 5 ಫೋರ್, 1 ಸಿಕ್ಸರ್) ಗಮನ ಸೆಳೆದರು.

**ಕೊಹ್ಲಿ ಆಕರ್ಷಕ ಶತಕ:** ತನ್ನ ಟ್ರೆಡಿಷನಲ್ ಆಟ ಪ್ರದರ್ಶಿಸಿದ ಕಿಂಗ್ ಕೊಹ್ಲಿ ಆಕರ್ಷಕ ಶತಕ ದಾಖಲಿಸಿ ಪಂದ್ಯವನ್ನು ಗೆಲ್ಲಿಸಿದರು. 111 ಬಾಲ್‌ಗೆ 100 ರನ್ (7 ಫೋರ್) ಗಳಿಸಿ ಕೊಹ್ಲಿ ಮಿಂಚಿದರು. ಇದೇ ಮ್ಯಾಚ್‌ನಲ್ಲಿ ಏಕದಿನ ಪಂದ್ಯದಲ್ಲಿ ಅತಿ ವೇಗದ 14,000 ರನ್‌ಗಳ ದಾಖಲೆಯನ್ನು ಕೊಹ್ಲಿ ಬರೆದರು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಪಾಕಿಸ್ತಾನಕ್ಕೆ ಆರಂಭಿಕ ಆಘಾತ ಎದುರಾಯಿತು.



ಕೇವಲ 10 ರನ್‌ಗಳಿಗೆ ಇಮಾಮ್-ಉಲ್-ಹಕ್ ಮತ್ತು 23 ರನ್ ಗಳಿಸಿ ಬಾಬರ್ ಅಜಮ್ ವಿಕೆಟ್ ಒಪ್ಪಿಸಿದ್ದು, ಪಾಕ್ ಅಭಿಮಾನಿಗಳಲ್ಲಿ ನಿರಾಸೆ ಮೂಡಿಸಿತು.

52 ರನ್ ಇರುವಾಗಲೇ ಪಾಕಿಸ್ತಾನ ಎರಡು ವಿಕೆಟ್ ಕಳೆದುಕೊಂಡಿತ್ತು. ಈ ಸಂದರ್ಭದಲ್ಲಿ ಸೌದ್ ಶಕೀಲ್ ಮತ್ತು ಕ್ಯಾಪ್ಟನ್ ಮೊಹಮ್ಮದ್ ರಿಜ್ವಾನ್ ಜೊತೆಗೂಡಿ ತಂಡಕ್ಕೆ ಚೇತರಿಕೆ ನೀಡಿದರು. ಈ ಜೋಡಿ 144 ಬಾಲ್‌ಗಳಿಗೆ 104 ರನ್ ಗಳಿಸಿ ಭರವಸೆ ಮೂಡಿಸಿತು. ಸೌದ್ ಶಕೀಲ್ ಅರ್ಧಶತಕ (62 ರನ್, 76 ಬಾಲ್, 5 ಫೋರ್) ಸಿಡಿಸಿದರು. ರಿಜ್ವಾನ್ 46 ರನ್ ಗಳಿಸಿದರು.

ರಿಜ್ವಾನ್ ವಿಕೆಟ್ ಒಪ್ಪಿಸಿ ಹೊರನಡೆಯುತ್ತಿದ್ದಂತೆ ಮ್ಯಾಚ್ ಪಥವೇ ಬದಲಾಯಿತು. ಕ್ರೀಸ್‌ಗೆ ಬಂದ ಬ್ಯಾಟರ್‌ಗಳು ಹೆಚ್ಚು ಹೊತ್ತು ನಿಲ್ಲದೇ ವಿಕೆಟ್‌ಗಳನ್ನು ಒಪ್ಪಿಸಿ ಹೊರ ನಡೆದರು. ಸಲ್ಮಾನ್ ಆಘಾ 19, ತಯ್ಯಬ್ ತಹಿರ್ 4 ರನ್ ಗಳಿಸಿ ಔಟಾದರು.

ಖುಷ್ದಿಲ್ ಷಾ38 ರನ್ ಗಳಿಸಿದರು. ಶಾಹೀನ್ ಶಾ ಅಫ್ರಿದಿ ಶೂನ್ಯ ಸುತ್ತಿ ಪೆವಿಲಿಯನ್ ಕಡೆ ಹೆಜ್ಜೆ ಹಾಕಿದರು. ನಸೀಮ್ ಷಾ14 ರನ್ ಗಳಿಸಿದರು. ಅಂತಿಮವಾಗಿ ಪಾಕಿಸ್ತಾನ 49.4 ಬಾಲ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 241 ರನ್ ಗಳಿಸಿತು.

ಟೀಂ ಇಂಡಿಯಾ ಪರ ಕುಲ್ದೀಪ್ ಯಾದವ್ 3 ವಿಕೆಟ್ ಕಿತ್ತು ಸ್ಪಿನ್ ಮೋಡಿ ಮಾಡಿದರು. ಹಾರ್ದಿಕ್ ಪಾಂಡ್ಯ 2, ಹರ್ಷಿತ್ ರಾಣಾ, ಅಕ್ಷರ್ ಪಟೇಲ್, ರವೀಂದ್ರ ಜಡೇಜಾ ತಲಾ ಒಂದು ವಿಕೆಟ್ ಕಿತ್ತರು.

## ವಿರಾಟ್ ಸರಳತೆಗೆ ಸಲಾಂ ಹೊಡೆದ ಫ್ಯಾನ್ಸ್



**ದುಬೈ:** ವಿರಾಟ್ ಕೊಹ್ಲಿಗೆ ಜಾಗತಿಕ ಕ್ರಿಕೆಟ್ ವಲಯದಲ್ಲಿ ವಿಶೇಷ ಸ್ಥಾನಮಾನವಿದೆ. ಆದರೂ ಮೈದಾನದಲ್ಲಿ ಕೆಲವೊಮ್ಮೆ ಅವರು ಸರಳ ವ್ಯಕ್ತಿಯಂತೆ ನಡೆದುಕೊಳ್ಳುವ ರೀತಿ ಅಭಿಮಾನಿಗಳಿಗೆ ಮೆಚ್ಚು. ಅದಕ್ಕೆ ನಿದರ್ಶನವೆಂಬಂತೆ ಘಟನೆಯೊಂದು ನಡೆದಿದೆ. ವಿರಾಟ್ ಕೊಹ್ಲಿ ಆಟದ ಮಧ್ಯೆ ಪಾಕ್ ತಂಡದ ಬೌಲರ್ ನಸೀಮ್ ಷಾಷಾ ಅವರ ಶೂ ಲೇಸ್ ಕಟ್ಟಿ ಸರಳತೆ ಮೆರೆದಿದ್ದಾರೆ.

ವಿರಾಟ್ ಕೊಹ್ಲಿ ವಿಶ್ವದ ಅತ್ಯುತ್ತಮ ಬ್ಯಾಟ್ಸ್‌ಮನ್. 2025 ರ ಭಾರತ-ಪಾಕಿಸ್ತಾನ ಚಾಂಪಿಯನ್ಸ್ ಟ್ರೋಫಿ ಪಂದ್ಯದಲ್ಲಿ ಪಾಕ್ ಬ್ಯಾಟಿಂಗ್ ವೇಳೆ ನಾನ್-ಸ್ಟ್ರೈಕರ್‌ನಲ್ಲಿದ್ದ ನಸೀಮ್ ಷಾ, ಕೊಹ್ಲಿಯನ್ನು ತನ್ನ ಶೂಲೇಸ್‌ಗಳನ್ನು ಕಟ್ಟಲು ಕೇಳಿಕೊಂಡರು. ಇದಕ್ಕೆ ಭಾರತದ ಮಾಜಿ ನಾಯಕ ಒಪ್ಪಿಗೆ ಸೂಚಿಸಿ ಶೂಲೇಸ್ ಕಟ್ಟಿದ್ದಾರೆ. ಈ ಅಪರೂಪದ ಕ್ಷಣವನ್ನು ಕ್ಯಾಮೆರಾದಲ್ಲಿ ಸೆರೆ ಹಿಡಿಯಲಾಗಿದೆ.

ಸಾಮಾನ್ಯ ವ್ಯಕ್ತಿಯಂತೆ ಎದುರಾಳಿ ತಂಡದ ಆಟಗಾರನ ಶೂಲೇಸ್ ಕಟ್ಟಿದ ಕೊಹ್ಲಿ ನಡೆಗೆ ಅಭಿಮಾನಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸರಳತೆ ಅಂದ್ರೆ ಇದು ಎಂದು ಬಣ್ಣಿಸಿದ್ದಾರೆ. ವೈರಲ್ ಆಗಿರುವ ದೃಶ್ಯಗಳು ಹೃದಯಸ್ಪರ್ಶಿಯಾಗಿವೆ.

ಕಿಂಗ್ ಕೊಹ್ಲಿ ಆಕರ್ಷಕ ಶತಕ, ಶ್ರೇಯಸ್ ಫಿಫ್ಟಿ ಆಟದಿಂದ ಹೈವೋಲ್ಟೇಜ್ ಪಂದ್ಯದಲ್ಲಿ ಪಾಕ್ ವಿರುದ್ಧ ಟೀಂ ಇಂಡಿಯಾ 6 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

ಭಾರತದ ಶಿಸ್ತುಬದ್ಧ ಬೌಲಿಂಗ್‌ಗೆ ಪಾಕಿಸ್ತಾನ ಸಾಧಾರಣ ಮೊತ್ತ ಕಲೆ ಹಾಕಿತ್ತು. 49.4 ಓವರ್‌ಗೆ ಪಾಕ್ ತನ್ನೆಲ್ಲ ವಿಕೆಟ್ ಕಳೆದುಕೊಂಡು 241 ರನ್ ಗಳಿಸಿತ್ತು. 242 ರನ್ ಗುರಿ ಬೆನ್ನತ್ತಿದ ಭಾರತ 3 ವಿಕೆಟ್ ಕಳೆದುಕೊಂಡು 42.3 ಓವರ್‌ಗಳಲ್ಲಿ ಗುರಿ ತಲುಪಿತು.

## ಇವತ್ತೇ ಚುನಾವಣೆ ನಡೆದರೆ ಕಾಂಗ್ರೆಸ್‌ಗೆ 20 ಸೀಟು ಬರುತ್ತದೆ

**ಬೆಳಗಾವಿ:** ಇವತ್ತೇ ಚುನಾವಣೆ ನಡೆದರೆ ಕಾಂಗ್ರೆಸ್‌ಗೆ ಕೇವಲ 20 ಸೀಟು ಬರುತ್ತದೆ ಎಂದು ಸಂಸದ ಗೋವಿಂದ ಕಾರಜೋಳ ಭವಿಷ್ಯ ನುಡಿದಿದ್ದಾರೆ.

ಜಿಲ್ಲೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಸರ್ಕಾರ ಬಂದು ಎರಡು ವರ್ಷ ಆಯ್ತು. ಭಂಡತದನದಿಂದ ಐದು ಗ್ಯಾರಂಟಿ ಕೊಡುತ್ತೇವೆ ಎಂದಿದ್ದರು. ಆದರೆ ಈಗ ಗ್ಯಾರಂಟಿ ಹಣವನ್ನೂ ಕೊಡ್ತಿಲ್ಲ. ಗೃಹಲಕ್ಷ್ಮಿ ಹಣ ಮೂರು ತಿಂಗಳಿಂದ ಖಾತೆಗೆ ಜಮೆ ಆಗಿಲ್ಲ ಎಂದು ವಾಗ್ದಾಳಿ ನಡೆಸಿದರು.

ಯಾವ ಗ್ಯಾರಂಟಿಯೂ ಸ್ಮಾರ್ಟ್ ಇಲ್ಲ, ಬೋಗಸ್ ಹೇಳಿ ವೋಟ್ ಹಾಕಿಸಿಕೊಂಡು ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ಅವರು ಜನರಿಗೆ ಮೋಸ ಮಾಡುತ್ತಿದ್ದಾರೆ. ಕಳೆದ ಬಾರಿ ಬಜೆಟ್ ಮಂಡನೆ ಮಾಡಿದ್ದರ ಪೈಕಿ ಒಂದೂವರೆ ಲಕ್ಷ ಕೋಟಿ ಹಣ ಬಾಕಿ ಇದೆ. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದು ಹೋಗಿದೆ ಎಂದು ಆರೋಪಿಸಿದರು.



ರಾಜ್ಯದಲ್ಲಿ ದಿನನಿತ್ಯ ಕೊಲೆ ಸುಲಿಗೆ ಆಗುತ್ತಿವೆ. ಬೇರೆ ರಾಜ್ಯದವರು ಬಂದು ಕಳ್ಳತನ ಮಾಡ್ತಿದ್ದಾರೆ. ಜನರಿಗೆ, ಹೆಣ್ಣು ಮಕ್ಕಳಿಗೆ ರಕ್ಷಣೆಯಿಲ್ಲ. ಪುಂಡರ ಹಾವಳಿ ಜಾಸ್ತಿ ಆಗಿದೆ. ಸರ್ಕಾರದ ಹಿಡಿತ ತಪ್ಪಿ ಹೋಗಿದ್ದು, ಸಿದ್ದರಾಮಯ್ಯ ಎಲ್ಲದರಲ್ಲೂ ವಿಫಲರಾಗಿದ್ದಾರೆ. ಭ್ರಷ್ಟಾಚಾರ ಮುಗಿಲು ಮುಟ್ಟಿದೆ. ಅತಿ ಹೆಚ್ಚು ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನುಡಿದಂತೆ ನಡೆದಿದ್ದೇವೆ ಎಂದಿದ್ದಾರೆ. ಇದೇನಾ ಇವರು ನುಡಿದಂತೆ ನಡೆದಿದ್ದು ನಾಡಿನ ಅಭಿವೃದ್ಧಿ ಬಗ್ಗೆ ಸಿದ್ದರಾಮಯ್ಯ ಸರ್ಕಾರಕ್ಕೆ ಕಾಳಜಿಯಿಲ್ಲ. ಅಭಿವೃದ್ಧಿ ಸಂಪೂರ್ಣವಾಗಿ ಶೂನ್ಯವಾಗಿದೆ. ನಾಡಿನ ಜನ ಸಂಕಷ್ಟದಲ್ಲಿದ್ದು, ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಕೂಡಲೇ ಇವರು ರಾಜೀನಾಮೆ ಕೊಟ್ಟು ಚುನಾವಣೆ ಎದುರಿಸಬೇಕು ಎಂದು ಹರಿಹಾಯ್ದರು. ಪಾರ್ಟಿ ಅಧ್ಯಕ್ಷ ಡಿಸಿಎಂಗೆ ಕಿರೀಟ ಇದೆಯಾ ಎಂದು ರಾಜಣ್ಣ ಕೇಳುತ್ತಿದ್ದಾರೆ. ನಾಲ್ಕು ಗುಂಪಾಗಿ ಅಧಿಕಾರಕ್ಕಾಗಿ ರಣ ಹದ್ದುಗಳ ರೀತಿ ಕಚ್ಚಾಡುತ್ತಿದ್ದಾರೆ. ದಲಿತ ಮುಖ್ಯಮಂತ್ರಿ ಎಂದು ಹೇಳುತ್ತಾರೆ. ಹೌದು ಕರ್ನಾಟಕದಲ್ಲಿ ದಲಿತ ಮುಖ್ಯಮಂತ್ರಿ ಮಾಡಲು ಅವಕಾಶ ಇದೆ. ಖರ್ಗೆ ಅವರು ಯಾರನ್ನಾದರೂ ಮಾಡಲಿ, ದಲಿತ ಮುಖ್ಯಮಂತ್ರಿ ಮಾಡುತ್ತೇವೆ ಎಂದು ಘೋಷಣೆ ಮಾಡಲಿ. ಪರಮೇಶ್ವರ್, ಮುನಿಯಪ್ಪ ಅವರನ್ನು ಮಾಡಬೇಕು. ಇಲ್ಲವಾದರೆ ಖರ್ಗೆ ಅವರೇ ದಲಿತ ಸಿಎಂ ಆಗಲಿ ಎಂದು ಅಭಿಪ್ರಾಯಪಟ್ಟರು.

## ಮಂಡ್ಯದ ಹೊಸಹಳ್ಳಿ ಸರ್ಕಾರಿ ಪ್ರೌಢಶಾಲೆಯ ಗ್ರಂಥಾಲಯಕ್ಕೆ ಪುಸ್ತಕಗಳ ಕೊಡುಗೆ

**ಮಂಡ್ಯ:** ಬೆಂಗಳೂರಿನ ಬ್ಯಾಂಕರ್ಸ್ ಕನ್ನಡಿಗರ ಬಳಗವು ಪ್ರಸಕ್ತ ವರ್ಷದಲ್ಲಿ 69 ನೇ ಕರ್ನಾಟಕ ರಾಜ್ಯೋತ್ಸದ ಅಂಗವಾಗಿ 69 ಸರಕಾರಿ ಶಾಲಾ ಕಾಲೇಜುಗಳಿಗೆ ಕನ್ನಡ ಪುಸ್ತಕವನ್ನು ಕೊಡುಗೆಯನ್ನು ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಇದರ ಭಾಗವಾಗಿ ಬಳಗವು ಮಂಡ್ಯದ ಅಡ್ವೈಸರ್ ಪತ್ರಿಕೆಯವರು ಜೊತೆಗೂಡಿ ಮಂಡ್ಯದ ಹೊಸಹಳ್ಳಿ ಸರಕಾರಿ ಪ್ರೌಡಶಾಲೆಯ ಗ್ರಂಥಾಲಯಕ್ಕೆ ಪುಸ್ತಕಗಳನ್ನು ಉಡುಗೊರೆಯಾಗಿ ನೀಡಿತು.

ಗ್ರಂಥಾಲಯಕ್ಕೆ ಕನ್ನಡ ಪುಸ್ತಕಗಳನ್ನು ಹಸ್ತಾಂತರಿಸಿ ಮಾತನಾಡಿದ ಬೆಂಗಳೂರಿನ ಬ್ಯಾಂಕರ್ಸ್ ಕನ್ನಡಿಗರ ಬಳಗ ಅಧ್ಯಕ್ಷ ಶ್ರೀ ವೆಂಕಟೇಶ ಶೇಷಾದ್ರಿಯವರು ಪುಸ್ತಕ ಓದುವುದರಿಂದ ಮಕ್ಕಳಲ್ಲಿಆತ್ಮವಿಶ್ವಾಸ, ಏಕಾಗ್ರತೆ, ಶಿಸ್ತು, ಸೃಜನಶೀಲತೆ ಹೆಚ್ಚುತ್ತದೆ. ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸಬೇಕಾದರೆ ಅದರಲ್ಲಿ ಪೋಷಕರ ಪಾತ್ರ ಅತ್ಯಂತ ಮಹತ್ವದ್ದಾಗಿರುತ್ತದೆ. ಈ ಸಂದರ್ಭದಲ್ಲಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್ ಎಸ್ ಎಲ್ ಸಿ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಪರೀಕ್ಷೆಯನ್ನು ಧೈರ್ಯವಾಗಿ ಎದುರಿಸುವುದರ ಬಗ್ಗೆ ಅವಶ್ಯಕ ಸಲಹೆ ಮತ್ತು ಸೂಚನೆಯನ್ನೂ ನೀಡಿದರು.



ಅಡ್ವೈಸರ್ ಪತ್ರಿಕೆಯ ಸಂಪಾದಕ ಸಿ ಬಸವರಾಜು ರವರು ಮಾತನಾಡಿ ವಿದ್ಯಾರ್ಥಿಗಳು ಶಾಲೆಯ ಗ್ರಂಥಾಲಯದ ಪೂರ್ಣ ಉಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಮಂಡ್ಯ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಮತ್ತು ಬ್ಯಾಂಕ್ ನ ನಿವೃತ್ತ ಪ್ರಬಂಧಕ ಶ್ರೀಎಂ ವಿ ಧರಣೇಂದ್ರಯ್ಯ, ಕೆನರಾ ಬ್ಯಾಂಕ್ ನ ನಿವೃತ್ತ ವರಿಷ್ಠ ಪ್ರಬಂಧಕ ಶ್ರೀಹೆಚ್.ಕೆ ಚಂದ್ರಹಾಸ್, ದೈಹಿಕ ಶಿಕ್ಷಣಾಧಿಕಾರಿ ಶ್ರೀಪೂವಯ್ಯ, ಸಾಹಿತಿ ಧರಣೀ ಲಿಂಗೇಗೌಡ, ಪ್ರಭಾರಿ ಮುಖ್ಯೋಪಾಧ್ಯಾಯಿನಿ ಜ್ಯೋತಿ ರವರು ವಿದ್ಯಾರ್ಥಿ ವಿದ್ಯಾರ್ಥಿನಿಯರನ್ನು ಉದ್ದೇಶಿಸಿ ಮಾತನಾಡಿದರು.

ಶ್ರೀ ಸುಬ್ರಮಣ್ಯ ರವರು ಕಾರ್ಯಕ್ರಮವನ್ನು ನಿರೂಪಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com